24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 128 | ನವದೆಹಲಿ | ಬೆಲೆ ₹ 10 | ನವಂಬರ್ 3, 2026, ಮಂಗಳವಾರ

ಒಳಪುಟಗಳಲ್ಲಿ

ರಾಮಮಂದಿರ ದೇಣಿಗೆ ಕಳವು ಪ್ರಕರಣ ಸುಪ್ರೀಂಕೋರ್ಟ್‌ನಲ್ಲಿ ಅರ್ಜಿಗಳ ಇತ್ಯರ್ಥ: ವಿಚಾರಣೆಗೆ ಸಹಕರಿಸಲು ಅರ್ಜಿದಾರರಿಗೆ ಅವಕಾಶ - ಪು.4

ಪರಿಸರಸ್ನೇಹಿ, ಸುರಕ್ಷಿತ ದೀಪಾವಳಿಗೆ- 19 ಅಂಶಗಳ ಮಾರ್ಗಸೂಚಿ ಬಿಡುಗಡೆ - ಪು.6

ಕಾನೂನುಬಾಹಿರ ಚಟುವಟಿಕೆ ಕಂಡುಬಂದಲ್ಲಿ ಕಠಿಣ ಕ್ರಮ: ಸಚಿವ ಡಾ.ಅಜಯ್ ಸಿಂಗ್ - -ಪು.6

ಕನ್ನಡ ನಮ್ಮೆಲ್ಲರ ಬದುಕು, ಅದು ಬೆಳೆಯಬೇಕು: ಸಿಎಂ ಡಿ.ಕೆ.ಶಿವಕುಮಾರ್

ಕನ್ನಡ ವೈದ್ಯಕೀಯ ಸಾಹಿತ್ಯ ಸಮ್ಮೇಳನ-2026ರ ಲಾಂಛನ, ಕಿರುಹೊತ್ತಿಗೆ ಬಿಡುಗಡೆ: ಸಮ್ಮೇಳನಕ್ಕೆ ಸರ್ಕಾರದ ಬೆಂಬಲದ ಭರವಸೆ

ಬೆಂಗಳೂರು, ನ.2: ಕನ್ನಡ ಭಾಷೆಯಲ್ಲಿ ವೈದ್ಯಕೀಯ ಸಾಹಿತ್ಯವನ್ನು ಸೃಷ್ಟಿಸುವ, ಬೆಳೆಸುವ, ಉಳಿಸುವ ಮತ್ತು ಅದರ ಶ್ರೀಮಂತ ಪರಂಪರೆಯನ್ನು ಮುಂದಿನ ಪೀಳಿಗೆಗೆ ತಲುಪಿಸುವ ಪ್ರಯತ್ನಕ್ಕೆ ರಾಜ್ಯ ಸರ್ಕಾರದ ಸಂಪೂರ್ಣ ಬೆಂಬಲವಿದೆ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದರು.

ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ವತಿಯಿಂದ ಆಯೋಜಿಸಲಾಗುತ್ತಿರುವ "ಮೊದಲ ಕನ್ನಡ ವೈದ್ಯಕೀಯ ಸಾಹಿತ್ಯ ಸಮ್ಮೇಳನ–2026ದ ಲಾಂಛನ ಮತ್ತು ಕಿರುಹೊತ್ತಿಗೆಯನ್ನು ಸೋಮವಾರ ಗೃಹ ಕಚೇರಿ ಕೃಷ್ಣಾದಲ್ಲಿ ಬಿಡುಗಡೆಗೊಳಿಸಿ ಮಾತನಾಡಿದರು.



ಕನ್ನಡ ನಮ್ಮೆಲ್ಲರ ಬದುಕು. ಕನ್ನಡ ಭಾಷೆಯನ್ನು ವೈದ್ಯಕೀಯ ಮತ್ತು ಆರೋಗ್ಯ ಕ್ಷೇತ್ರದಲ್ಲಿ ಹೆಚ್ಚು ಹೆಚ್ಚು ಬಳಸಲು ಹಾಗೂ ಕನ್ನಡ ವೈದ್ಯಕೀಯ ಸಾಹಿತ್ಯಕ್ಕೆ ಪ್ರೋತ್ಸಾಹ ನೀಡಲು ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ ನಿರಂತರವಾಗಿ ಶ್ರಮಿಸುತ್ತಿದೆ. ಇಂತಹ ಪ್ರಯತ್ನಗಳಿಗೆ ಯಾವಾಗಲೂ ನಮ್ಮ ಬೆಂಬಲ ಇರುತ್ತದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣಪ್ರಕಾಶ್ ಆರ್. ಪಾಟೀಲ್, ಶಾಸಕ ಎ.ಆರ್. ಕೃಷ್ಣಮೂರ್ತಿ, ಡಾ. ಎನ್.ಟಿ. ಶ್ರೀನಿವಾಸ್, ಡಾ.ಬಿ.ಟಿ.ರುದ್ರೇಶ್, ಡಾ. ವಸುಂಧರಾ ಭೂಪತಿ, ಮಾಜಿ ಶಾಸಕ ಐವಾನ್ ನಿಗ್ಲಿ, ಡಾ. ಸರೋಜಾ ಹಾಗೂ ವೈದ್ಯಕೀಯ ಶಿಕ್ಷಣ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಮೊಹಮ್ಮದ್ ಮೊಹ್ಸಿನ್ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು. ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಸಚಿವ ಅರ್ಜುನ್ ಒಡೆಯರ್, ಹಣಕಾಸು ಅಧಿಕಾರಿ ಬಿ.ಕೆ. ಗಂಗಾಧರ್ ಹಾಗೂ ಅಧಿಕಾರಿಗಳು ಹಾಜರಿದ್ದರು.



ವೈದ್ಯಕೀಯ ಮಾಹಿತಿ ತಲುಪಿಸಲು ಮಹತ್ವದ ವೇದಿಕೆ

ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿ ಡಾ. ಭಗವಾನ್ ಬಿ.ಸಿ. ಮಾತನಾಡಿ, ಕನ್ನಡದಲ್ಲಿ ವೈದ್ಯಕೀಯ ಜ್ಞಾನ, ಸಂಶೋಧನೆ ಮತ್ತು ಆರೋಗ್ಯ ಸಂಬಂಧಿತ ಮಾಹಿತಿಯನ್ನು ಜನಸಾಮಾನ್ಯರಿಗೆ ತಲುಪಿಸುವ ನಿಟ್ಟಿನಲ್ಲಿ ವಿ.ವಿ ಆಯೋಜಿಸಿರುವ ಮೊದಲ ಕನ್ನಡ ವೈದ್ಯಕೀಯ ಸಾಹಿತ್ಯ ಸಮ್ಮೇಳನ ಮಹತ್ವದ ವೇದಿಕೆಯಾಗಲಿದೆ ಎಂದರು.


ದೆಹಲಿಯಲ್ಲಿ ಕಳಪೆ ಮಟ್ಟಕ್ಕೆ ಕುಸಿದ ಗಾಳಿಯ ಗುಣಮಟ್ಟ

ನವದೆಹಲಿ, ನ. 2: ರಾಷ್ಟ್ರ ರಾಜಧಾನಿ ದೆಹಲಿಯಲ್ಲಿ ವಾಯುಮಾಲಿನ್ಯ ಪ್ರಮಾಣ ಮತ್ತಷ್ಟು ಹೆಚ್ಚಾಗಿದ್ದು, ಸೋಮವಾರ (ನ.2) ಬೆಳಗ್ಗೆ ಗಾಳಿಯ ಗುಣಮಟ್ಟ ಅತ್ಯಂತ ಕಳಪೆ ವಿಭಾಗಕ್ಕೆ ಕುಸಿದಿದೆ. ದೆಹಲಿ ಮಾತ್ರವಲ್ಲದೆ ಉತ್ತರ ಭಾರತದ ಹಲವು ನಗರಗಳಲ್ಲಿಯೂ ವಾಯುಮಾಲಿನ್ಯ ತೀವ್ರಗೊಂಡಿದೆ.

ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿಯ (ಸಿಪಿಸಿಬಿ) ಅಂಕಿ–ಅಂಶಗಳ ಪ್ರಕಾರ, ಸೋಮವಾರ ಬೆಳಗ್ಗೆ 8 ಗಂಟೆಗೆ ದೆಹಲಿಯ 24 ಗಂಟೆಗಳ ಸರಾಸರಿ ವಾಯು ಗುಣಮಟ್ಟ ಸೂಚ್ಯಂಕ (ಎಕ್ಯೂಐ) 310 ದಾಖಲಾಗಿದೆ. ಇದು ಅತ್ಯಂತ ಕಳಪೆ ಗುಣಮಟ್ಟದ ವಿಭಾಗಕ್ಕೆ ಸೇರುತ್ತದೆ. ಉತ್ತರ ಪ್ರದೇಶದ ನೋಯ್ಡಾ, ಹರಿಯಾಣದ ಕೈಥಾಲ್ ಮತ್ತು ಹಾಪುರ್ ಸೇರಿ ಉತ್ತರ ಭಾರತದ ಹಲವು ನಗರಗಳಲ್ಲಿಯೂ ಗಾಳಿಯ ಗುಣಮಟ್ಟ ಕುಸಿದಿದೆ.

ಕೇಂದ್ರ ಸರ್ಕಾರದ ದೆಹಲಿ ವಾಯು ಗುಣಮಟ್ಟ ಮುನ್ನೆಚ್ಚರಿಕೆ ವ್ಯವಸ್ಥೆಯ ಮುನ್ಸೂಚನೆಯ ಪ್ರಕಾರ, ಮುಂದಿನ ಐದರಿಂದ ಆರು ದಿನಗಳವರೆಗೆ ದೆಹಲಿಯಲ್ಲಿ ಗಾಳಿಯ ಗುಣಮಟ್ಟ ಕಳಪೆ ಅಥವಾ ಅತ್ಯಂತ ಕಳಪೆ ವಿಭಾಗದಲ್ಲೇ ಮುಂದುವರಿಯುವ ಸಾಧ್ಯತೆಯಿದೆ. ಭಾನುವಾರ ಸಂಜೆ 4 ಗಂಟೆಗೆ ದೆಹಲಿಯ ಎಕ್ಯೂಐ 261 ದಾಖಲಾಗಿತ್ತು. ಇದು ಕಳಪೆ ವಿಭಾಗಕ್ಕೆ ಸೇರಿತ್ತು. ಶನಿವಾರ ಇದೇ ಸಮಯದಲ್ಲಿ 117ರಷ್ಟಿದ್ದ ಸೂಚ್ಯಂಕ ಒಂದೇ ದಿನದಲ್ಲಿ ಗಣನೀಯವಾಗಿ ಏರಿಕೆಯಾಗಿದೆ. ಎಕ್ಯೂಐ ಪ್ರಮಾಣ ಹೆಚ್ಚಾದಷ್ಟೂ ಗಾಳಿಯಲ್ಲಿನ ಮಾಲಿನ್ಯದ ತೀವ್ರತೆ ಹೆಚ್ಚಿದೆ ಎಂದರ್ಥ.

ಪ್ರತಿವರ್ಷ ಚಳಿಗಾಲ ಆರಂಭವಾಗುತ್ತಿದ್ದಂತೆ ದೆಹಲಿ–ಎನ್‌ಸಿಆರ್ ಸೇರಿದಂತೆ ಇಂಡೋ–ಗಂಗಾ ಬಯಲು ಪ್ರದೇಶದ ಹಲವು ಭಾಗಗಳಲ್ಲಿ ವಾಯುಮಾಲಿನ್ಯ ಹೆಚ್ಚಾಗುತ್ತದೆ. ಕಡಿಮೆ ಗಾಳಿಯ ವೇಗ ಮತ್ತು ತಾಪಮಾನ ಕುಸಿತದಂತಹ ಹವಾಮಾನ ಪರಿಸ್ಥಿತಿಗಳು ಮಾಲಿನ್ಯಕಾರಕ ಕಣಗಳು ವಾತಾವರಣದಲ್ಲಿ ಹರಡಿ ಹೋಗುವುದನ್ನು ತಡೆಯುತ್ತವೆ. ಜತೆಗೆ ಅಕ್ಟೋಬರ್ ಮತ್ತು ನವೆಂಬರ್‌ನಲ್ಲಿ ನೆರೆಯ ರಾಜ್ಯಗಳಲ್ಲಿ ನಡೆಯುವ ಕೃಷಿ ತ್ಯಾಜ್ಯ (ಬೆಳೆ ಅವಶೇಷ) ಸುಡುವಿಕೆ ಹಾಗೂ ಹಬ್ಬದ ಸಂದರ್ಭದಲ್ಲಿ ಪಟಾಕಿ ಸಿಡಿಸುವುದರಿಂದಲೂ ಮಾಲಿನ್ಯ ಹೆಚ್ಚಾಗುತ್ತದೆ. ವಾಹನಗಳ ಹೊಗೆ, ನಿರ್ಮಾಣ ಚಟುವಟಿಕೆಗಳಿಂದ ಉಂಟಾಗುವ ಧೂಳು ಮತ್ತು ಕೈಗಾರಿಕೆಗಳ ಹೊಗೆಯೂ ಈಗಾಗಲೇ ಇರುವ ಮಾಲಿನ್ಯಕ್ಕೆ ಸೇರ್ಪಡೆಯಾಗುತ್ತವೆ. ಹವಾಮಾನ ವೈಪರೀತ್ಯ ಮತ್ತು ವಿವಿಧ ಮಾಲಿನ್ಯ ಮೂಲಗಳ ಸಂಯೋಜನೆಯಿಂದ ದೆಹಲಿ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಗಾಳಿಯ ಗುಣಮಟ್ಟ ಮತ್ತಷ್ಟು ಹದಗೆಟ್ಟಿದೆ.



ಮಾಲಿನ್ಯ ಪ್ರಮಾಣವು ಅತ್ಯಂತ ಕಳಪೆ ವಿಭಾಗ ತಲುಪಿರುವುದರಿಂದ ದೆಹಲಿ–ಎನ್‌ಸಿಆರ್‌ನಲ್ಲಿ ಗ್ರೇಡೆಡ್ ರೆಸ್ಪಾನ್ಸ್ ಆಕ್ಷನ್ ಪ್ಲಾನ್ 1ನೇ ಹಂತ ಜಾರಿಗೆ ತರಲಾಗುತ್ತದೆ. ಇದರ ಭಾಗವಾಗಿ ಡೀಸೆಲ್ ಜನರೇಟರ್ ಬಳಕೆಗೆ ನಿರ್ಬಂಧ ವಿಧಿಸಲಾಗುತ್ತದೆ, ರಸ್ತೆಗಳಲ್ಲಿ ಧೂಳು ಏಳದಂತೆ ಯಾಂತ್ರಿಕವಾಗಿ ರಸ್ತೆ ಗುಡಿಸುವುದು ಹಾಗೂ ನೀರು ಸಿಂಪಡಿಸುವ ಕಾರ್ಯ ಚುರುಕುಗೊಳ್ಳುತ್ತದೆ. ಜೊತೆಗೆ, ಖಾಸಗಿ ವಾಹನ ಬಳಕೆ ಕಡಿಮೆ ಮಾಡಲು ಸಾರ್ವಜನಿಕ ಸಾರಿಗೆ ವ್ಯವಸ್ಥೆ ಹೆಚ್ಚಿಸಲಾಗುತ್ತದೆ.

ಗಾಳಿಯಲ್ಲಿರುವ ಸೂಕ್ಷ್ಮ ಮಾಲಿನ್ಯಕಾರಕ ಕಣಗಳು ಉಸಿರಾಟದ ಮೂಲಕ ದೇಹವನ್ನು ಪ್ರವೇಶಿಸಿ ಶ್ವಾಸಕೋಶ ಹಾಗೂ ರಕ್ತನಾಳಗಳಿಗೆ ಹಾನಿ ಉಂಟುಮಾಡುತ್ತವೆ. ಇದರಿಂದ ಆಸ್ತಮಾ, ಸೈನಸ್, ಅಲರ್ಜಿ ಮತ್ತು ಹೃದಯ ಸಂಬಂಧಿ ಕಾಯಿಲೆ ಇರುವವರಿಗೆ ತೊಂದರೆ ಹೆಚ್ಚಾಗುತ್ತದೆ. ಈ ವಾತಾವರಣದಲ್ಲಿ ಬೆಳಗಿನ ಜಾವದ ಓಟ ಅಥವಾ ಹೊರಾಂಗಣ ವ್ಯಾಯಾಮ ತಪ್ಪಿಸುವುದು ಒಳ್ಳೆಯದು ಹಾಗೂ ಸಾರ್ವಜನಿಕರು ಹೊರಗೆ ಸಂಚರಿಸುವಾಗ N95 ಮಾಸ್ಕ್ ಧರಿಸುವುದು ಸೂಕ್ತ ಎಂದು ವೈದ್ಯರು ಸಲಹೆ ನೀಡಿದ್ದಾರೆ.

ನ.7-8ರಂದು ದೆಹಲಿ-ಎನ್ಸಿಆರ್‌ನಲ್ಲಿ ಹಸಿರು ಪಟಾಕಿ ಸಿಡಿಸಲು ಸುಪ್ರೀಂ ಕೋರ್ಟ್ ಅನುಮತಿ

ನವದೆಹಲಿ, ನ.2: ದೀಪಾವಳಿ ಹಬ್ಬದ ಹಿನ್ನೆಲೆಯಲ್ಲಿ ದೆಹಲಿ–ಎನ್‌ಸಿಆರ್ ಪ್ರದೇಶದಲ್ಲಿ ಹಸಿರು ಪಟಾಕಿಗಳನ್ನು ಸಿಡಿಸಲು ಸುಪ್ರೀಂ ಕೋರ್ಟ್ ಅನುಮತಿ ನೀಡಿದೆ. ನವೆಂಬರ್ 7 ಮತ್ತು 8ರಂದು ಮಾತ್ರ ಹಸಿರು ಪಟಾಕಿ ಬಳಕೆಗೆ ಅವಕಾಶ ಕಲ್ಪಿಸಲಾಗಿದೆ.



ಬೆಳಗ್ಗೆ 6ರಿಂದ 7 ಗಂಟೆಯವರೆಗೆ ಹಾಗೂ ರಾತ್ರಿ 8ರಿಂದ 10 ಗಂಟೆಯವರೆಗೆ ಮಾತ್ರ ಅವಕಾಶ

ದೆಹಲಿ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಾಯುಮಾಲಿನ್ಯ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಪಟಾಕಿಗಳ ಬಳಕೆಗೆ ನಿರ್ಬಂಧ ವಿಧಿಸುವ ವಿಚಾರ ನ್ಯಾಯಾಲಯದ ಮುಂದೆ ಬಂದಿತ್ತು. ಈ ಹಿನ್ನೆಲೆಯಲ್ಲಿ ಪರಿಸರ ಮಾಲಿನ್ಯ ನಿಯಂತ್ರಣದ ದೃಷ್ಟಿಯಿಂದ ಹಸಿರು ಪಟಾಕಿಗಳಿಗೆ ಮಾತ್ರ ಅವಕಾಶ ನೀಡುವ ನಿರ್ಧಾರ ಕೈಗೊಳ್ಳಲಾಗಿದೆ.

ಸುಪ್ರೀಂ ಕೋರ್ಟ್ ನ್ಯಾಯಮೂರ್ತಿಗಳಾದ ಎಂ.ಎಂ. ಸುಂದರೇಶ್ ಮತ್ತು ಪ್ರಸನ್ನ ಬಿ. ವರಾಳೆ ಅವರನ್ನೊಳಗೊಂಡ ನ್ಯಾಯಪೀಠ ಈ ಆದೇಶ ನೀಡಿದೆ. ಹಸಿರು ಪಟಾಕಿಗಳನ್ನು ಬೆಳಗ್ಗೆ 6ರಿಂದ 7 ಗಂಟೆಯವರೆಗೆ ಹಾಗೂ ರಾತ್ರಿ 8ರಿಂದ 10 ಗಂಟೆಯವರೆಗೆ ಮಾತ್ರ ಸಿಡಿಸಬಹುದು ಎಂದು ಸ್ಪಷ್ಟಪಡಿಸಿದೆ.

ಆಸ್ಪತ್ರೆಗಳು, ನರ್ಸಿಂಗ್ ಹೋಂಗಳು, ಪ್ರಾಥಮಿಕ ಮತ್ತು ಜಿಲ್ಲಾ ಆರೋಗ್ಯ ಕೇಂದ್ರಗಳು, ವೃದ್ಧಾಶ್ರಮಗಳು ಹಾಗೂ ಅಧಿಸೂಚಿತ ನಿಶ್ಶಬ್ದ ವಲಯಗಳ 300 ಮೀಟರ್ ವ್ಯಾಪ್ತಿಯಲ್ಲಿ ಪಟಾಕಿ ಸಿಡಿಸುವುದನ್ನು ಸಂಪೂರ್ಣ ನಿಷೇಧಿಸಲಾಗಿದೆ. ಶಿಕ್ಷಣ ಸಂಸ್ಥೆಗಳ ಸುತ್ತಲೂ ಇದೇ ನಿರ್ಬಂಧ ಅನ್ವಯ ವಾಗಲಿದ್ದು, ಈ ಪ್ರದೇಶ ಗಳನ್ನು 'ಪಟಾಕಿ ನಿಷೇಧಿತ ವಲಯ' ಎಂದು ಗುರುತಿಸುವಂತೆ ಅಧಿಕಾರಿ ಗಳಿಗೆ ಸೂಚಿಸಲಾಗಿದೆ.

ಬೇರಿಯಂ ಹೊಂದಿರುವ ಪಟಾಕಿಗಳು, ಸಾಂಪ್ರದಾಯಿಕ ಪಟಾಕಿಗಳು ಹಾಗೂ ಸರಪಳಿ ಮಾದರಿಯ ಪಟಾಕಿಗಳ ಬಳಕೆಗೆ ಅವಕಾಶವಿಲ್ಲ. ಅಕ್ರಮ ಹಾಗೂ ಸಾಂಪ್ರದಾಯಿಕ ಪಟಾಕಿಗಳ ಮಾರಾಟ ಮತ್ತು ಬಳಕೆಯನ್ನು ತಡೆಯಲು ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು ಎಂದು ನ್ಯಾಯಾಲಯ ಸೂಚಿಸಿದೆ. ನವೆಂಬರ್ 9ರಿಂದ ದೆಹಲಿ–ಎನ್‌ಸಿಆರ್‌ನಲ್ಲಿ ಪಟಾಕಿಗಳ ಮೇಲಿನ ಸಂಪೂರ್ಣ ನಿಷೇಧ ಮತ್ತೆ ಜಾರಿಗೆ ಬರಲಿದೆ ಎಂದು ನ್ಯಾಯಪೀಠ ಸ್ಪಷ್ಟಪಡಿಸಿದೆ.

ಪ್ರಸ್ತಾವಿತ ದಕ್ಷಿಣ ಬುಲೆಟ್ ರೈಲು ಕಾರಿಡಾರ್‌ಗೆ ಪ್ರಧಾನಿ ಮೋದಿ ಅನುಮೋದನೆ: ವೈಷ್ಣವ್

ಬೆಂಗಳೂರು-ಚೆನ್ನೈಗೆ ಕೇವಲ 73 ನಿಮಿಷ, ಹೈದರಾಬಾದ್‌ಗೆ 2 ಗಂಟೆ ಪ್ರಯಾಣ

ಬೆಂಗಳೂರು, ನ.2: ಪ್ರಸ್ತಾವಿತ 'ದಕ್ಷಿಣ ಬುಲೆಟ್ ರೈಲು ಕಾರಿಡಾರ್' ಯೋಜನೆಗೆ ಪ್ರಧಾನ ಮಂತ್ರಿ ನರೇಂದ್ರ ಮೋದಿ ಅನುಮೋದನೆ ನೀಡಿದ್ದಾರೆ ಎಂದು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ.

ಕರ್ನಾಟಕ ರಾಜ್ಯೋತ್ಸವದ ಸಂದರ್ಭದಲ್ಲಿ ಬೆಂಗಳೂರು – ಮುಂಬೈ ನಡುವಿನ 'ವಂದೇ ಭಾರತ್ ಸ್ಲೀಪರ್' ಸೇವೆಗೆ ಹಸಿರು ನಿಶಾನೆ ತೋರಿದ ವೈಷ್ಣವ್ ನಂತರ ಮಾತನಾಡಿ, ಬೆಂಗಳೂರನ್ನು ಹೈದರಾಬಾದ್, ಅಮರಾವತಿ ಮತ್ತು ಚೆನ್ನೈ ಜೊತೆ ಸಂಪರ್ಕಿಸಲಿದೆ ಎಂದು ಘೋಷಿಸಿದರು. ಇದಲ್ಲದೆ, ವಿದ್ಯುದ್ದೀಕರಣ ಮತ್ತು ಪರೀಕ್ಷೆ ಪೂರ್ಣಗೊಂಡ ನಂತರ, ಬೆಂಗಳೂರು ಮತ್ತು ಮಂಗಳೂರು ನಡುವಿನ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲುಸೇವೆಯನ್ನು ಮುಂಬರುವ ವಾರಗಳಲ್ಲಿ ಪ್ರಾರಂಭಿಸಲಾಗುತ್ತದೆ ಎಂದರು.



■ ಮುಂಬರುವ ದಿನದಲ್ಲಿ ಬೆಂಗಳೂರು–ಮಂಗಳೂರು ನಡುವೆ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲು ಸೇವೆ: ಅಶ್ವಿನ್ ವೈಷ್ಣವ್

ಈ ಪ್ರದೇಶದ ಪ್ರಮುಖ ತಾಂತ್ರಿಕ ಮತ್ತು ಆರ್ಥಿಕ ಕೇಂದ್ರಗಳನ್ನು ಈ ಕಾರಿಡಾರ್ ಸಂಪರ್ಕಿಸುತ್ತದೆ. ದಕ್ಷಿಣ ರಾಜ್ಯಗಳ ಅಭಿವೃದ್ಧಿಯನ್ನು ವೇಗಗೊಳಿಸುತ್ತದೆ. ಈ ಪ್ರಸ್ತಾವಿತ ಕಾರಿಡಾರ್ ಪ್ರಯಾಣದ ಸಮಯವನ್ನು ಗಮನಾರ್ಹವಾಗಿ ಕಡಿಮೆ ಮಾಡುತ್ತದೆ. ಬೆಂಗಳೂರು ಮತ್ತು ಚೆನ್ನೈ ನಡುವಿನ ಪ್ರಯಾಣವು ಈಗ ಕೇವಲ 73 ನಿಮಿಷ ತೆಗೆದುಕೊಳ್ಳುವ ನಿರೀಕ್ಷೆಯಿದೆ. ಬೆಂಗಳೂರು ಮತ್ತು ಹೈದರಾಬಾದ್ ನಡುವಿನ ಪ್ರಯಾಣವು ಸುಮಾರು 2 ಗಂಟೆ 10 ನಿಮಿಷ ತೆಗೆದುಕೊಳ್ಳುವ ನಿರೀಕ್ಷೆಯಿದೆ ಎಂದರು.

ಪ್ರಧಾನಿಯವರು 4,000 ಕಿಲೋಮೀಟರ್ ಬುಲೆಟ್ ರೈಲು ಕಾರಿಡಾರ್ ಅನ್ನು ಅನುಮೋದಿಸಿದ್ದಾರೆ. ಮುಂದಿನ ದಿನಗಳಲ್ಲಿ ಮತ್ತೊಂದು 3,000 ಕಿಲೋಮೀಟರ್ ಕಾರಿಡಾರ್ ಅನ್ನು ಘೋಷಿಸಲಾಗುವುದು ಎಂದು ಹೇಳಿದರು. ಉತ್ತರ ಕರ್ನಾಟಕದ ಮೂಲಕ ಹಾದುಹೋಗುವ ಪ್ರಸ್ತಾವಿತ ಬೆಂಗಳೂರು–ಪುಣೆ ಬುಲೆಟ್ ರೈಲು ಕಾರಿಡಾರ್ ಕೂಡ ಶೀಘ್ರದಲ್ಲೇ ವಾಸ್ತವವಾಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಕಬ್ಬು ದರ ಏರಿಕೆ, ರೈತರ ಸಂಪೂರ್ಣ ಸಾಲಮನ್ನಾಗೆ ಆಗ್ರಹಿಸಿ ರಾಜ್ಯಾದ್ಯಂತ ಇಂದು ರೈತರ ಹೋರಾಟ

ಬೆಂಗಳೂರು, ನ.2: ಕಬ್ಬು ದರ ಏರಿಕೆ, ರೈತರ ಸಂಪೂರ್ಣ ಸಾಲಮನ್ನಾ ಸೇರಿ ವಿವಿಧ ಬೇಡಿಕೆಈಡೇರಿಕೆಗಾಗಿ ಆಗ್ರಹಿಸಿ ರಾಜ್ಯಾದ್ಯಂತ ಮಂಗಳವಾರ ಹೋರಾಟ ನಡೆಸಲು ರೈತ ಸಂಘಟನೆಗಳ ಒಕ್ಕೂಟ ಮುಂದಾಗಿದೆ.

ಈ ಸಂಬಂಧ ಮಾಹಿತಿ ನೀಡಿರುವ ರಾಜ್ಯ ಕಬ್ಬು ಬೆಳೆಗಾರರ ಸಂಘದ ರಾಜ್ಯಾಧ್ಯಕ್ಷ ಕುರುಬೂರು ಶಾಂತಕುಮಾರ್, ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ನವೆಂಬರ್ 3ರಂದು ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳ ಕಚೇರಿ ಮುತ್ತಿಗೆ ಹಾಕಲಾಗುತ್ತಿದೆ. ಜೊತೆಗೆ ನವೆಂಬರ್ 5ರಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಬೃಹತ್ ಪ್ರತಿಭಟನಾ ಧರಣಿ ನಡೆಸಲಾಗುತ್ತದೆ ಎಂದು ತಿಳಿಸಿದರು.

ಇಂದು ರಾಜ್ಯದ ಎಲ್ಲ ಜಿಲ್ಲಾಧಿಕಾರಿಗಳ ಕಚೇರಿಗೆ ಮುತ್ತಿಗೆ ನ.5ರಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಬೃಹತ್ ಧರಣಿ

ಕಬ್ಬಿಗೆ ರಾಜ್ಯಸರ್ಕಾರ ಎಸ್‌ಎಪಿ ದರ ಘೋಷಣೆ ಮಾಡಬೇಕು.ಪಂಜಾಬ್ ರಾಜ್ಯದಲ್ಲಿ ಟನ್ ಕಬ್ಬಿಗೆ 4480ರೂ. ತಮಿಳುನಾಡು ಸರ್ಕಾರ 4000. ಉತ್ತರ ಪ್ರದೇಶ ಸರ್ಕಾರ 4200 ರೂ.ರಾಜ್ಯ ಸರ್ಕಾರಗಳು ನಿಗದಿ ಮಾಡಿವೆ. ಅದೇ ರೀತಿ ಕರ್ನಾಟಕ ರಾಜ್ಯದಲ್ಲಿಯೂ ರಾಜ್ಯ ಸಲಹಾ ಬೆಲೆ ಘೋಷಣೆ ಮಾಡಬೇಕು ಎಂದರು.

ಕೇಂದ್ರ ಸರ್ಕಾರ ಕಬ್ಬಿನ ಎಫ್‌ಆರ್‌ಪಿ ದರ ಏರಿಕೆ ಮಾಡಬೇಕು.ಕಬ್ಬಿನ ಉತ್ಪಾದನಾ ವೆಚ್ಚ ಏರಿಕೆಯಾಗಿರುವ ಕಾರಣ ಎಫ್‌ಆರ್‌ಪಿ ದರವನ್ನು ಕನಿಷ್ಠ 10–25 ಇಳುವರಿಗೆ 4500 ರೂಗೆ ಏರಿಕೆ ಮಾಡಬೇಕು.ಜೊತೆಗೆ ಉತ್ತರ ಕರ್ನಾಟಕ ಭಾಗದಲ್ಲಿ ಈಗ ಟನ್ ಕಬ್ಬಿಗೆ 4000 ರೂ ನೀಡುವುದಾಗಿ ಘೋಷಣೆ ಮಾಡುವ ಕಾರ್ಖಾನೆಗಳು ಆರಂಭ ಮಾಡಲು ರೈತರ ವಿರೋಧ ಇಲ್ಲ ಎಂದು ಸ್ಪಷ್ಟಪಡಿಸುತ್ತೇವೆ. ಇಂತಹ ಕಾರ್ಖಾನೆಗೆ ರೈತರು ಕಬ್ಬು ಸರಬರಾಜು ಮಾಡಬಹುದು. ಕಬ್ಬು ಬೆಳೆಗಾರಿಗೆ ಸಕ್ಕರೆ ಇಳುವರಿ ಮೋಸ, ತೂಕದಲ್ಲಿ ಮೋಸ ತಪ್ಪಿಸಲು ಸರ್ಕಾರ ಪಾರದರ್ಶಕ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು.

ರಾಜ್ಯದಲ್ಲಿ ಬರಗಾಲ ಹಿನ್ನೆಲೆ ರೈತರ ಸಂಪೂರ್ಣ ಸಾಲಮನ್ನಾ ಮಾಡಬೇಕು. ರಾಜ್ಯಾದ್ಯಂತ ರೈತ ಹೋರಾಟದಲ್ಲಿ ಪಾಲ್ಗೊಂಡ ರೈತರ ಮೇಲೆ ಹಾಕಿರುವ ಪೊಲೀಸ್ ಮೊಕದ್ದಮೆ ವಾಪಸ್ ಪಡೆಯಬೇಕು ಎಂದು ಒತ್ತಾಯಿಸಿದರು.

ಈ ಎಲ್ಲಾ ಬೇಡಿಕೆಗಳ ಈಡೇರಿಕೆಗಾಗಿ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಮಂಗಳವಾರ ಬೃಹತ್ ಸಂಖ್ಯೆಯಲ್ಲಿ ರೈತರು ಆಯಾ ಜಿಲ್ಲೆಯ ಜಿಲ್ಲಾಧಿಕಾರಿ ಕಚೇರಿ ಮುತ್ತಿಗೆ. ಹಾಕಲಾಗುವುದು ಎಂದು ತಿಳಿಸಿದರು.

ರಾಜ್ಯದ ರೈತ ಸಂಘಟನೆಗಳ ಕಬ್ಬು ಬೆಳೆಗಾರರ ಸಮನ್ವಯ ಸಮಿತಿ ವತಿಯಿಂದ ನ.5ರಂದು ಬೆಂಗಳೂರು ಫ್ರೀಡಂ ಪಾರ್ಕ್ ಬೃಹತ್ ನಿರಂತರ ಪ್ರತಿಭಟನಾ ಧರಣಿ ನಡೆಸಲಾಗುವುದು ಎಂದರು.

ಮಹಾರಾಷ್ಟ್ರದ ಪ್ರಸ್ತಾವಿತ ಯೋಜನೆಯಿಂದ ಕರ್ನಾಟಕದ ಹಿತಾಸಕ್ತಿಗೆ ಧಕ್ಕೆ



■ ಕೃಷ್ಣಾ ನದಿ ಪ್ರವಾಹದ ನೀರನ್ನು ಭೀಮಾ ನದಿಗೆ ತಿರುಗಿಸುವ ಯೋಜನೆಗೆ ಸಚಿವ ಎಂ.ಬಿ. ಪಾಟೀಲ್ ಆಕ್ಷೇಪ

ಬೆಂಗಳೂರು, ನ.2: ಕೃಷ್ಣಾ ನದಿಯ 40 ಟಿಎಂಸಿ ಅಡಿ ಪ್ರವಾಹದ ನೀರನ್ನು ಮಹಾರಾಷ್ಟ್ರದ ಭೀಮಾ ನದಿಗೆ ತಿರುಗಿಸುವ ಉದ್ದೇಶದಿಂದ ಮಹಾರಾಷ್ಟ್ರ ಸರ್ಕಾರವು ಯೋಜನೆ ಕೈಗೆತ್ತಿಕೊಂಡಿದೆ ಎಂದು ಸ್ವತಃ ಆ ರಾಜ್ಯದ ಮುಖ್ಯಮಂತ್ರಿ ಇತ್ತೀಚೆಗೆ ಕಾರ್ಯಕ್ರಮದಲ್ಲಿ ಹೇಳಿದ್ದು, ಈ ಪ್ರಸ್ತಾವಿತ ಯೋಜನೆಯು ಕರ್ನಾಟಕದ ಹಿತಾಸಕ್ತಿಗಳಿಗೆ ಗಂಭೀರ ಧಕ್ಕೆ ಉಂಟು ಮಾಡಲಿದೆ ಎಂದು ಬೃಹತ್ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ವಿಜಯಪುರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದ ಅವರು, ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಅವರು ಅಕ್ಟೋಬರ್ 9ರಂದು ಮುಂಬೈನಲ್ಲಿ ನಡೆದ ಇಂಡಿಯಾ ಟುಡೇ ಕಾನ್‌ಕ್ಲೈವ್ ಕಾರ್ಯಕ್ರಮದಲ್ಲಿ ಮಾತನಾಡುವ ವೇಳೆ, ಮಹಾಬಲೇಶ್ವರದ ಸಮೀಪ ಕೃಷ್ಣಾ ನದಿಯಿಂದ 40 ಟಿಎಂಸಿ ಅಡಿ ಪ್ರವಾಹದ ನೀರನ್ನು ಭೀಮಾ ನದಿಯ ಉಜ್ಜನಿ ಅಣೆಕಟ್ಟೆಗೆ ತಿರುಗಿಸುವ ಯೋಜನೆಯ ಬಗ್ಗೆ ಪ್ರಸ್ತಾಪಿಸಿದ್ದಾರೆ. ಈ ನೀರನ್ನು ಮರಾಠವಾಡದ ಎರಡು ಜಿಲ್ಲೆಗಳು ಹಾಗೂ ಸಾಂಗ್ಲಿ ಮತ್ತು ಸೊಲ್ಲಾಪುರ ಜಿಲ್ಲೆಗಳ ಕೆಲವು ಭಾಗಗಳಿಗೆ ಪೂರೈಸುವ ಉದ್ದೇಶವಿದೆ. ಯೋಜನೆಯ ಕಾಮಗಾರಿ ಆರಂಭವಾಗಿದ್ದು, ವಿಶ್ವ ಬ್ಯಾಂಕ್ ಹಣಕಾಸು ನೆರವು ನೀಡುತ್ತಿದೆ ಎಂದೂ ಹೇಳಿದ್ದಾರೆಂದು ಸಚಿವ ಎಂ.ಬಿ ಪಾಟೀಲ್ ವಿವರಿಸಿದ್ದಾರೆ.

...3ನೇ ಪುಟಕ್ಕೆ

ಕೇಂದ್ರ ಸರ್ಕಾರದ ಸ್ಪಷ್ಟನೆಗೆ ಆಗ್ರಹ

ಮಹಾರಾಷ್ಟ್ರ ಸರ್ಕಾರದ ಈ ಪ್ರಸ್ತಾವನೆಯು ಕೃಷ್ಣಾ ನದಿ ನೀರಿನ ಹಂಚಿಕೆ, ಆಲಮಟ್ಟಿ ಜಲಾಶಯದ ಒಳಹರಿವು ಹಾಗೂ ಕೆಳಹಂತದ ರಾಜ್ಯಗಳ ಹಕ್ಕುಗಳ ಮೇಲೆ ಪರಿಣಾಮ ಬೀರುವ ಸಾಧ್ಯತೆಯಿರುವುದರಿಂದ, ಇದನ್ನು ಲಘುವಾಗಿ ಪರಿಗಣಿಸಲು ಸಾಧ್ಯವಿಲ್ಲ. ಮಹಾರಾಷ್ಟ್ರ ಸರ್ಕಾರದ ಜೊತೆಗೆ ಕೇಂದ್ರ ಸರ್ಕಾರವೂ ಈ ವಿಚಾರವನ್ನು ಗಂಭೀರವಾಗಿ ಪರಿಗಣಿಸಿ, ಯೋಜನೆಯ ಕಾನೂನುಬದ್ಧತೆ, ಅನುಮತಿಗಳು ಮತ್ತು ಹಣಕಾಸು ನೆರವಿನ ಕುರಿತು ಸಮಗ್ರ ಸ್ಪಷ್ಟನೆ ನೀಡಬೇಕು. ಕರ್ನಾಟಕದ ಹಿತಾಸಕ್ತಿಗಳಿಗೆ ಧಕ್ಕೆ ಉಂಟಾಗದಂತೆ ಸೂಕ್ತ ಕ್ರಮ ಕೈಗೊಳ್ಳಬೇಕು. ಕೃಷ್ಣಾ ಜಲ ವಿವಾದ ನ್ಯಾಯಮಂಡಳಿ–2ರ ತೀರ್ಪಿನ ವ್ಯಾಪ್ತಿಗೆ ಒಳಪಡದ ಈ ಯೋಜನೆಯನ್ನು ಮಹಾರಾಷ್ಟ್ರ ಸರ್ಕಾರ ಯಾವ ಆಧಾರದ ಮೇಲೆ ಕೈಗೆತ್ತಿಕೊಂಡಿದೆ ಮತ್ತು ಇದಕ್ಕೆ ವಿಶ್ವ ಬ್ಯಾಂಕ್‌ನಿಂದ ಹಣಕಾಸು ನೆರವು ಪಡೆಯಲು ಹೇಗೆ ಸಾಧ್ಯವಾಗಿದೆ ಎಂಬುದರ ಬಗ್ಗೆ ಕೇಂದ್ರ ಸರ್ಕಾರ ಸ್ಪಷ್ಟನೆ ನೀಡಬೇಕು ಎಂದು ಎಂ.ಬಿ. ಪಾಟೀಲ್ ಆಗ್ರಹಿಸಿದ್ದಾರೆ.


ನ.5ರಂದು ಚುನಾವಣಾ ಆಯೋಗದ ವಿರುದ್ಧ ಕಾಂಗ್ರೆಸ್ ಪ್ರತಿಭಟನೆ: ಬಿ.ಕೆ. ಹರಿಪ್ರಸಾದ್

ನವದೆಹಲಿ, ನ.2: ಸಂವಿಧಾನ ಮತ್ತು ಪ್ರಜಾಪ್ರಭುತ್ವದ ರಕ್ಷಣೆಗಾಗಿ ದೆಹಲಿಯಲ್ಲಿ ನಿನ್ನೆ ನಡೆದ ಇಂಡಿಯಾ ಕೂಟದ ಬೃಹತ್ ಸಭೆಯ ಬೆನ್ನಲ್ಲೇ, ಚುನಾವಣಾ ಆಯೋಗದ ವಿರುದ್ಧ ನವೆಂಬರ್ 5ರಂದು ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟನೆ ನಡೆಸಲು ಕಾಂಗ್ರೆಸ್ ನಿರ್ಧರಿಸಿದೆ. ಪ್ರತಿಭಟನೆಯಲ್ಲಿ ಇಂಡಿಯಾ ಕೂಟದ ವಿವಿಧ ಪಕ್ಷಗಳು ಭಾಗಿಯಾಗಲಿವೆ ಎಂದು ಕೆಪಿಸಿಸಿ ಅಧ್ಯಕ್ಷ ಬಿ.ಕೆ ಹರಿಪ್ರಸಾದ್ ತಿಳಿಸಿದ್ದಾರೆ. ದೆಹಲಿಯಲ್ಲಿ ಮಾತನಾಡಿದ ಅವರು, ಭಾನುವಾರ ನಡೆದ ಸಭೆ ಐತಿಹಾಸಿಕವಾಗಿದ್ದು, ಸ್ವಾತಂತ್ರ್ಯಾನಂತರ ನಡೆದ ದೊಡ್ಡ ಸಭೆಗಳಲ್ಲಿ ಇದೂ ಒಂದಾಗಿದೆ ಎಂದರು. ಸಂವಿಧಾನ ಮತ್ತು ಪ್ರಜಾಪ್ರಭುತ್ವಕ್ಕೆ ಎದುರಾಗಿರುವ ಆತಂಕದ ಬಗ್ಗೆ ಜನರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ಪ್ರತಿಭಟನೆ ಆಯೋಜಿಸಲಾಗಿತ್ತು. ಕರ್ನಾಟಕದಿಂದಲೂ ಹೆಚ್ಚಿನ ಸಂಖ್ಯೆಯಲ್ಲಿ ನಾಯಕರು ಹಾಗೂ ಕಾರ್ಯಕರ್ತರು ಭಾಗವಹಿಸಿದ್ದರು ಎಂದು ಹೇಳಿದ್ದಾರೆ. ಪ್ರಜಾಪ್ರಭುತ್ವಕ್ಕೆ ಎದುರಾಗಿರುವ ಆತಂಕದ ಬಗ್ಗೆ ತಳಮಟ್ಟದ ನಾಯಕರಿಗೂ ಅರಿವು ಮೂಡಿಸಬೇಕು ಎಂಬ ಉದ್ದೇಶದಿಂದ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು ಸೇರಿದಂತೆ ಕೆಳಹಂತದ ನಾಯಕರನ್ನು ದೆಹಲಿಗೆ ಕರೆತಂದಿದ್ದೆವು. ಪಕ್ಷದ ನಾಯಕರು ನೀಡಿದ ಕರೆಯ ಮೇರೆಗೆ ಕರ್ನಾಟಕದ ವಿವಿಧ ಭಾಗಗಳಿಂದ ಮುಖಂಡರು ಸಭೆಯಲ್ಲಿ ಪಾಲ್ಗೊಂಡಿದ್ದರು ಎಂದು ತಿಳಿಸಿದರು.

ದೆಹಲಿ ಸಭೆ ಇತಿಹಾಸ ಸೃಷ್ಟಿಸಿದೆ

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು ಸೇರಿದಂತೆ ಕೆಳಹಂತದ ನಾಯಕರನ್ನು ದೆಹಲಿಗೆ ಕರೆತಂದಿದ್ದೆವು

ನಿಗಮ ಮಂಡಳಿ ನೇಮಕಾತಿ ಶೀಘ್ರ ಘೋಷಣೆ



ನಿಗಮ–ಮಂಡಳಿಗಳ ನೇಮಕಾತಿ ಕುರಿತು ಮಾತನಾಡಿದ ಅವರು, ಮೊದಲ ಹಂತದಲ್ಲಿ ಶಾಸಕರು ಹಾಗೂ ಮಾಜಿ ಶಾಸಕರ ಹೆಸರುಗಳನ್ನು ಮುಖ್ಯಮಂತ್ರಿ ಮತ್ತು ಮಾಜಿ ಮುಖ್ಯಮಂತ್ರಿ ಶಿಫಾರಸು ಮಾಡಿದ್ದರು. ಆ ಹೆಸರುಗಳಿಗೆ ಸಂಪೂರ್ಣ ಅನುಮೋದನೆ ದೊರೆತಿದ್ದು, ಯಾವುದೇ ಸಂದರ್ಭದಲ್ಲಿ ನೇಮಕಾತಿ ಪಟ್ಟಿ ಘೋಷಣೆಯಾಗಬಹುದು ಎಂದಿದ್ದಾರೆ. ಸಂಪುಟ ವಿಸ್ತರಣೆ ಮುಖ್ಯಮಂತ್ರಿ ಅವರ ಪರಮಾಧಿಕಾರಕ್ಕೆ ಸಂಬಂಧಿಸಿದ ವಿಚಾರವಾಗಿದೆ. ಆದರೆ, ಖಾಲಿ ಇರುವ ಸ್ಥಾನವನ್ನು ಭರ್ತಿ ಮಾಡಬೇಕು ಹಾಗೂ ಆದಷ್ಟು ಬೇಗ ಒಬ್ಬ ಮಹಿಳೆಗೆ ಸಂಪುಟದಲ್ಲಿ ಅವಕಾಶ ನೀಡಬೇಕು ಎಂಬುದು ಪಕ್ಷದ ನಿಲುವಾಗಿದೆ ಎಂದು ತಿಳಿಸಿದ್ದಾರೆ.

ಜನವರಿಯೊಳಗೆ ಜಿಲ್ಲಾ, ತಾಲೂಕು ಪಂಚಾಯಿತಿ

ಚುನಾವಣೆ: ಜಿಲ್ಲಾ ಮತ್ತು ತಾಲೂಕು ಪಂಚಾಯಿತಿ ಚುನಾವಣೆಗಳನ್ನು ಜನವರಿಯೊಳಗೆ ನಡೆಸಲು ನಿರ್ಧರಿಸಲಾಗಿದೆ. ಈಗಾಗಲೇ ಮತದಾರರ ಪಟ್ಟಿ ಬಂದಿದ್ದು, ಅದನ್ನು ಪರಿಶೀಲಿಸಿದ ಬಳಿಕ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದ್ದಾರೆ. ಗ್ರೇಟರ್ ಬೆಂಗಳೂರು ಚುನಾವಣೆ ನಡೆಸಲು ಡಿಸೆಂಬರ್ ಗಡುವು ಇರುವುದರಿಂದ, ನಿಗದಿತ ಅವಧಿಯಲ್ಲಿ ಚುನಾವಣೆ ನಡೆಸಲು ಯಾವುದೇ ತೊಂದರೆಯಿಲ್ಲ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ವ್ಯಾಪಾರಿಗಳ ನಷ್ಟದ ಆರೋಪಕ್ಕೆ ತಿರುಗೇಟು

ಇಂಡಿಯಾ ಕೂಟದ ದೆಹಲಿ ಸಭೆಯಿಂದಾಗಿ ವ್ಯಾಪಾರಿಗಳಿಗೆ 12 ಸಾವಿರ ಕೋಟಿ ರೂಪಾಯಿ ನಷ್ಟವಾಗಿದೆ ಎಂಬ ವ್ಯಾಪಾರಿಗಳ ಆರೋಪವನ್ನು ಕಾಂಗ್ರೆಸ್ ನಾಯಕ ತಳ್ಳಿಹಾಕಿದ್ದಾರೆ. 12 ಲಕ್ಷ ಕೋಟಿ ರೂಪಾಯಿ ಎನ್‌ಪಿಎ ವಿಚಾರವನ್ನು ಹೇಳಲು ಹೋಗಿ 12 ಸಾವಿರ ಕೋಟಿ ರೂಪಾಯಿ ನಷ್ಟ ಎಂದು ಹೇಳಿರಬಹುದು ಎಂದು ವ್ಯಂಗ್ಯವಾಡಿದ್ದಾರೆ. ಪಹರ್‌ಗಂಜ್ ಸೇರಿದಂತೆ ದೆಹಲಿಯ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವ್ಯಾಪಾರಿಗಳು ಇಂತಹ ಆರೋಪ ಮಾಡಿರುವುದು ತಮ್ಮ ಗಮನಕ್ಕೆ ಬಂದಿಲ್ಲ. ಸಣ್ಣಪುಟ್ಟ ವ್ಯಾಪಾರಿಗಳು ಸಭೆಯ ಬಗ್ಗೆ ಸಂತಸ ವ್ಯಕ್ತಪಡಿಸಿದ್ದಾರೆ. ಆರ್‌ಎಸ್‌ಎಸ್ ಸಂಘಟನೆಗಳೂ ಈ ವಿಚಾರದಲ್ಲಿ ಅಸಮಾಧಾನ ವ್ಯಕ್ತಪಡಿಸಿಲ್ಲ ಎಂದು ಬಿ.ಕೆ. ಹರಿಪ್ರಸಾದ್ ಹೇಳಿದರು.

ಸ್ಟಿಂಗ್ ಪ್ರಕರಣದ ಸೂತ್ರಧಾರರ ವಿರುದ್ಧ ಕ್ರಮಕ್ಕೆ ಒತ್ತಾಯ

ಸ್ಟಿಂಗ್ ಕಾರ್ಯಾಚರಣೆ ವಿಚಾರವಾಗಿ ಪ್ರತಿಕ್ರಿಯಿಸಿದ ಅವರು, ಕೇಂದ್ರ ಸಚಿವ ಎಚ್.ಡಿ ಕುಮಾರಸ್ವಾಮಿ ಅವರಿಗೆ ಸಂಬಂಧಪಟ್ಟವರ ನಡುವೆ ಲಿಂಕ್ ಇದೆಯೋ ಇಲ್ಲವೋ ಎಂಬುದು ತಮ್ಮ ಪ್ರಶ್ನೆಯಲ್ಲ. ಇಂತಹ ಅಸಹ್ಯಕರ ಕೆಲಸದ ಹಿಂದೆ ಯಾರಿದ್ದಾರೆ ಎಂಬುದೇ ಮುಖ್ಯ ಪ್ರಶ್ನೆ ಎಂದು ಹೇಳಿದ್ದಾರೆ. ಈ ಪ್ರಕರಣದಲ್ಲಿ ಪಾತ್ರಧಾರಿಗಳು ಹಲವರಿರಬಹುದು. ಆದರೆ, ಇದರ ಹಿಂದಿರುವ ಸೂತ್ರಧಾರರು ಯಾರು ಎಂಬುದನ್ನು ಪತ್ತೆಹಚ್ಚಬೇಕು. ಸೂತ್ರಧಾರರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂಬುದು ತಮ್ಮ ಒತ್ತಾಯವಾಗಿದೆ ಎಂದು ತಿಳಿಸಿದ್ದಾರೆ.


ನಿತ್ಯ ಪಂಚಾಂಗ 3.11.2026 ಮಂಗಳವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ದಕ್ಷಿಣಾಯಣ ಶರದ್ ಋತು, ಚಾಂದ್ರಮಾನ ಶ್ರಾವಣ-ಆಶ್ವಯುಜ ಮಾಸ

ಆಶ್ವಯುಜ ಬಹುಳ, ನವಮಿ,
ಆಶ್ಲೇಷ ನಕ್ಷತ್ರ,
ಶ್ರೀರಂಗಪಟ್ಟಣ ಅಷ್ಟತೀರ್ಥೋತ್ಸವ

ದಿನ	ರಾಹುಕಾಲ	ಯಮಗಂಡ	ಗುಳಿಕಕಾಲ
ಭಾನು	ಸ. 5.04– 6.33	12.00– 1.30	3.00– 4.00
ಸೋಮ	ಬೆ. 7.20– 9.04	10.30–12.00	1.30– 3.00
ಮಂಗಳ	ಮ. 3.25– 4.59	9.00–10.30	12.00– 1.30
ಬುಧ	ಮ.12.16– 1.50	7.30– 9.00	10.30– 12.00
ಗುರು	ಮ. 1.50– 3.29	6.00– 7.30	9.00– 10.30
ಶುಕ್ರ	ಬೆ.10.42–12.16	3.00– 4.30	7.30– 9.00
ಶನಿ	ಬೆ. 9.07–10.41	1.30– 3.00	6.00– 7.30



ಮುಖ್ಯ ಚುನಾವಣಾ ಆಯುಕ್ತರ ವಿರುದ್ಧ ನವದೆಹಲಿಯ ರಾಮಲೀಲಾ ಮೈದಾನದಲ್ಲಿ ಆಯೋಜಿಸಿದ್ದ ಬೃಹತ್ ರ್‍ಯಾಲಿಯಲ್ಲಿ ಭಾಗವಹಿಸಿದ್ದ ಕೆಪಿಸಿಸಿ ಉಪಾಧ್ಯಕ್ಷ ಎಸ್.ಇ. ಸುಧೀಂದ್ರ ಅವರು ಎಐಸಿಸಿ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕಾ ಗಾಂಧಿ ವಾದ್ರಾ ಅವರನ್ನು ಭೇಟಿಯಾಗಿದ್ದರು.

ರಾಹುಲ್‌ಗೆ ತಮ್ಮ ಅಸಮಾಧಾನ ತಿಳಿಸಿದ ಸಿದ್ದರಾಮಯ್ಯ

ವ್ಯಕ್ತಿತ್ವಕ್ಕೆ ಧಕ್ಕೆಯಾದರೆ ಮುಂದೆ ಚುನಾವಣಾ ಪ್ರಚಾರಕ್ಕೆ ಬರುವುದಿಲ್ಲ

ನವದೆಹಲಿ, ನ.2: ನಿಮ್ಮ ಮಾತಿಗೆ ಗೌರವ ನೀಡಿ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿದ್ದೇನೆ. ಮುಂದಿನ ಚುನಾವಣೆಯಲ್ಲೂ ಸ್ಪರ್ಧಿಸುವುದಿಲ್ಲ ಎಂದು ಹೇಳಿದ್ದೇನೆ. ಮತ್ತೆ ಮುಖ್ಯಮಂತ್ರಿ ಹುದ್ದೆಯ ಆಕಾಂಕ್ಷಿಯೂ ಅಲ್ಲ. ಹೀಗಿದ್ದರೂ ನನ್ನ ವಿರುದ್ಧ ರಾಜಕೀಯ ಷಡ್ಯಂತ್ರ ನಡೆಸುತ್ತಿರುವುದೇಕೆ? ಸ್ಟಿಂಗ್ ವಿಡಿಯೋ ವಿವಾದದಿಂದ ನನ್ನ ವೈಯಕ್ತಿಕ ವರ್ಚಸ್ಸಿಗೆ ಮಾತ್ರವಲ್ಲ, ಪಕ್ಷಕ್ಕೂ ಹಾನಿಯಾಗುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಮುಂದೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ ಎನ್ನಲಾಗಿದೆ.

ದೆಹಲಿಯಲ್ಲಿ ರಾಹುಲ್ ಗಾಂಧಿ ಅವರನ್ನು ಭೇಟಿಯಾದ ಸಿದ್ದರಾಮಯ್ಯ, ಸ್ಟಿಂಗ್ ವಿಡಿಯೋ ವಿವಾದದಿಂದ ತಮ್ಮ ಹೆಸರಿಗೆ ಧಕ್ಕೆಯಾಗುತ್ತಿರುವ ಬಗ್ಗೆ ಬೇಸರ ವ್ಯಕ್ತಪಡಿಸಿದ್ದಾರೆ. ವಿಡಿಯೋ ಹಂಚಿಕೊಂಡವರು ಯಾರೆಂಬುದು ತಮಗೆ ಗೊತ್ತಿದೆ. ಆದರೆ



ದೆಹಲಿಯಲ್ಲಿ ಭೇಟಿ ಮಾಡಿದ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ನಗರಾಭಿವೃದ್ಧಿ ಸಚಿವ ಯತೀಂದ್ರ, ಮುಖ್ಯಮಂತ್ರಿಯವರ ಕಾನೂನು ಸಲಹೆಗಾರ ಪೊನ್ನಣ್ಣ

ವಿಡಿಯೋ ಚಿತ್ರೀಕರಿಸಿದವರು ಯಾರು? ಅದರ ಹಿಂದಿನ ಉದ್ದೇಶವೇನು ಎಂಬುದು ಬಹಿರಂಗವಾಗಬೇಕು ಎಂದು ಒತ್ತಾಯಿಸಿದ್ದಾರೆ ಎನ್ನಲಾಗಿದೆ.

ಮುಂದಿನ ಚುನಾವಣೆಯಲ್ಲಿ ಪಕ್ಷದ ಪರವಾಗಿ ಪ್ರಚಾರಕ್ಕೆ ಬರಬೇಕಾದರೆ ತಮ್ಮ ವರ್ಚಸ್ಸಿಗೆ ಧಕ್ಕೆಯಾಗಬಾರದು. ಇದೇ ರೀತಿ ಮಾನಹಾನಿ ಮುಂದುವರಿದರೆ ಚುನಾವಣಾ ಪ್ರಚಾರದಿಂದ ದೂರ ಉಳಿಯಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದ್ದಾರೆ ಎನ್ನಲಾಗಿದೆ. ಇತ್ತೀಚೆಗೆ ನಡೆದ ವಿಧಾನ ಪರಿಷತ್ತಿನ ನಾಲ್ಕು ಸ್ಥಾನಗಳ ಚುನಾವಣೆಯಲ್ಲಿನ ಸೋಲಿಗೂ ಸ್ಟಿಂಗ್ ವಿಡಿಯೋ ವಿವಾದ ಕಾರಣವಾಗಿದೆ ಎಂಬ ಅಭಿಪ್ರಾಯವನ್ನೂ ವ್ಯಕ್ತಪಡಿಸಿದ್ದಾರೆ.

ವಿಡಿಯೋ ಚಿತ್ರೀಕರಿಸಿದವರನ್ನು ಪತ್ತೆಹಚ್ಚುವ ಬದಲು ಅದನ್ನು ಅಪ್ಲೋಡ್ ಮಾಡಿದವರು ಮತ್ತು ಹಂಚಿಕೊಂಡವರ ಬೆನ್ನುಹತ್ತಿರುವುದು ಸರಿಯಲ್ಲ. ಪ್ರಕರಣದ ತನಿಖೆ ಸರಿಯಾದ ದಿಕ್ಕಿನಲ್ಲಿ ಸಾಗುತ್ತಿಲ್ಲ ಎಂಬುದು ಸಿದ್ದರಾಮಯ್ಯ ಅವರ ಮತ್ತೊಂದು ಆಕ್ಷೇಪವಾಗಿದೆ.

ಎಚ್.ಡಿ. ಕುಮಾರಸ್ವಾಮಿ ಮತ್ತು ಡಿ.ಕೆ. ಶಿವಕುಮಾರ್ ನಡುವಿನ ರಾಜಕೀಯ ಪ್ರತಿಷ್ಠೆಯ ಸಂಘರ್ಷದಲ್ಲಿ ತಮ್ಮ ವರ್ಚಸ್ಸಿಗೆ ಧಕ್ಕೆ ತರುತ್ತಿರುವುದು ಸರಿಯಲ್ಲ ಎಂದು ಅಸಮಾಧಾನ ಹೊರಹಾಕಿದ್ದಾರೆ ಎನ್ನಲಾಗಿದೆ.

ಇದಕ್ಕೂ ಮುನ್ನ ಕಾಂಗ್ರೆಸ್ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ಅವರನ್ನು ಭೇಟಿಯಾದಾಗಲೂ ಸಿದ್ದರಾಮಯ್ಯ ಇದೇ ವಿಚಾರವಾಗಿ ಅಸಮಾಧಾನ ವ್ಯಕ್ತಪಡಿಸಿದ್ದರು.

ರಾಹುಲ್ ಗಾಂಧಿ ಭೇಟಿಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಸಿದ್ದರಾಮಯ್ಯ, ಸ್ಟಿಂಗ್ ವಿಡಿಯೋ ವಿಚಾರ ಚರ್ಚೆಯಾಗಿಲ್ಲ ಎಂದು ಹೇಳಿದರು. ರಾಜ್ಯದ ಅಭಿವೃದ್ಧಿ ವಿಚಾರಗಳು, ಪಕ್ಷದ ಬೆಳವಣಿಗೆ, ರಾಜಕೀಯ ವಿದ್ಯಮಾನಗಳು ಮತ್ತು ಪಕ್ಷ ಸಂಘಟನೆ ಕುರಿತು ಚರ್ಚೆ ನಡೆಸಿದ್ದೇನೆ ಎಂದರು. ಸ್ಟಿಂಗ್ ವಿಡಿಯೋದಲ್ಲಿ ಎಚ್.ಡಿ. ಕುಮಾರಸ್ವಾಮಿ ಅವರ ಮನೆಯ ಪಾತ್ರದ ಕುರಿತು ಸೀಮಂತ್ ಕುಮಾರ್ ನೀಡಿರುವ ಹೇಳಿಕೆಯೂ ತಮಗೆ ತಿಳಿದಿಲ್ಲ ಎಂದು ಸ್ಪಷ್ಟಪಡಿಸಿದರು.

ಸ್ಟಿಂಗ್ ಆಪರೇಷನ್: ರಾಹುಲ್‌ಗಾಂಧಿ ಜತೆ ಸಿದ್ದರಾಮಯ್ಯ ಚರ್ಚೆ

ರಾಜ್ಯ ರಾಜಕೀಯದಲ್ಲಿ ತೀವ್ರ ಚರ್ಚೆಗೆ ಗ್ರಾಸವಾಗಿರುವ ಸ್ಟಿಂಗ್ ಆಪರೇಷನ್ ವಿಚಾರ ಇದೀಗ ದೆಹಲಿ ಅಂಗಳ ತಲುಪಿದ್ದು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ದೆಹಲಿಯಲ್ಲಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರನ್ನು ಭೇಟಿ ಮಾಡಿ ಎಲ್ಲ ವಿದ್ಯಮಾನಗಳನ್ನು ಅವರ ಗಮನಕ್ಕೆ ತಂದಿದ್ದಾರೆ

ಸ್ಟಿಂಗ್ ಆಪರೇಷನ್ ಹಿಂದೆ ಸ್ವಪಕ್ಷದವರೇ ಇದ್ದಾರೆ ಎಂದು ಹಿಂದೆ ಹೇಳಿಕೆ ನೀಡಿದ್ದ ಸಿದ್ದರಾಮಯ್ಯ, ಇದೀಗ ಈ ವಿಚಾರವನ್ನು ರಾಹುಲ್ ಗಾಂಧಿ ಗಮನಕ್ಕೆ ತರುವ ಮೂಲಕ ಸ್ಟಿಂಗ್ ವಿಚಾರ ಹೈಕಮಾಂಡ್ ಅಂಗಳ ತಲುಪಿದಂತಾಗಿದೆ

ಅಕ್ರಮ ಬಯಲಿಗೆಳೆದ ನನ್ನನ್ನೇ ಟಾರ್ಗೆಟ್ ಮಾಡುತ್ತಿದ್ದಾರೆ

ಕಟ್ಟುಕತೆ ಹೆಣೆದು ಗುರಿಯಾಗಿಸಲು ಯತ್ನ: ಎಚ್.ಡಿ. ಕುಮಾರಸ್ವಾಮಿ ಆಕ್ರೋಶ

ಬೆಂಗಳೂರು, ನ.2: ಸ್ಟಿಂಗ್ ಆಪರೇಷನ್ ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸ್ ಆಯುಕ್ತರು ತಮ್ಮ ಹೆಸರು ಪ್ರಸ್ತಾಪಿಸಿರುವುದಕ್ಕೆ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಪ್ರತಿಕ್ರಿಯಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪೊಲೀಸರು ಕಟ್ಟುಕಥೆ ಹೆಣೆದು ತಮ್ಮನ್ನು ಗುರಿಯಾಗಿಸಲು ಯತ್ನಿಸುತ್ತಿದ್ದಾರೆ ಎಂದು ಆರೋಪಿಸಿದ್ದು, ಮಾಜಿ ಸಿಎಂ ಸಿದ್ದರಾಮಯ್ಯ ಅವರಿಗೆ ಕ್ಲೀನ್‌ಚಿಟ್ ನೀಡುವ ಏಕೈಕ ಉದ್ದೇಶದಿಂದ ಈ ತನಿಖೆ ನಡೆಯುತ್ತಿದೆ ಎಂದು ಆಕ್ರೋಶ ಹೊರಹಾಕಿದ್ದಾರೆ.



ತನಿಖಾ ಸಂಸ್ಥೆಗಳು ಆರೋಪಿಯನ್ನು ಬಂಧಿಸಿರುವುದು ಉತ್ತರ ಪ್ರದೇಶದ ಗಾಜಿಯಾಬಾದ್‌ನಲ್ಲಿ ಹೊರತು ನನ್ನ ಮನೆಯಲ್ಲಲ್ಲ. ಮೂಲ ವಿಡಿಯೋ ಸೃಷ್ಟಿಸಿದವರನ್ನು ಹಾಗೂ ನಿಜವಾದ ತಪ್ಪಿತಸ್ಥರನ್ನು ಬಿಟ್ಟು, ತಮ್ಮ ಹೆಸರನ್ನು ಅನಗತ್ಯವಾಗಿ ಪ್ರಕರಣಕ್ಕೆ ಎಳೆದು ತರುತ್ತಿರುವುದೇಕೆ. ಪೊಲೀಸರು ನೈಜ ಅಪರಾಧಿಗಳ ವಿರುದ್ಧ ಕ್ರಮ ಕೈಗೊಳ್ಳುವ ಬದಲು ಪ್ರಕರಣದ ದಿಕ್ಕು ತಪ್ಪಿಸುತ್ತಿದ್ದಾರೆ ಎಂದು ದೂರಿದರು.

ಪಕ್ಷದ ಕಾರ್ಯಕರ್ತರು ತನಿಖೆಗೆ ಹಾಜರಾಗುತ್ತಿಲ್ಲ ಎಂಬ ಆರೋಪವನ್ನು ನಿರಾಕರಿಸಿದ ಕೇಂದ್ರ ಸಚಿವರು, ನೋಟಿಸ್ ಬಂದ ಮರುದಿನವೇ ಸಾಮಾಜಿಕ ಜಾಲತಾಣ ವಿಭಾಗದ ಚಂದನ್ ಹಾಗೂ ಮೋಹನ್ ಗೌಡ ವಿಚಾರಣೆಗೆ ಹಾಜರಾಗಿದ್ದಾರೆ. ತನಿಖೆಗೆ ಸಹಕರಿಸುತ್ತಿದ್ದರೂ ಪೊಲೀಸರು ಸಾರ್ವಜನಿಕವಾಗಿ ತಪ್ಪು ಮಾಹಿತಿ ನೀಡುತ್ತಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಪೊಲೀಸ್ ಆಯುಕ್ತರ ಹೇಳಿಕೆ ಕಾನೂನುಬಾಹಿರ

ಪೊಲೀಸ್ ಕಮಿಷನರ್ ಅವರ ಹೇಳಿಕೆ ಕಾನೂನುಬಾಹಿರವಾಗಿದ್ದು, ತನಿಖಾ ಹಂತದಲ್ಲಿ ಯಾವುದೇ ಮಾಹಿತಿ ಸೋರಿಕೆಯಾಗಬಾರದು ಎಂಬ ಸುಪ್ರೀಂ ಕೋರ್ಟ್‌ನ ಸ್ಪಷ್ಟ ನಿರ್ದೇಶನವನ್ನು ಗಾಳಿಗೆ ತೂರಲಾಗಿದೆ. ಸಿಎಂ ಒತ್ತಡಕ್ಕೆ ಮಣಿದು, ಅವರನ್ನು ತೃಪ್ತಿಪಡಿಸಲು ಮತ್ತು ಓಲೈಸಲು ಪೊಲೀಸ್ ಅಧಿಕಾರಿಗಳು ಈ ರೀತಿ ವರ್ತಿಸುತ್ತಿದ್ದಾರೆ ಎಂದು ಆರೋಪಿಸಿದರು. ಅಧಿಕಾರಿಗಳಿಗೂ ಸೇವಾ ನಿಯಮಾವಳಿಗಳಿದ್ದು, ಆ ನಿಯಮಗಳ ಅಡಿಯಲ್ಲಿ ತಾವು ಕ್ರಮಕ್ಕೆ ಮುಂದಾದರೆ ಆ ಅಧಿಕಾರಿಯ ಪರಿಸ್ಥಿತಿ ಏನಾಗಬಹುದು ಎಂಬುದು ತಮಗೆ ಚೆನ್ನಾಗಿ ತಿಳಿದಿದೆ ಎಂದು ಎಚ್.ಡಿ. ಕುಮಾರಸ್ವಾಮಿ ಎಚ್ಚರಿಕೆ ನೀಡಿದರು.

ಸಿಬಿಐ ತನಿಖೆಗೆ ಅಶೋಕ್ ಆಗ್ರಹ

ಸ್ಟಿಂಗ್ ಆಪರೇಷನ್ ವಿಚಾರದಲ್ಲಿ ಪೊಲೀಸ್ ಆಯುಕ್ತರು ನೀಡಿರುವ ಹೇಳಿಕೆಗಳು ಉತ್ಪ್ರೇಕ್ಷೆಯಾಗಬಾರದು, ಸ್ಟಿಂಗ್ ಮಾಡಿದ್ದು ಯಾರು, ಎಲ್ಲಿ ಮಾಡಲಾಗಿದೆ, ಯಾಕೆ ಮಾಡಲಾಗಿದೆ, ಇದರ ಹಿಂದಿರುವ ಮೂಲ ವ್ಯಕ್ತಿ ಯಾರು ಎಂಬುದನ್ನು ಮೊದಲು ಪತ್ತೆ ಮಾಡಬೇಕು ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ್ ಆಗ್ರಹಿಸಿದ್ದಾರೆ. ಚಿಕ್ಕಬಳ್ಳಾಪುರದಲ್ಲಿ ಮಾತನಾಡಿದ ಅವರು, ಕಳೆದ 15 ದಿನಗಳಿಂದ ರಾಜ್ಯ ಸರ್ಕಾರ ಈ ವಿಚಾರದಲ್ಲಿ ಯಾಕೆ ಸುಮ್ಮನಿತ್ತು ಎಂದು ಪ್ರಶ್ನಿಸಿದ್ದು ಇಡೀ ಪ್ರಕರಣವನ್ನು ಸಿಬಿಐ ತನಿಖೆಗೆ ವಹಿಸಬೇಕು ಎಂದು ಒತ್ತಾಯಿಸಿದ್ದಾರೆ.

ಜಾತಿನಿಂದನೆ: ಚನ್ನಗಿರಿ ಶಾಸಕ ಶಿವಗಂಗಾ ಅರ್ಜಿ ಸುಪ್ರೀಂನಲ್ಲಿ ತಿರಸ್ಕೃತಿ

ನವದೆಹಲಿ: ಜಾತಿನಿಂದನೆ ಪ್ರಕರಣವನ್ನು ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯಕ್ಕೆ ವರ್ಗಾವಣೆ ಮಾಡಿದ್ದ ಕರ್ನಾಟಕ ಹೈಕೋರ್ಟ್ ಆದೇಶವನ್ನು ಪ್ರಶ್ನಿಸಿ ಸುಪ್ರೀಂ ಕೋರ್ಟ್ ಮೆಟ್ಟಿಲೇರಿದ್ದ ಚನ್ನಗಿರಿ ಶಾಸಕ ಶಿವಗಂಗಾ ಬಸವರಾಜ್‌ಗೆ ಹಿನ್ನಡೆಯಾಗಿದೆ. ಶಾಸಕರು ಸಲ್ಲಿಸಿದ್ದ ಅರ್ಜಿಯನ್ನು ಸುಪ್ರೀಂ ಕೋರ್ಟ್ ವಜಾಗೊಳಿಸಿದೆ. ನ್ಯಾಯಮೂರ್ತಿ ಸಂಜಯ್ ಕುಮಾರ್ ಅವರ ಪೀಠದಲ್ಲಿ ಅರ್ಜಿಯ ವಿಚಾರಣೆ ನಡೆಯಿತು. ಈ ವೇಳೆ ಶಿವಗಂಗಾ ಬಸವರಾಜ್ ಸಲ್ಲಿಸಿದ್ದ ಅರ್ಜಿಯನ್ನು ನ್ಯಾಯಪೀಠ ವಜಾಗೊಳಿಸಿದೆ. ಶಿವಗಂಗಾ ಬಸವರಾಜ್ ಶಾಸಕರಾಗುವ ಮುನ್ನ ನಡೆದಿದ್ದ ಜಾತಿನಿಂದನೆ ಪ್ರಕರಣಕ್ಕೆ ಸಂಬಂಧಿಸಿದಂತೆ ಈ ವಿವಾದ ಉಂಟಾಗಿತ್ತು. ಪ್ರಕರಣವನ್ನು ಜನಪ್ರತಿನಿಧಿಗಳ ನ್ಯಾಯಾಲಯಕ್ಕೆ ವರ್ಗಾವಣೆ ಮಾಡುವಂತೆ ಕರ್ನಾಟಕ ಹೈಕೋರ್ಟ್ ಆದೇಶಿಸಿತ್ತು

ಸ್ಟಿಂಗ್ ಆಪರೇಷನ್‌ನಲ್ಲಿ ಎಚ್‌ಡಿಕೆ ಗುರಿ: ಸಚಿವ ವಿ.ಸೋಮಣ್ಣ

ಬೇರೊಬ್ಬರ ಜನಪ್ರಿಯತೆ ಕಸಿದುಕೊಳ್ಳಲು ಪೊಲೀಸರ ಬಳಕೆ ಶೋಭೆ ತರಲ್ಲ



ಹಾಸನ, ನ.2: ಸ್ಟಿಂಗ್ ಆಪರೇಷನ್ ಪ್ರಕರಣದಲ್ಲಿ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರನ್ನು ಉದ್ದೇಶಪೂರ್ವಕವಾಗಿ ಟಾರ್ಗೆಟ್ ಮಾಡಲಾಗುತ್ತಿದೆ ಎಂದು ಕೇಂದ್ರ ಸಚಿವ ವಿ.ಸೋಮಣ್ಣ ಹೇಳಿದ್ದಾರೆ.

ನಗರದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡರು ರಾಜ್ಯದ ಮಹಾನ್ ನಾಯಕ. ಅವರ ಪುತ್ರ ಎಚ್.ಡಿ.ಕುಮಾರಸ್ವಾಮಿ ಅವರನ್ನು ಸ್ಟಿಂಗ್ ಆಪರೇಷನ್ ಪ್ರಕರಣದಲ್ಲಿ ಗುರಿಯಾಗಿಸಲಾಗುತ್ತಿದೆ. ಇನ್ನೊಬ್ಬರ ಜನಪ್ರಿಯತೆಯನ್ನು ಕಸಿದುಕೊಳ್ಳಲು ಪೊಲೀಸರನ್ನು ಬಳಸಿಕೊಳ್ಳುವುದು ಶೋಭೆ ತರುವುದಿಲ್ಲ. ಸುಳ್ಳುಗಳನ್ನು ಮತ್ತೊಬ್ಬರ ಬಾಯಲ್ಲಿ ಹೇಳಿಸಿ ಮಜಾ ತೆಗೆದುಕೊಳ್ಳುವ ಪ್ರಯತ್ನ ನಡೆಯುತ್ತಿದೆ ಎಂದರು.

ಇದೇ ವೇಳೆ, ಅಧಿಕಾರಿಗಳ ಮೇಲೆ ಒತ್ತಡ ಹೇರುವ ಮೂಲಕ ರಾಜಕೀಯ ನಡೆಸುವುದು ಸರಿಯಲ್ಲ ಎಂದು ರಾಜ್ಯ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು. ರಾಜ್ಯ ಸರ್ಕಾರಕ್ಕೆ ಯಾವುದೇ ಲಂಗು–ಲಗಾಮು ಇಲ್ಲದಂತಾಗಿದೆ. ಜನರೇ ಸರ್ಕಾರವನ್ನು ನಿಯಂತ್ರಿಸಬೇಕಾದ ಪರಿಸ್ಥಿತಿ ಇದೆ. ಚುನಾವಣೆಯಲ್ಲಿ ಜನರು ಸೂಕ್ತ ತೀರ್ಪು ನೀಡುವ ಮೂಲಕ ಸರ್ಕಾರವನ್ನು ಸರಿಪಡಿಸಬೇಕು ಎಂದು ಟೀಕಿಸಿದರು.

ಬಿ28 ಬುಲೆಟ್ ರೈಲು: ಉತ್ಪಾದನೆಯ ಪ್ರಮುಖ ಹಂತ ದಾಟಿ ಮುನ್ನಡೆಯುತ್ತಿದೆ: ಅಶ್ವಿನಿ ವೈಷ್ಣವ್

ಬೆಂಗಳೂರು, ನ.2: ಬಿಇಎಂಎಲ್‌ನ ಬೆಂಗಳೂರು ಘಟಕದಲ್ಲಿ ನಿರ್ಮಾಣವಾಗುತ್ತಿರುವ 'ಬಿ28' ಬುಲೆಟ್ ರೈಲು, ತಯಾರಿಕೆಯ ಪ್ರಮುಖ ಹಂತಗಳನ್ನು ದಾಟಿ ಮುನ್ನಡೆಯುತ್ತಿದೆ. ಸೋಮವಾರ ಈ ಘಟಕಕ್ಕೆ ಭೇಟಿ ನೀಡಿದ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರು, ಘಟಕದ ಕಾಮಗಾರಿಗಳನ್ನು ಪರಿಶೀಲಿಸಿದರು.

ಸಚಿವರು ರೈಲಿನ ಅಂಡರ್‌ಫ್ರೇಮ್ (ತಳಭಾಗದ ಚೌಕಟ್ಟು) ನಿರ್ಮಾಣ, ಪಕ್ಕದ ಗೋಡೆಗಳು ಮತ್ತು ಮೇಲ್ಛಾವಣಿಯ ಭಾಗಗಳ ಜೋಡಣೆ, ಬೋಗಿಗಳ ಅಳವಡಿಕೆ ಹಾಗೂ ಮೇಲ್ಮೈ ಸಂಸ್ಕರಣೆ ಸೇರಿದಂತೆ ಒಟ್ಟಾರೆ ತಯಾರಿಕಾ ಪ್ರಕ್ರಿಯೆಯನ್ನು ಪರಿಶೀಲಿಸಿದರು. ಅಲ್ಲದೆ, ಉತ್ಪಾದನಾ ವ್ಯವಸ್ಥೆಗಳು ಮತ್ತು ವಿವಿಧ ವಿಭಾಗಗಳಲ್ಲಿ ನಡೆಯುತ್ತಿರುವ ಕೆಲಸಗಳ ಬಗ್ಗೆಯೂ ಅವರು ಮಾಹಿತಿ ಪಡೆದರು.ರೈಲಿನ ರಚನಾತ್ಮಕ



ಭಾಗಗಳಲ್ಲದೆ, ಪ್ರಯಾಣಿಕರಿಗೆ ಸಂಬಂಧಿಸಿದ ಸೌಲಭ್ಯಗಳು ಮತ್ತು ತಾಂತ್ರಿಕ ವ್ಯವಸ್ಥೆಗಳನ್ನೂ ಸಚಿವ ವೈಷ್ಣವ್ ಪರಿಶೀಲಿಸಿದರು.

ಇದರಲ್ಲಿ ಆಸನ ವ್ಯವಸ್ಥೆ, ಕಪ್ಲರ್‌ಗಳು (ಬೋಗಿಗಳನ್ನು ಜೋಡಿಸುವ ಸಾಧನಗಳು) ಹಾಗೂ ಎಚ್‌ವಿಎಸಿ ತಾಪನ, ವಾತಾಯನ ಮತ್ತು ಹವಾನಿಯಂತ್ರಣ ವ್ಯವಸ್ಥೆಗಳು ಸೇರಿವೆ. ರೈಲಿನ ಪಕ್ಕದ ಭಾಗಗಳು ಮತ್ತು ಮೇಲ್ಛಾವಣಿಯ ಮಾಡ್ಯೂಲ್‌ಗಳನ್ನು ತಯಾರಿಸಲು ಬಳಸುವ ವಿಧಾನಗಳು ಹಾಗೂ ಉಪಕರಣಗಳ ಕಾರ್ಯನಿರ್ವಹಣೆಯ ಬಗ್ಗೆ ಅಧಿಕಾರಿಗಳು ಸಚಿವರಿಗೆ ವಿವರಿಸಿದರು.

ಮುಂಬೈ-ಅಹಮದಾಬಾದ್ ಕಾರಿಡಾರ್ ಸಂಚಾರಕ್ಕೆ ವಿನ್ಯಾಸ

ಬಿ28 ರೈಲನ್ನು ಮುಂಬೈ–ಅಹಮದಾಬಾದ್ ಕಾರಿಡಾರ್‌ನಲ್ಲಿ ಅತಿ ವೇಗದ ಸಂಚಾರಕ್ಕಾಗಿ ವಿನ್ಯಾಸಗೊಳಿಸಲಾಗಿದೆ. 202 ಮೀಟರ್ ಉದ್ದ ಮತ್ತು ಎಂಟು ಬೋಗಿಗಳನ್ನು ಹೊಂದಿರುವ ಈ ರೈಲು, ಒಟ್ಟು 557 ಪ್ರಯಾಣಿಕರನ್ನು ಸಾಗಿಸುವ ಸಾಮರ್ಥ್ಯವನ್ನು ಹೊಂದಿರುತ್ತದೆ. ಈ ರೈಲಿನ ಗರಿಷ್ಠ ವಿನ್ಯಾಸ ವೇಗ ಗಂಟೆಗೆ 280 ಕಿ.ಮೀ. ಆಗಿದ್ದು, ಕಾರ್ಯಾಚರಣೆಯ ಸಮಯದಲ್ಲಿ ಗಂಟೆಗೆ 249 ಕಿ.ಮೀ. ವೇಗದಲ್ಲಿ ಸಂಚರಿಸುವಂತೆ ಯೋಜಿಸಲಾಗಿದೆ. 508 ಕಿ.ಮೀ. ಉದ್ದದ ಮುಂಬೈ–ಅಹಮದಾಬಾದ್ ಕಾರಿಡಾರ್ ಸಂಪೂರ್ಣವಾಗಿ ಡಿಸೆಂಬರ್ 2029ರ ವೇಳೆಗೆ ಕಾರ್ಯಾರಂಭ ಮಾಡುವ ನಿರೀಕ್ಷೆಯಿದೆ.

ವಿಶ್ವಮಾತೆ ಅಮೃತಾನಂದಮಯಿ ಧಾರ್ಮಿಕ, ಆಧ್ಯಾತ್ಮಿಕ, ಶೈಕ್ಷಣಿಕ – ಸಮಾಜಮುಖಿ ಸೇವೆಗಳ ರೂವಾರಿ: ಸಂಸದ ಡಾ.ಸಿ.ಎನ್. ಮಂಜುನಾಥ್ ಬಣ್ಣನೆ

ಮೈಸೂರು, ನ.2: ಮೈಸೂರಿನ ಬೋಗಾದಿಯಲ್ಲಿ ನೂತನವಾಗಿ ನಿರ್ಮಿಸಿರುವ 100 ಹಾಸಿಗೆಗಳ ಅಮೃತಕೃಪಾ ಆಸ್ಪತ್ರೆಯನ್ನು ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಸದಸ್ಯ ಡಾ.ಸಿ.ಎನ್.ಮಂಜುನಾಥ್ ಅವರು ಸೋಮವಾರ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ವಿಶ್ವದ ಪ್ರಮುಖ ಆಧ್ಯಾತ್ಮಿಕ ಮಹಿಳಾ ನಾಯಕರಲ್ಲಿ ಒಬ್ಬರಾದ, ವಿಶ್ವಶಾಂತಿ ಮತ್ತು ಮಾನವೀಯತೆಯ ಸಂದೇಶವನ್ನು ಜಗತ್ತಿನಾದ್ಯಂತ ಸಾರುತ್ತಿರುವ ಮಾತಾ ಅಮೃತಾನಂದಮಯಿ ಅಮ್ಮ ಅವರ ಸಾನ್ನಿಧ್ಯ ಕಾರ್ಯಕ್ರಮಕ್ಕೆ ವಿಶೇಷ ಮೆರುಗು ನೀಡಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಸಂಸದ ಡಾ.ಸಿ.ಎನ್.ಮಂಜುನಾಥ್ ಅವರು, ಯಾವುದೇ ಅಪೇಕ್ಷೆಯಿಲ್ಲದೆ, ಯಾವುದೇ ನಿರೀಕ್ಷೆಯಿಲ್ಲದೆ ಜನರಿಗೆ ಸಹಾಯ ಮಾಡಬೇಕು, ಬಡವರ ಕಣ್ಣೀರನ್ನು ಒರೆಸಬೇಕು ಎಂಬ ಚಿಂತನೆಯೇ ನಿಜವಾದ ಮಾನವೀಯತೆಯ ಪ್ರತೀಕವಾಗಿದೆ. ಮಾತಾ ಅಮೃತಾನಂದಮಯಿ ಅಮ್ಮ ಅವರ ಜೀವನ ಮತ್ತು ಸೇವೆಯೇ ಇದಕ್ಕೆ ಅತ್ಯುತ್ತಮ ಉದಾಹರಣೆಯಾಗಿದೆ ಎಂದು ಹೇಳಿದರು.

ನಾವು ದೈವತ್ವ, ಮನುಷ್ಯತ್ವ ಮತ್ತು ಮೃಗತ್ವದ ಬಗ್ಗೆ ಮಾತನಾಡುತ್ತೇವೆ. ಆದರೆ ಇನ್ನೊಬ್ಬರ ನೋವಿಗೆ ಸ್ಪಂದಿಸಿ, ಅವರ ಕಣ್ಣೀರನ್ನು ಒರೆಸುವುದೇ ನಿಜವಾದ ಮನುಷ್ಯತ್ವ, ಸಂಕಷ್ಟದಲ್ಲಿರುವವರಿಗೆ ನೆರವಾಗುವ ಮಾನವೀಯ ಗುಣಗಳಲ್ಲಿಯೇ ದೈವತ್ವ ಅಡಗಿದೆ ಎಂದು ಅವರು ಅಭಿಪ್ರಾಯಪಟ್ಟರು.

ನಾವು ಹುಟ್ಟುವಾಗ ವಿಶ್ವಮಾನವರಾಗಿರುತ್ತೇವೆ, ಹೋಗುವಾಗಲೂ ವಿಶ್ವಮಾನವರಾಗುತ್ತೇವೆ.



ಆದರೆ ಬದುಕಿನ ಪಯಣದಲ್ಲಿ ಕೆಲವೊಮ್ಮೆ ಅಲ್ಪಮಾನವರಾಗಿ ಬಿಡುತ್ತೇವೆ. ಅಮ್ಮವರ ಸಂದೇಶವೇನೆಂದರೆ, ಹುಟ್ಟುವಾಗಲೂ, ಬದುಕುವಾಗಲೂ ಮತ್ತು ಜೀವನದ ಕೊನೆಯ ಕ್ಷಣದವರೆಗೂ ವಿಶ್ವಮಾನವರಾಗಿಯೇ ಬದುಕಬೇಕು ಎಂದು ಹೇಳಿದರು.

ಶಾಂತಿ, ಸಮಾನತೆ, ಸಹಬಾಳ್ವೆ ಮತ್ತು ವಿಶ್ವಸೌಹಾರ್ದತೆಯೇ ಮಾತಾ ಅಮೃತಾನಂದಮಯಿ ಅವರ ಸಂದೇಶವಾಗಿದೆ. ಅವರು ನಿಜಕ್ಕೂ ವಿಶ್ವಶಾಂತಿಯ ಪ್ರತೀಕವಾಗಿ ಜಗತ್ತಿಗೆ ಪ್ರೀತಿ, ಕರುಣೆ ಮತ್ತು ಮಾನವೀಯತೆಯ ಸಂದೇಶವನ್ನು ಸಾರುತ್ತಿದ್ದಾರೆ ಎಂದು ಡಾ. ಮಂಜುನಾಥ್ ತಿಳಿಸಿದರು.

ಜೀವನದ ಮಹತ್ವವನ್ನು ವಿವರಿಸಿದ ಅವರು, ಈ ದೇಹ ಐಸ್‌ಕ್ರೀಮ್ ಇದ್ದ ಹಾಗೆ; ತಿಂದರೂ ಕರಗುತ್ತದೆ, ತಿನ್ನದೆ ಇದ್ದರೂ ಕರಗುತ್ತದೆ. ಅದೇ ರೀತಿ ಜೀವನವೂ ಕಳೆಯುತ್ತದೆ. ಒಳ್ಳೆಯ ಕೆಲಸ ಮಾಡಿದರೂ ಜೀವನ ಕಳೆಯುತ್ತದೆ, ಮಾಡದೆ ಇದ್ದರೂ ಕಳೆಯುತ್ತದೆ. ಆದ್ದರಿಂದ ಈ ದೇಹ ಒಳ್ಳೆಯ ಕೆಲಸಗಳನ್ನು ಮಾಡುತ್ತಾ ಕರಗಬೇಕು ಎಂಬುದು ಅಮ್ಮನವರ ಅತ್ಯಂತ ಸುಂದರ ಸಂದೇಶವಾಗಿದೆ ಎಂದರು.

ನಾವು ಈ ಭೂಮಿಯ ಮಾಲೀಕರಲ್ಲ, ಬದಲಿಗೆ ಈ ಭೂಮಿಗೆ ಬಂದಿರುವ ಅತಿಥಿಗಳು. ಆದ್ದರಿಂದ ಪ್ರಕೃತಿಯನ್ನು ಕಾಪಾಡುವುದು ಹಾಗೂ ಪರಿಸರದೊಂದಿಗೆ ಸಾಮರಸ್ಯದಿಂದ ಬದುಕುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದರು.

ಮಾತಾ ಅಮೃತಾನಂದಮಯಿ ಅವರು ಕೇವಲ ಮಾತಿನ ಮೂಲಕವಲ್ಲದೆ ತಮ್ಮ ಸೇವೆಯ ಮೂಲಕ ಸಮಾಜಕ್ಕೆ ಮಾದರಿಯಾಗಿದ್ದಾರೆ. ಶಿಕ್ಷಣ, ಆರೋಗ್ಯ ಮತ್ತು ಸಮಾಜಸೇವೆ ಕ್ಷೇತ್ರಗಳಲ್ಲಿ ಅನನ್ಯ ಕೊಡುಗೆ ನೀಡಿರುವ ಅವರು, ಬಡ ಮಕ್ಕಳಿಗೆ ವಿದ್ಯಾರ್ಥಿವೇತನ, ನಿರ್ಗತಿಕರಿಗೆ ಮನೆ ಹಾಗೂ ಅಗತ್ಯವಿರುವವರಿಗೆ ಶಿಕ್ಷಣ ಮತ್ತು ಆರೋಗ್ಯ ಸೇವೆಗಳನ್ನು ತಲುಪಿಸುವ ಮೂಲಕ ಲಕ್ಷಾಂತರ ಜನರ ಬದುಕಿಗೆ ಆಶಾಕಿರಣವಾಗಿದ್ದಾರೆ ಎಂದು ಶ್ಲಾಘಿಸಿದರು.

ಬಡವರು ಮತ್ತು ಆರ್ಥಿಕವಾಗಿ ಹಿಂದುಳಿದವರು ಉತ್ತಮ ಆರೋಗ್ಯ ಸೇವೆಯಿಂದ ವಂಚಿತರಾಗಬಾರದು ಎಂಬ ಉದಾತ್ತ ಚಿಂತನೆಯಿಂದ ಅಮೃತಕೃಪಾ ಆಸ್ಪತ್ರೆಯಂತಹ ಸೇವಾ ಸಂಸ್ಥೆಗಳನ್ನು ಸಮಾಜಕ್ಕೆ ಕೊಡುಗೆಯಾಗಿ ನೀಡಲಾಗುತ್ತಿದೆ. ಮೈಸೂರಿನಲ್ಲಿ ನೂತನವಾಗಿ ನಿರ್ಮಿಸಿರುವ ಈ 100 ಹಾಸಿಗೆಗಳ ಆಸ್ಪತ್ರೆಯು ಜನಸಾಮಾನ್ಯರಿಗೆ ಗುಣಮಟ್ಟದ ಆರೋಗ್ಯ ಸೇವೆ ಒದಗಿಸುವಲ್ಲಿ ಮಹತ್ವದ ಪಾತ್ರ ವಹಿಸಲಿದೆ ಎಂದು ಸಂಸದ ಡಾ. ಸಿ. ಎನ್. ಮಂಜುನಾಥ್ ಹೇಳಿದರು.

ಸೇವೆ ಮಾಡುವ ಮನಸ್ಸೇ ನಿಜವಾದ ಧರ್ಮ. ಇನ್ನೊಬ್ಬರ ಕಣ್ಣೀರನ್ನು ಒರೆಸುವುದೇ ನಿಜವಾದ ಮನುಷ್ಯತ್ವ, ಆ ಮನುಷ್ಯತ್ವದ ಮೂಲಕವೇ ದೈವತ್ವವನ್ನು ಕಾಣಬಹುದು ಎಂಬ ಅಮ್ಮವರ ಸಂದೇಶ ನಮ್ಮೆಲ್ಲರ ಬದುಕಿನ ದಾರಿದೀಪವಾಗಲಿ ಎಂದು ಅವರು ಆಶಿಸಿದರು.

ಕಾರ್ಯಕ್ರಮದಲ್ಲಿ ಸದ್ಗುರು ಮಾತಾ ಅಮೃತಾನಂದಮಯಿ ಅಮ್ಮ ಅವರು ಸಾನ್ನಿಧ್ಯ ವಹಿಸಿದ್ದರು.

ಕಾರ್ಯಕ್ರಮದಲ್ಲಿ ಶಾಸಕ ಜಿ.ಟಿ.ದೇವೇಗೌಡ ಅವರು, BNPML ನಿರ್ದೇಶಕ ಅನಂತ್ ಹೆಗಡೆ, ಡಾ. ಪಿ.ಕೆ.ಪ್ರಹ್ಲಾದ್, ಮೈಸೂರು ವಿಶ್ವವಿದ್ಯಾಲಯದ ಮಾಜಿ ಕುಲಪತಿಗಳಾದ ಶ್ರೀ ಹೇಮಂತ್ ಕುಮಾರ್ ಅವರು ಸೇರಿದಂತೆ ಹಲವು ಗಣ್ಯರು ಹಾಗೂ ಅಸಂಖ್ಯಾತ ಅಮ್ಮನ ಭಕ್ತಾದಿಗಳು ಉಪಸ್ಥಿತರಿದ್ದರು.

ನ.13: ಬೆಂಗಳೂರಿನ ಗುಲಾಬಿ ಮೆಟ್ರೋ ಮಾರ್ಗಕ್ಕೆ ಪ್ರಧಾನಿ ಹಸಿರು ನಿಶಾನೆ



ಬೆಂಗಳೂರು, ನ.2: ರಾಜಧಾನಿ ಬೆಂಗಳೂರಿನ ಸಾರ್ವಜನಿಕ ಸಾರಿಗೆಯ ಜೀವನಾಡಿಯಾಗಿರುವ ನಮ್ಮ ಮೆಟ್ರೋದ ಬಹುನಿರೀಕ್ಷಿತ ಗುಲಾಬಿ ಮಾರ್ಗ ನವೆಂಬರ್ 13ರಂದು ಉದ್ಘಾಟನೆಯಾಗಲಿದೆ. ಈ ಬಗ್ಗೆ ಬೆಂಗಳೂರು ದಕ್ಷಿಣ ಸಂಸದ ತೇಜಸ್ವಿ ಸೂರ್ಯ ಸುಳಿವು ನೀಡಿದ್ದಾರೆ.

ತಮ್ಮ ಅಧಿಕೃತ ಸಾಮಾಜಿಕ ಜಾಲತಾಣ ಎಕ್ಸ್ ಖಾತೆಯಲ್ಲಿ ಈ ಬಗ್ಗೆ ಮಾಹಿತಿ ಹಂಚಿಕೊಂಡಿರುವ ಅವರು, ಬೆಂಗಳೂರಿನ ಮೆಟ್ರೋ ಪ್ರಯಾಣಿಕರಲ್ಲಿ ಭಾರಿ ನಿರೀಕ್ಷೆ ಮತ್ತು ಸಂಭ್ರಮ ಮೂಡಿಸಿದೆ. ಪ್ರಧಾನಮಂತ್ರಿ ನರೇಂದ್ರ ಮೋದಿ ನವೆಂಬರ್ 13ರಂದು ಕರ್ನಾಟಕ ಪ್ರವಾಸ ಕೈಗೊಳ್ಳಲಿದ್ದು, ಸಾಂಸ್ಕೃತಿಕ ನಗರಿ ಮೈಸೂರಿಗೆ ಭೇಟಿ ನೀಡಲಿದ್ದಾರೆ. ಮೈಸೂರಿನಲ್ಲಿ ವಿವಿಧ ಅಭಿವೃದ್ಧಿ ಯೋಜನೆಗಳ ಉದ್ಘಾಟನೆ ಹಾಗೂ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದು, ಈ ಪ್ರವಾಸದ ಬೆಂಗಳೂರಿನಲ್ಲಿ ಗುಲಾಬಿ ಮಾರ್ಗದ ಮೆಟ್ರೋ ರೈಲು ಸಂಚಾರಕ್ಕೆ ಅಧಿಕೃತವಾಗಿ ಹಸಿರು ನಿಶಾನೆ ತೋರಲಿದ್ದಾರೆ ಅಥವಾ ವರ್ಚುವಲ್ (ವಿಡಿಯೋ ಕಾನ್ಫರೆನ್ಸ್) ಮೂಲಕ ಚಾಲನೆ ನೀಡಲಿದ್ದಾರೆ ಎನ್ನಲಾಗಿದೆ.

ಎಲ್ಲಿಂದ ಎಲ್ಲಿಯವರೆಗೆ?

ಮಾರ್ಗ: ಕಾಳೇನ ಅಗ್ರಹಾರದಿಂದ (ಬನ್ನೇರುಘಟ್ಟ ರಸ್ತೆ) ನಾಗವಾರದವರೆಗೆ. ಉದ್ದ: ಸುಮಾರು 21.3 ಕಿಲೋಮೀಟರ್ (ಇದರಲ್ಲಿ ಮೇಲ್ಸೇತುವೆ ಹಾಗೂ ಸುರಂಗ ಮಾರ್ಗ ಎರಡೂ ಸೇರಿವೆ). ಉದ್ಘಾಟನೆಯಾಗುತ್ತಿರುವ ಮಾರ್ಗ: ಕಾಳೇನ ಅಗ್ರಹಾರದಿಂದ ತಾವರೆಕೆರೆ. ರೈಲು ಸಂಚಾರ ನಡೆಸುವ 6 ನಿಲ್ದಾಣಗಳು: ಕಾಳೇನ ಅಗ್ರಹಾರ, ಹುಳಿಮಾವು, ಐಐಎಂಬಿ, ಜೆ.ಪಿ. ನಗರ 4ನೇ ಹಂತ, ಜಯದೇವ ಆಸ್ಪತ್ರೆ (ಹಳದಿ ಮತ್ತು ಗುಲಾಬಿ ಮಾರ್ಗಗಳ ಪ್ರಮುಖ ಇಂಟರ್‌ಚೇಂಜ್ ನಿಲ್ದಾಣ) ತಾವರೆಕೆರೆ. ಪ್ರಯೋಜನ: ಬನ್ನೇರುಘಟ್ಟ ರಸ್ತೆ, ಜಯದೇವ, ಡೈರಿ ಸರ್ಕಲ್‌ನಂತಹ ಮುಂತಾದ ಪ್ರಮುಖ ಪ್ರದೇಶಗಳನ್ನು ಸಂಪರ್ಕಿಸಲಿದ್ದು, ನಗರದ ಸಂಚಾರ ದಟ್ಟಣೆಗೆ ದೊಡ್ಡ ಮಟ್ಟದ ಮುಕ್ತಿ ಸಿಗಲಿದೆ. ಸಂಸದರ ಈ ಪ್ರಕಟಣೆಯ ಬೆನ್ನಲ್ಲೇ, ಬಿಎಂಆರ್‌ಸಿಎಲ್ ಮತ್ತು ರಾಜ್ಯ ಸರ್ಕಾರದಿಂದ ಅಧಿಕೃತ ವೇಳಾಪಟ್ಟಿ ಮತ್ತು ಕಾರ್ಯಕ್ರಮದ ವಿವರಗಳು ಶೀಘ್ರದಲ್ಲೇ ಪ್ರಕಟವಾಗುವ ನಿರೀಕ್ಷೆಯಿದೆ.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

ಏರಿಸಿರುವ ದರ ತಕ್ಷಣ ಇಳಿಸಿ, ಇಲ್ಲ ಅಧಿಕಾರ ಬಿಟ್ಟು ತೊಲಗಿ

ಕರ್ನಾಟಕದ ಕಾಂಗ್ರೆಸ್ ಸರ್ಕಾರಕ್ಕೆ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಆಗ್ರಹ



ಬೆಂಗಳೂರು, ನ.2: ರಾಜ್ಯದಲ್ಲಿ ಕ್ರಾಂತಿ ಆಗುವ ಮೊದಲು ಕಾಂಗ್ರೆಸ್ಸಿನವರು ಅಧಿಕಾರ ಬಿಟ್ಟು ತೊಲಗಿ, ಇಲ್ಲ ಏರಿಸಿರುವ ಎಲ್ಲ ಬೆಲೆಯನ್ನು ಕಡಿಮೆ ಮಾಡಿ ರೈತರಿಗೆ ನ್ಯಾಯ ಕೊಡಿ ಎಂದು ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಆಗ್ರಹಿಸಿದ್ದಾರೆ.

ಹಾಲಿನ ಬೆಲೆ ಏರಿಕೆಯನ್ನು ಖಂಡಿಸಿ ಬಿಜೆಪಿ ರಾಜ್ಯ ಮಹಿಳಾ ಮೋರ್ಚಾ ವತಿಯಿಂದ ಸೋಮವಾರ ಫ್ರೀಡಂ ಪಾರ್ಕ್ ನಲ್ಲಿ ಪ್ರತಿಭಟನೆಯನ್ನು ಹಮ್ಮಿಕೊಳ್ಳಲಾಗಿತ್ತು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಕಳೆದ ಮೂರ್ನಾಲ್ಕು ತಿಂಗಳಲ್ಲಿ ರಾಜ್ಯ ಸರಕಾರದ ಆಡಳಿತ ಶೂನ್ಯಕ್ಕೆ ಬಂದಿದೆ. ಇವತ್ತು ತಳಮಟ್ಟಕ್ಕೆ ಬಂದಿದೆ. ಆ ಪರಿಸ್ಥಿತಿ ರಾಜ್ಯದಲ್ಲಿ ನಿರ್ಮಾಣ ಆಗಿದೆ ಎಂದು ಟೀಕಿಸಿದರು.

ಮುಖ್ಯಮಂತ್ರಿಗಳೇ ಕನ್ನಡ ರಾಜ್ಯೋತ್ಸವದ ಕೊಡುಗೆ ಏನು ಎಂದು ಕೇಳಿದ ಅವರು, ನೀವು ಬಹಳ ದುಡ್ಡಿರುವವರು; ನಿಮ್ಮ ಮನೆಯಲ್ಲಿ ಬಿಸ್ಲೇರಿ ಕುಡಿಯಬಹುದು, ಆದರೆ ನಾವ್ಯಾರೂ ಬಿಸ್ಲೇರಿಯನ್ನು ಕುಡಿಯುವವರಲ್ಲ. ನಾವು ನಮ್ಮ ತಾಯಿ ಕಾವೇರಿಯ ನೀರನ್ನೇ ಕುಡಿಯುತ್ತೇವೆ ಎಂದು ತಿಳಿಸಿದರು.

ನಿಮ್ಮ ಅಂತಸ್ತನ್ನು ನೋಡಿ ರಾಜ್ಯದ ಜನರ ಅಂತಸ್ತು ನಿರ್ಧರಿಸದಿರಿ. ಹಾಲಿಗೆ ನೀವು ದುಡ್ಡು ಕೊಡಬಹುದು, ಆದರೆ ಯಾರು ಇವತ್ತು ದುಡಿದು ತಿಂತಿದ್ದಾರೋ, ಯಾರು ಹೋಟೆಲಲ್ಲಿ ಕೆಲಸ ಮಾಡಿ ಚಿಕ್ಕಪುಟ್ಟ ಸಂಬಳ ತಗೊಂಡು, ಟ್ಯಾಕ್ಸಿ ಓಡಿಸಿಕೊಂಡು, ಆಟೋರಿಕ್ಷಾ ಓಡಿಸಿಕೊಂಡು, ಬೀದಿಬದಿ ವ್ಯಾಪಾರ ಮಾಡಿಕೊಂಡು ಬದುಕುವವರಿಗೆ ಕಷ್ಟವಾಗಿದೆ. ಸಿಕ್ಕಿದ ಸಂಬಳದಲ್ಲಿ ಮನೆ ಬಾಡಿಗೆ ಕಟ್ಟಬೇಕು, ವಿದ್ಯುತ್ ಬಿಲ್ ಕಟ್ಟಬೇಕು, ನೀರಿನ ಬಿಲ್ ಕಟ್ಟಬೇಕು, ನೀವು ಹಾಕಿದಂತ ಕಸದ ಬಿಲ್ ಕಟ್ಟಬೇಕು. ಅದರ ಜೊತೆಗೆ ಪ್ರತಿವರ್ಷ ನೀವು ಏರಿಸುವ ಹಾಲಿನ ದರಕ್ಕೆ, ಮೊಸರಿನ ದರಕ್ಕೆ ದುಡ್ಡು ಕೊಡಬೇಕಾಗಿದೆ ಎಂದು ಆಕ್ಷೇಪಿಸಿದರು.

ಬರಗಾಲದ ಪರಿಹಾರಕ್ಕೆ ಹಲವಾರು ಷರತ್ತು..: ರಾಜ್ಯದಲ್ಲಿ ಮಳೆ ಬಂದಿಲ್ಲ; ತೀವ್ರ ಬರಗಾಲ ಇದೆ. ಸರಕಾರವು ರೈತರಿಗೆ ಎಕರೆಗೆ ಭಿಕ್ಷೆ ಕೊಟ್ಟ ಹಾಗೆ ಎರಡುವರೆ ಸಾವಿರ ರೂಪಾಯಿ ಕೊಟ್ಟಿದೆ ಎಂದು ಟೀಕಿಸಿದರು.


ಯಡಿಯೂರಪ್ಪನವರ ಬಿಜೆಪಿ ಸರ್ಕಾರ ಕೇಂದ್ರ ಕೊಡುವ ಕಿಸಾನ್ ಸಮ್ಮಾನ್ ಯೋಜನೆಯ ಜೊತೆ 4000 ರೂಪಾಯಿ ಕೊಡುತ್ತಿತ್ತು. ಇವರು ಅಧಿಕಾರಕ್ಕೆ ಬಂದ ತಕ್ಷಣ ಆ ದುಡ್ಡನ್ನು ನಿಲ್ಲಿಸಿದ್ದಾರೆ. ಎರಡುವರೆ ಸಾವಿರ ಭಿಕ್ಷೆಗೆ 17–18 ನಿಯಮಾವಳಿ, ಷರತ್ತು ಹಾಕಿದ್ದಾರೆ ಎಂದು ಆಕ್ಷೇಪಿಸಿದರು.

ವಿಧಾನಪರಿಷತ್ ಮಾಜಿ ಸದಸ್ಯೆ ಭಾರತಿ ಶೆಟ್ಟಿ, ರೈತಮೋರ್ಚಾ ರಾಜ್ಯ ಉಪಾಧ್ಯಕ್ಷೆ ಭಾರತಿ ಮಲ್ಲಿಕಾರ್ಜುನ, ಪೂರ್ಣಿಮಾ ಪ್ರಕಾಶ್, ಬೆಂಗಳೂರು ಉತ್ತರ ಮಹಿಳಾ ಮೋರ್ಚಾ ಜಿಲ್ಲಾ ಅಧ್ಯಕ್ಷೆ ಮಂಜುಳಾ ದೇವಿ, ಬೆಂಗಳೂರು ಕೇಂದ್ರ ಮಹಿಳಾ ಮೋರ್ಚಾ ಜಿಲ್ಲಾ ಅಧ್ಯಕ್ಷೆ ನೀತು ಎನ್.ಎಂ. ರೆಡ್ಡಿ, ಬೆಂಗಳೂರು ದಕ್ಷಿಣ ಮಹಿಳಾ ಮೋರ್ಚಾ ಜಿಲ್ಲಾ ಅಧ್ಯಕ್ಷೆ ಶ್ವೇತಾ ರಾಘವೇಂದ್ರ, ಮಹಿಳಾ ಮೋರ್ಚಾ ಪದಾಧಿಕಾರಿಗಳು ಮತ್ತು ಕಾರ್ಯಕರ್ತೆಯರು ಪಾಲ್ಗೊಂಡಿದ್ದರು.

ಗೃಹಲಕ್ಷ್ಮಿಯ 5000 ಕೋಟಿ ನಾಪತ್ತೆ

ಹಾಲಿನ ದರವನ್ನು ಹಲವು ಬಾರಿ ಏರಿಸಿದ್ದಾರೆ. ಗ್ಯಾರಂಟಿಗಳೂ ಸರಿಯಾಗಿ ಫಲಾನುಭವಿಗಳಿಗೆ ಸಿಗುತ್ತಿಲ್ಲ. ಗೃಹಲಕ್ಷ್ಮಿ ಯೋಜನೆಯ 5,000 ಕೋಟಿ ಹಣ ನಾಪತ್ತೆ ಆಗಿದೆ, ಇವತ್ತಿನವರೆಗೂ ಲೆಕ್ಕ ಕೊಟ್ಟಿಲ್ಲ. ಬಸ್ ಫ್ರೀ ಎಂದರು. ಬಸ್ಸುಗಳೇ ನಿಂತು ಹೋಗಿವೆ. ಕೆಎಸ್‌ಆರ್‌ಟಿಸಿ ಮತ್ತು ಬೇರೆ ಬೇರೆ ವಿಭಾಗಗಳಲ್ಲಿರುವ ಸರಕಾರಿ ಬಸ್ ರಿಪೇರಿ ಮಾಡಲು ದುಡ್ಡಿಲ್ಲ ಮತ್ತು ಡೀಸೆಲ್ ಹಾಕೋಕೆ ದುಡ್ಡಿಲ್ಲ. ಇದು ನಿಮ್ಮ ಸರ್ಕಾರದ ಪರಿಸ್ಥಿತಿ ಎಂದು ಶೋಭಾ ಕರಂದ್ಲಾಜೆ ಟೀಕಿಸಿದರು.

ಜನವಿರೋಧಿ, ಸಂವೇದನಾರಹಿತ ಕಾಂಗ್ರೆಸ್ ಸರ್ಕಾರದಿಂದ ಹಗಲುದರೋಡೆ: ಎನ್.ರವಿಕುಮಾರ್



ಬೆಂಗಳೂರು, ನ.2: ಹಾಲು ಮತ್ತು ಮೊಸರಿನ ಬೆಲೆ ಏರಿಕೆಯ ಬೆನ್ನಲ್ಲೇ, ನವೆಂಬರ್ 5ರಿಂದ ಕೆಎಸ್‌ಆರ್‌ಟಿಸಿ ಬಸ್ ಪ್ರಯಾಣ ದರ ಹೆಚ್ಚಿಸಲಾಗುವುದು ಎಂದು ಸಾರಿಗೆ ಸಚಿವ ಬೈರತಿ ಸುರೇಶ್ ಹೇಳಿಕೆ ನೀಡಿದ್ದಾರೆ. ಅಗತ್ಯ ವಸ್ತುಗಳು ಹಾಗೂ ಅಗತ್ಯ ಸೇವೆಗಳ ಬೆಲೆ ಗಗನಕ್ಕೇರುತ್ತಿರುವುದು ಸಾಮಾನ್ಯ ಜನರ ಬದುಕನ್ನು ದುಸ್ತರಗೊಳಿಸಿದೆ. ಜನವಿರೋಧಿ ಸರ್ಕಾರದ ಈ ಕ್ರಮಗಳು ಯಾವುದೇ ತರ್ಕಬದ್ಧತೆಯಿಲ್ಲದ, ವಿವೇಚನಾರಹಿತ ನಿರ್ಧಾರಗಳಾಗಿವೆ. ಹಣಕಾಸು ನಿರ್ವಹಣೆ ಮತ್ತು ಸಂಪನ್ಮೂಲ ಕ್ರೋಢೀಕರಣದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಸಂಪೂರ್ಣ ವೈಫಲ್ಯಕ್ಕೆ ಇದು ಸಾಕ್ಷಿಯಾಗಿದೆ.

ಇದೆಲ್ಲವೂ ಸಂವೇದನಾರಹಿತ ಕಾಂಗ್ರೆಸ್ ಸರ್ಕಾರ ನಡೆಸುತ್ತಿರುವ ಹಾಡಹಗಲಿನ ದರೋಡೆಗೆ ಸಮಾನವಾಗಿದೆ ಎಂದು ಬಿಜೆಪಿ ನಾಯಕ ಎನ್. ರವಿಕುಮಾರ್ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಕಾಂಗ್ರೆಸ್ ಸರ್ಕಾರದ ಜನವಿರೋಧಿ ನೀತಿಗಳ ವಿರುದ್ಧ ಮುಂಬರುವ ದಿನಗಳಲ್ಲಿ ಬಿಜೆಪಿ ತನ್ನ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲಿದೆ ಎಂದು ಅವರು ಎಚ್ಚರಿಸಿದರು.

ವಾಸ್ತವದಲ್ಲಿ ಹಾಲಿನ ದರ ಏರಿಕೆ 12 ರೂ.: 2023ರಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದ ಹಾಲಿನ ಬೆಲೆಯನ್ನು ನಾಲ್ಕು ಬಾರಿ ಹೆಚ್ಚಿಸಲಾಗಿದೆ. ಗ್ರಾಹಕರಿಂದ ಲೀಟರ್‌ಗೆ 64 ರೂ. ವಸೂಲಿ ಮಾಡಲಾಗುತ್ತಿದೆ. ಆದರೆ ರೈತರಿಗೆ ನೀಡುತ್ತಿರುವುದು 42 ರೂ. ಮಾತ್ರ. ಹಾಗಾದರೆ ಉಳಿದ ರೂ. 22 ಎಲ್ಲಿ ಹೋಗುತ್ತಿದೆ. ಬೆಲೆಯನ್ನು 8 ರೂ. ಹೆಚ್ಚಿಸಲಾಗಿದೆ ಎಂದು ಸರ್ಕಾರ ಹೇಳಿದರೆ, ಅರ್ಧ ಲೀಟರ್ ಹಾಲಿನ ಪ್ಯಾಕೆಟ್ ಮೇಲೆ 33 ರೂ. ಎಂದು ನಮೂದಿಸಲಾಗಿದೆ. ಅಂದರೆ 6 ರೂ. ಹೆಚ್ಚಳವಾಗಿದ್ದು, ಲೀಟರ್‌ಗೆ ಲೆಕ್ಕ ಹಾಕಿದರೆ ವಾಸ್ತವವಾಗಿ 12 ರೂ. ಏರಿಕೆಯಾಗಿದೆ ಎಂದು ರವಿಕುಮಾರ್ ವಿವರಿಸಿದರು.

ಖಾಲಿ ನಿವೇಶನಕ್ಕೂ ದಂಡ: ಕೆಎಸ್‌ಆರ್‌ಟಿಸಿ ಬಸ್ ಪ್ರಯಾಣ ದರ ಈಗಾಗಲೇ ಶೇ.15ರಷ್ಟು ಹೆಚ್ಚಿಸಲಾಗಿದೆ. ನವೆಂಬರ್ 5ರಿಂದ ಮತ್ತೊಂದು ದರ ಏರಿಕೆಗೆ ಸರ್ಕಾರ ಮುಂದಾಗಿದೆ. ಎಂದು ರವಿಕುಮಾರ್ ಕಿಡಿಕಾರಿದರು.

ಮೊಸರು ಬೆಲೆ ಕಡಿತಕ್ಕೆ ಸಿಎಂ ಸೂಚನೆ



ಬೆಂಗಳೂರು, ನ.2: ನಂದಿನಿ ಹಾಲು ಮತ್ತು ಮೊಸರಿನ ದರ ಏರಿಕೆಗೆ ಜನಾಕ್ರೋಶ ವ್ಯಕ್ತವಾಗುತ್ತಿದ್ದಂತೆ ಸರ್ಕಾರ ಎಚ್ಚೆತ್ತಿದ್ದು, ಮೊಸರಿನ ಬೆಲೆ ಕಡಿಮೆ ಮಾಡುವಂತೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಈ ಬಗ್ಗೆ ಸುದ್ದಿಗಾರರ ಜೊತೆ ಮಾತನಾಡಿದ ಸಿಎಂ ಶಿವಕುಮಾರ್, ಮೊಸರಿನ ಬೆಲೆಯನ್ನು ಸ್ವಲ್ಪ ಕಡಿಮೆ ಮಾಡುವಂತೆ ಸೂಚಿಸಿದ್ದೇನೆ. ಹಾಲಿನ ದರದಲ್ಲಿ ಯಾವುದೇ ಬದಲಾವಣೆ ಮಾಡುವ ಪ್ರಸ್ತಾಪವಿಲ್ಲ. ಆದರೆ ನಂದಿನಿ ಮೊಸರಿನ ಬೆಲೆಯನ್ನು ಸ್ವಲ್ಪ ಇಳಿಸುವ ಕುರಿತು ಸರ್ಕಾರ ಚಿಂತನೆ ನಡೆಸಿದೆ. ಲೀಟರ್ ಮೊಸರಿಗೆ 14 ರೂ. ಹೆಚ್ಚಿಸಿದ್ದನ್ನು 12 ರೂ.ಗೆ ಇಳಿಕೆ ಮಾಡಲಾಗುತ್ತಿದೆ.

16 ಕೆರೆ, ಗಾಯತ್ರಿ ಜಲಾಶಯಕ್ಕೆ ನೀರು ತುಂಬಿಸುವ ಯೋಜನೆ

ಮುಖ್ಯಮಂತ್ರಿಯಿಂದ ಇಂದು ಭೂಮಿಪೂಜೆ ನೀರಾವರಿ ಸಚಿವ ಡಾ.ಅಜಯ್‌ಸಿಂಗ್



ಬೆಂಗಳೂರು/ಚಿತ್ರದುರ್ಗ, ನ.2: ಚಿತ್ರದುರ್ಗ ಜಿಲ್ಲೆಯ ಹಿರಿಯೂರು ತಾಲೂಕಿನ ಜವನಗೊಂಡನಹಳ್ಳಿ ಹೋಬಳಿಯ 16 ಕೆರೆಗಳು ಹಾಗೂ ಗಾಯತ್ರಿ ಜಲಾಶಯಕ್ಕೆ ನೀರು ತುಂಬಿಸುವ ಮತ್ತು ಅಂತರ್ಜಲ ಅಭಿವೃದ್ಧಿ ಪಡಿಸುವ 244 ಕೋಟಿ ಮೊತ್ತದ ಮಹತ್ವಾಕಾಂಕ್ಷಿ ಯೋಜನೆಗೆ ಸಿಎಂ ಡಿ.ಕೆ. ಶಿವಕುಮಾರ್ ಮಂಗಳವಾರ (ನ.3) ಭೂಮಿಪೂಜೆ ನೆರವೇರಿಸಿ ಚಾಲನೆ ನೀಡಲಿದ್ದಾರೆ ಎಂದು ಸಣ್ಣ ನೀರಾವರಿ ಸಚಿವ ಡಾ. ಅಜಯ್ ಧರ್ಮಸಿಂಗ್ ತಿಳಿಸಿದ್ದಾರೆ. ಹಿರಿಯೂರು ತಾಲೂಕಿನ ದಿಂಡಾವರ ಸರ್ಕಾರಿ ಪ್ರಾಥಮಿಕ ಶಾಲಾ ಮೈದಾನದಲ್ಲಿ ಮಂಗಳವಾರ ಮಧ್ಯಾಹ್ನ 12.30ಕ್ಕೆ ನಡೆಯುವ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿಗಳು ಯೋಜನೆಗೆ ಚಾಲನೆ ನೀಡಲಿದ್ದಾರೆ. ಉಪಮುಖ್ಯಮಂತ್ರಿ ಹಾಗೂ ಕಂದಾಯ ಸಚಿವ ಡಾ. ಜಿ. ಪರಮೇಶ್ವರ್ ಸೇರಿ ಸಚಿವರು, ಜನಪ್ರತಿನಿಧಿಗಳು ಹಾಗೂ ಗಣ್ಯರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.


ಜವನಗೊಂಡನಹಳ್ಳಿ ಹೋಬಳಿಯಲ್ಲಿ ನಿರಂತರ ಬರ ಪರಿಸ್ಥಿತಿ, ಕೆರೆಗಳಲ್ಲಿ ನೀರಿನ ಕೊರತೆ ಹಾಗೂ ಅಂತರ್ಜಲ ಮಟ್ಟ ಕುಸಿತದ ಹಿನ್ನೆಲೆಯಲ್ಲಿ ಈ ಯೋಜನೆ ರೂಪಿಸಲಾಗಿದೆ. ಈ ಭಾಗದಲ್ಲಿ ಅಂತರ್ಜಲಕ್ಕಾಗಿ ಸುಮಾರು 1,000 ಅಡಿ ಆಳದವರೆಗೆ ಕೊಳವೆಬಾವಿ ಕೊರೆಯಬೇಕಾದ ಪರಿಸ್ಥಿತಿ ಎದುರಾಗಿರುವುದರಿಂದ, ದೀರ್ಘಕಾಲಿಕ ಜಲಭದ್ರತೆ ಕಲ್ಪಿಸುವ ಉದ್ದೇಶದಿಂದ ಕೆರೆ ತುಂಬಿಸುವ ಯೋಜನೆ ಕೈಗೆತ್ತಿಕೊಳ್ಳಲಾಗಿದೆ. ಯೋಜನೆಯಡಿ 0.307 ಟಿಎಂಸಿ ನೀರನ್ನು ಬಳಸಿ ಒಟ್ಟು 16 ಕೆರೆಗಳು ಹಾಗೂ ಗಾಯತ್ರಿ ಜಲಾಶಯಕ್ಕೆ ನೀರು ತುಂಬಿಸಲಾಗುತ್ತದೆ. ಇದರಲ್ಲಿ ಸಣ್ಣ ನೀರಾವರಿ ಇಲಾಖೆಯ 10 ಕೆರೆಗಳು ಹಾಗೂ ಜಿಲ್ಲಾ ಪಂಚಾಯತ್ ವ್ಯಾಪ್ತಿಯ 6 ಕೆರೆಗಳು ಸೇರಿವೆ ಎಂದು ಸಚಿವರು ವಿವರಿಸಿದ್ದಾರೆ.

30 ತಿಂಗಳಲ್ಲಿ ಯೋಜನೆ ಪೂರ್ಣಗೊಳಿಸುವ ಗುರಿ

ಯೋಜನೆಗೆ 2026ರ ಜುಲೈ 21ರಂದು 244 ಕೋಟಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡಿದ್ದು, ಕಾಮಗಾರಿಯನ್ನು 30 ತಿಂಗಳ ಅವಧಿಯಲ್ಲಿ ಪೂರ್ಣಗೊಳಿಸುವ ಗುರಿ ಹೊಂದಲಾಗಿದೆ ಎಂದು ಡಾ. ಅಜಯ್ ಧರ್ಮಸಿಂಗ್ ಹೇಳಿದ್ದಾರೆ.

ವಿಜಯೇಂದ್ರ ಹೇಳಿಕೆಗೆ ಬಿ.ಕೆ. ಹರಿಪ್ರಸಾದ್ ತೀವ್ರ ಆಕ್ಷೇಪ

ಮೂರು ದಿನಗಳಲ್ಲಿ ಕ್ಷಮೆಯಾಚನೆಗೆ ಗಡುವು



ನವದೆಹಲಿ, ನ.2: ಕಾಂಗ್ರೆಸ್ ಪಕ್ಷದ ವಿರುದ್ಧ ಬಳಸಿರುವ 'ನನ್ನ ಮಕ್ಕಳು' ಎಂಬ ಪದಪ್ರಯೋಗಕ್ಕೆ ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರ ಹೇಳಿಕೆಗೆ ಪ್ರತಿಕ್ರಿಯಿಸಿರುವ ಅವರು, ಮೂರು ದಿನಗಳೊಳಗೆ ಕ್ಷಮೆಯಾಚಿಸಬೇಕು. ಇಲ್ಲದಿದ್ದರೆ ಕಾಂಗ್ರೆಸ್ ಕಾರ್ಯಕರ್ತರು ಅವರ ವಿರುದ್ಧ ಕಪ್ಪು ಪಟ್ಟಿ ಪ್ರದರ್ಶನ ನಡೆಸಲಿದ್ದಾರೆ ಎಂದು ಎಚ್ಚರಿಕೆ ನೀಡಿದ್ದಾರೆ.

ವಿಜಯೇಂದ್ರ ಅವರಿಂದ ಇದಕ್ಕಿಂತ ಹೆಚ್ಚಿನ ನಿರೀಕ್ಷೆ ಮಾಡಲು ಸಾಧ್ಯವಿಲ್ಲ. ಅವರ ತಂದೆಯ 700 ಸಹಿಗಳನ್ನು ಅವರೇ ಹಾಕಿ ಆರ್‌ಟಿಜಿಎಸ್ ಮೂಲಕ ಲಂಚ ಪಡೆದಿದ್ದಾರೆ ಎಂದು ಆರೋಪಿಸಿದ ಹರಿಪ್ರಸಾದ್, ಇಂತಹವರಿಂದ ಉನ್ನತ ರಾಜಕೀಯ ಸಂಸ್ಕೃತಿಯನ್ನು ನಿರೀಕ್ಷಿಸಿರಲಿಲ್ಲ ಎಂದು ಟೀಕಿಸಿದ್ದಾರೆ.

ದೇಶಕ್ಕೆ ಸ್ವಾತಂತ್ರ್ಯ ತಂದುಕೊಟ್ಟ ಕಾಂಗ್ರೆಸ್ ಪಕ್ಷದ ಬಗ್ಗೆ ಇಂತಹ ಭಾಷೆ ಬಳಸಿರುವುದು ಸರಿಯಲ್ಲ. ಇದು ಕಾಂಗ್ರೆಸ್ ಪಕ್ಷದ ಭಾಷೆಯಲ್ಲ, ಇದು ಆರ್‌ಎಸ್‌ಎಸ್ ಸಂಸ್ಕೃತಿಯನ್ನು ಪ್ರತಿಬಿಂಬಿಸುವ ಭಾಷೆ ಎಂದು ವಾಗ್ದಾಳಿ ನಡೆಸಿದ್ದಾರೆ. ಇದೇ ವೇಳೆ, ಮಹಾತ್ಮ ಗಾಂಧೀಜಿ ಅವರನ್ನು ದೇಶದ್ರೋಹಿ ಎಂದು ಬಿಂಬಿಸುವ ಪ್ರಯತ್ನದ ವಿರುದ್ಧವೂ ಹರಿಪ್ರಸಾದ್ ಆಕ್ರೋಶ ವ್ಯಕ್ತಪಡಿಸಿದ್ದಾರೆ. ದೇಶದ್ರೋಹಿಗಳು ಯಾರು ಎಂಬುದು ಸ್ಪಷ್ಟವಾಗಿದೆ. ಪ್ರಧಾನಿ ನರೇಂದ್ರ ಮೋದಿ, ಗೃಹ ಸಚಿವ ಅಮಿತ್ ಶಾ ಹಾಗೂ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ದೇಶದ್ರೋಹಿಗಳು ಎಂದರು.

ಅಭಿವ್ಯಕ್ತಿ ಸ್ವಾತಂತ್ರ್ಯದ ಹೆಸರಿನಲ್ಲಿ ರಾಷ್ಟ್ರಧ್ವಜ ಹಾಗೂ ಸಂವಿಧಾನವನ್ನು ಸುಡಲು ಅವಕಾಶ ನೀಡಬಹುದೇ ಎಂದು ಪ್ರಶ್ನಿಸಿದ್ದಾರೆ. ಗಾಂಧೀಜಿ ವಿರುದ್ಧ ಆಕ್ಷೇಪಾರ್ಹ ಹೇಳಿಕೆ ನೀಡುವವರ ವಿರುದ್ಧ ಪೊಲೀಸರು ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಹರಿಪ್ರಸಾದ್ ಒತ್ತಾಯಿಸಿದ್ದಾರೆ.

ಬರ: ಕರ್ನಾಟಕಕ್ಕೆ ವಿಶೇಷ ಅನುದಾನ ಬಿಡುಗಡೆಗೆ ಕೇಂದ್ರಕ್ಕೆ ಒತ್ತಾಯ



■ ಪ್ರಧಾನಿ ಭೇಟಿಗೆ ಶೀಘ್ರ ಸರ್ವಪಕ್ಷ ನಿಯೋಗ ಕರೆದೊಯ್ಯಲು ಸಿದ್ಧತೆ: ಸಹಕಾರ ಸಚಿವ ಲಕ್ಷ್ಮಣ ಸವದಿ

ಬೆಳಗಾವಿ, ನ.2: ರಾಜ್ಯದಲ್ಲಿ ಕಳೆದ ಐದು ದಶಕಗಳಲ್ಲೇ ಅತ್ಯಂತ ಭೀಕರ ಬರ ಪರಿಸ್ಥಿತಿ ತಲೆದೋರಿದ್ದು, ಸುಮಾರು 54 ಸಾವಿರ ಕೋಟಿ ರೂಪಾಯಿಗಳ ಭಾರಿ ನಷ್ಟ ಸಂಭವಿಸಿದೆ. ಸಂಕಷ್ಟದಲ್ಲಿರುವ ರೈತರಿಗೆ ಪರಿಹಾರ ನೀಡಲು ಹಾಗೂ ರಾಜ್ಯಕ್ಕೆ ವಿಶೇಷ ಅನುದಾನ ಬಿಡುಗಡೆ ಮಾಡುವಂತೆ ಕೇಂದ್ರ ಸರ್ಕಾರವನ್ನು ಒತ್ತಾಯಿಸಲಾಗುವುದು ಎಂದು ಸಹಕಾರ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಲಕ್ಷ್ಮಣ ಸವದಿ ತಿಳಿಸಿದ್ದಾರೆ.

ನಿನ್ನೆ ನಗರದ ಪೊಲೀಸ್ ಪರೇಡ್ ಮೈದಾನದಲ್ಲಿ ನಡೆದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದ ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಈ ಸಂಬಂಧ ಪ್ರಧಾನಮಂತ್ರಿ ಹಾಗೂ ಕೇಂದ್ರ ಕೃಷಿ ಸಚಿವರನ್ನು ಭೇಟಿಯಾಗಲು ರಾಜ್ಯದಿಂದ ಸರ್ವಪಕ್ಷ ನಿಯೋಗವನ್ನು ದೆಹಲಿಗೆ ಕರೆದೊಯ್ಯಲು ಸಿದ್ಧತೆ ನಡೆಸಲಾಗುತ್ತಿದೆ ಎಂದರು.

ರಾಜ್ಯದ 230ಕ್ಕೂ ಅಧಿಕ ತಾಲೂಕುಗಳನ್ನು ಈಗಾಗಲೇ ಬರಪೀಡಿತ ಎಂದು ಘೋಷಿಸಲಾಗಿದ್ದು, ಕೃಷಿ ಸೇರಿದಂತೆ ವಿವಿಧ ರಂಗಗಳು ಸಂಪೂರ್ಣವಾಗಿ ನಲುಗಿಹೋಗಿವೆ. ಈ ಭಾರಿ ಹಾನಿಯ ಕುರಿತು ಕೇಂದ್ರಕ್ಕೆ ಈಗಾಗಲೇ ಮನವಿ ಸಲ್ಲಿಸಲಾಗಿದೆ ಎಂದು ಸಚಿವರು ವಿವರಿಸಿದರು.

ಜಿಎಸ್‌ಟಿ ಪಾವತಿಗೆ ತಕ್ಕಂತೆ ಅನುದಾನ ನೀಡಬೇಕು

ದೇಶದಲ್ಲೇ ಎರಡನೇ ಅತಿ ಹೆಚ್ಚು ಜಿಎಸ್‌ಟಿ ಪಾವತಿಸುವ ಕರ್ನಾಟಕಕ್ಕೆ ಬರ ಪರಿಹಾರ ಮತ್ತು ಅಗತ್ಯ ಅನುದಾನವನ್ನು ಪಡೆಯುವ ಸಂಪೂರ್ಣ ಹಕ್ಕಿದೆ. ಆದ್ದರಿಂದ ಕೇಂದ್ರ ಸರ್ಕಾರವು ರಾಜ್ಯದ ಈ ಕಷ್ಟಕರ ಪರಿಸ್ಥಿತಿಯನ್ನು ಗಂಭೀರವಾಗಿ ಪರಿಗಣಿಸಿ ತಕ್ಷಣವೇ ತಕ್ಕ ಅನುದಾನ ಬಿಡುಗಡೆ ಮಾಡಬೇಕು ಎಂದು ಸಚಿವ ಲಕ್ಷ್ಮಣ ಸವದಿ ಆಗ್ರಹಿಸಿದರು.

ಸಾಲದ ನೆಪದಲ್ಲಿ ರೈತರ ಆಸ್ತಿಗಳನ್ನು ಜಪ್ತಿ ಮಾಡುವುದು ಅಥವಾ ಹರಾಜು ಪ್ರಕ್ರಿಯೆ ನಡೆಸುವುದು ಸಂಪೂರ್ಣವಾಗಿ ರೈತರ ಹಿತಾಸಕ್ತಿ ಕಾಪಾಡಲು ರಾಜ್ಯ ಸರ್ಕಾರ ಬದ್ಧವಾಗಿದ್ದು, ಅವರಿಗೆ ಸೂಕ್ತ ಬೆಂಬಲ ನೀಡಲು ಅಗತ್ಯವಿರುವ ಎಲ್ಲಾ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

–ಲಕ್ಷ್ಮಣ ಸವದಿ, ಸಹಕಾರ ಸಚಿವ

ಬೆಳೆಗಾರರು ಒಪ್ಪಿದರೆ ಮಾತ್ರ ಸಕ್ಕರೆ ಕಾರ್ಖಾನೆ ಕಾರ್ಯಾರಂಭ



■ ರಿಸ್ಕ್ ತೆಗೆದುಕೊಳ್ಳಲು ಕಾರ್ಖಾನೆ ಮಾಲೀಕರು ಸಿದ್ಧರಿಲ್ಲ: ಸತೀಶ್ ಜಾರಕಿಹೊಳಿ

ಬೆಳಗಾವಿ, ನ.2: ಕಬ್ಬು ಬೆಳೆಗಾರರು ಒಪ್ಪಿಗೆ ಸೂಚಿಸಿದರೆ ಮಾತ್ರ ಸಕ್ಕರೆ ಕಾರ್ಖಾನೆಗಳು ಕಾರ್ಯಾರಂಭ ಮಾಡಲಿವೆ. ಸದ್ಯದ ಪರಿಸ್ಥಿತಿಯಲ್ಲಿ ಕಾರ್ಖಾನೆ ಮಾಲೀಕರು ಯಾವುದೇ ರಿಸ್ಕ್ ತೆಗೆದುಕೊಳ್ಳಲು ಸಿದ್ಧರಿಲ್ಲ. ಕಬ್ಬು ಬೆಳೆಗಾರರ ಸಮಸ್ಯೆ ಪರಿಹಾರಕ್ಕೆ ರೈತ ಸಂಘಟನೆ ಮತ್ತು ಕಾರ್ಖಾನೆ ಮಾಲೀಕರ ನಡುವೆ ಒಮ್ಮತ ಮೂಡುವ ಅಗತ್ಯವಿದೆ. ಇದರ ಜೊತೆಗೆ ಕೇಂದ್ರ ಸರ್ಕಾರ ಎಂಎಸ್ಪಿ ಹೆಚ್ಚಿಸಿದರೆ ಮಾತ್ರ ಇದಕ್ಕೆ ಶಾಶ್ವತ ಪರಿಹಾರ ಕಂಡುಕೊಳ್ಳಲು ಸಾಧ್ಯ ಎಂದು ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಹೇಳಿದರು.

ಬೆಳಗಾವಿ ಕಾಂಗ್ರೆಸ್ ಭವನದಲ್ಲಿ ಸೋಮವಾರ ಮಾಧ್ಯಮದವರ ಜೊತೆ ಮಾತನಾಡಿದ ಅವರು, ಕಾರ್ಖಾನೆ ಆರಂಭಿಸಲು ಮಾಲೀಕರು ರಿಸ್ಕ್ ತೆಗೆದುಕೊಳ್ಳಲು ಸಿದ್ಧರಿಲ್ಲ. ಒಮ್ಮೆ ಆರಂಭಿಸಿದರೆ ಮತ್ತೆ ಬಂದ್ ಮಾಡಿಸುತ್ತಾರೆ. ಹಿಂದಿನ ವರ್ಷ ಇದೇ ರೀತಿ ಆಗಿದೆ. ಹಾಗಾಗಿ, ಕಾರ್ಖಾನೆ ಶುರು ಮಾಡುವಂತೆ ಕಬ್ಬು ಬೆಳೆಗಾರರೇ ಮುಂದೆ ಬಂದು ಹೇಳಬೇಕು. ಆಗ ಮಾಲೀಕರು ಕಬ್ಬು ನುರಿಸಲು ಸಿದ್ಧರಿದ್ದಾರೆ ಎಂದರು.

ಕಬ್ಬು ಬೆಳೆಗಾರರ 'ಜೈಲ್ ಭರೋ' ಹೋರಾಟದ ಕುರಿತು ಗೊತ್ತಿಲ್ಲ. ಗುರ್ಲಾಪುರದಲ್ಲೇ ರೈತರು ಪ್ರತಿಭಟನೆ ಮಾಡುತ್ತಿದ್ದಾರೆ. ರೈತರ ಮುಂದಿನ ಹೋರಾಟದ ಕುರಿತು ಸರ್ಕಾರ ಮತ್ತು ಜಿಲ್ಲಾಡಳಿತಕ್ಕೆ ಗೊತ್ತಿಲ್ಲ. ಜಿಲ್ಲಾಧಿಕಾರಿಗಳ ಬಳಿ ಬಂದು ರೈತ ಮುಖಂಡರು ಮಾತಾಡಬೇಕು. ಅದಕ್ಕೆ ಯಾವುದೇ ತೊಂದರೆ ಇಲ್ಲ. ಜಿಲ್ಲಾಧಿಕಾರಿಗಳನ್ನು ಅವರು ಸಂಪರ್ಕಿಸಿದರೆ, ನಾವು ಮಾತುಕತೆಗೆ ಸಿದ್ಧರಿದ್ದೇವೆ ಎಂದು ಸಚಿವರು ಸ್ಪಷ್ಟಪಡಿಸಿದರು.

ಕೇಂದ್ರ ಸರ್ಕಾರ ಮೊದಲು ಎಂಎಸ್ಪಿ ಹೆಚ್ಚಿಸಲಿ

ರಾಜ್ಯ ಸರ್ಕಾರ ಮೊದಲು ಎಸ್‌ಎಪಿ ಘೋಷಣೆ ಮಾಡಲಿ ಎಂಬ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಹೇಳಿಕೆಗೆ ತಿರುಗೇಟು ಕೊಟ್ಟ ಸಚಿವ ಸತೀಶ್ ಜಾರಕಿಹೊಳಿ, ಕೇಂದ್ರ ಸರ್ಕಾರ ಮೊದಲು ಎಂಎಸ್‌ಪಿ ಹೆಚ್ಚಿಸಲಿ. ಈಗ ಇರುವ ಸಕ್ಕರೆ ದರವನ್ನು ಅಧಿಕೃತ ಮಾಡಲಿ. ಆದರೆ, ಕೇಂದ್ರ ಸರ್ಕಾರ ಸಿದ್ಧವಿಲ್ಲ ಎಂದು ಕಿಡಿಕಾರಿದರು. ರಾಜ್ಯ ಸರ್ಕಾರದಿಂದ ಈಗಾಗಲೇ ಘೋಷಣೆ ಮಾಡಿದ್ದೇವೆ. ಮಾರುಕಟ್ಟೆಯಲ್ಲಿ ಈಗಿನ ಸಕ್ಕರೆ ದರ ಆಧರಿಸಿ, ಕಾರ್ಖಾನೆಗಳು ಪ್ರತಿ ಟನ್ ಕಬ್ಬಿಗೆ 3500 ರೂ. ನೀಡಲು ಒಪ್ಪಿಕೊಂಡಿವೆ. ಅದೇ ರೀತಿ ಎಂಎಸ್ಪಿ ಇನ್ನೂ ಹೆಚ್ಚಿಸಿದರೆ, ಅದಕ್ಕೆ ಅನುಗುಣವಾಗಿ ಮತ್ತೆ ದರ ಹೆಚ್ಚಿಸುವುದಾಗಿ ಹೇಳಿದ್ದಾರೆ.

ಮೊದಲನೇ ಪುಟದಿಂದ


ಮಹಾರಾಷ್ಟ್ರದ ಪ್ರಸ್ತಾವಿತ ಯೋಜನೆಯಿಂದ ಕರ್ನಾಟಕದ ಹಿತಾಸಕ್ತಿಗೆ ಧಕ್ಕೆ

ಇದೇ ವೇಳೆ, ದೇವೇಂದ್ರ ಫಡ್ನವೀಸ್ ಅವರು ಈ ಕುರಿತು ಮಾತನಾಡಿರುವ ವಿಡಿಯೊ ತುಣುಕನ್ನು ಕೂಡ ಸಚಿವ ಎಂ.ಬಿ ಪಾಟೀಲ್ ಸುದ್ದಿಗೋಷ್ಠಿಯಲ್ಲಿ ಪ್ರದರ್ಶಿಸಿದ್ದಾರೆ. ಈ ಬಗ್ಗೆ ಶೀಘ್ರವೇ ಮುಖ್ಯಮಂತ್ರಿಯವರ ನೇತೃತ್ವದಲ್ಲಿ ಸರ್ವಪಕ್ಷ ಸಭೆ ನಡೆಸಲಾಗುವುದು. ಇಂತಹ ವಿಷಯಗಳಲ್ಲಿ ಪಕ್ಷಾತೀತವಾಗಿ ಧ್ವನಿಯೆತ್ತಿ ರಾಜ್ಯದ ಹಿತರಕ್ಷಣೆಗೆ ಕ್ರಮ ವಹಿಸಲಾಗುವುದು ಎಂದು ಹೇಳಿದ್ದಾರೆ.

ಲಭ್ಯವಾಗಿರುವ ಮಾಹಿತಿಯ ಪ್ರಕಾರ, ಮಹಾರಾಷ್ಟ್ರ ಸರ್ಕಾರವು ಈ ಯೋಜನೆಗೆ ವಿಸ್ತೃತ ಯೋಜನಾ ವರದಿ ಸಿದ್ಧಪಡಿಸಲು 2026ರ ಜುಲೈನಲ್ಲಿ 24 ಕೋಟಿ ಮಂಜೂರು ಮಾಡಿದೆ. ಈ ಸಂಬಂಧ, ಸುಮಾರು 84 ಕಿ.ಮೀ. ಉದ್ದದ ಮಾರ್ಗದಲ್ಲಿ ಭೂವೈಜ್ಞಾನಿಕ ಸಮೀಕ್ಷೆ ನಡೆಸಲು ಸಿದ್ಧತೆ ನಡೆಸುತ್ತಿದೆ. 2026ರ ಅಂತ್ಯದ ವೇಳೆಗೆ ಡಿಪಿಆರ್ ಸಿದ್ಧವಾಗುವ ನಿರೀಕ್ಷೆಯಿದ್ದು, ಈ ಯೋಜನೆಗೆ ಸುಮಾರು 19,000 ಕೋಟಿಯನ್ನು ಅಂದಾಜು ವೆಚ್ಚ ಮಾಡಲು ಉದ್ದೇಶಿಸಿದೆ ಎಂದು ಎಂ.ಬಿ ಪಾಟೀಲ್ ವಿವರಿಸಿದ್ದಾರೆ. ಈ ಪ್ರಸ್ತಾವಿತ ಯೋಜನೆಯು ಹಲವು ಪ್ರಶ್ನೆಗಳನ್ನು ಹುಟ್ಟುಹಾಕಿದೆ. ನ್ಯಾಯಮಂಡಳಿಯು ಶೇ. 75ರ ಅವಲಂಬನೀಯತೆಯ ಆಧಾರದ ಮೇಲೆ ಲಭ್ಯವಿರುವ 2,130 ಟಿಎಂಸಿ ಅಡಿ ನೀರಿನ ಜೊತೆಗೆ, ಶೇ. 65ರ ಅವಲಂಬನೀಯತೆ ಹಾಗೂ ಸರಾಸರಿ ಲಭ್ಯತೆಯ ಆಧಾರದ ಮೇಲೆ ಹೆಚ್ಚುವರಿಯಾಗಿ 448 ಟಿಎಂಸಿ ಅಡಿ ನೀರನ್ನು ಹಂಚಿಕೆ ಮಾಡಿದೆ. ಈ ಹೆಚ್ಚುವರಿ ನೀರಿನಲ್ಲಿ ಮಹಾರಾಷ್ಟ್ರಕ್ಕೆ 81 ಟಿಎಂಸಿ ಅಡಿ, ಕರ್ನಾಟಕಕ್ಕೆ 173 ಟಿಎಂಸಿ ಅಡಿ ಹಾಗೂ ಅವಿಭಜಿತ ಆಂಧ್ರಪ್ರದೇಶಕ್ಕೆ 194 ಟಿಎಂಸಿ ಅಡಿ ಹಂಚಿಕೆಯಾಗಿದೆ ಎಂದು ಪಾಟೀಲ್ ವಿವರಿಸಿದರು.

ಹೊಸರಸ್ತೆ ನಿರ್ಮಾಣ, ಅಗಲೀಕರಣದ ಟಿಡಿಆರ್ ಪ್ರಕ್ರಿಯೆ ಇನ್ಮುಂದೆ ಆನ್‌ಲೈನ್‌ನಲ್ಲಿ

ಜನರ ನಂಬಿಕೆಗಳಿಸಲು ಇಡೀ ವ್ಯವಸ್ಥೆಯೀಗ ಸಂಪೂರ್ಣ ಡಿಜಿಟಲೀಕರಣ: ಸಚಿವ ಕೃಷ್ಣಬೈರೇಗೌಡ



ಬೆಂಗಳೂರು, ನ.2: ರಸ್ತೆಗಳ ಅಗಲೀಕರಣ ಮತ್ತು ಹೊಸ ರಸ್ತೆಗಳ ನಿರ್ಮಾಣಕ್ಕೆ ಅಗತ್ಯವಿರುವ ಭೂಸ್ವಾಧೀನ ಪ್ರಕ್ರಿಯೆಯನ್ನು ಸುಲಭಗೊಳಿಸಲು ಟಿ.ಡಿ.ಆರ್ ವ್ಯವಸ್ಥೆಯನ್ನು ಸಂಪೂರ್ಣ ಡಿಜಿಟಲೀಕರಣಗೊಳಿಸುವಂತೆ ಸಚಿವ ಕೃಷ್ಣ ಬೈರೇಗೌಡ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಸೋಮವಾರ ವಿಕಾಸಸೌಧದಲ್ಲಿ ಸಂಬಂಧಿತ ಅಧಿಕಾರಿಗಳ ಸಭೆ ನಡೆಸಿದ ಸಚಿವ ಕೃಷ್ಣ ಬೈರೇಗೌಡ ಅವರು, ನಗರದಲ್ಲಿ ದಿನದಿಂದ ದಿನಕ್ಕೆ ಹೆಚ್ಚುತ್ತಿರುವ ಸಂಚಾರ ದಟ್ಟಣೆಗೆ ದೀರ್ಘಕಾಲೀನ ಹಾಗೂ ಶಾಶ್ವತ ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ರಸ್ತೆಗಳ ಅಗಲೀಕರಣ ಮತ್ತು ಹೊಸ ರಸ್ತೆಗಳ ನಿರ್ಮಾಣವು ಅತ್ಯಂತ ತುರ್ತು ಮತ್ತು ಅನಿವಾರ್ಯ ಹೆಜ್ಜೆಯಾಗಿದೆ. ಆದರೆ, ಇಷ್ಟು ವರ್ಷಗಳ ಕಾಲ ಮೂಲಸೌಕರ್ಯ ಅಭಿವೃದ್ಧಿಗೆ ಅಗತ್ಯವಿರುವ ಭೂಸ್ವಾಧೀನ ಪ್ರಕ್ರಿಯೆಯನ್ನು ಸುಲಭಗೊಳಿಸುವ ಟಿ.ಡಿ.ಆರ್ ವ್ಯವಸ್ಥೆಯು ಸಂಪೂರ್ಣವಾಗಿ ಕಾಗದದ ಕಡತಗಳ ಮೂಲಕ ನಡೆಯುತ್ತಿದ್ದುದರಿಂದ, ಸರಿಯಾದ ಟ್ರ್ಯಾಕಿಂಗ್ ವ್ಯವಸ್ಥೆ ಇಲ್ಲದೆ ವ್ಯವಸ್ಥೆಯಲ್ಲಿ ಅಪಾರದರ್ಶಕತೆ ತುಂಬಿತ್ತು. ಪರಿಣಾಮ ಸಾರ್ವಜನಿಕರಿಗೆ ಟಿ.ಡಿ.ಆರ್ ವ್ಯವಸ್ಥೆಯ ಮೇಲೆ ತೀರಾ ಅಪನಂಬಿಕೆ ಹಾಗೂ ಅತೃಪ್ತಿ ಮೂಡಿತ್ತು ಎಂದು ಅಭಿಪ್ರಾಯಪಟ್ಟರು.

ಸಭೆಯಲ್ಲಿ ಆಯುಕ್ತರಾದ ರಮೇಶ್ ಡಿ.ಎಸ್., ಪೊಮ್ಮಲ ಸುನೀಲ್ ಕುಮಾರ್, ರಮೇಶ್ ಕೆ.ಎನ್., ಜಿ. ಜಗದೀಶ್, ಬೆಂಗಳೂರು ನಗರ ಸಿಇಒ ಆರ್. ಯತೀಶ್ ಹಾಗೂ ಮತ್ತಿತರರು ಉಪಸ್ಥಿತರಿದ್ದರು.



ಡಿಜಿಟಲೀಕರಣ ಯೋಜನೆ ಪ್ರಮುಖ ಅಂಶಗಳು

- ರಸ್ತೆ ಮತ್ತು ಆಸ್ತಿಯ ಭೂದಾಖಲೆಗಳ ಪರಿಶೀಲನೆಯಿಂದ ಹಿಡಿದು ಟಿ.ಡಿ.ಆರ್. ಪ್ರಮಾಣಪತ್ರ ವಿತರಿಸುವವರೆಗಿನ ಪ್ರತಿಯೊಂದು ಪ್ರಕ್ರಿಯೆಯನ್ನು ಆನ್‌ಲೈನ್‌ನಲ್ಲಿ ನಡೆಯಲಿದೆ.
- ಟಿ.ಡಿ.ಆರ್‌ನ ಮಾರಾಟ/ಖರೀದಿ (ವ್ಯವಹಾರ) ಹಾಗೂ ಅದರ ಅಂತಿಮ ಬಳಕೆ ಪ್ರಕ್ರಿಯೆಯ ಡಿಜಿಟಲೀಕರಣ
- ಕಾಗದರಹಿತ ಡಿಜಿಟಲ್ ವ್ಯವಸ್ಥೆಯಿಂದಾಗಿ ಅನಗತ್ಯ ವಿಳಂಬ, ಮಧ್ಯವರ್ತಿಗಳ ಹಸ್ತಕ್ಷೇಪ ಮತ್ತು ಸಾರ್ವಜನಿಕರಿಗಾಗುವ ಕಿರುಕುಳಕ್ಕೆ ಬ್ರೇಕ್

ಕಾಲಹರಣ ಮತ್ತು ಪಾರದರ್ಶಕತೆ ಅಭಾವಕ್ಕೆ ಮುಕ್ತಿ

ಮುಂದಿನ ದಿನಗಳಲ್ಲಿ ರಸ್ತೆ ಮತ್ತು ಆಸ್ತಿಯ ವಿವರಗಳ ಪ್ರಾಥಮಿಕ ಹಂತದಿಂದ ಹಿಡಿದು, ಎಲ್ಲಾ ಹಂತಗಳ ಪರಿಶೀಲನೆ ಮುಗಿದು ಅಂತಿಮವಾಗಿ ಟಿ.ಡಿ.ಆರ್ ಪ್ರಮಾಣಪತ್ರ ವಿತರಿಸುವವರೆಗಿನ ಸಂಪೂರ್ಣ ಪ್ರಕ್ರಿಯೆಯನ್ನು ಡಿಜಿಟಲೀಕರಣಗೊಳಿಸಲು ಅಗತ್ಯವಾದ ಕ್ರಮ ಜರುಗಿಸಬೇಕು ಎಂದು ಸಂಬಂಧಿತ ಅಧಿಕಾರಿಗಳಿಗೆ ಕೃಷ್ಣಬೈರೇಗೌಡ ಸೂಚಿಸಿದರು. ಕೇವಲ ಟಿ.ಡಿ.ಆರ್ ಮಂಜೂರಾತಿ ಮಾತ್ರವಲ್ಲದೆ, ಅದರ ವ್ಯವಹಾರ (ಖರೀದಿ–ಮಾರಾಟ) ಮತ್ತು ಅಂತಿಮ ಬಳಕೆಯ ಪ್ರಕ್ರಿಯೆಯನ್ನೂ ಸಂಪೂರ್ಣವಾಗಿ ಆನ್‌ಲೈನ್ ಡಿಜಿಟಲ್ ವೇದಿಕೆಗೆ ತರಬೇಕು. ಇದರಿಂದಾಗಿ ನಾಗರಿಕರು ತಮ್ಮ ಕಡತಗಳು ಯಾವ ಹಂತದಲ್ಲಿವೆ ಎಂಬುದನ್ನು ಸುಲಭವಾಗಿ ಟ್ರ್ಯಾಕ್ ಮಾಡಲು ಸಾಧ್ಯವಾಗಲಿದೆ. ಜೊತೆಗೆ ಮಧ್ಯವರ್ತಿಗಳ ಹಸ್ತಕ್ಷೇಪ, ಅನಗತ್ಯ ವಿಳಂಬ ಮತ್ತು ಸಾರ್ವಜನಿಕರಿಗೆ ಆಗುವ ಕಿರುಕುಳಕ್ಕೆ ಸಂಪೂರ್ಣವಾಗಿ ಮುಕ್ತಿ ಸಿಗಲಿದೆ ಎಂದು ಅಭಿಪ್ರಾಯಪಟ್ಟರು.

ರಾಮಮಂದಿರ ದೇಣಿಗೆ ಕಳವು ಪ್ರಕರಣ ಸುಪ್ರೀಂಕೋರ್ಟ್‌ನಲ್ಲಿ ಅರ್ಜಿಗಳ ಇತ್ಯರ್ಥ: ವಿಚಾರಣೆಗೆ ಸಹಕರಿಸಲು ಅರ್ಜಿದಾರರಿಗೆ ಅವಕಾಶ

ನವದೆಹಲಿ: ಅಯೋಧ್ಯೆಯ ಶ್ರೀರಾಮ ಜನ್ಮಭೂಮಿ ಮಂದಿರದಲ್ಲಿ ಭಕ್ತರು ಸಲ್ಲಿಸಿದ್ದ ಕಾಣಿಕೆ ಹಣ ದುರುಪಯೋಗ ಮಾಡಿಕೊಂಡಿರುವ ಆರೋಪಕ್ಕೆ ಸಂಬಂಧಿಸಿದ ಪ್ರಕರಣದಲ್ಲಿ ಸುಪ್ರೀಂಕೋರ್ಟ್ ಮಹತ್ವದ ಆದೇಶ ನೀಡಿದೆ. ಪ್ರಕರಣದ ತನಿಖೆ ನಡೆಸಿರುವ ವಿಶೇಷ ತನಿಖಾ ತಂಡ ಈಗಾಗಲೇ ಕೆಳಹಂತದ ನ್ಯಾಯಾಲಯಕ್ಕೆ ಆರೋಪಪಟ್ಟಿ ಸಲ್ಲಿಸಿರುವ ಹಿನ್ನೆಲೆಯಲ್ಲಿ, ಈ ಸಂಬಂಧ ಸಲ್ಲಿಕೆಯಾಗಿದ್ದ ಎಲ್ಲ ಅರ್ಜಿಗಳನ್ನು ಸುಪ್ರೀಂಕೋರ್ಟ್ ಇತ್ಯರ್ಥಪಡಿಸಿದೆ.



ಪ್ರಕರಣದ ವಿಚಾರಣೆ ನಡೆಸಿದ ಸುಪ್ರೀಂಕೋರ್ಟ್, ಅರ್ಜಿದಾರರಿಗೆ ಕೆಳಹಂತದ ನ್ಯಾಯಾಲಯದಲ್ಲಿ ನಡೆಯಲಿರುವ ವಿಚಾರಣೆ ವೇಳೆ ದೂರುದಾರರಾಗಿ ತಮ್ಮ ವಾದ ಮಂಡಿಸಲು ಹಾಗೂ ನ್ಯಾಯಾಲಯದ ವಿಚಾರಣೆಗೆ ಸಹಕರಿಸಲು ಅನುಮತಿ ನೀಡಿದೆ.

ವಿಚಾರಣೆ ವೇಳೆ ಉತ್ತರ ಪ್ರದೇಶ ಸರ್ಕಾರದ ಪರವಾಗಿ ಹಾಜರಾಗಿದ್ದ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ, ಪ್ರಕರಣದ ತನಿಖೆ ನಡೆಸಿರುವ ವಿಶೇಷ ತನಿಖಾ ತಂಡವು ಅಯೋಧ್ಯೆಯ ಕೆಳಹಂತದ ನ್ಯಾಯಾಲಯದಲ್ಲಿ ಆರೋಪಪಟ್ಟಿ ಸಲ್ಲಿಸಿದೆ ಎಂದು ನ್ಯಾಯಪೀಠಕ್ಕೆ ಮಾಹಿತಿ ನೀಡಿದರು. ಇದನ್ನು ಸ್ುಪ್ರೀಂಕೋರ್ಟ್ ದಾಖಲಿಸಿಕೊಂಡಿತು.

ಮಂದಿರದಲ್ಲಿ ಭಕ್ತರು ಸಲ್ಲಿಸುವ ಕಾಣಿಕೆ ಹಣವನ್ನು ಎಣಿಕೆ ಮಾಡುವ ಸಂದರ್ಭದಲ್ಲಿ ಕೆಲವು ಸಿಬ್ಬಂದಿ ಹಣವನ್ನು ತಮ್ಮ ಬಳಿಯೇ ಇರಿಸಿಕೊಳ್ಳುತ್ತಿದ್ದರು ಎಂಬ ಆರೋಪ ಕೇಳಿಬಂದಿತ್ತು. ಹಣ ಎಣಿಕೆ ಕಾರ್ಯದಲ್ಲಿ ತೊಡಗಿದ್ದ ಕೆಲವರು ಕಾಣಿಕೆ ಹಣವನ್ನು ಬೇರೆಡೆ ಹೂಡಿಕೆ ಮಾಡಿರುವುದು ಅಥವಾ ತಮ್ಮ ಬ್ಯಾಂಕ್ ಖಾತೆಗಳಿಗೆ ಜಮೆ ಮಾಡಿಕೊಂಡಿರುವುದಾಗಿ ತನಿಖೆಯ ವೇಳೆ ತಿಳಿದುಬಂದಿದೆ ಎಂದು ಉತ್ತರ ಪ್ರದೇಶ ಸರ್ಕಾರ ಈ ಹಿಂದೆ ನ್ಯಾಯಾಲಯಕ್ಕೆ ತಿಳಿಸಿತ್ತು.

ಪ್ರಕರಣದ ತನಿಖೆ ನಡೆಸಿದ್ದ ಎಸ್‌ಐಟಿ, ಮಂದಿರದ ಕಾಣಿಕೆ ಹಣದ ಎಣಿಕೆ ಕೊಠಡಿಯ ಸಿಸಿಟಿವಿ ದೃಶ್ಯಾವಳಿ ಪರಿಶೀಲಿಸಿದಾಗ ಹಣವನ್ನು ಅಕ್ರಮವಾಗಿ ತೆಗೆದುಕೊಂಡು ಹೋಗಿರುವ ಅಥವಾ ಮುಚ್ಚಿಟ್ಟಿರುವ 105 ಘಟನೆಗಳು ಪತ್ತೆಯಾಗಿವೆ ಎಂದು ಈ ಹಿಂದೆ ಸುಪ್ರೀಂಕೋರ್ಟ್‌ಗೆ ವರದಿ ಸಲ್ಲಿಸಿತ್ತು.

ಇದೀಗ ಆರೋಪಪಟ್ಟಿ ಸಲ್ಲಿಕೆಯಾಗಿರುವ ಹಿನ್ನೆಲೆಯಲ್ಲಿ ಪ್ರಕರಣದ ಮುಂದಿನ ಕಾನೂನು ಪ್ರಕ್ರಿಯೆಗಳು ಕೆಳಹಂತದ ನ್ಯಾಯಾಲಯದಲ್ಲಿ ನಡೆಯಲಿವೆ. ಪ್ರಕರಣದ ಆರೋಪಗಳ ಸತ್ಯಾಸತ್ಯತೆ ಕುರಿತು ಯಾವುದೇ ಅಭಿಪ್ರಾಯ ವ್ಯಕ್ತಪಡಿಸಿಲ್ಲ ಎಂದು ಸುಪ್ರೀಂಕೋರ್ಟ್ ಸ್ಪಷ್ಟಪಡಿಸಿದೆ. ಆರೋಪಗಳು ಸಾಬೀತಾಗಿವೆಯೇ ಅಥವಾ ಇಲ್ಲವೇ ಎಂಬುದನ್ನು ವಿಚಾರಣಾ ನ್ಯಾಯಾಲಯವೇ ನಿರ್ಧರಿಸಲಿದೆ.

ಇದರೊಂದಿಗೆ ರಾಮಮಂದಿರ ಕಾಣಿಕೆ ಹಣ ದುರುಪಯೋಗ ಪ್ರಕರಣಕ್ಕೆ ಸಂಬಂಧಿಸಿದಂತೆ ನ್ಯಾಯಾಲಯದಲ್ಲಿ ಸಲ್ಲಿಕೆಯಾಗಿದ್ದ ಎಲ್ಲ ಅರ್ಜಿಗಳ ವಿಚಾರಣೆ ಮುಕ್ತಾಯಗೊಂಡಿದೆ.

ದೆಹಲಿ ಮಾರುಕಟ್ಟೆಗಳಲ್ಲಿ ಖರೀದಿ ಜೋರು: ಕಾಂಗ್ರೆಸ್

ನವದೆಹಲಿ, ನ. 2: ಇಂಡಿಯಾ ಒಕ್ಕೂಟದ ಬೃಹತ್ ರ್‍ಯಾಲಿಯಿಂದಾಗಿ ದೆಹಲಿಯ ಮಾರುಕಟ್ಟೆಗಳಲ್ಲಿ ವ್ಯಾಪಾರಕ್ಕೆ ತೊಂದರೆ ಉಂಟಾಗಲಿದೆ ಎಂದು ಬಿಜೆಪಿ ಮಾಡಿದ್ದ ಆರೋಪವು ಸಂಪೂರ್ಣವಾಗಿ ಸುಳ್ಳಾಗಿದೆ ಎಂದು ಕಾಂಗ್ರೆಸ್ ಹೇಳಿದೆ.

ಹಾಗೆಯೇ ದೆಹಲಿ ಮಾರುಕಟ್ಟೆಯಲ್ಲಿ ಖರೀದಿ ಜೋರಾಗಿ ನಡೆದಿದ್ದು, ಬಿಜೆಪಿ ಅಪಪ್ರಚಾರದ ಬಲೂನ್ ಪಂಕ್ಚರ್ ಆಗಿದೆ ಎಂದು ಕಾಂಗ್ರೆಸ್ ಟೀಕಿಸಿದೆ. ನವೆಂಬರ್ 1ರಂದು ದೆಹಲಿಯಲ್ಲಿ ಇಂಡಿಯಾ ಒಕ್ಕೂಟದ ಬೃಹತ್ ರ್‍ಯಾಲಿಯಿಂದಾಗಿ ದೆಹಲಿಯ ಮಾರುಕಟ್ಟೆಗಳಲ್ಲಿ ವ್ಯಾಪಾರ ಸಂಪೂರ್ಣವಾಗಿ ಕಂಗೆಡಲಿದೆ, ವರ್ತಕರಿಗೆ ಭಾರಿ ನಷ್ಟವಾಗಲಿದೆ ಎಂದು ಬಿಜೆಪಿ ಆರೋಪಿಸಿತ್ತು. ಈ ಬಗ್ಗೆ ಕಾಂಗ್ರೆಸ್ನ ಹಿರಿಯ ನಾಯಕ ಮತ್ತು ಪ್ರಧಾನ ಕಾರ್ಯದರ್ಶಿ (ಸಂಪರ್ಕ) ಜೈರಾಮ್ ರಮೇಶ್ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ. ಬಿಜೆಪಿಯ ಸಂಪೂರ್ಣ ಪ್ರಚಾರ ತಂತ್ರವೇ ಕುಸಿದುಬಿದ್ದಿದೆ! ಇಂಡಿಯಾ ಒಕ್ಕೂಟದ ರ್‍ಯಾಲಿಯನ್ನು ಅಪಖ್ಯಾತಿಗೊಳಿಸಲು, ಜನರು ದೆಹಲಿಗೆ ಬರುವುದನ್ನು ತಡೆಯಲು, ಒಂದು ಸುಳ್ಳು ಕಥನಗಳನ್ನು ಹರಡಲಾಗಿತ್ತು. ಈ ಕಾರ್ಯಕ್ರಮದಿಂದ ವ್ಯಾಪಾರಿಗಳಿಗೆ ನಷ್ಟವಾಗುತ್ತದೆ, ಮಾರುಕಟ್ಟೆಗಳು ಮುಚ್ಚಬೇಕಾಗುತ್ತದೆ ಎಂದು ಬಿಂಬಿಸಲಾಗಿತ್ತು. ದೇಶದ ವಿವಿಧ ಭಾಗಗಳಿಂದ ಬರುವ ಜನರು ಸಹಜವಾಗಿಯೇ ಇಲ್ಲಿ ಶಾಪಿಂಗ್ ಮಾಡುತ್ತಾರೆ. ಇದರಿಂದ ದೆಹಲಿಯ ಪ್ರತಿಯೊಬ್ಬ ವ್ಯಾಪಾರಿಗೂ ನೇರವಾಗಿಯೋ ಅಥವಾ ಪರೋಕ್ಷವಾಗಿಯೋ ಲಾಭವಾಗುತ್ತದೆ ಎಂಬುದು ಯಾರಿಗಾದರೂ ತಿಳಿಯುವ ವಿಷಯವೇ ಆಗಿದೆ ಎಂದು ತಿಳಿಸಿದ್ದಾರೆ.

ಬಿಜೆಪಿ ರೂಪಿಸಿದ ಈ ಸುಳ್ಳು ಮತ್ತು ತರ್ಕಹೀನ ಅಪಪ್ರಚಾರದ ಹಿಂದಿನ ಉದ್ದೇಶ ಸ್ಪಷ್ಟವಾಗಿತ್ತು. ಮತ ಕಳ್ಳತನದಂತಹ ಗಂಭೀರ ವಿಷಯಗಳು ಮತ್ತು ಚುನಾವಣಾ ಆಯೋಗದ ಹೊಣೆಗಾರಿಕೆ (ಜ್ಞಾನೇಶ್ ಕುಮಾರ್ ಅವರನ್ನು ರಕ್ಷಿಸುವ ಸಲುವಾಗಿ) ಕುರಿತಾದ ಚರ್ಚೆಗಳಿಂದ ದೇಶದ ಗಮನವನ್ನು ಬೇರೆಡೆಗೆ ಸೆಳೆಯುವುದು, ಜನರು ಈ ಬೃಹತ್ ರ್‍ಯಾಲಿಯಲ್ಲಿ ಭಾಗವಹಿಸದಂತೆ ತಡೆಯುವುದು ಇದರ ಹಿಂದಿನ ಉದ್ದೇಶವಾಗಿತ್ತು. ಆದರೆ, ನಡೆದಿದ್ದೇ ಬೇರೆ ಎಂದು ಎಕ್ಸ್‌ನಲ್ಲಿ ಬರೆದುಕೊಂಡಿದ್ದಾರೆ.

ದೆಹಲಿಯ ಜನರು ಮತ್ತು ದೇಶದ ವಿವಿಧ ಭಾಗಗಳಿಂದ ಆಗಮಿಸಿದವರು, ಈ ಅಪಪ್ರಚಾರಕ್ಕೆ ತಮ್ಮದೇ ಆದ ರೀತಿಯಲ್ಲಿ ಪ್ರತಿಕ್ರಿಯಿಸಿದರು. ರಾಹುಲ್ ಗಾಂಧಿಯವರ ಮನವಿಗೆ ಸ್ಪಂದಿಸಿದ ಜನರು, ದೆಹಲಿಯ ಮಾರುಕಟ್ಟೆಗಳಲ್ಲಿ ಶಾಪಿಂಗ್ ಮಾಡಿದರು.

ಹಳೆಯ ದೆಹಲಿಯ ಸಗಟು ಮಾರುಕಟ್ಟೆಗಳಲ್ಲಿ ಅಂಗಡಿಗಳು ತೆರೆದಿದ್ದವು, ಅಲ್ಲಿ ವ್ಯಾಪಾರ ಜೋರಾಗಿಯೇ ನಡೆಯಿತು. ಅಷ್ಟೇ ಅಲ್ಲದೆ, ಸಣ್ಣ ವ್ಯಾಪಾರಿಗಳು ಮತ್ತು ಬೀದಿ ಬದಿ ವ್ಯಾಪಾರಿಗಳಿಂದಲೂ ಜನರು ವಸ್ತುಗಳನ್ನು ಖರೀದಿಸಿದರು. ಪತ್ರಿಕಾ ವರದಿಗಳೇ ಈ ಸುಳ್ಳು ಕಥನದ ಪೊಳ್ಳುತನವನ್ನು ಬಯಲುಗೊಳಿಸಿವೆ ಎಂದು ಕಾಂಗ್ರೆಸ್ ನಾಯಕ ತಿಳಿಸಿದ್ದಾರೆ.

ಈ ಮನವಿಗೆ ಸ್ಪಂದಿಸಿ, ಪ್ರಜಾಸತ್ತಾತ್ಮಕ ಪ್ರತಿಭಟನೆಗೆ ಬೆಂಬಲ ನೀಡಿದ್ದಲ್ಲದೆ, ಸ್ಥಳೀಯ ಆರ್ಥಿಕತೆಗೂ ಚೈತನ್ಯ ತುಂಬಿದ ದೆಹಲಿಯ ವ್ಯಾಪಾರಿಗಳಿಗೆ ಮತ್ತು ಎಲ್ಲಾ ನಾಗರಿಕರಿಗೆ ಧನ್ಯವಾದಗಳು ಎಂದು ಹೇಳಿದರು. ಪ್ರಜಾಪ್ರಭುತ್ವದ ಧ್ವನಿಯನ್ನು ಭಯ ಹುಟ್ಟಿಸುವ ಮೂಲಕವಾಗಲಿ ಅಥವಾ ಅಪಪ್ರಚಾರದ ಮೂಲಕವಾಗಲಿ ಹತ್ತಿಕ್ಕಲು ಸಾಧ್ಯವಿಲ್ಲ ಎಂಬುದನ್ನು ಬಿಜೆಪಿ ಅರಿತುಕೊಳ್ಳಬೇಕು ಎಂದು ಹೇಳಿದರು.

ವಂಚನೆಯ ಸಚಿವರು ಮತ್ತು ಬಿಜೆಪಿ ಪಕ್ಷದವರು ಒಂದು ವಿಷಯವನ್ನು ಅರ್ಥಮಾಡಿಕೊಳ್ಳಬೇಕು. ಕಳೆದ 12 ವರ್ಷಗಳಿಂದ ಈ ದೇಶದ ಜನರು ಇಂತಹ ತಂತ್ರಗಳನ್ನು ನೋಡುತ್ತಲೇ ಬಂದಿದ್ದಾರೆ, ಇನ್ನು ಮುಂದೆ ಜನರು ಬಿಜೆಪಿಯ ಮೋಸದ ಜಾಲಕ್ಕೆ ಬಲಿಯಾಗುವುದಿಲ್ಲ. ಜನರು ತಮ್ಮ ಮತದಾನದ ಹಕ್ಕನ್ನು ರಕ್ಷಿಸಿಕೊಳ್ಳುತ್ತಾರೆ, ವ್ಯಾಪಾರ–ವಹಿವಾಟುಗಳು ಸಮೃದ್ಧವಾಗಿ ನಡೆಯುವಂತೆ ನೋಡಿಕೊಳ್ಳುತ್ತಾರೆ. ಹೊಣೆಗಾರಿಕೆಯನ್ನು ಜನರು ಬಯಸುತ್ತಾರೆ. ಮತ ಕದಿಯುವವರೇ ನಿಮ್ಮ ಸ್ಥಾನಗಳನ್ನು ಖಾಲಿ ಮಾಡಿ ಎಂದಿದ್ದಾರೆ.

ಅಗತ್ಯಬಿದ್ದರೆ ವಿಮಾನ ಟಿಕೆಟ್ ಬೆಲೆ ನಿಯಂತ್ರಿಸಲು ಕೇಂದ್ರಕ್ಕೆ ಅಧಿಕಾರ

ನವದೆಹಲಿ, ನ.2: ಜಾಗತಿಕ ಮಾರುಕಟ್ಟೆಯಲ್ಲಿ ಕಚ್ಚಾ ತೈಲ ಹಾಗೂ ವಿಮಾನಯಾನ ಇಂಧನ (ಎಟಿಎಫ್) ಬೆಲೆ ನಿರಂತರವಾಗಿ ಏರಿಕೆಯಾಗುತ್ತಿರುವ ಬೆನ್ನಲ್ಲೇ, ವಿಮಾನ ಟಿಕೆಟ್‌ಗಳ ಗಗನಚುಂಬಿ ದರ ನಿಯಂತ್ರಣಕ್ಕೆ ಕೇಂದ್ರ ಸರ್ಕಾರ ಪ್ರಮುಖ ಹೆಜ್ಜೆ ಇಟ್ಟಿದೆ. ಅಸಾಧಾರಣ ಸಂದರ್ಭಗಳಲ್ಲಿ ಹಾಗೂ ಸಾರ್ವಜನಿಕ ಹಿತಾಸಕ್ತಿಯನ್ನು ಕಾಯುವ ಉದ್ದೇಶದಿಂದ ವಿಮಾನ ಟಿಕೆಟ್ ದರಗಳಲ್ಲಿ ನೇರವಾಗಿ ಹಸ್ತಕ್ಷೇಪ ಮಾಡಲು ಸರ್ಕಾರಕ್ಕೆ ಅಧಿಕಾರ ನೀಡುವ ಹೊಸ ನಿಯಮಗಳನ್ನು ಕೇಂದ್ರ ನಾಗರಿಕ ವಿಮಾನಯಾನ ಸಚಿವಾಲಯ ಅಧಿಸೂಚಿಸಿದೆ. ಕೇಂದ್ರ ಸಿವಿಲ್ ವಿಮಾನಯಾನ ಸಚಿವಾಲಯವು ಭಾರತೀಯ ವಾಯುಯಾನ ನಿಯಮಗಳು, 2026 ಅನ್ನು ಹೊರಡಿಸಿದ್ದು, ಇದರಡಿ ಸರ್ಕಾರವು ತುರ್ತು ಅಥವಾ ಅಸಾಧಾರಣ ಪರಿಸ್ಥಿತಿ ಉದ್ಭವಿಸಿದಾಗ ವಿಮಾನಯಾನ ಸಂಸ್ಥೆಗಳಿಗೆ ದರಕ್ಕೆ ಸಂಬಂಧಿಸಿದಂತೆ ಲಿಖಿತ ನಿರ್ದೇಶನ ನೀಡಬಹುದು. ಆದರೆ ಈ ರೀತಿಯ ಸರ್ಕಾರದ ನಿರ್ದೇಶನಗಳು ಪರಿಸ್ಥಿತಿಗೆ ತಕ್ಕಂತೆ ಪ್ರಮಾಣಾನುಗುಣ ವಾಗಿರಬೇಕು ಹಾಗೂ ನಿರ್ದಿಷ್ಟ ಅವಧಿಗೆ ಮಾತ್ರ ಜಾರಿಯಲ್ಲಿರುತ್ತವೆ ಎಂದು ಸ್ಪಷ್ಟಪಡಿಸಲಾಗಿದೆ. ಹೊಸ ನಿಯಮಗಳ ಪೈಕಿ ನಿಯಮ 192 ಅತ್ಯಂತ ಪ್ರಮುಖವಾಗಿದ್ದು, ಇದರ ಪ್ರಕಾರ ನಿಯಮಿತ ವಿಮಾನ ಸೇವೆ ಒದಗಿಸುವ ಸಂಸ್ಥೆಗಳು ತಮ್ಮ ನಿರ್ವಹಣಾ ವೆಚ್ಚ ಸೇರಿದಂತೆ ವಿವಿಧ ಅಂಶಗಳನ್ನು ಆಧರಿಸಿ ಟಿಕೆಟ್ ದರವನ್ನು ನಿರ್ಧರಿಸಬೇಕಾಗುತ್ತದೆ. ಜೊತೆಗೆ ಈ ದರದ ಸಂಪೂರ್ಣ ವಿವರಗಳನ್ನು ನಾಗರಿಕ ವಿಮಾನಯಾನ ಮಹಾನಿರ್ದೇಶನಾಲಯಕ್ಕೆ (ಡಿಜಿಸಿಎ) ಸಲ್ಲಿಸುವುದು ಕಡ್ಡಾಯವಾಗಿದೆ. ವಿಮಾನಯಾನ ಸಂಸ್ಥೆಗಳು ಪ್ರಯಾಣಿಕರಿಗೆ ದರದ ವಿಷಯದಲ್ಲಿ ಸಂಪೂರ್ಣ ಪಾರದರ್ಶಕತೆ ಕಾಯ್ದುಕೊಳ್ಳಲು ಕೆಲ ನಿಯಮಗಳನ್ನು ಕಡ್ಡಾಯಗೊಳಿಸಲಾಗಿದೆ. ವಿಮಾನಯಾನ ಸಂಸ್ಥೆಗಳು ತಮ್ಮ ಅಧಿಕೃತ ವೆಬ್‌ಸೈಟ್‌ಗಳು ಹಾಗೂ ಡಿಜಿಟಲ್ ವೇದಿಕೆಗಳಲ್ಲಿ ಟಿಕೆಟ್ ದರಗಳನ್ನು ಕಡ್ಡಾಯವಾಗಿ ಪ್ರಕಟಿಸಬೇಕು. ಡಿಜಿಸಿಎ ಈ ದರಗಳನ್ನು ನಿರಂತರವಾಗಿ ಮೇಲ್ವಿಚಾರಣೆ ಮಾಡಲಿದೆ. ಬುಕಿಂಗ್ ಪ್ರಕ್ರಿಯೆಯ ಸಮಯದಲ್ಲಿ ಮತ್ತು ಟಿಕೆಟ್ನಲ್ಲಿ ಪ್ರಯಾಣಿಕರು ಪಾವತಿಸಬೇಕಾದ ಒಟ್ಟು ಮೊತ್ತವನ್ನು ಸ್ಪಷ್ಟವಾಗಿ ತೋರಿಸಬೇಕು. ಮೂಲ ದರ, ಸರ್ಕಾರಕ್ಕೆ ಪಾವತಿಸಬೇಕಾದ ತೆರಿಗೆಗಳು, ವಿಮಾನ ಸಂಸ್ಥೆಗಳು ಸೇವೆಗಾಗಿ ವಿಧಿಸುವ ಶುಲ್ಕಗಳು, ಕ್ಯಾನ್ಸಲೇಶನ್ ಚಾರ್ಜಸ್, ರೀಫಂಡ್ ನಿಯಮ ಹಾಗೂ ಇತರ ಶುಲ್ಕಗಳ ವಿವರವಾದ ಮಾಹಿತಿಯನ್ನು ಪ್ರತ್ಯೇಕವಾಗಿ ನೀಡಬೇಕಾಗುತ್ತದೆ. ತೆರಿಗೆಗಳು (ಸರ್ಕಾರಕ್ಕೆ ಸೇರುವುದು) ಮತ್ತು ಶುಲ್ಕಗಳ (ಸಂಸ್ಥೆಯ ಸೇವೆಗೆ ಸಂಬಂಧಿಸಿದ್ದು) ನಡುವಿನ ವ್ಯತ್ಯಾಸವನ್ನು ಸ್ಪಷ್ಟವಾಗಿ ನಮೂದಿಸುವುದನ್ನು ಕಡ್ಡಾಯಗೊಳಿಸಲಾಗಿದೆ.



ಭಾರತದಲ್ಲಿ 1994ರಲ್ಲೇ ವಿಮಾನ ಟಿಕೆಟ್ ದರ ನಿಯಂತ್ರಣ ಮುಕ್ತಗೊಳಿಸಲಾಗಿತ್ತು. ಮಾರುಕಟ್ಟೆಯ ಬೇಡಿಕೆ, ನಿರ್ವಹಣಾ ವೆಚ್ಚ ಹಾಗೂ ಬುಕಿಂಗ್ ಮಾಡುವ ಸಮಯವನ್ನು ಆಧರಿಸಿ ವಿಮಾನಯಾನ ಸಂಸ್ಥೆಗಳು ದರ ನಿಗದಿಪಡಿಸಲು ಅವಕಾಶ ನೀಡಲಾಗಿತ್ತು. ಈ ಹಿಂದೆ ಜಾರಿಯಲ್ಲಿದ್ದ ಏರ್‌ಕ್ರಾಫ್ಟ್ ರೂಲ್ಸ್, 1937ರ ನಿಯಮ 135(4)ರ ಅಡಿಯಲ್ಲಿ ಅತ್ಯಧಿಕ ದರ ವಸೂಲಿ, ಮಾರುಕಟ್ಟೆಯಲ್ಲಿ ಏಕಸ್ವಾಮ್ಯ/ಒಕ್ಕೂಟ ರಚನೆ ಕಂಡುಬಂದರೆ ಕ್ರಮ ಕೈಗೊಳ್ಳಲು ಡಿಜಿಸಿಎಗೆ ಅಧಿಕಾರವಿತ್ತು.

ಆದರೆ, ನೂತನ ನಿಯಮ 192ರಲ್ಲಿ ಈ ನಿರ್ದಿಷ್ಟ ಪದಗಳನ್ನು ಉಲ್ಲೇಖಿಸಿಲ್ಲವಾದರೂ, ಅಸಾಧಾರಣ ಪರಿಸ್ಥಿತಿಗಳಲ್ಲಿ ಸಾರ್ವಜನಿಕ ಹಿತಾಸಕ್ತಿ ಕಾಯಲು ದರಗಳ ಮೇಲೆ ಸಂಪೂರ್ಣ ನಿಯಂತ್ರಣ ಅಥವಾ ಹಸ್ತಕ್ಷೇಪ ಮಾಡುವ ವ್ಯಾಪಕ ಅಧಿಕಾರವನ್ನು ಕೇಂದ್ರ ಸರ್ಕಾರ ತನ್ನ ಬಳಿ ಉಳಿಸಿಕೊಂಡಿದೆ. ಇದು ಪ್ರಯಾಣಿಕರಿಗೆ ಅತಿಯಾದ ದರ ಏರಿಕೆಯಿಂದ ರಕ್ಷಣೆ ನೀಡಲಿದೆ ಎಂದು ನಿರೀಕ್ಷಿಸಲಾಗಿದೆ.

ಸಮಾಜಸೇವೆ, ಧಾರ್ಮಿಕ, ಸಾಂಸ್ಕೃತಿಕ ಕಾಳಜಿಯ ಅಪೂರ್ವ ಸಾಧಕ ಸಿ.ಎ.ಶ್ರೀನಿವಾಸ ಪಿ.ಸಫಲ್ಯ ಅವರಿಗೆ ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿಯ ಗರಿ

ಮುಂಬಯಿ: ಕರ್ನಾಟಕದ 71ನೇ ಕನ್ನಡ ರಾಜ್ಯೋತ್ಸವದ ಶುಭಾವಸರದಿ ಸಾಫಲ್ಯ ಸೇವಾ ಸಂಘ ಮುಂಬಯಿ ಮತ್ತು ಶ್ರೀನಿವಾಸ್ ವೆಲ್ಫೇರ್ ಫೌಂಡೇಶನ್ ಇದರ ಅಧ್ಯಕ್ಷ ಸಿಎ। ಶ್ರೀನಿವಾಸ ಪದ್ಮನಾಭ ಸಫಲ್ಯ ಇವರ ಅನುಪಮ ಸಮಾಜ ಸೇವೆಗಾಗಿ ಪ್ರತಿಷ್ಠಿತ ದಕ್ಷಿಣ ಕನ್ನಡ ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿ–2026 ಪ್ರಾಪ್ತಿಸಿದೆ.

ದಕ್ಷಿಣ ಕನ್ನಡ ಜಿಲ್ಲಾಡಳಿತವು ಕಳೆದ (ಭಾನುವಾರ) ಮಂಗಳೂರುನ ನೆಹರೂ ಮೈದಾನದಲ್ಲಿ ಜಿಲ್ಲಾ ರಾಜ್ಯೋತ್ಸವ ಆಯೋಜಿಸಿದ್ದ ಭವ್ಯ ಸಮಾರಂಭದಲ್ಲಿ ಕರ್ನಾಟಕ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ, ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ಹಜ್ ಮತ್ತು ವಕ್ಫ್ ಇಲಾಖೆಗಳ ಸಚಿವ, ದಕ್ಷಿಣ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವ (ಕರ್ನಾಟಕ ಮಾಜಿ ವಿಧಾನಸಭಾಧ್ಯಕ್ಷ) ಯು.ಟಿ ಖಾದರ್ ಫರೀದ್ ಮತ್ತು ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ, ಶಾಸಕ ಡಿ.ವೇದವ್ಯಾಸ್ ಕಾಮತ್ ಅವರು ಸಿಎ. ಶ್ರೀನಿವಾಸ ಪಿ. ಸಫಲ್ಯ ಇವರಿಗೆ ಶಾಲು ಹೊದಿಸಿ ಪೇಟ ತೊಡಿಸಿ, ಪ್ರಶಸ್ತಿ ಫಲಕ ಪ್ರದಾನಿಸಿ ಸನ್ಮಾನಿಸಿ ಅಭಿನಂದಿಸಿದರು.

ಕಾರ್ಯಕ್ರಮದಲ್ಲಿ ಕರ್ನಾಟಕ ಗೇರು ಅಭಿವೃದ್ಧಿ ನಿಗಮದ ಅಧ್ಯಕ್ಷೆ ಮಮತಾ ಗಟ್ಟಿ, ಕರ್ನಾಟಕ ರಾಜ್ಯ ಕನಿಷ್ಠ ವೇತನ ಸಲಹಾ ಮಂಡಳಿ ಅಧ್ಯಕ್ಷ ಟಿ.ಎಂ.ಶಾಹಿದ್, ಮಂಗಳೂರು ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಸಂತೋಷ್ ಕುಮಾರ್ ಶೆಟ್ಟಿ, ಗಾಣಿಗ ಅಭಿವೃದ್ಧಿ ನಿಗಮದ ಅಧ್ಯಕ್ಷ ವಿಶ್ವಾಸ್‌ಕುಮಾರ್ ದಾಸ್, ಕರ್ನಾಟಕ ರಾಜ್ಯ ಕೊಂಕಣಿ ಸಾಹಿತ್ಯ ಅಕಾಡೆಮಿ ಅಧ್ಯಕ್ಷ ಜೋಕಿಂ ಸ್ಟಾ ನ್ಲಿ ಅಲ್ವಾರಿಸ್, ದಕ್ಷಿಣ ಕನ್ನಡ ಜಿಲ್ಲಾಧಿಕಾರಿ ದರ್ಶನ್ ಎಚ್.ವಿ. ಹಾಗೂ ಮಂಗಳೂರು ಪೊಲೀಸ್ ಕಮಿಷನರ್ ಸುಧೀರ್ ಕುಮಾರ್ ರೆಡ್ಡಿ ಉಪಸ್ಥಿತರಿದ್ದರು. ಪೊಲೀಸ್ ಪಡೆ, ಎನ್‌ಸಿಸಿ ಕೆಡೆಟ್‌ಗಳು ಹಾಗೂ ವಿವಿಧ ಶಿಕ್ಷಣ ಸಂಸ್ಥೆಗಳ ವಿದ್ಯಾರ್ಥಿಗಳು ಆಕರ್ಷಕ ಪಥಸಂಚಲನ (ಮಾರ್ಚ್‌ಪಾಸ್ಟ್) ನಡೆಸಿದರು.




ಸಿಎ ಶ್ರೀನಿವಾಸ ಪದ್ಮನಾಭ ಸಫಲ್ಯ: ಕರ್ನಾಟಕ ಕರಾವಳಿಯ ದಕ್ಷಿಣ ಕನ್ನಡ ಜಿಲ್ಲೆಯ ಬಂಟ್ವಾಳ ತಾಲೂಕು ರಾಯಿ ಪರಿಸರದ ಶ್ರೀನಿವಾಸ್ ಸಫಲ್ಯ ಅವರು ಬಾಲ್ಯದಲ್ಲಿಯೇ ಸವಾಲುಗಳನ್ನು ಎದುರಿಸುತ್ತಾ, ಶಿಕ್ಷಣ ಹಾಗೂ ಜೀವನದಲ್ಲಿ ಸಾಧನೆಯ ಹಾದಿಯನ್ನು ಶ್ರಮಿಸಿದವರು. ರಾಯಿ ಪ್ರಾಥಮಿಕ ಶಾಲೆಯಲ್ಲಿ ಐದನೇ ತರಗತಿಯವರೆಗೆ ಹಾಗೂ ಕೊಯಿಲ ಪ್ರೌಢಶಾಲೆಯಲ್ಲಿ ಏಳನೇ ತರಗತಿಯವರೆಗೆ ಶಿಕ್ಷಣ ಪಡೆದ ಅವರು, ಉದ್ಯೋಗದ ಅನ್ವೇಷಣೆಯಲ್ಲಿ ಮುಂಬಯಿ ಮಹಾನಗರಕ್ಕೆ ಆಗಮಿಸಿದರು. ಉದ್ಯೋಗದ ಜೊತೆಗೆ ಶಿಕ್ಷಣವನ್ನೂ ಮುಂದುವರಿಸಬೇಕೆಂಬ ಛಲ ಹೊಂದಿದ್ದ ಅವರು ಹಗಲಿನಲ್ಲಿ ಕೆಲಸ ಮಾಡುತ್ತಾ ರಾತ್ರಿ ಶಾಲೆಯಲ್ಲಿ ವಿದ್ಯಾಭ್ಯಾಸ ಮುಂದುವರಿಸಿದರು. ಮುಂಬಯಿನ ಕೆನರಾ ವಿದ್ಯಾದಾಯಿನಿ ರಾತ್ರಿ ಶಾಲೆಯಲ್ಲಿ ಹತ್ತನೇ ತರಗತಿ ಹಾಗೂ ಕನ್ನಡ ಭವನ ಜೂನಿಯರ್ ಕಾಲೇಜಿನಲ್ಲಿ ದ್ವಿತೀಯ ಪಿಯುಸಿ ಶಿಕ್ಷಣ ಪೂರೈಸಿ, ಬಳಿಕ ಮುಂಬಯಿನ ಪ್ರತಿಷ್ಠಿತ ಸೇಂಟ್ ಕ್ಸೇವಿಯರ್ ಕಾಲೇಜ್‌ನಲ್ಲಿ ವಾಣಿಜ್ಯ ಪದವಿ ಪಡೆದು, ಹೈದರಾಬಾದ್‌ನ ಇಂಡಿಯನ್ ಸ್ಕೂಲ್ ಆಫ್ ಬ್ಯುಸಿನೆಸ್ (ಐಎಸ್‌ಬಿ) ಸಂಸ್ಥೆಯಲ್ಲಿ ಎಂಬಿಎ ಪದವಿಯನ್ನೂ ಗಳಿಸಿ, ಚಾರ್ಟರ್ಡ್ ಅಕೌಂಟೆಂಟ್ ಆಗಿಯೂ ಅರ್ಹತೆ ಪಡೆದಿದ್ದಾರೆ. ಅವರ ಈ ಶೈಕ್ಷಣಿಕ ಪಯಣ ಪರಿಶ್ರಮ, ಆತ್ಮವಿಶ್ವಾಸ ಹಾಗೂ ಸಾಧಿಸುವ ಛಲಕ್ಕೆ ಸಾಕ್ಷಿಯಾಗಿದೆ.

ಸುಮಾರು ಮೂರು ದಶಕಗಳಿಂದ ಸಮಾಜಸೇವೆಯಲ್ಲಿ ತಮ್ಮನ್ನು ತೊಡಗಿಸಿಕೊಂಡಿರುವ ಶ್ರೀನಿವಾಸ ಸಫಲ್ಯ ಅವರು ಸಂಘಟನಾ ಚಾತುರ್ಯ, ನಾಯಕತ್ವ ಹಾಗೂ ಸಮಾಜದ ಏಳಿಗೆಯ ಬಗೆಗಿನ ಕಾಳಜಿಯಿಂದ ಗುರುತಿಸಿಕೊಂಡಿದ್ದಾರೆ. ಮುಂಬಯಿನ 86 ವರ್ಷಗಳ ಇತಿಹಾಸ ಹೊಂದಿರುವ ಸಾಫಲ್ಯ ಸೇವಾ ಸಂಘದಲ್ಲಿ ವಿವಿಧ ಹುದ್ದೆಗಳನ್ನಲಂಕರಿಸಿ ಪ್ರಸ್ತುತ ಒಂಬತ್ತು ವರ್ಷಗಳ ಕಾಲ ಅಧ್ಯಕ್ಷರಾಗಿದ್ದಾರೆ. ಸಾಫಲ್ಯ ಸಮುದಾಯಕ್ಕೆ ಮಹಾರಾಷ್ಟ್ರ ದಲ್ಲಿ ಇತರ ಹಿಂದುಳಿದ ವರ್ಗಗಳ (ಒಬಿಸಿ) ಮಾನ್ಯತೆ ದೊರಕಿಸುವ ಪ್ರಯತ್ನಗಳಲ್ಲಿಯೂ ಮಹತ್ವದ ಪಾತ್ರ ವಹಿಸಿದ್ದಾರೆ. ಶನಿ ಮಹಾತ್ಮ ಚಾರಿಟೇಬಲ್ ಸೊಸೈಟಿ ಮಲಾಡ್, ತುಳು ಸಂಘ ಬೋರಿವಲಿ, ಕರ್ನಾಟಕ ಸಂಘ ಮುಂಬಯಿ (ಮಾಟುಂಗ), ಗೋರೆಗಾಂವ್ ಕರ್ನಾಟಕ ಸಂಘ ಸೇರಿದಂತೆ ಹಲವಾರು ಸಂಘಸಂಸ್ಥೆಗಳಲ್ಲಿ ಸಕ್ರಿಯರಾಗಿದ್ದು ಕನ್ನಡ–ತುಳು ಭಾಷೆ, ಸಂಸ್ಕೃತಿ ಹಾಗೂ ಸಮುದಾಯದ ಚಟುವಟಿಕೆಗಳಲ್ಲಿ, ಧಾರ್ಮಿಕ ಕ್ಷೇತ್ರದಲ್ಲಿ ಮೂರು ದಶಕಗಳ ಅನುಪಮ ಸೇವೆಯೊಂದಿಗೆ ಸಕ್ರಿಯವಾಗಿ ತೊಡಗಿಸಿ ಕೊಂಡಿದ್ದಾರೆ. ಕಲೆ ಮತ್ತು ಸಾಂಸ್ಕೃತಿಕ ಕ್ಷೇತ್ರದಲ್ಲಿ ಶ್ರೀನಿವಾಸ ಸಾಫಲ್ಯ ಅವರ ಕೊಡುಗೆ ಸ್ಮರಣೀಯವಾಗಿದೆ. ನಾಡಿನ ಕಲೆ, ಸಾಹಿತ್ಯ ಹಾಗೂ ಜಾನಪದ ಪರಂಪರೆಯ ಪ್ರಚಾರ ಮತ್ತು ಪ್ರಸಾರಕ್ಕೆ ಶ್ರಮಿಸಿದ್ದಾರೆ.ಶಿಕ್ಷಣ ಹಾಗೂ ಬಡ ವಿದ್ಯಾರ್ಥಿಗಳ ಬದುಕಿಗೆ ಆಸರೆಯಾಗಿದ್ದು ಸುಮಾರು ಮೂರು ದಶಕಗಳಿಂದ ನಿರಂತರವಾಗಿ ಸೇವೆ ಸಲ್ಲಿಸುತ್ತಿರುವ ಶ್ರೀನಿವಾಸ ಪದ್ಮನಾಭ ಸಾಫಲ್ಯ ಅವರು ಬಹುಮುಖ ವ್ಯಕ್ತಿತ್ವದ ಸಾಧಕರಾಗಿ ಗುರುತಿಸಿಕೊಂಡಿದ್ದಾರೆ.

ಉದ್ಯಮಿ ಸುಭಾಷ್‌ಚಂದ್ರ ವಿರುದ್ಧ ಇ.ಡಿ ಪ್ರಕರಣ ದಾಖಲು

ನವದೆಹಲಿ,ನ.2: ಎಲ್‌ಐಸಿ ಹೌಸಿಂಗ್ ಫೈನಾನ್ಸ್ ಕಂಪನಿಗೆ 1,322 ಕೋಟಿ ರೂ. ನಷ್ಟ ಉಂಟುಮಾಡಿದ ಆರೋಪದ ಮೇಲೆ ಮಾಧ್ಯಮ ಉದ್ಯಮಿ ಸುಭಾಷ್‌ಚಂದ್ರ ಅವರ ವಿರುದ್ಧ ಜಾರಿ ನಿರ್ದೇಶನಾಲಯ (ಇ.ಡಿ) ಅಕ್ರಮ ಹಣ ವರ್ಗಾವಣೆ ಪ್ರಕರಣವನ್ನು ದಾಖಲಿಸಿದೆ.



ಸಾಲ ಪಡೆಯುವ ಉದ್ದೇಶದಿಂದ ಸುಭಾಷ್‌ಚಂದ್ರ ಅವರು ತಮ್ಮ ಆಸ್ತಿಯ ನಿವ್ವಳ ಮೌಲ್ಯವನ್ನು ನಕಲಿಯಾಗಿ ಹೆಚ್ಚಿಸಿ ತೋರಿಸಿ ಎಲ್‌ಐಸಿಎಚ್‌ಎಫ್‌ಎಲ್‌ನಿಂದ 980 ಕೋಟಿ ರೂ. ಸಾಲ ಪಡೆದು, ಮರುಪಾವತಿಸದೆ ವಂಚಿಸಿದ್ದಾರೆ ಎಂಬ ಸಿಬಿಐ ಎಫ್‌ಐಆರ್ ಆಧರಿಸಿ ಅಕ್ರಮ ಹಣ ವರ್ಗಾವಣೆ ತಡೆ ಕಾಯ್ದೆಯಡಿ ಈ ಪ್ರಕರಣ ದಾಖಲಿಸಿಕೊಳ್ಳಲಾಗಿದೆ. ಸುಭಾಷ್ ಚಂದ್ರ ಅವರಿಗೆ ಸೇರಿದ ಕಂಪನಿಗಳಿಗೆ ಸಾಲ ಮಂಜೂರು ಮಾಡಲು ನಕಲಿ ಆರ್ಥಿಕ ಪ್ರಮಾಣಪತ್ರಗಳನ್ನು ಬಳಸಲಾಗಿದೆ ಎಂದು ಎಲ್‌ಐಸಿಎಚ್‌ಎಫ್‌ಎಲ್ ದೂರಿದೆ.

ದೂರಿನ ಪ್ರಕಾರ, ವಸಂತ್ ಸಾಗರ್ ಪ್ರಾಪರ್ಟೀಸ್ ಪ್ರೈವೇಟ್ ಲಿಮಿಟೆಡ್ ಕಂಪನಿಗೆ 500 ಕೋಟಿ ರೂ. ಹಾಗೂ ಡಿಜಿಟಲ್ ಸಬ್ಸ್ಕ್ರೈಬರ್ ಮ್ಯಾನೇಜ್ಮೆಂಟ್ ಅಂಡ್ ಕನ್ಸಲ್ಟೆನ್ಸಿ ಸರ್ವೀಸಸ್ ಪ್ರೈವೇಟ್ ಕಂಪನಿಗೆ 480 ಕೋಟಿ ರೂ. ಸಾಲ ನೀಡಲಾಗಿತ್ತು.

ಸಾಲ ಮಂಜೂರಾತಿಗಾಗಿ ಮಾರ್ಚ್ 2018ರಲ್ಲಿ ಡಿಜೆಎಂ ಅಂಡ್ ಕಂ ಮೂಲಕ 59,000 ಕೋಟಿ ರೂ. ಹಾಗೂ ಜುಲೈ 2018ರಲ್ಲಿ ಎಂಪಿಜೆ ಅಂಡ್ ಕಂ ಮೂಲಕ 40,562 ಕೋಟಿ ರೂ. ನಿವ್ವಳ ಮೌಲ್ಯ ಹೊಂದಿರುವ ಬಗ್ಗೆ ಸುಭಾಷ್ ಚಂದ್ರ ಪ್ರಮಾಣಪತ್ರಗಳನ್ನು ಸಲ್ಲಿಸಿದ್ದರು. ತರುವಾಯ ಈ ಎರಡೂ ಸಾಲಗಳು ಅನುತ್ಪಾದಕ ಆಸ್ತಿಯಾಗಿ ಮಾರ್ಪಟ್ಟಿದ್ದು, ಸಾಲದಾತ ಸಂಸ್ಥೆಗೆ ಒಟ್ಟು 1,322 ಕೋಟಿ ರೂ. ನಷ್ಟವಾಗಿದೆ.

ದಿವಾಳಿತನ ಕಾಯ್ದೆ ಅಡಿ 2024ರಲ್ಲಿ ನಡೆದ ವಿಚಾರಣೆ ವೇಳೆ ಸುಭಾಷ್‌ಚಂದ್ರ, ಪ್ರಸ್ತುತ ತಮ್ಮ ನಿವ್ವಳ ಮೌಲ್ಯ ಕೇವಲ 31.79 ಕೋಟಿ ರೂ. ಇದೆ ಮತ್ತು 2017–18ರ ಅವಧಿಯಲ್ಲಿ ಅದು 40,000 ಕೋಟಿ ರೂ.ಗಿಂತ ಹೆಚ್ಚಿರಲಿಲ್ಲ ಎಂದು ಹೇಳಿಕೆ ನೀಡಿದ್ದರು. ಸಾಲ ಪಡೆಯುವಾಗ ನೀಡಿದ್ದ ದಾಖಲೆಗೂ, ಈ ಹೇಳಿಕೆಗೂ ಇರುವ ಬೃಹತ್ ವ್ಯತ್ಯಾಸವನ್ನು ಸಿಬಿಐ ತನ್ನ ಎಫ್‌ಐಆರ್‌ನಲ್ಲಿ ಉಲ್ಲೇಖಿಸಿದೆ.

ಸಾಲ ಪಡೆದ ಕಂಪನಿಗಳು ಹಾಗೂ ಅದರ ನಿರ್ದೇಶಕರ ಜೊತೆ ಶಾಮೀಲಾಗಿ ನಕಲಿ ದಾಖಲೆಗಳನ್ನು ಸೃಷ್ಟಿಸಿ ಸಾಲದ ಹಣವನ್ನು ದುರ್ಬಳಕೆ ಮಾಡಿಕೊಳ್ಳಲಾಗಿದೆ ಎಂಬುದು ಪ್ರಮುಖ ಆರೋಪ. 22,006 ಕೋಟಿ ರೂ.ಗಳ ಒಟ್ಟು ಕ್ಲೈಮ್‌ಗಳ ವಿರುದ್ಧ ಸುಭಾಷ್‌ಚಂದ್ರ ಅವರ ವೈಯಕ್ತಿಕ ಆಸ್ತಿಯಿಂದ ಕೇವಲ 6.5 ಕೋಟಿ ರೂ.ಗಳನ್ನು ಮಾತ್ರ ಸಾಲಗಾರರಿಗೆ ಮರುಪಡೆಯಲು ಅವಕಾಶ ನೀಡಿದ್ದ ರಾಷ್ಟ್ರೀಯ ಕಂಪನಿ ಕಾನೂನು ನ್ಯಾಯಾಧೀಕರಣದ ಆದೇಶವನ್ನು ಎಲ್‌ಐಸಿಎಚ್‌ಎಫ್‌ಎಲ್ ಇತ್ತೀಚೆಗಷ್ಟೇ ಮೇಲ್ಮನವಿ ನ್ಯಾಯಾಧೀಕರಣದಲ್ಲಿ ಪ್ರಶ್ನಿಸಿತ್ತು.

ಕನ್ವರ್ ವಿಜಯ್ ಎಎಪಿಗೆ ರಾಜೀನಾಮೆ

ನವದೆಹಲಿ, ನ.2: ಪಂಜಾಬ್ ರಾಜಕಾರಣದಲ್ಲಿ ಭಾರಿ ಸಂಚಲನ ಮೂಡಿಸಿರುವ ಪ್ರಮುಖ ಬೆಳವಣಿಗೆಯೊಂದರಲ್ಲಿ, ಅಮೃತಸರ ಉತ್ತರ ಕ್ಷೇತ್ರದ ಆಮ್ ಆದ್ಮಿ ಪಾರ್ಟಿ ಶಾಸಕ ಹಾಗೂ ಮಾಜಿ ಐಪಿಎಸ್ ಅಧಿಕಾರಿ ಕನ್ವರ್ ವಿಜಯ್ ಪ್ರತಾಪ್ ಸಿಂಗ್ ತಮ್ಮ ಶಾಸಕ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ.

ಅಸೆಂಬ್ಲಿ ಸ್ಪೀಕರ್ ಕುಲ್ತಾರ್ ಸಿಂಗ್ ಸಂಧ್ವಾನ್ ಅವರಿಗೆ ಸೋಮವಾರ ಬೆಳಿಗ್ಗೆ ರಾಜೀನಾಮೆ ಪತ್ರ ರವಾನಿಸಿರುವ ಅವರು, ನವೆಂಬರ್ 1, ರಿಂದಲೇ ಜಾರಿಗೆ ಬರುವಂತೆ ಶಾಸಕ ಸ್ಥಾನವನ್ನು ತೊರೆಯುತ್ತಿರುವುದಾಗಿ ತಿಳಿಸಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲೂ ಮಾಹಿತಿ ಹಂಚಿಕೊಂಡಿರುವ ಅವರು, ತಮ್ಮ ರಾಜೀನಾಮೆ ಪತ್ರವನ್ನು ಸಾರ್ವಜನಿಕವಾಗಿ ಪ್ರಕಟಿಸಿದ್ದಾರೆ.

ಸಮಾನಾ ಕ್ಷೇತ್ರದ ಶಾಸಕ ಚೇತನ್ ಸಿಂಗ್ ಜೌರಮಾಜ್ರಾ ಹಾಗೂ ಸನೌರ್ ಕ್ಷೇತ್ರದ ಶಾಸಕ ಹರ್ಮೀತ್ ಸಿಂಗ್ ಪಠಾನ್ಮಾಜ್ರಾ ಅವರು ಪಕ್ಷದ ಪ್ರಾಥಮಿಕ ಸದಸ್ಯತ್ವಕ್ಕೆ ರಾಜೀನಾಮೆ ನೀಡಿದ 24 ಗಂಟೆಗಳ ಒಳಗಾಗಿ ಕನ್ವರ್ ವಿಜಯ್ ಪ್ರತಾಪ್ ಸಿಂಗ್ ಕೂಡ ಶಾಸಕ ಸ್ಥಾನ ತೊರೆದಿದ್ದು, ಆಪ್‌ಗೆ ಸರಣಿ ಆಘಾತ ಎದುರಾಗಿದೆ. ಈ ಮೂವರೂ ನಾಯಕರು ಬಿಜೆಪಿ ಸೇರ್ಪಡೆಯಾಗುವ ಸಾಧ್ಯತೆಯಿದೆ. 2022ರ ವಿಧಾನಸಭಾ ಚುನಾವಣೆಯಲ್ಲಿ ಗೆದ್ದು ಎಎಪಿ ಪ್ರಮುಖ ನಾಯಕರಾಗಿ ಹೊರಹೊಮ್ಮಿದ್ದ ಕನ್ವರ್ ವಿಜಯ್ ಪ್ರತಾಪ್ ಸಿಂಗ್, ಕಾಲಕ್ರಮೇಣ ಸರ್ಕಾರ ಮತ್ತು ಪಕ್ಷದ ನಿರ್ಧಾರಗಳ ವಿರುದ್ಧ ಬಹಿರಂಗವಾಗಿ ಧ್ವನಿ ಎತ್ತತೊಡಗಿದ್ದರು. ಮುಖ್ಯವಾಗಿ 2015ರ ಬರ್ಗಾರಿ ಧರ್ಮಗ್ರಂಥಗಳ ಅವಮಾನ ಹಾಗೂ ಪೊಲೀಸ್ ಗುಂಡಿನ ಚಕಮಕಿ ಪ್ರಕರಣಗಳ ತನಿಖೆಯಲ್ಲಿ ಸರ್ಕಾರದ ಮಂದಗತಿಯ ನಡೆ ಹಾಗೂ ಕಳೆದ ವರ್ಷ ಅಮೃತಸರದಲ್ಲಿ 20ಕ್ಕೂ ಹೆಚ್ಚು ಜನರ ಬಲಿತೆಗೆದುಕೊಂಡ ಕಳ್ಳಬಟ್ಟಿ ದುರಂತದ ವಿಚಾರದಲ್ಲಿ ಭಗವಂತ್ ಮಾನ್ ಸರ್ಕಾರದ ಕಾರ್ಯವೈಖರಿಯನ್ನು ತೀವ್ರವಾಗಿ ಟೀಕಿಸಿದ್ದರು.

ಜೂನ್ 2025 ರಲ್ಲಿ, ಶಿರೋಮಣಿ ಅಕಾಲಿ ದಳದ ಹಿರಿಯ ನಾಯಕ ಬಿಲ್ವಿಂದರ್ ಸಿಂಗ್ ಮಜಿಥಿಯಾ ವಿರುದ್ಧದ ಅಕ್ರಮ ಆಸ್ತಿ ಗಳಿಕೆ ಪ್ರಕರಣದಲ್ಲಿ ಪಂಜಾಬ್ ವಿಜಿಲೆನ್ಸ್ ಬ್ಯೂರೋ ನಡೆಸಿದ ದಾಳಿಯನ್ನು ಇವರು ಪ್ರಶ್ನಿಸಿದ್ದರು. ದಾಳಿಯ ವಿಡಿಯೋ ಹಂಚಿಕೊಂಡು ಕುಟುಂಬದ ಗೌರವದ ಬಗ್ಗೆ ಕಳವಳ ವ್ಯಕ್ತಪಡಿಸಿದ ಕಾರಣಕ್ಕಾಗಿ ಆಪ್ ಇವರನ್ನು 5 ವರ್ಷಗಳ ಅವಧಿಗೆ ಪಕ್ಷದಿಂದ ಅಮಾನತುಗೊಳಿಸಿತ್ತು.

ಸಿಬಿಐ ತನಿಖೆ ವಿರುದ್ಧ ಬಿಜೆಪಿ ಶಾಸಕಿ ಅತೃಪ್ತಿ

ಕೊಲ್ಕತ್ತಾ, ನ.2: ಆರ್‌ಜಿ ಕರ್ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ದೌರ್ಜನ್ಯ ಹಾಗೂ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಸಿಬಿಐ ನಡೆಸುತ್ತಿರುವ ತನಿಖೆಯ ಪ್ರಗತಿಯ ಕುರಿತು ಸಂತ್ರಸ್ತ ವೈದ್ಯೆಯ ತಾಯಿ ಹಾಗೂ ಬಿಜೆಪಿ ಶಾಸಕಿ ರತ್ನ ದೇಬನಾಥ್ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ವೈದ್ಯಕೀಯ ಕಾಲೇಜುಗಳಲ್ಲಿ ಭ್ರಷ್ಟಾಚಾರ ಮತ್ತು ಅಕ್ರಮಗಳು ಇನ್ನೂ ನಿಂತಿಲ್ಲ ಎಂದು ಗಂಭೀರ ಆರೋಪ ಮಾಡಿದ್ದಾರೆ.



ತಮ್ಮ ಮಗಳಿಗೆ ನ್ಯಾಯ ದೊರಕಿಸಿಕೊಡಲು ಮತ್ತು ರಾಜ್ಯದಲ್ಲಿ ಪರಿವರ್ತನೆ ತರಲು ರಾಜಕೀಯವೇ ಸೂಕ್ತ ಮಾರ್ಗ ಎಂದು ನಿರ್ಧರಿಸಿದ್ದ ರತ್ನ ದೇಬನಾಥ್ ಅವರು ಬಿಜೆಪಿ ಸೇರಿದ್ದರು. 2026ರ ಪಶ್ಚಿಮ ಬಂಗಾಳ ವಿಧಾನಸಭೆ ಚುನಾವಣೆಯಲ್ಲಿ ಬಿಜೆಪಿಯಿಂದ ಸ್ಪರ್ಧಿಸಿ ಪಾನಿಹಾಟಿ ವಿಧಾನಸಭಾ ಕ್ಷೇತ್ರದಿಂದ ಶಾಸಕಿಯಾಗಿ ಆಯ್ಕೆಯಾಗಿದ್ದರು.


ಶಾಸಕಿಯಾದ ನಂತರವೂ ತಮ್ಮ ಮಗಳ ಪ್ರಕರಣದ ತನಿಖೆ ನಿಧಾನಗತಿಯಲ್ಲಿ ಸಾಗುತ್ತಿರುವುದಕ್ಕೆ ರತ್ನ ಅವರು ಬೇಸರ ವ್ಯಕ್ತಪಡಿಸಿದ್ದಾರೆ. ಆಡಳಿತ ಅಥವಾ ಸರ್ಕಾರದಲ್ಲಿ ಬದಲಾವಣೆಗಳಾಗಿದ್ದರೂ, ಅದೇ ಹಳೆಯ ವ್ಯಕ್ತಿಗಳು ಇಂದಿಗೂ ವೈದ್ಯಕೀಯ ವ್ಯವಸ್ಥೆಯಲ್ಲಿ ಮುಂದುವರಿ ದಿದ್ದಾರೆ. ವೈದ್ಯಕೀಯ ಕಾಲೇಜುಗಳಲ್ಲಿ ಭ್ರಷ್ಟಾಚಾರ ಕಡಿಮೆಯಾಗಿಲ್ಲ ಎಂದು ಮಾಧ್ಯಮಗಳೊಂದಿಗೆ ಮಾತನಾಡುತ್ತಾ ರತ್ನ ದೇಬನಾಥ್ ಹೇಳಿದ್ದಾರೆ.ತನಿಖೆಯನ್ನು ಪೂರ್ಣಗೊಳಿಸಲು ಮತ್ತು ತಪ್ಪಿತಸ್ಥರಿಗೆ ಶಿಕ್ಷೆ ಕೊಡಿಸಲು ಸಿಬಿಐಗೆ ಸಾಧ್ಯವಾಗದಿದ್ದರೆ, ಅವರು ತನಿಖೆಯಿಂದ ಪಕ್ಕಕ್ಕೆ ಸರಿಯಲಿ ಎಂಬ ಭಾವನೆಯನ್ನೂ ಈ ಸಂದರ್ಭದಲ್ಲೇ ವ್ಯಕ್ತಪಡಿಸಿದ್ದಾರೆ.ತಮ್ಮ ಮಗಳ ಕೊಲೆ ಪ್ರಕರಣದಲ್ಲಿ ಪೂರ್ಣ ಪ್ರಮಾಣದ ನ್ಯಾಯ ದೊರಕಿಸುವ ಕುರಿತು ಮತ್ತು ವೈದ್ಯಕೀಯ ಶಿಕ್ಷಣ, ಆಸ್ಪತ್ರೆಗಳಲ್ಲಿ ನಡೆಯುತ್ತಿರುವ ಭ್ರಷ್ಟಾಚಾರದ ಕುರಿತು ಮುಖ್ಯಮಂತ್ರಿಗಳ ಬಳಿ ನಿಯೋಗದ ಮೂಲಕ ಚರ್ಚಿಸುವುದಾಗಿ ರತ್ನ ದೇಬನಾಥ್ ತಿಳಿಸಿದ್ದಾರೆ.

ಮಹದೇವ್ ಬೆಟ್ಟಿಂಗ್ ಆ್ಯಪ್ ಪ್ರಕರಣ: ಸೌರಭ್ ಚಂದ್ರಾಕರ್ ಹಸ್ತಾಂತರ

ನವದೆಹಲಿ, ನ. 2: ಅಕ್ರಮ ಆನ್ಲೈನ್ ಬೆಟ್ಟಿಂಗ್ ಜಾಲ ನಡೆಸಿದ ಆರೋಪ ಎದುರಿಸುತ್ತಿರುವ ಮಹದೇವ್ ಬೆಟ್ಟಿಂಗ್ ಆ್ಯಪ್‌ನ ಪ್ರಮುಖ ರೂವಾರಿ ಸೌರಭ್ ಚಂದ್ರಾಕರ್‌ನನ್ನು ಒಮಾನ್‌ನಿಂದ ಭಾರತಕ್ಕೆ ಗಡಿಪಾರು ಮಾಡಲಾಗಿದೆ. ಸಿಬಿಐ ವಿಶೇಷ ತಂಡವು ಆತನನ್ನು ಭಾರತಕ್ಕೆ ಕರೆತಂದಿದ್ದು, ಸೋಮವಾರ ರಾಯಪುರದ ವಿಶೇಷ ಸಿಬಿಐ ನ್ಯಾಯಾಲಯದ ಮುಂದೆ ಹಾಜರುಪಡಿಸಲಾಗಿತ್ತು ಎಂದು ತಿಳಿಸಿದೆ.

ವಿದೇಶದಿಂದಲೇ ಅಕ್ರಮ ಆನ್‌ಲೈನ್ ಬೆಟ್ಟಿಂಗ್ ಜಾಲವನ್ನು ನಿರ್ವಹಿಸುತ್ತಿದ್ದ ಹಾಗೂ ಸರ್ಕಾರಿ ಅಧಿಕಾರಿಗಳಿಗೆ ಲಂಚ ನೀಡಿ ತನ್ನ ವ್ಯವಹಾರಕ್ಕೆ ರಕ್ಷಣೆ ಪಡೆಯುತ್ತಿದ್ದ ಆರೋಪವನ್ನು ಚಂದ್ರಾಕರ್ ಎದುರಿಸುತ್ತಿದ್ದಾನೆ. ಸೌರಭ್ ವಿರುದ್ಧ ಸಿಬಿಐ ದಾಖಲಿಸಿರುವ ಎರಡು ಪ್ರಕರಣಗಳಲ್ಲಿ ಈಗಾಗಲೇ ಆರೋಪಪಟ್ಟಿ ಸಲ್ಲಿಸಲಾಗಿದೆ. ಜಾರಿ ನಿರ್ದೇಶನಾಲಯ (ಇ.ಡಿ) ಕೂಡ ಪ್ರತ್ಯೇಕ ಪ್ರಕರಣ ದಾಖಲಿಸಿದ್ದು, ವಿಚಾರಣಾ ಪ್ರಕ್ರಿಯೆಯ ಭಾಗವಾಗಿ ಪ್ರಾಸಿಕ್ಯೂಷನ್ ದೂರನ್ನು ಸಲ್ಲಿಸಿದೆ.

ಒಮಾನ್‌ನ ರಾಯಲ್ ಪೊಲೀಸ್ ಇಲಾಖೆಯು ಇಂಟರ್‌ಪೋಲ್ ಹೊರಡಿಸಿದ್ದ ರೆಡ್ ಕಾರ್ನರ್ ನೋಟಿಸ್ ಆಧರಿಸಿ ಚಂದ್ರಾಕರ್‌ನನ್ನು ಪತ್ತೆಹಚ್ಚಿ ವಶಕ್ಕೆ ಪಡೆದಿತ್ತು. ಬಳಿಕ ಸಿಬಿಐ ಮತ್ತು ಜಾರಿ ನಿರ್ದೇಶನಾಲಯಗಳು ಆತನ ವಿರುದ್ಧ ಸಂಗ್ರಹಿಸಿದ ಸಾಕ್ಷ್ಯಾಧಾರಗಳೊಂದಿಗೆ ಗಡಿಪಾರು ಪ್ರಕ್ರಿಯೆಗೆ ಅಧಿಕೃತ ಮನವಿ ಸಲ್ಲಿಸಿದ್ದವು. ಒಮನ್ ಸರ್ಕಾರ ಗಡಿಪಾರಿಗೆ ಅನುಮತಿ ನೀಡಿದ ಹಿನ್ನೆಲೆಯಲ್ಲಿ ಸಿಬಿಐ ತಂಡ ಮಸ್ಕತ್‌ಗೆ ತೆರಳಿ ಆತನನ್ನು ಭಾರತಕ್ಕೆ ಕರೆತಂದಿದೆ.ಭಾರತಕ್ಕೆ ಕರೆತಂದ ಬಳಿಕ ವೈದ್ಯಕೀಯ ಪರೀಕ್ಷೆ ನಡೆಸಲಾಗುತ್ತದೆ. ನಂತರ ಟ್ರಾನ್ಸಿಟ್ ರಿಮ್ಯಾಂಡ್ ಪಡೆದು ಆತನನ್ನು ರಾಯಪುರಕ್ಕೆ ಕರೆದೊಯ್ಯಲಾಗುತ್ತದೆ ಎಂದು ಸಿಬಿಐ ತಿಳಿಸಿದೆ. ಛತ್ತೀಸ್‌ಗಢ ಸರ್ಕಾರದ ಮನವಿ ಮೇರೆಗೆ ಮಹದೇವ್ ಆನ್‌ಲೈನ್ ಬುಕ್ ಪ್ರಕರಣದ ತನಿಖೆಯನ್ನು ಸಿಬಿಐ ವಹಿಸಿಕೊಂಡಿತ್ತು. ದೇಶದ ಅತಿದೊಡ್ಡ ಅಕ್ರಮ ಆನ್ಲೈನ್ ಬೆಟ್ಟಿಂಗ್ ಜಾಲಗಳಲ್ಲಿ ಇದೂ ಒಂದಾಗಿದೆ ಎಂದು ತನಿಖಾ ಸಂಸ್ಥೆ ಹೇಳಿದೆ.ತನಿಖೆಯ ಪ್ರಕಾರ, ವಿದೇಶದಿಂದ ಕಾರ್ಯನಿರ್ವಹಿಸುತ್ತಿದ್ದ ಈ ಜಾಲವು ವಿವಿಧ ಫ್ರಾಂಚೈಸಿ ಮಾದರಿಯ ಪ್ಯಾನೆಲ್ ಮತ್ತು ಶಾಖೆಗಳ ಮೂಲಕ ಭಾರತದಲ್ಲಿ ಬಳಕೆದಾರರನ್ನು ನೋಂದಾಯಿಸಿಕೊಂಡು ಬೆಟ್ಟಿಂಗ್ ನಡೆಸುತ್ತಿತ್ತು. ಕ್ರಿಕೆಟ್, ಫುಟ್ಬಾಲ್, ಇಸ್ಪೀಟ್ ಸೇರಿದಂತೆ ವಿವಿಧ ಕ್ರೀಡೆಗಳು ಮತ್ತು ಆಟಗಳ ಮೇಲೆ ಹಣ ಪಣಕ್ಕಿಡಲಾಗುತ್ತಿತ್ತು. ಬೆಟ್ಟಿಂಗ್ ಮೂಲಕ ಸಂಗ್ರಹಿಸಿದ ಹಣವನ್ನು ಹಲವು ನಕಲಿ ಅಥವಾ ಇತರರ ಹೆಸರಿನ ಬ್ಯಾಂಕ್ ಖಾತೆಗಳ ಮೂಲಕ ವರ್ಗಾಯಿಸಿ, ಅನೇಕ ಹಂತಗಳಲ್ಲಿ ವಹಿವಾಟು ನಡೆಸಲಾಗುತ್ತಿತ್ತು. ಬಳಿಕ ಹವಾಲಾ ಮಾರ್ಗದ ಮೂಲಕ ವಿದೇಶಗಳಿಗೆ ಹಣ ರವಾನಿಸಲಾಗುತ್ತಿತ್ತು ಎಂಬುದು ತನಿಖಾಧಿಕಾರಿಗಳು ತಿಳಿಸಿದ್ದಾರೆ.



ಈ ಅಕ್ರಮ ಜಾಲವು ಯಾವುದೇ ಅಡ್ಡಿಯಿಲ್ಲದೆ ಕಾರ್ಯನಿರ್ವಹಿಸಲು ಕೆಲವು ಸರ್ಕಾರಿ ಅಧಿಕಾರಿಗಳಿಗೆ ಹಣ ಪಾವತಿಸಲಾಗುತ್ತಿತ್ತು ಎಂಬ ಆರೋಪವೂ ಇದೆ. ಭ್ರಷ್ಟಾಚಾರ ತಡೆ ಕಾಯ್ದೆ, ಭಾರತೀಯ ದಂಡ ಸಂಹಿತೆಯ ಕ್ರಿಮಿನಲ್ ಪಿತೂರಿ, ವಂಚನೆ ಮತ್ತು ನಕಲಿ ದಾಖಲೆ ಸೃಷ್ಟಿಗೆ ಸಂಬಂಧಿಸಿದ ಸೆಕ್ಷನ್ ಹಾಗೂ ಛತ್ತೀಸ್‌ಗಢ ಜೂಜಾಟ ನಿಷೇಧ ಕಾಯ್ದೆಯಡಿ ಸಲ್ಲಿಸಲಾದ ಆರೋಪಪಟ್ಟಿಗಳಲ್ಲಿ ಚಂದ್ರಾಕರ್ ಪ್ರಮುಖ ಆರೋಪಿಯಾಗಿದ್ದಾನೆ. ಪ್ರಕರಣದ ತನಿಖೆಯ ಭಾಗವಾಗಿ ಭಾರತ ಮತ್ತು ವಿದೇಶಗಳಲ್ಲಿರುವ ಆತನಿಗೆ ಸಂಬಂಧಿಸಿದ ಆಸ್ತಿಗಳನ್ನು ಜಾರಿ ನಿರ್ದೇಶನಾಲಯ ಜಪ್ತಿ ಮಾಡಿದೆ.ಸೌರಭ್ ಚಂದ್ರಾಕರ್‌ನ ಗಡಿಪಾರು ಪ್ರಕ್ರಿಯೆಯನ್ನು ಸಿಬಿಐ, ಇತರ ಕೇಂದ್ರ ತನಿಖಾ ಸಂಸ್ಥೆಗಳು ಹಾಗೂ ಇಂಟರ್‌ಪೋಲ್‌ನ ರಾಷ್ಟ್ರೀಯ ಕೇಂದ್ರ ಘಟಕದ ಸಮನ್ವಯದೊಂದಿಗೆ ಕೈಗೊಂಡಿತ್ತು. ಈ ಕಾರ್ಯಾಚರಣೆಗೆ ಒಮಾನ್ ಅಧಿಕಾರಿಗಳೂ ಸಹಕರಿಸಿದ್ದಾರೆ ಎಂದು ಸಿಬಿಐ ತಿಳಿಸಿದೆ. ಸೌರಭ್ ಚಂದ್ರಾಕರ್ ಮತ್ತು ಆತನ ಸಹಚರ ಉಪ್ಪಲ್ ಭಿಲಾಯ್ನಿಂದ ಹಿಡಿದು ದುಬೈನಿಂದ ಕಾರ್ಯಾಚರಣೆ ನಡೆಸುವವರೆಗೆ ಬೆಳೆದಿದ್ದ ಈ ಜಾಲವು ಅಂದಾಜು 7,000 ರಿಂದ 8,000 ಕೋಟಿ ಮೌಲ್ಯದ ಅಕ್ರಮ ಹಣಕಾಸು ವ್ಯವಹಾರ ನಡೆಸಿದೆ ಎಂದು ಅಂದಾಜಿಸಲಾಗಿದೆ. ಚಂದ್ರಾಕರ್ 2023ರಲ್ಲಿ ಯುಎಇನಲ್ಲಿ ನಡೆಸಿದ 200 ಕೋಟಿ ವೆಚ್ಚದ ವೈಭವೋಪೇತ ಮದುವೆ ಕಾರ್ಯಕ್ರಮವು ತನಿಖಾ ಸಂಸ್ಥೆಗಳ ಗಮನ ಸೆಳೆದಿತ್ತು. ಈ ಮದುವೆಗೆ ಭಾರತೀಯ ಚಿತ್ರರಂಗದ ಹಲವು ಪ್ರಮುಖ ನಟ–ನಟಿಯರನ್ನು ಕರೆಯಿಸಲಾಗಿತ್ತು ಹಾಗೂ ಅವರಿಗೆ ಹವಾಲಾ ಮೂಲಕ ಕೋಟ್ಯಂತರ ರೂಪಾಯಿ ಪಾವತಿಸಲಾಗಿತ್ತು.

ಜಿಬಿಎ 5 ಪಾಲಿಕೆಗಳಿಗೆ ಚುನಾವಣೆ ನಡೆಸಲು ಆಯೋಗ ಮಹತ್ವದ ಹೆಜ್ಜೆ

ವಾರ್ಡ್‌ವಾರು ಮತದಾರ ಪಟ್ಟಿ ಸಿದ್ಧಪಡಿಸಲು ಅಧಿಕಾರಿಗಳ ನೇಮಕ ಪ್ರಕ್ರಿಯೆ ಆರಂಭ

ಬೆಂಗಳೂರು, ನ.2: ಜಿಬಿಎ ವ್ಯಾಪ್ತಿಯ ಐದು ನಗರ ಪಾಲಿಕೆಗಳಿಗೆ ಚುನಾವಣೆ ನಡೆಸುವ ನಿಟ್ಟಿನಲ್ಲಿ ಚುನಾವಣಾ ಆಯೋಗ ಮಹತ್ವದ ಹೆಜ್ಜೆ ಇರಿಸಿದೆ. ವಾರ್ಡ್‌ವಾರು ಮತದಾರರ ಪಟ್ಟಿಗಳನ್ನು ಸಿದ್ಧಪಡಿಸಲು ಅಧಿಕಾರಿಗಳ ನೇಮಕ ಪ್ರಕ್ರಿಯೆ ಆರಂಭಿಸಿದ್ದು, ಸುಪ್ರೀಂ ಕೋರ್ಟ್ ನಿಗದಿಪಡಿಸಿರುವ ಡಿಸೆಂಬರ್ ಅಂತ್ಯದ ಗಡುವಿನೊಳಗೆ ಚುನಾವಣೆ ನಡೆಸುವ ಸಿದ್ಧತೆಗೆ ಮುಂದಾಗಿದೆ.



ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆ ಬಳಿಕ ಮತದಾರರ ಪಟ್ಟಿಯಲ್ಲಿ ಗಣನೀಯ ಬದಲಾವಣೆಗಳಾಗಿರುವ ಹಿನ್ನೆಲೆಯಲ್ಲಿ, ಆಯೋಗವು ವಾರ್ಡ್‌ವಾರು ಮತದಾರರ ಪಟ್ಟಿ ಸಿದ್ಧಪಡಿಸುವ ಪ್ರಕ್ರಿಯೆಯನ್ನು ಎರಡನೇ ಬಾರಿಗೆ ಕೈಗೆತ್ತಿಕೊಂಡಿದೆ.ಇದಕ್ಕಾಗಿ ಒಟ್ಟು 142 ಅಧಿಕಾರಿಗಳನ್ನು ನಿಯೋಜಿಸಲು ಉದ್ದೇಶಿಸಲಾಗಿದ್ದು, ಇವರಲ್ಲಿ 28 ಮತದಾರರ ನೋಂದಣಾಧಿಕಾರಿಗಳು ಹಾಗೂ 114 ಸಹಾಯಕ ಮತದಾರರ ನೋಂದಣಾಧಿಕಾರಿಗಳು ಇರಲಿದ್ದಾರೆ.

ಇಸಿಐನಿಂದ ದತ್ತಾಂಶಕ್ಕೆ ಕಾಯುತ್ತಿರುವ ಆಯೋಗ: ವಾರ್ಡ್‌ವಾರು ಮತದಾರರ ಪಟ್ಟಿಗಳನ್ನು ಸಿದ್ಧಪಡಿಸಲು ಭಾರತೀಯ ಚುನಾವಣಾ ಆಯೋಗದಿಂದ ಇತ್ತೀಚಿನ ಮತದಾರರ ಪಟ್ಟಿಯನ್ನು ಒದಗಿಸುವಂತೆ ರಾಜ್ಯ ಚುನಾವಣಾ ಆಯೋಗ ಕೋರಿದೆ. ದತ್ತಾಂಶ ಯಾವ ಮಾದರಿಯಲ್ಲಿ ಲಭ್ಯವಾಗುತ್ತದೆ ಎಂಬುದರ ಆಧಾರದ ಮೇಲೆ ಪಟ್ಟಿಗಳ ಸಿದ್ಧತೆಗೆ ಬೇಕಾಗುವ ಸಮಯ ನಿರ್ಧಾರವಾಗಲಿದೆ. ಭಾರತ ಚುನಾವಣಾ ಆಯೋಗದಿಂದ ಇತ್ತೀಚಿನ ಮತದಾರರ ಪಟ್ಟಿಯನ್ನು ಒದಗಿಸುವಂತೆ ಕೋರಿದ್ದೇವೆ. ವಾರ್ಡ್‌ವಾರು ವಿಂಗಡಣೆಗೆ ಎಷ್ಟು ಸಮಯ ಬೇಕಾಗುತ್ತದೆ ಎಂಬುದು ಇಸಿಐ ಯಾವ ಮಾದರಿಯಲ್ಲಿ ದತ್ತಾಂಶವನ್ನು ಒದಗಿಸುತ್ತದೆ ಎಂಬುದರ ಮೇಲೆ ಅವಲಂಬಿತವಾಗಿದೆ. ನಿಯಂತ್ರಣ ಪಟ್ಟಿಯ (ಕಂಟ್ರೋಲ್ ಟೇಬಲ್) ರೂಪದಲ್ಲಿ ದತ್ತಾಂಶ ನೀಡಿದರೆ ಕೆಲಸ ಸುಲಭವಾಗಲಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಚುನಾವಣೆ ವೇಳಾಪಟ್ಟಿಗೆ ಕಾಲಮಿತಿ ಸವಾಲು: ಮತದಾರರ ಪಟ್ಟಿಗಳನ್ನು ಸಿದ್ಧಪಡಿಸುವುದು, ಅವುಗಳನ್ನು ಪ್ರಕಟಿಸುವುದು, ಸಾರ್ವಜನಿಕರಿಂದ ಆಕ್ಷೇಪಣೆಗಳನ್ನು ಆಹ್ವಾನಿಸಿ ಪರಿಶೀಲಿಸುವುದು ಸೇರಿದಂತೆ ಹಲವು ಹಂತಗಳನ್ನು ಪೂರ್ಣಗೊಳಿಸಬೇಕಿದೆ. ಈ ಪ್ರಕ್ರಿಯೆಗೆ ಸಾಮಾನ್ಯವಾಗಿ ಒಂದು ಅಥವಾ ಎರಡು ತಿಂಗಳು ಬೇಕಾಗುತ್ತದೆ. ಹೀಗಾಗಿ, ಚುನಾವಣೆ ನಡೆಸಲು ಲಭ್ಯವಿರುವ ಸಮಯದ ಮೇಲೆ ಒತ್ತಡ ಹೆಚ್ಚಾಗಿದೆ. ವಾರ್ಡ್‌ವಾರು ಮತದಾರರ ಪಟ್ಟಿಗಳು ಸಿದ್ಧವಾದ ಬಳಿಕ ಅವುಗಳನ್ನು ಪ್ರಕಟಿಸಿ, ಸಾರ್ವಜನಿಕರಿಂದ ಆಕ್ಷೇಪಣೆಗಳನ್ನು ಆಹ್ವಾನಿಸಲಾಗುತ್ತದೆ. ಆಕ್ಷೇಪಣೆಗಳ ಪರಿಶೀಲನೆ ಹಾಗೂ ಅಗತ್ಯ ತಿದ್ದುಪಡಿಗಳ ನಂತರ ಅಂತಿಮ ಪಟ್ಟಿಗಳನ್ನು ಸಿದ್ಧಪಡಿಸಬೇಕಾಗುತ್ತದೆ. ಇದಾದ ಬಳಿಕ ಅಭ್ಯರ್ಥಿಗಳಿಂದ ನಾಮಪತ್ರಗಳನ್ನು ಸ್ವೀಕರಿಸುವುದು, ಚುನಾವಣಾ ವೇಳಾಪಟ್ಟಿ ಪ್ರಕಟಿಸುವುದು ಮತ್ತು ಮತದಾನಕ್ಕೆ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಲು ಕನಿಷ್ಠ ಇನ್ನೊಂದು ತಿಂಗಳಾದರೂ ಬೇಕಾಗಬಹುದು. ಈ ಎಲ್ಲ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಿ ಸುಪ್ರೀಂ ಕೋರ್ಟ್ ನಿಗದಿಪಡಿಸಿರುವ ಡಿಸೆಂಬರ್ ಅಂತ್ಯದ ಗಡುವಿನೊಳಗೆ ಐದು ನಗರ ಪಾಲಿಕೆಗಳ ಚುನಾವಣೆಗಳನ್ನು ನಡೆಸುವುದು ರಾಜ್ಯ ಚುನಾವಣಾ ಆಯೋಗಕ್ಕೆ ದೊಡ್ಡ ಸವಾಲಾಗುವ ಸಾಧ್ಯತೆಯಿದೆ.

ಒಟ್ಟಿನಲ್ಲಿ, ಅಧಿಕಾರಿಗಳ ನೇಮಕ ಪ್ರಕ್ರಿಯೆ ಆರಂಭವಾಗಿರುವುದು ಜಿಬಿಎ ಚುನಾವಣೆಗಳ ಸಿದ್ಧತೆಯಲ್ಲಿ ಮಹತ್ವದ ಬೆಳವಣಿಗೆಯಾದರೂ, ಮತದಾರರ ಪಟ್ಟಿ ಸಿದ್ಧತೆ ಮತ್ತು ಆಕ್ಷೇಪಣೆಗಳ ವಿಲೇವಾರಿ ಎಷ್ಟು ತ್ವರಿತವಾಗಿ ಪೂರ್ಣಗೊಳ್ಳುತ್ತದೆ ಎಂಬುದರ ಮೇಲೆ ಚುನಾವಣೆಯ ವೇಳಾಪಟ್ಟಿ ಅವಲಂಬಿತವಾಗಿದೆ.



ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೋಮವಾರ ಕೆಎಂಎಫ್‌ನ ಪದಾಧಿಕಾರಿಗಳು ಮತ್ತು ಅಧಿಕಾರಿಗಳ ಜೊತೆ ಮಹತ್ವದ ಮಾತುಕತೆ ನಡೆಸಿದರು.

ಕೆಪಿಎಸ್‌ಸಿ ನೇಮಕಾತಿ ಹಗರಣ: ಕೋರ್ಟ್‌ಗೆ ಎಸ್‌ಐಟಿ ರಚನೆಯ ಅಧಿಸೂಚನೆ ಸಲ್ಲಿಸಿದ ಕರ್ನಾಟಕ ಸರ್ಕಾರ

ಬೆಂಗಳೂರು, ನ.2: ಕರ್ನಾಟಕ ಲೋಕಸೇವಾ ಆಯೋಗದ ನೇಮಕಾತಿಯಲ್ಲಿ ನಡೆದಿರುವ ಅಕ್ರಮಗಳಿಗೆ ಸಂಬಂಧಿಸಿದ ಎರಡು ಪ್ರಮುಖ ಪ್ರಕರಣಗಳ ಹೆಚ್ಚಿನ ತನಿಖೆಗಾಗಿ ರಾಜ್ಯ ಸರ್ಕಾರ ವಿಶೇಷ ತನಿಖಾ ತಂಡವನ್ನು ರಚಿಸಿದೆ.

ಹೈಕೋರ್ಟ್ ಸೆಪ್ಟೆಂಬರ್ 21ರಂದು ನೀಡಿದ್ದ ನಿರ್ದೇಶನದಂತೆ ಎಸ್‌ಐಟಿ ರಚನೆಯ ಅಧಿಸೂಚನೆಯನ್ನು ಸರ್ಕಾರ ನ್ಯಾಯಾಲಯಕ್ಕೆ ಸಲ್ಲಿಸಿದೆ. ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರಿದ್ದ ಪೀಠದ ಮುಂದೆ ಅಡ್ವೊಕೇಟ್ ಜನರಲ್ ಶಶಿಕಿರಣ್ ಶೆಟ್ಟಿ ಅವರು ಎಸ್‌ಐಟಿ ರಚನೆಯ ಅಧಿಸೂಚನೆಯನ್ನು ಮಂಡಿಸಿದರು. ಇದೇ ವೇಳೆ ತನಿಖಾ ತಂಡದ ಮುಖ್ಯಸ್ಥರು ಹಾಗೂ ಸದಸ್ಯರ ನೇಮಕದ ಬಗ್ಗೆಯೂ ವಿಚಾರಣೆ ನಡೆಯಿತು.

ಎಸ್‌ಐಟಿ ಮುಖ್ಯಸ್ಥರಾಗಿ ಐಪಿಎಸ್ ಅಧಿಕಾರಿ ಅಲೋಕ್ ಕುಮಾರ್ ಹಾಗೂ ತಂಡದ ಸದಸ್ಯರಾಗಿ ದಿವ್ಯಾಗೋಪಿನಾಥ್ ಅವರನ್ನು ನೇಮಿಸುವ ಪ್ರಸ್ತಾಪಕ್ಕೆ ರಾಜ್ಯ ಸರ್ಕಾರ ಆಕ್ಷೇಪ ವ್ಯಕ್ತಪಡಿಸಿತ್ತು. ಈ ಹಿನ್ನೆಲೆಯಲ್ಲಿ ಸುಪ್ರೀಂ ಕೋರ್ಟ್ ನಿರ್ದೇಶನದಂತೆ ಪರ್ಯಾಯವಾಗಿ ನಾಲ್ವರು ಎಡಿಜಿಪಿ ದರ್ಜೆಯ ಅಧಿಕಾರಿಗಳ ಹೆಸರುಗಳನ್ನು ಮುಚ್ಚಿದ ಲಕೋಟೆಯಲ್ಲಿ ಹೈಕೋರ್ಟ್‌ಗೆ ಸಲ್ಲಿಸಲಾಗಿದೆ. ಆರ್. ಹಿತೇಂದ್ರ, ಬಿ.ಕೆ. ಸಿಂಗ್, ಎಸ್. ಮುರುಗನ್ ಹಾಗೂ ಸೌಮೇಂದು ಮುಖರ್ಜಿ ಅವರ ಹೆಸರುಗಳನ್ನು ಸರ್ಕಾರ ಪ್ರಸ್ತಾಪಿಸಿದೆ. ರಾಜ್ಯದಲ್ಲಿ ಒಟ್ಟು 16 ಎಡಿಜಿಪಿ ದರ್ಜೆಯ ಅಧಿಕಾರಿಗಳಿದ್ದಾರೆ ಎಂದು ಅಡ್ವೊಕೇಟ್ ಜನರಲ್ ನ್ಯಾಯಾಲಯಕ್ಕೆ ತಿಳಿಸಿದರು.



ಇನ್ನೊಂದೆಡೆ, ಪ್ರಕರಣವನ್ನು ಸಿಬಿಐ ತನಿಖೆಗೆ ವಹಿಸುವಂತೆ ಅರ್ಜಿ ಸಲ್ಲಿಸಿರುವ ಬಿಜೆಪಿ ಶಾಸಕ ಬಸವನಗೌಡ ಪಾಟೀಲ್ ಯತ್ನಾಳ್ ಪರ ವಕೀಲರು, ಸರ್ಕಾರ ಪ್ರಸ್ತಾಪಿಸಿರುವ ನಾಲ್ವರು ಅಧಿಕಾರಿಗಳ ನೇಮಕಕ್ಕೆ ಸಂಬಂಧಿಸಿದಂತೆ ತಮ್ಮ ಆಕ್ಷೇಪಣೆಗಳನ್ನು ಮುಚ್ಚಿದ ಲಕೋಟೆಯಲ್ಲಿ ನ್ಯಾಯಾಲಯಕ್ಕೆ ಸಲ್ಲಿಸಿದ್ದಾರೆ. ಹೀಗಾಗಿ ಎಸ್‌ಐಟಿ ಮುಖ್ಯಸ್ಥರು ಮತ್ತು ಸದಸ್ಯರ ಆಯ್ಕೆ ಕುರಿತು ಅಂತಿಮ ನಿರ್ಧಾರ ಹೊರಬೀಳಬೇಕಿದೆ.

ಎಸ್‌ಐಟಿ ರಚನೆಗೆ ಸುಪ್ರೀಂ ಅಸ್ತು:

ಕೆಪಿಎಸ್‌ಸಿ ನೇಮಕಾತಿ ಅಕ್ರಮಗಳ ತನಿಖೆಯನ್ನು ಎಸ್‌ಐಟಿಗೆ ವಹಿಸುವಂತೆ ಹೈಕೋರ್ಟ್ ಸೆಪ್ಟೆಂಬರ್ 21ರಂದು ನೀಡಿದ್ದ ಆದೇಶವನ್ನು ಪ್ರಶ್ನಿಸಿ ರಾಜ್ಯ ಸರ್ಕಾರ ಸುಪ್ರೀಂ ಕೋರ್ಟ್ ಮೊರೆ ಹೋಗಿತ್ತು. ಆದರೆ, ಪ್ರಕರಣಗಳ ಗಂಭೀರತೆ ಹಾಗೂ ಕೆಪಿಎಸ್‌ಸಿಯ ಉನ್ನತ ಅಧಿಕಾರಿಗಳೂ ಅಕ್ರಮಗಳಲ್ಲಿ ಭಾಗಿಯಾಗಿರುವ ಸಾಧ್ಯತೆಯನ್ನು ಪರಿಗಣಿಸಿದ ಸುಪ್ರೀಂ ಕೋರ್ಟ್, ಉನ್ನತ ಶ್ರೇಣಿಯ ಅಧಿಕಾರಿಗಳನ್ನು ಒಳಗೊಂಡ ಎಸ್‌ಐಟಿ ತನಿಖೆಯ ಅಗತ್ಯವಿದೆ ಎಂದು ಅಭಿಪ್ರಾಯಪಟ್ಟಿತ್ತು. ಹೀಗಾಗಿ ಎಸ್‌ಐಟಿ ರಚಿಸುವ ಹೈಕೋರ್ಟ್ ಆದೇಶದಲ್ಲಿ ಹಸ್ತಕ್ಷೇಪ ಮಾಡಲು ಸೂಕ್ತ ಕಾರಣಗಳಿಲ್ಲ ಎಂದು ಸ್ಪಷ್ಟಪಡಿಸಿತ್ತು.

ಎಸ್‌ಐಟಿ ಹೆಚ್ಚಿನ ತನಿಖೆ: ಅಲ್ಲದೆ, ಪ್ರಕರಣಗಳ ಕುರಿತು ಸಂಪೂರ್ಣವಾಗಿ ಹೊಸದಾಗಿ ತನಿಖೆ ಆರಂಭಿಸುವ ಅಗತ್ಯವಿಲ್ಲ. ಈಗಾಗಲೇ ಸಿಐಡಿ ಮತ್ತು ವಿಧಾನಸೌಧ ಪೊಲೀಸರು ನಡೆಸಿರುವ ತನಿಖೆಯ ಮುಂದುವರಿದ ಭಾಗವಾಗಿ ಎಸ್‌ಐಟಿ ಹೆಚ್ಚಿನ ತನಿಖೆ ನಡೆಸಬೇಕು ಎಂದು ಸೂಚಿಸಿತ್ತು. ತನಿಖಾ ತಂಡಕ್ಕೆ ರಾಜ್ಯ ವಿಧಿವಿಜ್ಞಾನ ಪ್ರಯೋಗಾಲಯದ ನಿರ್ದೇಶಕರನ್ನು ಸೇರ್ಪಡೆಗೊಳಿಸುವ ವಿಚಾರದಲ್ಲಿಯೂ ಸರ್ಕಾರ ಆತಂಕ ವ್ಯಕ್ತಪಡಿಸಿತ್ತು. ತನಿಖೆ ವೇಳೆ ಸಂಗ್ರಹಿಸಿರುವ ಸಾಕ್ಷ್ಯಗಳನ್ನು ವಿಧಿವಿಜ್ಞಾನ ವಿಶ್ಲೇಷಣೆಗೆ ಒಳಪಡಿಸುವ ಸಂದರ್ಭದಲ್ಲಿ ಹಿತಾಸಕ್ತಿ ಸಂಘರ್ಷ ಉಂಟಾಗುವ ಸಾಧ್ಯತೆಯಿದೆ ಎಂಬುದು ಸರ್ಕಾರದ ಆಕ್ಷೇಪವಾಗಿತ್ತು.

ಎಸ್‌ಐಟಿ ರಚನೆ ಅಧಿಸೂಚನೆ: ಈ ಹಿನ್ನೆಲೆಯಲ್ಲಿ ಪರ್ಯಾಯ ಅಧಿಕಾರಿಗಳ ಹೆಸರುಗಳನ್ನು ಸಲ್ಲಿಸುವಂತೆ ಸುಪ್ರೀಂ ಕೋರ್ಟ್ ಸೂಚಿಸಿತ್ತು. ಇದೀಗ ಎಸ್‌ಐಟಿ ರಚನೆಯ ಅಧಿಸೂಚನೆ ಸಲ್ಲಿಕೆಯಾಗಿದ್ದು, ತಂಡದ ಮುಖ್ಯಸ್ಥರು ಮತ್ತು ಸದಸ್ಯರ ನೇಮಕದ ಕುರಿತು ಹೈಕೋರ್ಟ್‌ನ ಅಂತಿಮ ನಿರ್ಧಾರಕ್ಕಾಗಿ ಕಾಯಲಾಗುತ್ತಿದೆ.

ಪರಿಸರಸ್ನೇಹಿ, ಸುರಕ್ಷಿತ ದೀಪಾವಳಿಗೆ

19 ಅಂಶಗಳ ಮಾರ್ಗಸೂಚಿ ಬಿಡುಗಡೆ

ಬೆಂಗಳೂರು, ನ.2: ದೀಪಾವಳಿ ಹಬ್ಬ ಹತ್ತಿರವಾಗುತ್ತಿರುವ ಹಿನ್ನೆಲೆಯಲ್ಲಿ, ಸಾರ್ವಜನಿಕರು ಪರಿಸರಸ್ನೇಹಿ ಹಾಗೂ ಸುರಕ್ಷಿತ ರೀತಿಯಲ್ಲಿ ಹಬ್ಬವನ್ನು ಆಚರಿಸಲು ಅನುಕೂಲವಾಗುವಂತೆ ರಾಜ್ಯ ಪೊಲೀಸ್ ಇಲಾಖೆಯಿಂದ 19 ಅಂಶಗಳ ಮಾರ್ಗದರ್ಶಿ ಸೂಚಿಯನ್ನು ಬಿಡುಗಡೆ ಮಾಡಲಾಗಿದೆ. ಮಾಲಿನ್ಯ ನಿಯಂತ್ರಣ, ಅಗ್ನಿ ಅವಘಡಗಳ ತಡೆ ಹಾಗೂ ಸಾರ್ವಜನಿಕರ ಸುರಕ್ಷತೆಯನ್ನು ಗಮನದಲ್ಲಿಟ್ಟುಕೊಂಡು ಪ್ರಮುಖ ಮಾರ್ಗದರ್ಶನಗಳನ್ನು ನೀಡಲಾಗಿದೆ. ಸುಪ್ರೀಂ ಕೋರ್ಟ್ ಆದೇಶದಂತೆ, ರಾತ್ರಿ 8.00 ರಿಂದ 10.00 ಗಂಟೆಯವರೆಗೆ ಮಾತ್ರ ಪಟಾಕಿ ಸಿಡಿಸಲು ಅವಕಾಶವಿರುತ್ತದೆ. ನಿಯಮ ಉಲ್ಲಂಘಿಸುವವರ ವಿರುದ್ಧ ಕಾನೂನು ಕ್ರಮ ಜರುಗಿಸಲಾಗುವುದು.



ಆಸ್ಪತ್ರೆಗಳು, ಪೆಟ್ರೋಲ್ ಬಂಕ್‌ಗಳು, ಗ್ಯಾಸ್ ಸ್ಟೇಷನ್‌ಗಳು, ಧಾರ್ಮಿಕ ಕೇಂದ್ರಗಳು, ವೃದ್ಧಾಶ್ರಮಗಳು ಮತ್ತು ಶಿಶುಪಾಲನಾ ಕೇಂದ್ರಗಳ ಸುತ್ತಮುತ್ತ ಪಟಾಕಿ ಸಿಡಿಸುವುದನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ.

ಸಾರ್ವಜನಿಕರು ಜನನಿಬಿಡ ಪ್ರದೇಶಗಳು, ರಸ್ತೆಗಳು ಹಾಗೂ ನಿಲ್ಲಿಸಿದ ವಾಹನಗಳ ಬಳಿ ಪಟಾಕಿ ಸಿಡಿಸಬಾರದು. ತೆರೆದ ಮೈದಾನಗಳು ಹಾಗೂ ಕಡಿಮೆ ಜನರಿರುವ ಸ್ಥಳಗಳನ್ನು ಬಳಸಬೇಕು.

ಅಧಿಕೃತ ಪರವಾನಗಿ ಹೊಂದಿರುವ ಅಂಗಡಿಗಳಿಂದ ಮಾತ್ರ ಗುಣಮಟ್ಟದ ಹಸಿರು ಪಟಾಕಿಗಳನ್ನು ಖರೀದಿಸಬೇಕು. ಪಟಾಕಿಯ ಅಸಲೀಯತೆಯನ್ನು ಖಚಿತಪಡಿಸಿಕೊಳ್ಳಲು ಪ್ಯಾಕೆಟ್‌ನಲ್ಲಿರುವ ಕ್ಯುಆರ್ ಕೋಡ್ ಸ್ಕ್ಯಾನ್ ಮಾಡಿ ಪರಿಶೀಲಿಸುವುದು ಕಡ್ಡಾಯ.

ಅನಧಿಕೃತ ಅಂಗಡಿಗಳಲ್ಲಿ ಪಟಾಕಿ ಖರೀದಿಸಬಾರದು. ಯಾವುದೇ ರೀತಿಯ ಅಕ್ರಮ ಮಾರಾಟ ಕಂಡುಬಂದಲ್ಲಿ ತಕ್ಷಣವೇ ಹತ್ತಿರದ ಪೊಲೀಸ್ ಠಾಣೆಗೆ ಅಥವಾ 112 ತುರ್ತು ಸಹಾಯವಾಣಿಗೆ ಕರೆ ಮಾಡಿ ಮಾಹಿತಿ ನೀಡಬೇಕು. ಅತಿಯಾದ ಶಬ್ದ ಮತ್ತು ವಾಯು ಮಾಲಿನ್ಯ ಉಂಟುಮಾಡುವ ಪಟಾಕಿಗಳನ್ನು ನಿಷೇಧಿಸಲಾಗಿದೆ. ಹಿರಿಯ ನಾಗರಿಕರು, ರೋಗಿಗಳು ಹಾಗೂ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಕಡಿಮೆ ಶಬ್ದದ ಹಸಿರು ಪಟಾಕಿಗಳನ್ನು ಬಳಸುವುದು ಸೂಕ್ತ. ಪಟಾಕಿ ಸಿಡಿಸುವಾಗ ಸುರಕ್ಷಿತ ಕಣ್ಣಿನ ಕನ್ನಡಕ ಹಾಗೂ ಕೈಗವಸುಗಳನ್ನು ಧರಿಸುವುದು ಸೂಕ್ತ. ಪಟಾಕಿ ಸಿಡಿಸುವಾಗ ಹತ್ತಿ ಉಡುಪುಗಳನ್ನೇ ಧರಿಸಬೇಕು, ನೈಲಾನ್, ಸಿಂಥೆಟಿಕ್ ಅಥವಾ ಪಾಲಿಯೆಸ್ಟರ್ ಬಟ್ಟೆಗಳನ್ನು ಧರಿಸಬಾರದು.

ಪಟಾಕಿಯನ್ನು ಕೈಯಲ್ಲಿ ಹಿಡಿದುಕೊಂಡು ಸಿಡಿಸುವುದು ತೀವ್ರ ಅಪಾಯಕಾರಿ. ವಿಶೇಷವಾಗಿ ಮುಖ, ಕಣ್ಣು ಹಾಗೂ ಕಿವಿಗಳಿಗೆ ಹಾನಿಯಾಗದಂತೆ ಜಾಗ್ರತೆ ವಹಿಸಬೇಕು. ಪಟಾಕಿ ಸಿಡಿಸುವ ಸ್ಥಳದಲ್ಲಿ ನೀರು, ಮರಳು, ಅಗ್ನಿಶಾಮಕ ಉಪಕರಣಗಳು ಹಾಗೂ ಪ್ರಥಮ ಚಿಕಿತ್ಸಾ ಪೆಟ್ಟಿಗೆಯನ್ನು ಸಿದ್ಧವಾಗಿಟ್ಟುಕೊಳ್ಳಬೇಕು. ಸಣ್ಣ ಮಕ್ಕಳು ಹಿರಿಯರ ಮೇಲ್ವಿಚಾರಣೆಯಿಲ್ಲದೆ ಪಟಾಕಿ ಸಿಡಿಸದಂತೆ ಪೋಷಕರು ಗಮನಹರಿಸಬೇಕು. ಹಬ್ಬದ ಸಂಭ್ರಮದಲ್ಲಿ ಮೂಕ ಪ್ರಾಣಿಗಳಿಗೆ ತೊಂದರೆ ಅಥವಾ ಹಾನಿ ಉಂಟಾಗದಂತೆ ಜಾಗರೂಕರಾಗಿರಬೇಕು. ಪಟಾಕಿ ಸಿಡಿಸಿದ ನಂತರ, ಉಳಿದ ಸುಟ್ಟ ಭಾಗಗಳನ್ನು ಬಕೆಟ್‌ನಲ್ಲಿ ಸಂಗ್ರಹಿಸಿ ಮರಳು ಹಾಕಿ ಅಥವಾ ನೀರು ಹೊಯ್ದು ಸಂಪೂರ್ಣವಾಗಿ ಆರಿಸಬೇಕು. ಆಟದ ಮೈದಾನಗಳು, ರಸ್ತೆಗಳು ಮತ್ತು ಮನೆಯ ಸಾರ್ವಜನಿಕ ಸ್ಥಳಗಳಲ್ಲಿ ಸ್ವಚ್ಛತೆ ಕಾಪಾಡಬೇಕು.

ಯಾವುದೇ ರೀತಿಯ ಅಗ್ನಿ ಅವಘಡ ಅಥವಾ ತುರ್ತು ಪರಿಸ್ಥಿತಿಯಲ್ಲಿ ತಕ್ಷಣವೇ 112 (ಪೊಲೀಸ್/ಅಗ್ನಿಶಾಮಕ) ಅಥವಾ 108 (ಆಂಬ್ಯುಲೆನ್ಸ್) ಸಂಖ್ಯೆಯನ್ನು ಸಂಪರ್ಕಿಸಿ ವೈದ್ಯಕೀಯ ನೆರವು ಪಡೆಯುವಂತೆ ಪ್ರಕಟಣೆಯಲ್ಲಿ ತಿಳಿಸಿದೆ.

ಸ್ಟಿಂಗ್ ಆಪರೇಷನ್: ಖಾಸಗಿ ಸುದ್ದಿವಾಹಿನಿ ಕಚೇರಿ ಮೇಲೆ ಸಿಸಿಬಿ ಪೊಲೀಸರ ದಾಳಿ

ದಾಖಲೆ, ವಿಡಿಯೋ ದೃಶ್ಯಾವಳಿ. ಎಲೆಕ್ಟ್ರಾನಿಕ್ ಸಾಧನಗಳ ಹುಡುಕಾಟ

ಬೆಂಗಳೂರು, ನ.2: ನಕಲಿ ಸ್ಟಿಂಗ್ ಆಪರೇಷನ್ ಮತ್ತು ತಪ್ಪು ಮಾಹಿತಿ ಹರಡಿದ ಪ್ರಕರಣಕ್ಕೆ ಸಂಬಂಧಿಸಿದಂತೆ ನಗರದ ಖಾಸಗಿ ಸುದ್ದಿವಾಹಿನಿ ಕಚೇರಿಯ ಮೇಲೆ ಅಪರಾಧ ವಿಭಾಗದ (ಸಿಸಿಬಿ) ಪೊಲೀಸರು ದಿಢೀರ್ ದಾಳಿ ನಡೆಸಿ ಪರಿಶೀಲನೆ ಆರಂಭಿಸಿದ್ದಾರೆ. ನ್ಯಾಯಾಲಯದಿಂದ ಅಧಿಕೃತ ಸರ್ಚ್ ವಾರೆಂಟ್ ಪಡೆದುಕೊಂಡಿರುವ ಸಿಸಿಬಿ ಅಧಿಕಾರಿಗಳು ಈ ಕಾರ್ಯಾಚರಣೆ ಕೈಗೊಂಡಿದ್ದಾರೆ.ಪ್ರಕರಣಕ್ಕೆ ಸಂಬಂಧಿಸಿದಂತೆ ಮಹತ್ವದ ದಾಖಲೆಗಳು, ವಿಡಿಯೋ ದೃಶ್ಯಾವಳಿಗಳು ಹಾಗೂ ಎಲೆಕ್ಟ್ರಾನಿಕ್ ಸಾಧನಗಳ ಹುಡುಕಾಟಕ್ಕಾಗಿ ಈ ದಾಳಿ ನಡೆಸಲಾಗಿದೆ.

ಈ ಬೃಹತ್ ಕಾರ್ಯಾಚರಣೆಯಲ್ಲಿ 30ಕ್ಕೂ ಹೆಚ್ಚು ಸಿಸಿಬಿ ಅಧಿಕಾರಿಗಳು ಮತ್ತು ಸಿಬ್ಬಂದಿಗಳ ತಂಡ ಸಕ್ರಿಯವಾಗಿ ಭಾಗವಹಿಸಿದೆ. ಖಾಸಗಿ ಸುದ್ದಿ ವಾಹಿನಿಯ ಪ್ರಮುಖ ವಿಭಾಗಗಳು, ಎಡಿಟಿಂಗ್ ರೂಮ್ ಹಾಗೂ ತಾಂತ್ರಿಕ ಘಟಕಗಳನ್ನು ಸಿಸಿಬಿ ತಂಡ ಪರಿಶೀಲನೆಗೆ ಒಳಪಡಿಸಿದ್ದು, ವಿಡಿಯೋ ಪ್ರಸಾರ ಮತ್ತು ಅದರ ಮೂಲಕ್ಕೆ ಸಂಬಂಧಿಸಿದ ಪ್ರಮುಖ ಡಿಜಿಟಲ್ ಪುರಾವೆಗಳನ್ನು ವಶಕ್ಕೆ ಪಡೆಯುವ ಪ್ರಕ್ರಿಯೆಯಲ್ಲಿ ತೊಡಗಿದೆ.

ಮತ್ತೊಂದೆಡೆ, ಸಿಸಿಬಿ ಪೊಲೀಸರು ತಮ್ಮ ತನಿಖೆಯ ಭಾಗವಾಗಿ ಸಹಕಾರ ನಗರದಲ್ಲಿರುವ ಖಾಸಗಿ ಸುದ್ದಿ ವಾಹಿನಿಯ ಮುಖ್ಯಸ್ಥನ ಮನೆ ಮೇಲೆಯೂ ದಾಳಿ ನಡೆಸಿದ್ದಾರೆ. ಸುದ್ದಿವಾಹಿನಿ ಮುಖ್ಯಸ್ಥನ ನಿವಾಸದಲ್ಲಿ ಪರಿಶೀಲನೆ ನಡೆಸುತ್ತಿರುವ ಅಧಿಕಾರಿಗಳು, ಪ್ರಕರಣಕ್ಕೆ ಸಂಬಂಧಿಸಿದ ಶಂಕಿತ ಸಂಪರ್ಕಗಳು ಮತ್ತು ಎಲೆಕ್ಟ್ರಾನಿಕ್ ದಾಖಲೆಗಳ ಸಂಗ್ರಹದಲ್ಲಿದ್ದಾರೆ. ಪ್ರಕರಣದಲ್ಲಿ ನಕಲಿ ವಿಡಿಯೋ ಸೃಷ್ಟಿ, ಶೇರ್ ಹಾಗೂ ಪ್ರಸಾರದ ಹಿಂದಿರುವ ಜಾಲದ ತನಿಖೆಯನ್ನು ಸಿಸಿಬಿ ಇನ್ನಷ್ಟು ಚುರುಕುಗೊಳಿಸಿದೆ.

ವಿಜಯನಗರ ಸಾಮ್ರಾಜ್ಯದ ಸ್ಥಾಪನೆಯಲ್ಲಿ ವಿದ್ಯಾರಣ್ಯರ ಪಾತ್ರ ಇತ್ತೀಚಿನ ಶಾಸನಗಳ ಹಿನ್ನೆಲೆಯಲ್ಲಿ ಐತಿಹಾಸಿಕ ವಿಶ್ಲೇಷಣೆ

ಬೆಂಗಳೂರು,ನ.2: ಭಾರತೀಯ ಇತಿಹಾಸ ಅನುಸಂಧಾನ ಪರಿಷತ್ತಿನ (ಐಸಿಎಚ್‌ಆರ್) ದಕ್ಷಿಣ ಪ್ರಾದೇಶಿಕ ಕೇಂದ್ರ, ಬೆಂಗಳೂರು ಹಾಗೂ ಡಾ. ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾಲಯದ ಇತಿಹಾಸ ಅಧ್ಯಯನ ಮತ್ತು ಸಂಶೋಧನಾ ವಿಭಾಗದ ಜಂಟಿ ಆಶ್ರಯದಲ್ಲಿ ವಿಶ್ವವಿದ್ಯಾಲಯದಲ್ಲಿ ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಕಾರ್ಯಕ್ರಮವನ್ನು ಉದ್ಘಾಟಿಸಿದ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಬಿ. ರಮೇಶ್ ಅವರು ಮಾತನಾಡಿ, ರಾಷ್ಟ್ರೀಯ ವಿಚಾರ ಸಂಕಿರಣಗಳು, ಸಂಶೋಧನಾ ಕಾರ್ಯಾಗಾರಗಳು ಮತ್ತು ವಿಶೇಷ ಉಪನ್ಯಾಸಗಳು ವಿದ್ಯಾರ್ಥಿಗಳ ಶೈಕ್ಷಣಿಕ ಬೆಳವಣಿಗೆ ಹಾಗೂ ಭವಿಷ್ಯದ ರೂಪುಗೊಳಿಸುವಿಕೆಯಲ್ಲಿ ಮಹತ್ವದ ಪಾತ್ರ ವಹಿಸುತ್ತವೆ ಎಂದು ತಿಳಿಸಿದರು. ವಿವಿಧ ಸಂಶೋಧನಾ ಸಂಸ್ಥೆಗಳ ಸಹಯೋಗದೊಂದಿಗೆ ಶೈಕ್ಷಣಿಕ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ವಿದ್ಯಾರ್ಥಿಗಳ ಅಧ್ಯಯನ ಮತ್ತು ಸಂಶೋಧನೆಯ ಗುಣಮಟ್ಟವನ್ನು ಹೆಚ್ಚಿಸಲು ವಿಶ್ವವಿದ್ಯಾಲಯ ನಿರಂತರವಾಗಿ ಪ್ರಯತ್ನಿಸುತ್ತಿದೆ ಎಂದು ಹೇಳಿದರು. ವಿದ್ಯಾರ್ಥಿಗಳು ಇತಿಹಾಸದ ಅಧ್ಯಯನ ಮತ್ತು ಸಂಶೋಧನೆಯಲ್ಲಿ ಹೆಚ್ಚಿನ ಆಸಕ್ತಿ ಬೆಳೆಸಿಕೊಳ್ಳಬೇಕು ಎಂದು ಅವರು ಕರೆ ನೀಡಿದರು.ತುಮಕೂರು ವಿಶ್ವವಿದ್ಯಾಲಯದ ಇತಿಹಾಸ ಮತ್ತು ಪುರಾತತ್ವ ಅಧ್ಯಯನ ಹಾಗೂ ಸಂಶೋಧನಾ ವಿಭಾಗದ ಹಿರಿಯ ಪ್ರಾಧ್ಯಾಪಕ ಮತ್ತು ಭಾರತೀಯ ಇತಿಹಾಸ ಅನುಸಂಧಾನ ಪರಿಷತ್ತಿನ ನಿಕಟಪೂರ್ವ ಸದಸ್ಯರಾದ ಪ್ರೊ. ಎಂ. ಕೊಟ್ರೇಶ್ ಅವರು ವಿಜಯನಗರ ಸಾಮ್ರಾಜ್ಯದ ಸ್ಥಾಪನೆಯಲ್ಲಿ ವಿದ್ಯಾರಣ್ಯರ ಪಾತ್ರ: ಇತ್ತೀಚಿನ ಸಂಶೋಧನೆಗಳ ಹಿನ್ನೆಲೆಯಲ್ಲಿ ಐತಿಹಾಸಿಕ ವಿಶ್ಲೇಷಣೆ ಎಂಬ ವಿಷಯದ ಕುರಿತು ವಿಶೇಷ ಉಪನ್ಯಾಸ ನೀಡಿದರು. ತಮ್ಮ ಉಪನ್ಯಾಸದಲ್ಲಿ ಅವರು ಇತ್ತೀಚೆಗೆ ಪತ್ತೆಯಾದ ಶಿಲಾಶಾಸನಗಳು ಹಾಗೂ ಲಭ್ಯವಿರುವ ಸಾಹಿತ್ಯಿಕ ಆಕರಗಳ ಆಧಾರದಲ್ಲಿ ವಿಜಯನಗರ ಸಾಮ್ರಾಜ್ಯದ ಸ್ಥಾಪನೆಯಲ್ಲಿ ವಿದ್ಯಾರಣ್ಯರ ಪಾತ್ರವನ್ನು ವಿಶ್ಲೇಷಿಸಿದರು. ಶಿವಮೊಗ್ಗ ಜಿಲ್ಲೆಯ ಬಿದಿರೆ ಗ್ರಾಮದಲ್ಲಿ ಇತ್ತೀಚೆಗೆ ಪತ್ತೆಯಾದ ಶಿಲಾಶಾಸನದಲ್ಲಿ ವಿದ್ಯಾರಣ್ಯ ಯತಿಗಳ ಉಲ್ಲೇಖವಿದ್ದು, ವಿಜಯನಗರ ಸಾಮ್ರಾಜ್ಯದ ಸ್ಥಾಪನೆಗೆ ಸಂಬಂಧಿ.



ಪ್ರತ್ಯೇಕ ಅಪಘಾತಗಳಲ್ಲಿ ಐವರ ಸಾವು

ಬೆಂಗಳೂರು, ನ.2: ನಗರದಲ್ಲಿ ಸಂಭವಿಸಿದ ಐದು ಪ್ರತ್ಯೇಕ ರಸ್ತೆ ಅಪಘಾತಗಳಲ್ಲಿ ಡೆಲಿವರಿ ಬಾಯ್ ಸೇರಿ ಐವರು ಮೃತಪಟ್ಟಿರುವ ಘಟನೆ ನಡೆದಿದೆ.



ನಗರದ ಎಚ್‌ಎಸ್‌ಆರ್ ಲೇಔಟ್, ಜೆಪಿ ನಗರ, ತಲಘಟ್ಟಪುರ, ಜ್ಞಾನಭಾರತಿ, ಹುಳಿಮಾವು ಬಳಿ ಸಂಭವಿಸಿದ ಪ್ರತ್ಯೇಕ ರಸ್ತೆ ಅಪಘಾತಗಳಲ್ಲಿ ಸಾಹಿತ್ಯ ರಾಜ್ (26), ಸುರೇಶ್ (33) ಹಾಗೂ ಗಣೇಶ್ ಕುಮಾರ್ (19) ದೇವರಾಜ್ ಸೇರಿ ಐವರು ಮೃತಪಟ್ಟಿದ್ದಾರೆ.

ಎಚ್‌ಎಸ್‌ಆರ್ ಲೇಔಟ್‌ನ 14ನೇ ಮುಖ್ಯರಸ್ತೆಯ ಅಪೊಲೊ ಕ್ಲಿನಿಕ್ ಸಮೀಪ ಇಂದು ಮುಂಜಾನೆ 3.30ರ ಸುಮಾರಿಗೆ ಆಟೋರಿಕ್ಷಾ ಮತ್ತು ದ್ವಿಚಕ್ರ ವಾಹನದ ನಡುವೆ ಮುಖಾಮುಖಿ ಡಿಕ್ಕಿ ಸಂಭವಿಸಿ ಗಂಭೀರವಾಗಿ ಗಾಯಗೊಂಡಿದ್ದ ಇಂದಿರಾನಗರ ನಿವಾಸಿ ಸಾಹಿತ್ಯ ರಾಜ್ ಅವರು ಆಸ್ಪತ್ರೆಗೆ ಕರೆದೊಯ್ಯುವ ಮಾರ್ಗಮಧ್ಯೆ ಮೃತಪಟ್ಟಿದ್ದಾರೆ. ಅವರು ಖಾಸಗಿ ಕಂಪನಿಯಲ್ಲಿ ಉದ್ಯೋಗಿಯಾಗಿದ್ದರು.

ಡೆಲಿವರಿ ಬಾಯ್ ಸಾವು:

ಜೆಪಿ ನಗರದ ಪುಟ್ಟೇನಹಳ್ಳಿ ಪಾಳ್ಯ ರಸ್ತೆಯಲ್ಲಿ ರಾತ್ರಿ 12.15ರ ಸುಮಾರಿಗೆ ಮತ್ತೊಂದು ಅಪಘಾತ ಸಂಭವಿಸಿದೆ. ಆಹಾರ ವಿತರಣಾ ಸಂಸ್ಥೆಯಲ್ಲಿ ಕೆಲಸ ಮಾಡುತ್ತಿದ್ದ ಸುರೇಶ್ ಕೆಲಸ ಮುಗಿಸಿ ಬೈಕ್‌ನಲ್ಲಿ ಮನೆಗೆ ಮರಳುತ್ತಿದ್ದಾಗ ನಿಯಂತ್ರಣ ತಪ್ಪಿ ರಸ್ತೆಯಲ್ಲಿ ನಿಲ್ಲಿಸಿದ್ದ ಕಾರಿಗೆ ಡಿಕ್ಕಿ ಹೊಡೆದಿದ್ದಾರೆ. ಗಂಭೀರವಾಗಿ ಗಾಯಗೊಂಡಿದ್ದ ಅವರು ಆಸ್ಪತ್ರೆಗೆ ಸಾಗಿಸುವ ಮಾರ್ಗಮಧ್ಯೆ ಮೃತಪಟ್ಟಿದ್ದಾರೆ. ಮೂಲತಃ ಬೇತಮಂಗಲದವರಾದ ಅವರು ಪುಟ್ಟೇನಹಳ್ಳಿಯಲ್ಲಿ ವಾಸವಾಗಿದ್ದರು.

ಚಿಕಿತ್ಸೆ ಫಲಿಸದೇ ಸಾವು:

ಗಣೇಶ್ ಕುಮಾರ್ (19) ಚಲಾಯಿಸುತ್ತಿದ್ದ ವಾಹನ ಮುಂದೆ ಸಾಗುತ್ತಿದ್ದ ಮತ್ತೊಂದು ವಾಹನಕ್ಕೆ ಹಿಂಬದಿಯಿಂದ ಡಿಕ್ಕಿ ಹೊಡೆದಿದೆ. ಗಂಭೀರವಾಗಿ ಗಾಯಗೊಂಡಿದ್ದ ಅವರನ್ನು ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಿದರೂ ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದ್ದಾರೆ. ಅವರು ಎಲೆಕ್ಟ್ರಾನಿಕ್ ಸಿಟಿ ನಿವಾಸಿಯಾಗಿದ್ದರು.

ಭಾನುವಾರ ರಾತ್ರಿ 7:30 ಸುಮಾರಿಗೆ ಕ್ಯಾಬ್ ಡ್ರೈವರ್ ದೇವರಾಜ್ ಮತ್ತು ಹಿಂಬದಿ ಸವಾರ ದ್ವಿಚಕ್ರ ವಾಹನದಲ್ಲಿ ಅನ್ನಪೂರ್ಣೇಶ್ವರಿ ನಗರ ಮುಖ್ಯರಸ್ತೆಯ ಐಸಿಐಸಿಐ ಬ್ಯಾಂಕ್ ಮುಂಭಾಗ ಹೋಗುತ್ತಿದ್ದಾಗ ಟಿಪ್ಪರ್ ಲಾರಿ ಡಿಕ್ಕಿ ಹೊಡೆದ ಪರಿಣಾಮ ಚಾಲಕ ದೇವರಾಜ್ ಮೃತಪಟ್ಟಿರುತ್ತಾನೆ. ಹಿಂಬದಿ ಸವಾರನಿಗೆ ಸಣ್ಣಪುಟ್ಟ ಗಾಯಗಳಾಗಿರುತ್ತದೆ, ಜ್ಞಾನಭಾರತಿ ಸಂಚಾರ ಪೊಲೀಸ್ ಠಾಣೆಯಲ್ಲಿ ಟಿಪ್ಪರ್ ಲಾರಿ ಚಾಲಕನ ವಿರುದ್ಧ ಪ್ರಕರಣ ದಾಖಲಾಗಿದೆ.

ಮತ್ತೊಂದು ಅಪಘಾತ ಪ್ರಕರಣ ಇಂದು ಬೆಳಿಗ್ಗೆ 7:30ರ ಸುಮಾರಿಗೆ ಹುಳಿಮಾವು ಸಂಚಾರಿ ಪೊಲೀಸ್ ಠಾಣ ವ್ಯಾಪ್ತಿಯ ಬಿಟಿಎಂ ಲೇಔಟ್ 16ನೇ ಮುಖ್ಯ ರಸ್ತೆಯಲ್ಲಿ ಮೋಟರ್ ಬೈಕ್ ಸವಾರ ಅತಿ ವೇಗವಾಗಿ ಚಲಾಯಿಸಿ ಆಯಾ ತಪ್ಪಿ ನೆಲಕ್ಕೆ ಬಿದ್ದು ಮೃತಪಟ್ಟಿದ್ದಾನರ. ಮೃತನ ಗುರುತು ಪತ್ತೆಯಾಗಿಲ್ಲ ಎನ್ನುವುದು ಪೊಲೀಸರ ಪರಿಶೀಲನೆಯಲ್ಲಿ ಪತ್ತೆಯಾಗಿದೆ.

ಐದು ಅಪಘಾತಗಳ ಸಂಬಂಧ ಎಚ್‌ಎಸ್‌ಆರ್ ಲೇಔಟ್, ಜೆಪಿ ನಗರ ತಲಘಟ್ಟಪುರ, ಜ್ಞಾನಭಾರತಿ, ಹುಳಿಮಾವು ಸಂಚಾರ ಠಾಣೆ ಪೊಲೀಸರು ಪ್ರತ್ಯೇಕ ಪ್ರಕರಣ ದಾಖಲಿಸಿಕೊಂಡು ತನಿಖೆ ಮುಂದುವರಿಸಿದ್ದಾರೆ.

ಸ್ಟಿಂಗ್ ಪ್ರಕರಣ: ಕೃಪಾ ಆಳ್ವ ಸೇರಿ ಮೂವರಿಗೆ ಜಾಮೀನು

ಬೆಂಗಳೂರು, ನ.2: ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಮಾಡಿದ್ದಾರೆ ಎನ್ನಲಾದ ಸ್ಟಿಂಗ್ ಆಪರೇಷನ್ ಪ್ರಕರಣ ಸಂಬಂಧ ಕಾಂಗ್ರೆಸ್?ನಿಂದ ಉಚ್ಚಾಟನೆಗೊಂಡಿರುವ ಕೃಪಾ ಆಳ್ವ ಸೇರಿ ಮೂವರಿಗೆ ನಗರದ 66ನೇ ಸಿಸಿಹೆಚ್ ನ್ಯಾಯಾಲಯ ಷರತ್ತುಬದ್ದ ಮಧ್ಯಂತರ ನಿರೀಕ್ಷಣಾ ಜಾಮೀನು ಮಂಜೂರು ಮಾಡಿದೆ.ಸ್ಟಿಂಗ್ ಆಪರೇಷನ್?ನಲ್ಲಿ ಭಾಗಿಯಾಗಿದ್ದಾರೆ ಎನ್ನಲಾದ ಕೃಪಾ ಆಳ್ವ, ಬಾಗೇಪಲ್ಲಿ ಪ್ರಶಾಂತ್ ಹಾಗೂ ವಿನೋದ್ ಶರ್ಮಾ ಎಂಬುವರು ನಿರೀಕ್ಷಣಾ ಜಾಮೀನು ಕೋರಿ ನ್ಯಾಯಾಲಯಕ್ಕೆ ಅರ್ಜಿ ಹಾಕಿದ್ದರು. ವಿಚಾರಣೆ ನಡೆಸಿದ ನ್ಯಾಯಾಲಯ, ಸೋಮವಾರ ಮೂವರ ಅರ್ಜಿಗಳನ್ನು ಪುರಸ್ಕರಿಸಿದೆ. ಇದರೊಂದಿಗೆ ಬಂಧನ ಭೀತಿಯಲ್ಲಿದ್ದ ಮೂವರಿಗೂ ಕೋರ್ಟ್ ಆದೇಶ ನಿರಾಳತೆ ಮೂಡಿಸಿದೆ.

ಹೆಲಿಕಾಪ್ಟರ್ ದುರಂತ: ಸ್ವಗ್ರಾಮಗಳಲ್ಲಿ ಮೃತ ಕನ್ನಡಿಗರ ಅಂತ್ಯಕ್ರಿಯೆ

ಬೆಂಗಳೂರು, ನ.2: ಉತ್ತರಾಖಂಡದ ಚಮೋಲಿ ಜಿಲ್ಲೆಯಲ್ಲಿ ಸಂಭವಿಸಿದ ಹೆಲಿಕಾಪ್ಟರ್ ದುರಂತದಲ್ಲಿ ಮೃತಪಟ್ಟ ಕನ್ನಡಿಗರ ಪಾರ್ಥಿವ ಶರೀರಗಳು ನಿನ್ನೆ ರಾತ್ರಿ ನಗರಕ್ಕೆ ಆಗಮಿಸಿದ್ದು, ಡಿಎನ್‌ಎ ಪರೀಕ್ಷೆ ಮೂಲಕ ಮೃತರ ಗುರುತು ಪತ್ತೆ ಹಚ್ಚಿ ಕುಟುಂಬಸ್ಥರಿಗೆ ಹಸ್ತಾಂತರ ಮಾಡಿದ ಪಾರ್ಥಿವ ಶರೀರಗಳ ಅಂತ್ಯಕ್ರಿಯೆಯು ಸ್ವಗ್ರಾಮಗಳಲ್ಲಿ ಇಂದು ನೇರವೇರಿತು.ಕಳೆದ ಅ.30ರಂದು ಬದರಿನಾಥದಿಂದ ಡೆಹ್ರಾಡೂನ್‌ಗೆ ತೆರಳುತ್ತಿದ್ದ ಟ್ರಾನ್ಸ್ ಭಾರತ್ ಏವಿಯೇಷನ್ ಸಂಸ್ಥೆಯ ಹೆಲಿಕಾಪ್ಟರ್ ಚಮೋಲಿ ಜಿಲ್ಲೆಯ ಹಾಥಿ ಪರ್ವತ ಪ್ರದೇಶದಲ್ಲಿ ಪತನಗೊಂಡಿತ್ತು. ಈ ದುರ್ಘಟನೆಯಲ್ಲಿ ಕರ್ನಾಟಕದ ಐವರು ಪ್ರಯಾಣಿಕರು ಹಾಗೂ ಓರ್ವ ಪೈಲಟ್ ಸೇರಿದಂತೆ ಒಟ್ಟು ಆರು ಮಂದಿ ಮೃತಪಟ್ಟಿದ್ದರು.


ಮೃತರಾದ ಸುಧೀರ್ ಕೆ. (50), ಶಂಕರ್ ಗೌಡ (39), ಹೆಚ್.ಎಸ್. ನಟರಾಜ್ (51), ಪ್ರತಾಪ್ ಗೌಡ (41) ಹಾಗೂ ಸಿಸಿಬಿ ಇನ್‌ಸ್ಪೆಕ್ಟರ್ ಅರುಣ್ ಸಾಲುಂಕೆ (44) ಅವರ ಪಾರ್ಥಿವ ಶರೀರಗಳನ್ನು ರಾಜ್ಯಕ್ಕೆ ತರಲಾಗಿದೆ. ದೆಹಲಿ ಮೂಲದ ಪೈಲಟ್ ಕ್ಯಾಪ್ಟನ್ ಹಿಮಾಂಶು ಸಭರ್ವಾಲ್ (48) ಕೂಡ ದುರಂತದಲ್ಲಿ ಮೃತಪಟ್ಟಿದ್ದಾರೆ. ಭಾನುವಾರ ರಾತ್ರಿ 7.50ಕ್ಕೆ ಡೆಹ್ರಾಡೂನ್‌ನ ಜಾಲಿ ಗ್ರಾಂಟ್ ವಿಮಾನ ನಿಲ್ದಾಣದಿಂದ ಹೊರಟ ವಿಮಾನ ರಾತ್ರಿ 10.50ಕ್ಕೆ ಬೆಂಗಳೂರಿನ ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದ ಟರ್ಮಿನಲ್–1ಕ್ಕೆ ತಲುಪಿದ್ದು, ಮೃತರ ಪಾರ್ಥಿವ ಶರೀರಗಳನ್ನು ಗೌರವಪೂರ್ವಕವಾಗಿ ಸ್ವಗ್ರಾಮಗಳಿಗೆ ತಲುಪಿಸಲಾಯಿತು.

ಸಿಸಿಬಿ ಇನ್‌ಸ್ಪೆಕ್ಟರ್ ಅರುಣ್ ಸಾಲುಂಕೆ ಅವರ ಪಾರ್ಥಿವ ಶರೀರವನ್ನು ಗೋವಾ ಮಾರ್ಗವಾಗಿ ಬೆಳಗಾವಿಗೆ ಕೊಂಡೊಯ್ದು ಸ್ವಗ್ರಾಮದಲ್ಲಿ ಅಂತ್ಯಕ್ರಿಯೆ ನಡೆಸಲಾಯಿತು.

ಸಮಗ್ರ ತನಿಖೆಗೆ ಆಗ್ರಹ:

ಹೆಲಿಕಾಪ್ಟರ್ ದುರಂತದ ಕುರಿತು ಸಮಗ್ರ ತನಿಖೆ ನಡೆಸಬೇಕು. ಭವಿಷ್ಯದಲ್ಲಿ ಇಂತಹ ಘಟನೆಗಳು ಮರುಕಳಿಸದಂತೆ ಯಾತ್ರಿಗಳ ಸುರಕ್ಷತೆಗೆ ಕಟ್ಟುನಿಟ್ಟಿನ ನಿಯಮಗಳನ್ನು ಜಾರಿಗೊಳಿಸಬೇಕು ಎಂದು ಕೇಂದ್ರ ಮತ್ತು ರಾಜ್ಯ ಸರ್ಕಾರಗಳನ್ನು ಸಂಸದ ಶ್ರೇಯಸ್ ಎಂ. ಪಟೇಲ್ ಒತ್ತಾಯಿಸಿದ್ದಾರೆ.

ಬಂಗಾಳಕೊಲ್ಲಿಯಲ್ಲಿ ಮತ್ತೊಂದು ಚಂಡಮಾರುತ: ರಾಜ್ಯದಲ್ಲಿ 4 ದಿನ ಮಳೆ ಮುನ್ಸೂಚನೆ



ಬೆಂಗಳೂರು, ನ.2: ಅರ್ನಬ್ ಚಂಡಮಾರುತದ ಬೆನ್ನಲ್ಲೇ ಬಂಗಾಳಕೊಲ್ಲಿಯಲ್ಲಿ ಮುರುಸು ಎಂಬ ಮತ್ತೊಂದು ಚಂಡಮಾರುತ ಉಂಟಾಗಿದ್ದು, ಇದರ ಪರಿಣಾಮ ರಾಜ್ಯದಲ್ಲಿ ಇನ್ನು ನಾಲ್ಕು ದಿನಗಳ ಕಾಲ ಮಳೆಯಾಗುವ ಮುನ್ಸೂಚನೆಗಳಿವೆ.ಇಂದಿನಿಂದ ಐದು ದಿನಗಳ ಕಾಲ ರಾಜ್ಯದಲ್ಲಿ ಮೋಡ ಕವಿದ ವಾತಾವರಣವಿದ್ದು ಸಂಜೆ ಮತ್ತು ರಾತ್ರಿ ವೇಳೆ ಹಲವೆಡೆ ಮಳೆಯಾಗುವ ಸಾಧ್ಯತೆಗಳಿವೆ.ಚಂಡಮಾರುತದ ಪರಿಣಾಮ ತಮಿಳುನಾಡು ಮತ್ತು ಆಂಧ್ರಪ್ರದೇಶದಲ್ಲಿ ಭಾರೀ ಮಳೆಯಾಗಲಿದ್ದು, ಕರ್ನಾಟಕದಲ್ಲಿ ಸಾಧಾರಣ ಮಳೆಯಾಗುವ ಮುನ್ಸೂಚನೆಗಳಿವೆ. ಇಂದು ಮಧ್ಯರಾತ್ರಿ ವೇಳೆಗೆ ಆಂಧ್ರಪ್ರದೇಶದ ಕರಾವಳಿಯನ್ನು ಚಂಡಮಾರುತ ತಲುಪುವ ನಿರೀಕ್ಷೆಯಿದ್ದು, ಅದರ ವೇಗ ಗಂಟೆಗೆ 100 ಕಿ.ಮೀ. ದಾಟುವ ನಿರೀಕ್ಷೆ ಇರುವುದರಿಂದ ಕರ್ನಾಟಕದಲ್ಲಿ ಮೋಡಕವಿದ ವಾತಾವರಣವಿದ್ದು, ಆಗಾಗ್ಗೆ ಬಲವಾದ ಮೇಲ್ಮೈ ಗಾಳಿ ಬೀಸಲಿದೆ.ಕೆಲವೆಡೆ ಹಗುರದಿಂದ ಸಾಧಾರಣ ಮಳೆಯಾಗಲಿದೆ. ಒಂದೆರೆಡು ಕಡೆ ಭಾರೀ ಮಳೆಯಾಗುವ ಮುನ್ಸೂಚನೆಗಳಿವೆ. ಕರಾವಳಿ ದಕ್ಷಿಣ ಒಳನಾಡಿನಲ್ಲಿ ಇಂದು ಮತ್ತು ನಾಳೆ ಮಳೆ ಪ್ರಮಾಣ ಹೆಚ್ಚಾಗುವ ಮುನ್ಸೂಚನೆಗಳಿವೆ. ನ.3 ಮತ್ತು 4 ರಂದು ಕಲ್ಯಾಣ ಕರ್ನಾಟಕ ಹಾಗೂ ಉತ್ತರ ಕರ್ನಾಟಕ ಹಲವೆಡೆ ಉತ್ತಮ ಮಳೆಯಾಗುವ ಮುನ್ಸೂಚನೆಗಳಿವೆ. ರಾಜಧಾನಿ ಬೆಂಗಳೂರು ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಭಾಗಶಃ ಮೋಡಕವಿದ ವಾತಾವರಣವಿರಲಿದ್ದು, ಸಂಜೆ ಮತ್ತು ರಾತ್ರಿ ಗುಡುಗು, ಮಿಂಚಿನಿಂದ ಕೂಡಿದ ಮಳೆಯಾಗುವ ಲಕ್ಷಣಗಳಿವೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

ಎಸ್‌ಐಆರ್ ಅಕ್ರಮದಲ್ಲಿ ಮೋದಿ, ಶಾ, ಸಿಇಸಿ ಭಾಗಿ: ಖರ್ಗೆ

ಕಲಬುರಗಿ, ನ.2: ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಅಕ್ರಮಗಳ ಪ್ರಕ್ರಿಯೆಯಲ್ಲಿ ಪ್ರಧಾನಿ ಮೋದಿ, ಅಮಿತ್ ಶಾ ಮತ್ತು ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರುಗಳೇ ಪ್ರಮುಖ ಆರೋಪಿಗಳಾಗಿದ್ದಾರೆ ಎಂದು ಗೃಹ, ಐಟಿ-ಬಿಟಿ ಹಾಗೂ ಇ-ಆಡಳಿತ ಸಚಿವ ಪ್ರಿಯಾಂಕ್ ಖರ್ಗೆ ಆರೋಪಿಸಿದರು.

ನಗರದ ಐವಾನ್-ಎ-ಶಾಹಿ ಅತಿಥಿಗೃಹದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಎಸ್‌ಐಆರ್ ಪ್ರಕ್ರಿಯೆಯಲ್ಲಿ ನಡೆದಿರುವ ಅಕ್ರಮಗಳ ಕುರಿತು ಕಾಂಗ್ರೆಸ್ ಕೇಳುತ್ತಿರುವ ಪ್ರಶ್ನೆಗಳಿಗೆ ಬಿಜೆಪಿ ನಾಯಕರು ಉತ್ತರಿಸುವ ಬದಲು ಚುನಾವಣಾ ಆಯೋಗವೇ ಸ್ಪಷ್ಟನೆ ನೀಡಬೇಕು. ಮತದಾರರ ಪಟ್ಟಿಯಿಂದ ಕೋಟ್ಯಂತರ ಮತದಾರರ ಹೆಸರುಗಳನ್ನು ಕೈಬಿಟ್ಟಿರುವ ಕುರಿತು ಪ್ರಶ್ನಿಸುವುದು ತಪ್ಪೇ ಎಂದು ಪ್ರಶ್ನಿಸಿದರು.

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹಾಗೂ ರಾಹುಲ್ ಗಾಂಧಿ ಅವರು ಮತದಾರರ ಪಟ್ಟಿ ಪರಿಷ್ಕರಣೆ ಕುರಿತು ಪ್ರಶ್ನೆಗಳನ್ನು ಎತ್ತಿದ್ದಾರೆ. ಆದರೆ ಬಿಜೆಪಿ ನಾಯಕರು ಉತ್ತರ ನೀಡುತ್ತಿದ್ದಾರೆಯೇ ಹೊರತು ಚುನಾವಣಾ ಆಯೋಗ ಮೌನವಾಗಿದೆ. ಕಾಂಗ್ರೆಸ್ ಯಾವುದೇ ವಿಷಯ ಪ್ರಸ್ತಾಪಿಸಿದರೂ ತಕ್ಷಣ ಪ್ರತಿಕ್ರಿಯಿಸುತ್ತಿದ್ದ ಚುನಾವಣಾ ಆಯೋಗ, ಕಳೆದ ಒಂದೂವರೆ ತಿಂಗಳಿನಿಂದ ಕೇಳಲಾಗುತ್ತಿರುವ ಪ್ರಶ್ನೆಗಳಿಗೆ ಉತ್ತರಿಸುತ್ತಿಲ್ಲ ಎಂದು ಟೀಕಿಸಿದರು.



ಕಲಬುರಗಿ ನಗರದ ಐವಾನ್ ಶಾಹಿ ಸರ್ಕಾರಿ ಅತಿಥಿ ಗೃಹದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಂಕ್ ಖರ್ಗೆ ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದರು.

ಸುಮಾರು 13.2 ಕೋಟಿ ಮತದಾರರನ್ನು ಯಾವುದೇ ಸಮರ್ಪಕ ಕಾರಣವಿಲ್ಲದೆ ಮತದಾರರ ಪಟ್ಟಿಯಿಂದ ಕೈಬಿಡಲಾಗಿದೆ. ಶೇ. 15ರಷ್ಟು ಮತದಾರರ ಹೆಸರುಗಳನ್ನು ತೆಗೆದು ಹಾಕಿರುವ ಕುರಿತು ಪ್ರಶ್ನಿಸುವುದು ತಪ್ಪೇ? ಚುನಾವಣಾ ಆಯೋಗದ ನಿರ್ಧಾರಗಳನ್ನು ಮೂವರು ಆಯುಕ್ತರು ಒಟ್ಟಾಗಿ ಕೈಗೊಳ್ಳಬೇಕಾದ ಸಂದರ್ಭದಲ್ಲಿ, ಇಬ್ಬರು ಲಿಖಿತವಾಗಿ ಆಕ್ಷೇಪಣೆ ಸಲ್ಲಿಸಿದ್ದರೂ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಏಕಪಕ್ಷೀಯವಾಗಿ ನಿರ್ಧಾರ ಕೈಗೊಂಡಿದ್ದೇಕೆ ಎಂದು ಪ್ರಶ್ನಿಸಿದರು.

ಮತದಾರರ ಪಟ್ಟಿಯಿಂದ ಹೆಸರುಗಳನ್ನು ತೆಗೆದುಹಾಕಲು ಫಾರ್ಮ್-7 ಅರ್ಜಿಗಳನ್ನು ದುರುಪಯೋಗಪಡಿಸಿಕೊಳ್ಳಲಾಗುತ್ತಿದೆ. ಕೆಲವು ಕಡೆಗಳಲ್ಲಿ ಬಿಜೆಪಿ ಮತ್ತು ಆರ್‌ಎಸ್‌ಎಸ್ ಕಾರ್ಯಕರ್ತರು ಅರ್ಜಿಗಳನ್ನು ಸಲ್ಲಿಸಿ ಮತದಾರರ ಹೆಸರುಗಳನ್ನು ತೆಗೆಸಲು ಪ್ರಯತ್ನಿಸಿದ್ದಾರೆ. ವಿಜಯಪುರದಲ್ಲಿ ಮೃತಪಟ್ಟಿದ್ದಾರೆ ಎಂದು ಸುಳ್ಳು ದೂರು ನೀಡಿರುವುದು ಹಾಗೂ ಚಿತ್ತಾಪುರದಲ್ಲಿ ಒಂದು ಸಮುದಾಯದ 40 ಜನರ ಹೆಸರುಗಳನ್ನು ಮತದಾರರ ಪಟ್ಟಿಯಿಂದ ಕೈಬಿಡಲು ಯತ್ನಿಸಿರುವ ಪ್ರಕರಣಗಳು ಬೆಳಕಿಗೆ ಬಂದಿವೆ ಎಂದು ಅವರು ಆರೋಪಿಸಿದರು.

ಬಿಜೆಪಿ ನಾಯಕರು ಈ ವಿಷಯದಲ್ಲಿ ಬೀದಿಗಿಳಿದು ಪ್ರತಿಭಟನೆ ನಡೆಸುತ್ತಿರುವುದನ್ನು ಉಲ್ಲೇಖಿಸಿದ ಅವರು, ಪಿಯೂಷ್ ಗೋಯಲ್ ಅವರು ಈ ಹಿಂದೆ ಬೀದಿಗೆ ಇಳಿದು ಪ್ರತಿಭಟನೆಗಳಲ್ಲಿ ಭಾಗವಹಿಸಿರುವ ಉದಾಹರಣೆ ಇಲ್ಲ. ಈಗ ಅವರು ಬೀದಿಗಿಳಿದಿರುವುದು ಎಲ್ಲವೂ ಬಹಿರಂಗವಾಗುತ್ತಿದೆ ಎನ್ನುವು ತೋರಿಸುತ್ತದೆ ಎಂದು ಟೀಕಿಸಿದರು.

ರೈತರ ಸಮಸ್ಯೆಗಳಿಗೆ ಸರ್ಕಾರ ಸ್ಪಂದನೆ

ಈ ವರ್ಷ ಮಳೆಯ ಪ್ರಮಾಣದಲ್ಲಿ ಕೊರತೆಯಾಗಿದ್ದು, ನದಿ ಹಾಗೂ ಜಲಮೂಲಗಳು ಬತ್ತಿಹೋಗಿವೆ. ಜಿಲ್ಲೆಯ 11 ತಾಲೂಕುಗಳು ಬರ ಘೋಷಣೆಯಾಗಿದ್ದು, ಗ್ರೌಂಡ್ ಟ್ರೂಥ್ ನಡೆಯುತ್ತಿದೆ. ಬೆಳೆ ನಷ್ಟದ ಕುರಿತು ಜಂಟಿ ಸಮೀಕ್ಷೆ ನಡೆಸಲಾಗುತ್ತಿದೆ. ಬೆಳೆ ವಿಮೆ ಮತ್ತು ಪರಿಹಾರ ವಿತರಣೆಗೆ ಸರ್ಕಾರ ಕ್ರಮ ಕೈಗೊಂಡಿದೆ ಎಂದು ತಿಳಿಸಿದರು.

ಕಬ್ಬು ಬೆಳೆಗಾರರ ಸಮಸ್ಯೆ ಕುರಿತು ಮಾತನಾಡಿದ ಅವರು, ಕಬ್ಬು ಬೆಳೆಗಾರರಿಗೆ ರಾಜ್ಯ ಸಲಹಾ ಬೆಲೆ (ಎಸ್‌ಎಪಿ) ನೀಡುವ ಪ್ರಕ್ರಿಯೆ ಇದೆ. ರೈತರ ಬೇಡಿಕೆಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆ. ಮುಖ್ಯಮಂತ್ರಿ ಅವರು ರೈತರೊಂದಿಗೆ ಚರ್ಚೆ ನಡೆಸಿದ್ದಾರೆ. ರೈತರ ಮೇಲೆ ಅನಗತ್ಯ ಒತ್ತಡ ಹೇರಬಾರದು ಎಂದು ಮನವಿ ಮಾಡಿದರು.

ವಂದೇಭಾರತ್ ಸ್ಲೀಪರ್ ರೈಲಿಗೆ ಕಲಬುರಗಿಯಲ್ಲಿ ಸಂಭ್ರಮದ ಸ್ವಾಗತ ಮುಗಿಲುಮುಟ್ಟಿದ ಜಯಕಾರ

ಕಲಬುರಗಿ, ನ.2: ಬೆಂಗಳೂರಿಂದ ಮುಂಬೈಗೆ ಹೊರಟ ದಕ್ಷಿಣ ಭಾರತದ ಮೊಟ್ಟ ಮೊದಲ ವಂದೇ ಭಾರತ್ ಸ್ಲೀಪರ್ ರೈಲಿಗೆ ಕಲಬುರಗಿಯಲ್ಲಿ



ಅಮಿತೋತ್ಸಾಹದಿಂದ ಸಂಭ್ರಮದ ಸ್ವಾಗತ ನೀಡಲಾಯಿತು. ರೈಲು ನಿಲ್ದಾಣದಲ್ಲಿ ಕಿಕ್ಕಿರಿದು ತುಂಬಿದ ಜನಸ್ತೋಮದ ಜಯಕಾರ ಮುಗಿಲುಮುಟ್ಟಿತ್ತು.

ಬೆಂಗಳೂರಿನಿಂದ ಭಾನುವಾರ ಮಧ್ಯಾಹ್ನ ರೈಲ್ವೆ ಖಾತೆಯ ಸಚಿವ ಅಶ್ವಿನಿ ವೈಷ್ಣವ್ ಮತ್ತು ರಾಜ್ಯ ಸಚಿವ ವಿ.ಸೋಮಣ್ಣ ಚಾಲನೆ ನೀಡಿದ ವಂದೇ ಭಾರತ ಸ್ಲೀಪರ್ ರೈಲು ರಾತ್ರಿ 9.30ಕ್ಕೆ ಕಲಬುರಗಿ ನಿಲ್ದಾಣ ಆಗಮಿಸುತ್ತಿದ್ದಂತೆ ಸೇರಿದ ಜನಸ್ತೋಮ ಕೇಂದ್ರ ಸರ್ಕಾರ ಹಾಗೂ ಪ್ರಧಾನಿ ಮೋದಿ ಅವರಿಗೆ ಜೈಕಾರ ಹಾಕಿ ಸಂತಸದಿಂದ ಕುಪ್ಪಳಿಸಿದರು. ಸುಮಾರು 10 ನಿಮಿಷಗಳ ಕಾಲ ತಂಗಿದ ಈ ರೈಲು ಗಾಡಿಗೆ ಮಾಜಿ ಸಂಸದ ಡಾ ಉಮೇಶ್ ಜಾಧವ್ ಹಸಿರು ನಿಶಾನೆ ತೋರಿಸಿ ಮುಂಬೈ ಕಡೆಗೆ ಬೀಳ್ಕೊಟ್ಟು ರೈಲು ಚಾಲಕ ಮತ್ತು ಸಿಬ್ಬಂದಿಗಳಿಗೆ ಹಾಗೂ ಪ್ರಯಾಣಿಕರಿಗೆ ಶುಭ ಕೋರಿದರು.

ಅಭಿವೃದ್ಧಿಗೆ ಸಾಕ್ಷಿಯಾಗದ ಪ್ರಿಯಾಂಕ್ ಖರ್ಗೆಗೆ ತಿರುಗೇಟು

ಕಲ್ಯಾಣ ಕರ್ನಾಟಕ ಭಾಗದ ಪ್ರಯಾಣಿಕರಿಗೆ ರಾಜ್ಯೋತ್ಸವದ ದಿನ ವರದಾನವಾದ ವಂದೇ ಭಾರತ್ ರೈಲು ಸಂಚಾರ ಐತಿಹಾಸಿಕ ಘಟನೆ ಯಾಗಿದ್ದು ಇಂತಹ ಅಭಿವೃದ್ಧಿ ಪರ ಕಾರ್ಯಕ್ರಮಕ್ಕೆ ಸಾಕ್ಷಿಯಾಗದ ಕಾಂಗ್ರೆಸ್ ಹಾಗೂ ಸಚಿವ ಪ್ರಿಯಾಂಕ ಖರ್ಗೆ ಅಭಿವೃದ್ಧಿ ಸಹಿಸದ ಸಚಿವರಾಗಿದ್ದಾರೆ. ಕಾಂಗ್ರೆಸ್ ನಾಯಕರು ಇಂತಹ ಕಾರ್ಯಕ್ರಮದಲ್ಲಿ ಭಾಗವಹಿಸಲು ಹಿಂದೇಟು ಹಾಕಿರುವುದು ಅವರ ಅಭಿವೃದ್ಧಿ ವಿರೋಧಿ ಮನಸ್ಸನ್ನು ತೋರಿಸುತ್ತದೆ ಎಂದು ನಂತರ ನಡೆದ ಕಾರ್ಯಕ್ರಮದಲ್ಲಿ ಸೇರಿದ ಜನರನ್ನುದ್ದೇಶಿಸಿ ಡಾ ಉಮೇಶ್ ಜಾಧವ್ ತಿರುಗೇಟು ನೀಡಿದರು. ಮೋದಿ ಅವರ ಅಭಿವೃದ್ಧಿ ಕಾರ್ಯಕ್ರಮಗಳನ್ನು ವಿರೋಧಿಸುವುದು ಕಾಂಗ್ರೆಸ್ಸಿನ ಜಾಯಮಾನ. ಕಲ್ಯಾಣ ಕರ್ನಾಟಕ ಭಾಗದ ಜನರಿಗೆ ಮೋದಿ ಅವರು ರಾಜ್ಯೋತ್ಸವದ ಶುಭದಿನದಂದು ನೀಡಿದ ಈ ವಿದೇಶ ಕೊಡುಗೆ ಕಾರ್ಯಕ್ರಮದಲ್ಲಿ ಭಾಗವಹಿಸದೆ ಕಾಂಗ್ರೆಸ್ ಈ ಭಾಗವನ್ನು



ಹಿಂದುಳಿಯು ವಂತೆ ಇಡುವ ಮನೋ ಧರ್ಮವಾಗಿದೆ. ಮೋದಿ ಆಡಳಿತದಲ್ಲಿ ಸಬ್ ಕಾ ಸಾತ್, ಸಬ್ ಕಾ ವಿಕಾಸ್ ಪರಿಕಲ್ಪನೆಯಲ್ಲಿ ಅಭಿವೃದ್ಧಿ ಹೊಂದುತ್ತಿದೆ. ಎಸ್ ಐ ಆರ್ ಚುನಾವಣಾ ಪ್ರಕ್ರಿಯೆ ಯನ್ನು ಕೇರಳ, ತಮಿಳು ನಾಡು ಪ್ರಶಂಸಿಸುತ್ತಿದ್ದರೆ ಕಾಂಗ್ರೆಸ್ ಮಾತ್ರ ವಿರೋಧ ಮಾಡಿ ಜನರ ಮುಂದೆ ತನ್ನ ಅಸಲಿ ಮುಖ ಬಯಲು ಮಾಡುತ್ತಿದೆ. ಬಿಜೆಪಿ 2028 ಮತ್ತು 2029 ರ ಚುನಾವಣೆಗಳಲ್ಲಿ ಭರ್ಜರಿ ಜಯ ಗಳಿಸಲು ಮೋದಿ ಅವರ ಅಭಿವೃದ್ಧಿ ವಿಚಾರಗಳನ್ನು ಜನರ ಮುಂದಿಡಬೇಕು ಎಂದು ಡಾ ಜಾಧವ್ ಕರೆ ನೀಡಿದರು.



ಬೀದರನ ಬ್ರಿಮ್ಸ್ ಆಸ್ಪತ್ರೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರು ರೋಗಿಗಳಿಗೆ ಪೌಷ್ಟಿಕ ಆಹಾರ ವಿತರಿಸುವ ಮೂಲಕ ಯೋಜನೆಗೆ ಚಾಲನೆ ನೀಡಿದರು.

2 ರೂ ಪೆಟ್ರೋಲ್ ಡಿಜೇಲ್ ದರ ಏರಿದಾಗ ಬೊಬ್ಬೆ

ಲೀಟರ್ ಹಾಲಿನ ದರ 12 ರೂ ಹೆಚ್ಚಿಸಿದರೂ ಬಾಯ್ಮುಚ್ಚಿಕೊಂಡಿರುವ ನಗರ ನಕ್ಸಲರು: ಎನ್ ರವಿಕುಮಾರ



ಬಿಜೆಪಿ ಮುಖ್ಯ ಸಚೇತಕ ಎನ್. ರವಿಕುಮಾರ

ಕಲಬುರಗಿ, ನ.2: ಕನ್ನಡ ರಾಜ್ಯೋತ್ಸವಕ್ಕೆ ಕೇಂದ್ರ ಸರ್ಕಾರ ಬೆಂಗಳೂರು-ಮುಂಬಯಿ ನಡುವೆ ಹೊಸ ವಂದೇ ಭಾರತ ಸ್ಲೀಪರ್ ರೈಲು ಆರಂಭಿಸಿದ್ದರೆ, ರಾಜ್ಯದ ಕಾಂಗ್ರೆಸ್ ಸರ್ಕಾರ ರೈತರ ಹೆಸರಿನಲ್ಲಿ ಹಾಲು ಮೊಸರಿನ ದರ ಏರಿಸುವ ಮೂಲಕ ಕೆಎಂಎಫ್ ಮುಚ್ಚಲು ಹೊರಟಿದ್ದಾರೆ. ಮಧ್ಯಪ್ರಾಚ್ಯ ಯುದ್ಧದಿಂದಾಗಿ ಪೆಟ್ರೋಲ್ ಡಿಜೇಲ್ ಬೆಲೆ ಹೆಚ್ಚಳವಾದಾಗ ಬೊಬ್ಬೆ ಹೊಡೆಯುವ ಕಾಂಗ್ರೆಸ್ ಮತ್ತು ನಗರ ದಿಮಾಗಿ ನಕ್ಸಲು ಹಾಲು-ಮೊಸರಿನ ಬೆಲೆ ಏರಿಕೆ ಬಗ್ಗೆ ಬಾಯ್ಮುಚ್ಚಿಕೊಂಡಿದ್ದಾರೆ. ಇವರೆಲ್ಲ ಕಾಂಗ್ರೆಸ್ ಹೊಗಳುಭಟರು ಎಂದು ವಿಧಾನಪರಿಷತ್ ಬಿಜೆಪಿ ಮುಖ್ಯ ಸಚೇತಕ ಎನ್.ರವಿಕುಮಾರ ಆರೋಪಿಸಿದರು. ನಗರದಲ್ಲಿ ಸುದ್ದಿಗರರೊಂದಿಗೆ ಮಾತನಡಿದ ಅವರು, ಕನ್ನಡ ರಾಜ್ಯೋತ್ಸವದ ಸಂಭ್ರಮದ ಸಂದರ್ಭದಲ್ಲಿ ರಾಜ್ಯದ ಜನತೆಗೆ ಸಿಹಿ ಸುದ್ದಿ ನೀಡಬೇಕಿದ್ದ ಕಾಂಗ್ರೆಸ್ ಸರ್ಕಾರ, ಹಾಲು-ಮೊಸರಿನ ದರ ಏರಿಕೆ ಮಾಡುವ ಮೂಲಕ ಕಹಿ ಸುದ್ದಿ ನೀಡಿದೆ ಎಂದು ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು.

ರಾಜ್ಯ ಸರ್ಕಾರ ಹಾಲಿನ ದರವನ್ನು ಪ್ರತಿ ಲೀಟರ್‌ಗೆ 8 ರೂ ಹೆಚ್ಚಿಸುವುದಾಗಿ ಹೇಳಿ ಈಗ 12 ರೂ ಹೆಚ್ಚಿಸಿದೆ. ಈಗಾಗಲೇ ಈ ಸರ್ಕರ ಅಧಿಕಾರಕ್ಕೆ ಬಂದ ಮೂರು ವರ್ಷಗಳಲ್ಲಿ ಐದನೇ ಬಾರಿ ಹಾಲಿನ ದರ ಏರಿಕೆ ಮಾಡಲಾಗಿದೆ. ಪ್ರತಿಯೊಂದು ಮನೆಯಲ್ಲೂ ದಿನದ ಆರಂಭವಾಗುವುದೇ ಹಾಲಿನಿಂದ. ಹೀಗಾಗಿ ಯಾವುದೇ ಕಾರಣಕ್ಕೂ ಹಾಲಿನ ದರ ಹೆಚ್ಚಿಸಬಾರದು. ಕೂಡಲೇ ದರ ಏರಿಕೆ ನಿರ್ಧಾರವನ್ನು ವಾಪಸ್ ಪಡೆಯಬೇಕು ಎಂದು ಆಗ್ರಹಿಸಿದರು.

ಕಾನೂನುಬಾಹಿರ ಚಟುವಟಿಕೆ ಕಂಡುಬಂದಲ್ಲಿ ಕಠಿಣ ಕ್ರಮ: ಸಚಿವ ಡಾ.ಅಜಯ್ ಸಿಂಗ್



ರಾಯಚೂರು, ನ. 2: ಜಿಲ್ಲೆಯಲ್ಲಿ ಯಾವುದೇ ರೀತಿಯ ಕಾನೂನುಬಾಹಿರ ಚಟುವಟಿಕೆ ಅಥವಾ ಅಪರಾಧಗಳು ಕಂಡುಬಂದಲ್ಲಿ ಅವುಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು. ರೈತರು ಹಾಗೂ ಸಾರ್ವಜನಿಕರ ಸುರಕ್ಷತೆ ಕಾಪಾಡಲು ಸರ್ಕಾರ ಬದ್ಧವಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಅಜಯ್ ಸಿಂಗ್ ಹೇಳಿದರು.

ನಗರದಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ನಗರದ ಸ್ಮಶಾನಗಳಲ್ಲಿ ಹೂತಿದ್ದ ಶವಗಳನ್ನು ಹೊರತೆಗೆದು ಮಾರಾಟ ಮಾಡಿರುವ ಪ್ರಕರಣವನ್ನು ಸಕಾರ ಗಂಭೀರವಾಗಿ ಪರಿಗಣಿಸಿದೆ. ಈಗಾಗಲೇ ಮೂವರನ್ನು ಬಂಧಿಸಲಾಗಿದ್ದು, ನವೋದಯ ವೈದ್ಯಕೀಯ ಕಾಲೇಜಿಗೆ ನೋಟಿಸ್ ಕೂಡ ಜಾರಿ ಮಾಡಲಾಗಿದೆ. ಪ್ರಕರಣದಲ್ಲಿ ತಪ್ಪಿತಸ್ಥರು ಯಾರೇ ಇದ್ದರೂ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಜಿಲ್ಲೆಯ ಎಲ್ಲ ತಾಲ್ಲೂಕುಗಳನ್ನು ಬರಪೀಡಿತ ಪ್ರದೇಶಗಳೆಂದು ಘೋಷಿಸಲಾಗಿದೆ. ಮುಂಗಾರು ಮಳೆ ಕೊರತೆಯಿಂದ ರೈತರು ಸಂಕಷ್ಟಕ್ಕೆ ಸಿಲುಕಿದ್ದು, ಬೆಳೆ ಸಮೀಕ್ಷೆ ಕಾರ್ಯ ಕೊನೆಯ ಹಂತದಲ್ಲಿದೆ. ರೈತರಿಗೆ ಅನುಕೂಲವಾಗುವಂತಹ ಕ್ರಮಗಳನ್ನು ಸರ್ಕಾರ ಕೈಗೊಳ್ಳಲಿದೆ. ಸಂಕಷ್ಟದ ಸಂದರ್ಭದಲ್ಲಿ ರೈತರ ನೆರವಿಗೆ ಸರ್ಕಾರ ಧಾವಿಸಲಿದೆ ಎಂದರು.

ರಾಜ್ಯದ ಯಾವುದೇ ತಾಲ್ಲೂಕಿನಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗದಂತೆ ಮುಖ್ಯಮಂತ್ರಿ ವಿಶೇಷ ಗಮನಹರಿಸಿದ್ದು, ಅಗತ್ಯ ಅನುದಾನ ಮೀಸಲಿಟ್ಟು ಕ್ರಮ ಕೈಗೊಳ್ಳುತ್ತಿದ್ದಾರೆ. ರಾಯಚೂರು ಜಿಲ್ಲೆಗೂ ಈಗಾಗಲೇ ಅನುದಾನ ಬಿಡುಗಡೆ ಮಾಡಲಾಗಿದೆ. ಹೆಚ್ಚುವರಿ ಅನುದಾನದ ಅಗತ್ಯವಿದ್ದಲ್ಲಿ ಸಂಬಂಧಪಟ್ಟ ಸಚಿವರೊಂದಿಗೆ ಚರ್ಚಿಸಿ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಯಿಂದ 100 ಕೋಟಿ, ಸಣ್ಣ ನೀರಾವರಿ ಇಲಾಖೆಯಿಂದ 100 ಕೋಟಿ ಹಾಗೂ ಗ್ರಾಮೀಣ ಅಭಿವೃದ್ಧಿ ಇಲಾಖೆಯಿಂದ 100 ಕೋಟಿ ಸೇರಿದಂತೆ ಒಟ್ಟು 300 ಕೋಟಿ ಅನುದಾನವನ್ನು ಅಂತರ್ಜಲ ಅಭಿವೃದ್ಧಿಗೆ ಒದಗಿಸಲಾಗುತ್ತಿದೆ. ಮುಂಬರುವ ತಿಂಗಳುಗಳಲ್ಲಿ ಈ ಅನುದಾನ ಬಳಸಿ ಕುಡಿಯುವ ನೀರಿನ ಸಮಸ್ಯೆ ಪರಿಹರಿಸುವ ಜೊತೆಗೆ ನೀರಾವರಿ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಹಾಲಿನ ಬೆಲೆಯನ್ನು 8 ರೂ ಹೆಚ್ಚಿಸಲಾಗಿದ್ದು, ಇದರಲ್ಲಿ 7 ರೂ ನೇರವಾಗಿ ರೈತರಿಗೆ ಹಾಗೂ 1 ಹಾಲು ಒಕ್ಕೂಟಕ್ಕೆ ದೊರೆಯಲಿದೆ. ಮಹಾರಾಷ್ಟ ಮತ್ತು ಆಂಧ್ರಪ್ರದೇಶಗಳಲ್ಲಿ ಹಾಲಿನ ಕನಿಷ್ಠ ಬೆಲೆ 59ರಿಂದ 60ರಷ್ಟಿದೆ. ರಾಜ್ಯದಲ್ಲಿಯೂ ರೈತರ ಹಿತಾಸಕ್ತಿ ಕಾಪಾಡುವ ಉದ್ದೇಶದಿಂದ ಬೆಲೆ ಹೆಚ್ಚಳದ ನಿರ್ಧಾರ ಕೈಗೊಳ್ಳಲಾಗಿದೆ ಎಂದು ಹೇಳಿದರು.

ಹಿಂದುಳಿದ ಜಾತಿಗಳ ಸಮಗ್ರ ಅಭಿವೃದ್ಧಿಗೆ ಮಧುಸೂದನ್ ನಾಯಕ್ ಆಯೋಗದ ವರದಿ ಜಾರಿ ಅಗತ್ಯ: ಸುನಿಲ್ ಕುಮಾರ್

ಮಾತೋಶ್ರೀ ದಾಕ್ಷಾಯಿಣಿ ಅವ್ವಾಜಿಗೆ ಅಕ್ಕಮ್ಮ ಪ್ರಶಸ್ತಿ: 20 ಸಾಧಕರಿಗೆ ಅಕ್ಕಮ್ಮ - ಮಾರಯ್ಯ ಪ್ರಶಸ್ತಿ ಪ್ರದಾನ





ಕಲಬುರಗಿ : ಸಮಾಜದ ಅತ್ಯಂತ ಹಿಂದುಳಿದ ಜಾತಿಗಳ ಸಮಗ್ರ ಕಲ್ಯಾಣಕ್ಕಾಗಿ ಮಧುಸೂಧನ್ ನಾಯಕ್ ವರದಿ ಬಹಿರಂಗ ಮಾಡಿ ಅನುಷ್ಠಾನಗೊಳಿಸಬೇಕು ಎಂದು ಬಿಜೆಪಿಯ ಮುಖಂಡರಾದ ಮಾಜಿ ಸಚಿವರು ಮತ್ತು ಶಾಸಕ ವಿ ಸುನಿಲ್ ಕುಮಾರ್ ಹೇಳಿದರು.

ಕಲಬುರಗಿಯ ಹೋಟೆಲ್ ಬೃಂದಾವನ ಗ್ರಾಂಡ್‌ನ ಬಲದೇವ್ ಬ್ಯಾಂಕ್ವೆಟ್ ಹಾಲ್‌ನಲ್ಲಿ ನವಂಬರ್ 2 ರಂದು ಬ್ರಹ್ಮಶ್ರೀ ನಾರಾಯಣ ಗುರು ಶಕ್ತಿಪೀಠ ಹಾಗೂ ರಾಷ್ಟ್ರೀಯ ಈಡಿಗ ಮಹಾಮಂಡಳಿಯ ವತಿಯಿಂದ ನಡೆದ ಶಿವಶರಣೆ ಈಡಿಗರ ಅಕ್ಕಮ್ಮ ಹಾಗೂ ಶರಣ ಹೆಂಡದ ಮಾರಯ್ಯ ಸ್ಮರಣೋತ್ಸವ,ಪ್ರಶಸ್ತಿ ಪ್ರದಾನ ಮತ್ತು ರಾಷ್ಟ್ರೀಯ ಈಡಿಗ ಮಹಾಮಂಡಳಿ ಕಲಬುರಗಿ ಜಿಲ್ಲಾ ಪದಾಧಿಕಾರಿಗಳ ಪದಗ್ರಹಣ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿ ಮಧುಸೂದನ್ ನಾಯಕ್ ವರದಿಯಲ್ಲಿ ನೀಡಿದ ಅಂಕಿ ಅಂಶದ ಪ್ರಕಾರ ಹಿಂದುಳಿದ ಜಾತಿಗಳಿಗೆ ಈ ಬಾರಿಯ ಬಜೆಟ್ಟಿನಲ್ಲಿ ಅನುದಾನವನ್ನು ನೀಡಿ ಸಮಗ್ರ ಅಭಿವೃದ್ಧಿ ಮಾಡಬೇಕು. ಈಡಿಗ ಜನಾಂಗದ 26 ಪಂಗಡಗಳು ಒಗ್ಗಟ್ಟಿನಿಂದ ಒಂದಾಗಿ ಆರ್ಥಿಕ ಸಾಮಾಜಿಕ ಶೈಕ್ಷಣಿಕ ಬೆಳವಣಿಗೆ ಹೊಂದಬೇಕು ಬ್ರಹ್ಮಶ್ರೀ ನಾರಾಯಣ ಗುರುಗಳು ಶಿಕ್ಷಣದಿಂದ ಸ್ವತಂತ್ರರಾಗಿರಿ, ಸಂಘಟನೆಯಿಂದ ಬಲಯುತರಾಗಿ ಎಂಬ ಸಂದೇಶವನ್ನು ನೀಡಿದರಲ್ಲದೆ ಶೂದ್ರರಿಗೆ ದೇವಸ್ಥಾನ ಪ್ರವೇಶವಿಲ್ಲದ ಕಾಲಘಟ್ಟದಲ್ಲಿ ಶೂದ್ರ ಶಿವನನ್ನು ಸ್ಥಾಪಿಸಿ ಧಾರ್ಮಿಕ ಸ್ವಾತಂತ್ರ್ಯವನ್ನು ನೀಡಿದರು. ಈಡಿಗ ಬಿಲ್ಲವ ಸೇರಿದಂತೆ ಸಮುದಾಯ ಶಿಕ್ಷಣ ಹೊಂದಿ ಐಎಎಸ್, ಐಪಿಎಸ್ ಮುಂತಾದ ಹುದ್ದೆಗಳಲ್ಲಿ ಬಂದು ಆಡಳಿತವನ್ನು ನಿರ್ವಹಿಸಲು ಮುಂದಾಗಬೇಕಾಗಿದೆ. ನಾರಾಯಣ ಗುರುಗಳ ಪರಿವರ್ತನೆಯ ಆಂದೋಲನ ಎಲ್ಲರಿಗೂ ಮಾದರಿಯಾಗಿದ್ದು ಉನ್ನತ ಶಿಕ್ಷಣವನ್ನು ಹೊಂದಿ ಸಮಾಜದಲ್ಲಿ ಬದಲಾವಣೆ ಹುಟ್ಟು ಹಾಕಬೇಕಾಗಿದೆ. ಜಾತಿಗಳು ಕೇವಲ ರಾಜಕೀಯ ಶಕ್ತಿಗಾಗಿ ಮಾತ್ರ ಒಗ್ಗಟ್ಟಾಗುವುದಲ್ಲ. ಬದಲಾಗಿ ಆರ್ಥಿಕ ಶೈಕ್ಷಣಿಕ, ಸಾಮಾಜಿಕ ಉನ್ನತಿಗಾಗಿ ಒಂದಾಗಿ ಮುನ್ನಡೆಯಬೇಕು. ಕರಾವಳಿಯಲ್ಲಿ ಕೋಟಿ ಚೆನ್ನಯರು ಅಸಮಾನತೆ ವಿರುದ್ಧ ಹೋರಾಡಿದ ಮಹಾನ್ ವ್ಯಕ್ತಿಗಳಾಗಿದ್ದು ಈ ಭಾಗಕ್ಕೆ ಅವರ ಪರಿಚಯವಿಲ್ಲ. ಹಾಗೆಯೆ ಶರಣ ಹೆಂಡದ ಮಾರಯ್ಯ ಮತ್ತು ಈಡಿಗರ ಅಕ್ಕಮ್ಮನ ಬಗ್ಗೆ ಆ ಭಾಗಕ್ಕೂ ಪರಿಚಯವಿಲ್ಲ. ಇಂತಹ ಮಹಾತ್ಮರ ಕೊಡುಗೆ ಬಗ್ಗೆ ತಿಳಿಸುವ ಜವಾಬ್ದಾರಿ ನಮ್ಮ ಮೇಲಿದೆ. ಈ ನಿಟ್ಟಿನಲ್ಲಿ ಈ ಕಾರ್ಯಕ್ರಮ ಮಹತ್ವದ್ದು ಎಂದರು.

ಈಡಿಗರ ಅಕ್ಕಮ್ಮ ಕೃತಿ ಅನಾವರಣ

12ನೇ ಶತಮಾನದ ಶಿವಶರಣೆ ಈಡಿಗರ ಅಕ್ಕಮ್ಮನ ಕುರಿತಾದ ಕೃತಿ ಈಡಿಗರ ಅಕ್ಕಮ್ಮನ ವಚನ ಬೆಳಕು ಕೃತಿಯನ್ನು ಅನಾವರಣ ಮಾಡಿದ ವಿಧಾನಪರಿಷತ್ ಸದಸ್ಯ ತಿಪ್ಪಣ್ಣಪ್ಪ ಕಮಕನೂರು ಮಾತನಾಡಿ ಸಮುದಾಯದ ಅಭಿವೃದ್ಧಿಗೆ ಎಲ್ಲರೂ ಒಗ್ಗಟ್ಟಾಗಬೇಕು ಮತ್ತು ಈಡಿಗ ಸಮುದಾಯವು ಸಮಾಜಕ್ಕೆ ಪ್ರೇರಣೆಯಾಗಿದ್ದು ಹಿಂದುಳಿದ ವರ್ಗಗಳ ಅಭಿವೃದ್ಧಿಗೆ ವೆಂಕಯ್ಯ ಗುತ್ತೇದಾರ್ ಆದರ್ಶ ಪಾಲಿಸಬೇಕಾಗಿದೆ ಈಡಿಗ ಸಮುದಾಯದ ಬಿಕೆ ಹರಿಪ್ರಸಾದ್, ಜನಾರ್ದನ ಪೂಜಾರಿ ಬಿಜೆಪಿಯ ಸುನಿಲ್ ಕುಮಾರ್ ಮುಂತಾದವರು ಅಪಾರ ಕೊಡುಗೆಯನ್ನು ನೀಡಿದ್ದಾರೆ. ಈಡಿಗರ ಆರ್ಥಿಕ ಸಾಮಾಜಿಕ ಶೈಕ್ಷಣಿಕ ಅಭಿವೃದ್ಧಿಯ ದೃಷ್ಟಿಯಿಂದ ಶೀಘ್ರದಲ್ಲೇ ಸುನಿಲ್ ಕುಮಾರ್ ನೇತೃತ್ವದಲ್ಲಿ ಮುಖ್ಯಮಂತ್ರಿಗಳನ್ನು ಭೇಟಿ ಮಾಡಿ ಸಮುದಾಯದ ಬೇಡಿಕೆಗಳನ್ನು ಈಡೇರಿಸಲು ಒತ್ತಾಯಿಸೋಣ ಎಂದು ಹೇಳಿದರು.

ಈಡಿಗ ಸಮಾಜ ರಕ್ಷಣೆ ನೀಡುವ ಸಮುದಾಯ

ಈಡಿಗ ಸಮಾಜವೆಂದರೆ ಅದು ರಕ್ಷಣೆ ನೀಡುವ ಸಮಾಜವಾಗಿದ್ದು ಬಂಗಾರಪ್ಪ, ಜನಾರ್ಧನ ಪೂಜಾರಿ, ಕಾಗೋಡು ತಿಮ್ಮಪ್ಪ ಮುಂತಾದ ನಾಯಕರನ್ನು ಕೊಟ್ಟ ಬಲು ದೊಡ್ಡ ಸಮಾಜವಾಗಿದೆ. ತಾನು ಲೋಕಸಭಾ ಚುನಾವಣೆಯಲ್ಲಿ ಗೆಲ್ಲಲು ಈಡಿಗ ಸಮುದಾಯದವರ ಕೊಡುಗೆ ಅಪಾರವಾಗಿದೆ. ಬಂಜಾರಾ ಮತ್ತು ಈಡಿಗ ಸಮುದಾಯ ಅಣ್ಣ- ತಮ್ಮರಿದ್ದಂತೆ. ನನಗೆ ಎಂಪಿ ಮಾಡಿದ ಈ ಸಮಾಜವನ್ನು ಖಂಡಿತಾ ಮರೆಯಲಾರೆ. ಈಡಿಗರ ಅಕ್ಕಮ್ಮ, ಶರಣ ಹೆಂಡದ ಮಾರಯ್ಯನವರ ಬಗ್ಗೆ ಇನ್ನಷ್ಟು ಅಧ್ಯಯನ ಕೈಗೊಳ್ಳಲು ಗುಲ್ಬರ್ಗ ವಿಶ್ವವಿದ್ಯಾಲಯದಲ್ಲಿ ಬ್ರಹ್ಮಶ್ರೀ ನಾರಾಯಣ ಗುರು ಅಧ್ಯಯನ ಪೀಠ ಆರಂಭಿಸುವುದು, ಸೂಕ್ತ.

ಡಾ.ಉಮೇಶ್ ಜಾಧವ್, ಲೋಕಸಭಾ ಮಾಜಿ ಸದಸ್ಯರು.

ಈಡಿಗ ನಾಯಕರನ್ನು ತುಳಿಯುವ ಪ್ರಯತ್ನ: ಎಚ್ಚರ ಅಗತ್ಯ

ಕಲ್ಯಾಣ ಕರ್ನಾಟಕ ಭಾಗದ ಈಡಿಗ ಸಮುದಾಯದವರು ಸೇಂದಿ ಕುಲಕಸುಬು ನಂಬಿ ಬದುಕಿದವರು ರಾಜ್ಯ ಸರ್ಕಾರವು ಸೇಂದಿ ಕಸುಬು ಆರಂಭಿಸಲು ಮಾಡಿಕೊಡಬೇಕು ರಾಜಕೀಯದಲ್ಲಿ ಸುನಿಲ್ ಕುಮಾರ್ ರಂತಹ ನಾಯಕರನ್ನು ತುಳಿಯುವ ಪ್ರಯತ್ನ ತೆರೆಮರೆಯಲ್ಲಿ ನಡೆಯುತ್ತಿದ್ದು ಎಲ್ಲರೂ ಒಗ್ಗಟ್ಟಾಗಿ ಎಚ್ಚರದಿಂದ ಇರಬೇಕಾಗಿದೆ. ಭವಿಷ್ಯದಲ್ಲಿ ಮುಖ್ಯಮಂತ್ರಿ ಆಗಬಲ್ಲ ಸಾಮರ್ಥ್ಯ ಹೊಂದಿದ ಹಿಂದುಳಿದ ವರ್ಗದ ನಾಯಕ ಸುನಿಲ್ ಕುಮಾರ್ ಅವರಿಗೆ ಸಮುದಾಯವು ಬೆನ್ನೆಲುಬಾಗಿ ನಿಲ್ಲಬೇಕಾಗಿದೆ. ಈಡಿಗ ಬಿಲ್ಲವ ಸೇರಿದಂತೆ 26 ಪಂಗಡಗಳ ವಿವಿಧ ಬೇಡಿಕೆಗಳನ್ನು ಈಡೇರಿಸುವುದಕ್ಕಾಗಿ ಮುಂದಿನ ಬಜೆಟ್‌ನಲ್ಲಿ ಗರಿಷ್ಠ ಅನುದಾನ ಘೋಷಿಸುವಂತೆ ಸುನಿಲ್ ಕುಮಾರ್, ತಿಪ್ಪಣ್ಣಪ್ಪ ಕಮಕನೂರು ಶ್ರಮಿಸಬೇಕು.

– ಡಾ.ಪ್ರಣವಾನಂದ ಸ್ವಾಮೀಜಿ, ಬ್ರಹ್ಮಶ್ರೀ ನಾರಾಯಣ ಗುರು ಶಕ್ತಿಪೀಠ, ಕರದಾಳ

ಉತ್ತಮ ಕೆಲಸ ಮುಂದುವರಿಕೆಗೆ ಉಡಿ ತುಂಬಿದ ಪ್ರಶಸ್ತಿ

ಈಡಿಗರ ಅಕ್ಕಮ್ಮ ಪ್ರಶಸ್ತಿಯನ್ನು ಪಡೆದ ನಂತರ ಶರಣಬಸವ ವಿಶ್ವವಿದ್ಯಾಲಯದ ಕುಲಾಧಿಪತಿ ಮಾತೋಶ್ರೀ ದಾಕ್ಷಾಯಿಣಿ ಅವ್ವಾಜಿ ಮಾತನಾಡಿ ಈ ಪ್ರಶಸ್ತಿಯು ಇನ್ನಷ್ಟು ಧಾರ್ಮಿಕ ಶೈಕ್ಷಣಿಕ ಕ್ಷೇತ್ರದಲ್ಲಿ ಉತ್ತಮ ಕೆಲಸ ಮಾಡಲು ಉಡಿ ತುಂಬಿದ ಹಾಗೆ ಆಗಿದೆ. ಚನ್ನಬಸವೇಶ್ವರ ಸಂಸ್ಥಾನದ ಮೇಲೆ ಅಪಾರಭಕ್ತಿಯನ್ನು ಇಟ್ಟುಕೊಂಡ ಡಾಕ್ಟರ್ ಪ್ರಣವಾನಂದ ಶ್ರೀಗಳ ಕೆಲಸ ಕಾರ್ಯವಾಗಿದ್ದು ಸಂಸ್ಥಾನದಿಂದ ಎಲ್ಲಾ ರೀತಿಯ ಸಹಕಾರ ಸದಾ ಇರುತ್ತದೆ ಎಂದು ಹೇಳಿದರು.

ಗುಂಪು ಬದಿಗಿಟ್ಟು ಒಗ್ಗಟ್ಟಾಗಿರಿ

ಸಮುದಾಯದ ಅಭಿವೃದ್ಧಿ ಆಗಬೇಕಾದರೆ ಗುಂಪುಗಾರಿಕೆಯನ್ನು ಬಿಟ್ಟು ಒಗ್ಗಟ್ಟಾಗಿ ದುಡಿದಾಗ ಮಾತ್ರ ಸಮುದಾಯಕ್ಕೆ ಶಕ್ತಿ ಬರುತ್ತದೆ. ಸಮಾಜದ ಬೇಡಿಕೆಗಳನ್ನು ಈಡೇರಿಸಿ ಇತರ ಸಮುದಾಯಗಳಂತೆ ಅಭಿವೃದ್ಧಿಯನ್ನು ಹೊಂದಲು ಸಾಧ್ಯ. ಅದಕ್ಕಾಗಿ ಪ್ರಣವಾನಂದ ಶ್ರೀಗಳ ಹೋರಾಟ ಮತ್ತು ಕಾರ್ಯಕ್ರಮಗಳು ಸಮಾಜದಲ್ಲಿ ಜಾಗೃತಿ ಮೂಡಿಸುತ್ತಿದೆ.

ಅವರ ಪಾದಯಾತ್ರೆ, ಹೋರಾಟಗಳಿಂದ ಸಮುದಾಯಕ್ಕೆ ಅನೇಕ ಒಳ್ಳೆಯ ಕೆಲಸಗಳಾಗಿದ್ದು ಹೆಂಡದ ಮಾರಯ್ಯ ಮತ್ತು ಈಡಿಗರ ಅಕ್ಕಮ್ಮನ ಸ್ಮರಣೋತ್ಸವದ ಮೂಲಕ ಸಮಾಜಕ್ಕೆ ಶರಣರ ಚಿಂತನೆಯನ್ನು ಪ್ರಸಾರ ಮಾಡುವ ಕಾರ್ಯ ಶ್ಲಾಘನೀಯವಾದುದು ಎಂದು ಮಾಜಿ ಸಚಿವರಾದ ಮಾಲೀಕಯ್ಯ ಗುತ್ತೇದಾರ್ ಹೇಳಿದರು.

ರಾಷ್ಟ್ರೀಯ ಈಡಿಗ ಮಹಾಮಂಡಳಿಯ ಕಲಬುರಗಿ ಜಿಲ್ಲಾಧ್ಯಕ್ಷರಾಗಿ ಸಂತೋಷ್ ವಾಡಿ ಹಾಗೂ ನೂತನ ಸಮಿತಿಯನ್ನು ರಚಿಸಿ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಡಾ.ಶಿವರಂಜನ್, ಸತ್ಯಂಪೇಟೆ ಶರಣ, ಹೆಂಡದ ಮಾರಯ್ಯನವರ ಬಗ್ಗೆ ಹಾಗೂ ಡಾ. ಸದಾನಂದ ಪೆರ್ಲ, ಶಿವಶರಣೆ ಈಡಿಗರ ಅಕ್ಕಮ್ಮ ಮತ್ತು ಬಾಗಲಕೋಟೆ ಬನಹಟ್ಟಿಯ ಶಿವ ಸಿಂಪಿ ಸಮಾಜದ ಮಹಾಂತ ದೇವರು 12ನೆಯ ಶತಮಾನದ ಅನುಭವ ಮಂಟಪದ ಶರಣರ ಕುರಿತಾಗಿ ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ಯುವ ಮುಖಂಡರಾದ ಚಂದುಪಾಟೀಲ್ ಶರಣು, ಅಲ್ಲಮಪ್ರಭು ಪಾಟೀಲ್, ರಾಷ್ಟ್ರೀಯ ಈಡಿಗ ಮಹಾಮಂಡಳಿಯ ಡಾ.ವಿ.ಎಚ್.ಮಂಚೇಗೌಡ, ತಿಪ್ಪೇಸ್ವಾಮಿ ಡಿ.ಆರ್. ಹನುಮಂತರಾಜು, ಸತೀಶ್ ಗುತ್ತೇದಾರ್, ಅಶೋಕ್ ಗುತ್ತೇದಾರ್ ಬಡದಾಳ,ಮಹಾದೇವ ಗುತ್ತೇದಾರ್ ವೆಂಕಟೇಶ ಗುಂಡಾನೂರ್, ಕುಪೇಂದ್ರ ಗುತ್ತೇದಾರ್ ನಾಗೂರ್, ಮಲ್ಲಿಕಾರ್ಜುನ್ ಆರ್ ಕುಕ್ಕುಂದಿ, ಬಿ.ಎಂ.ರಾವೂರ್, ಮಹೇಶ್ ಹೊಳಕುಂದ ಮತ್ತಿತರ ಅನೇಕರು ಉಪಸ್ಥಿತರಿದ್ದರು. ವಿವಿಧ ತಾಲೂಕುಗಳ ಮುಖಂಡರು ಭಾಗವಹಿಸಿದ್ದರು. ಶಾಲೆಯ ವಿದ್ಯಾರ್ಥಿಗಳು ಪ್ರಾರ್ಥನೆಗೀತೆ ನೆರವೇರಿಸಿದರು. ಶಿವರಾಜ್ ಗುತ್ತೇದಾರ ಜೇವರ್ಗಿ ಸ್ವಾಗತ ಕೋರಿದರು.

ಅಕ್ಕಮ್ಮ ಪ್ರಶಸ್ತಿ ಪುರಸ್ಕೃತರು

ಮಾತೋಶ್ರೀ ಡಾ. ದಾಕ್ಷಾಯಿಣಿ ಎಸ್. ಅಪ್ಪ (ಧಾರ್ಮಿಕ-ಶಿಕ್ಷಣ) ಮಂಜುಳಾ ಎಂ ಗೌಡ(ಶಿಕ್ಷಣ) ಅಮೂಲ್ಯ ಸಂಗಪ್ಪ ಶೆಟ್ಟಿ (ಶಿಕ್ಷಣ) ಶಿಫಾಲಿ ಅಜಯ್ ಗುತ್ತೇದಾರ್ (ವೈದ್ಯಕೀಯ) ವನಿತಾ ಚಂದ್ರಕಾಂತ್ ಗುತ್ತೇದಾರ್ (ಧಾರ್ಮಿಕ, ಶಿಕ್ಷಣ, ಯೋಗ,ಸಮಾಜ) ಸೇವೆ ಶ್ರೀಗೀತಾ ತಳವಾರ್(ಸಾಹಿತ್ಯ) ಕ್ಷೇತ್ರ ಕಾಶಿಬಾಯಿ (ಮಾಧ್ಯಮ) ಲಲಿತಾಬಾಯಿ ದಿ. ಸಿದ್ದಯ್ಯ ಗುತ್ತೇದಾರ್ ಯಳವಂತಗಿ (ಸಮಾಜಸೇವೆ -ಮರಣೋತ್ತರ).

ಶರಣ ಹೆಂಡದ ಮಾರಯ್ಯ ಪ್ರಶಸ್ತಿ ಪುರಸ್ಕೃತರು

ಕಾಶಿನಾಥ್ ಗುತ್ತೇದಾರ್ ಚಿತ್ತಾಪುರ (ಪತ್ರಿಕಾ ಕ್ಷೇತ್ರ)ಪ್ರವೀಣ ಶಿವಯ್ಯ ಗುತ್ತೇದಾರ್ (ಉದ್ಯಮ) ಅಶೋಕ್ ಗುತ್ತೇದಾರ್ ಭೀಮಳ್ಳಿ (ಸಮಾಜ ಸೇವೆ) ಮಹೇಶ್ ಮಹಾದೇವಪ್ಪ ಕಡೆಚೂರ್ (ಕಲಾ ಕ್ಷೇತ್ರ) ಶಂಕರ ಎಚ್ ಕಟ್ಟಳ್ಳಿ (ಹೋರಾಟಗಾರರು- ಮರಣೋತ್ತರ) ಕೃಷ್ಣಯ್ಯ ಗುತ್ತೇದಾರ ಆಳಂದ (ಸಮಾಜ ಸೇವೆ) ನಿಂಗಣ್ಣ ವಿಶ್ವಕರ್ಮ ಶಿಲ್ಪಿ ನಡುವಿನಹಳ್ಳಿ (ಶಿಲ್ಪಕಲಾ ಕ್ಷೇತ್ರ) ರುಕ್ಕಪ್ಪ ಕಾಂಪ್ಲೆ ಕಲಬುರಗಿ (ಸಮಾಜ ಸೇವೆ) ಈರಣ್ಣ ಹಡಪದ ಸಣ್ಣೂರ (ಸಮಾಜ ಸೇವೆ) ಬಸವರಾಜು ಎಮ್ ರಾವೂರ (ಸಂಶೋಧನಾ ಕ್ಷೇತ್ರ) ರವೀಂದ್ರ ಕೃಷ್ಣಯ್ಯ ಗುತ್ತೇದಾರ್ ಕಪನೂರ್ (ಹೋರಾಟಗಾರರು) ಶ್ರೀಶೈಲ್ ಮಲ್ಲಯ್ಯ ಗುತ್ತೇದಾರ ತೆಲ್ಲೂರ (ಸಂಗೀತ ಕ್ಷೇತ್ರ)

ಮಂಡ್ಯದಲ್ಲಿ ಎಆರ್‌ಎಐಗೆ 100 ಎಕರೆ ಜಮೀನು ಉಸ್ತುವಾರಿ ಸಚಿವರ ಹೇಳಿಕೆಗೆ ಸ್ಪಷ್ಟನೆ ಕೇಳಿದ ಸಂಸ್ಥೆ

ಮಂಡ್ಯ, ನ.2: ಮಂಡ್ಯದಲ್ಲಿ ಆಟೋಮೋಟಿವ್ ರಿಸರ್ಚ್ ಅಸೋಸಿಯೇಷನ್ ಆಫ್ ಇಂಡಿಯಾ (ಎಆರ್‌ಎಐ) ಸಂಸ್ಥೆಯ ಪರೀಕ್ಷಾ ಕೇಂದ್ರ ಸ್ಥಾಪನೆಗೆ 100 ಎಕರೆ ಜಮೀನು ನೀಡಲಾಗಿದೆ ಎಂಬ ಘೋಷಣೆ ಈಗ ವಿವಾದಕ್ಕೆ ಕಾರಣವಾಗಿದೆ. ಮುಖ್ಯಮಂತ್ರಿ ಸಮ್ಮುಖದಲ್ಲೇ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಅವರು ಭೂಮಿ ನೀಡಿರುವುದಾಗಿ ಸಾರ್ವಜನಿಕವಾಗಿ ಘೋಷಿಸಿದ್ದರೂ, ಈ ಕುರಿತು ಕೇಂದ್ರ ಸಚಿವಾಲಯ ಅಥವಾ ಸಂಸ್ಥೆಗೆ ಅಧಿಕೃತ ಮಾಹಿತಿ ಮತ್ತು ಮಂಜೂರಾತಿ ಆದೇಶ ತಲುಪಿಲ್ಲ ಎಂದಿದ್ದು, ಈ ವಿಚಾರವಾಗಿ ಕೇಂದ್ರದ ಭಾರೀ ಕೈಗಾರಿಕೆ ಮತ್ತು ಉಕ್ಕು ಸಚಿವಾಲಯವು ಮಂಡ್ಯ ಜಿಲ್ಲಾಡಳಿತಕ್ಕೆ ಪತ್ರ ಬರೆದು ಸ್ಪಷ್ಟನೆ ಕೇಳಿದೆ ಎನ್ನಲಾಗಿದೆ.

ಈ ಬೆಳವಣಿಗೆಯಿಂದ ಪರೀಕ್ಷಾ ಕೇಂದ್ರ ಸ್ಥಾಪನೆಗೆ ನಿಜವಾಗಿಯೂ 100 ಎಕರೆ ಜಮೀನು ಮಂಜೂರು ಮಾಡಿದ್ದರೆ ಅದರ ಅಧಿಕೃತ ಆದೇಶವನ್ನು ಸಾರ್ವಜನಿಕವಾಗಿ ಬಿಡುಗಡೆ ಮಾಡಬೇಕು ಎಂದು ರಾಜ್ಯ ಸರ್ಕಾರವನ್ನು ಒತ್ತಾಯಿಸಲಾಗಿದೆ. ಭೂಮಿ ನೀಡಿದ್ದರೆ ಕೇಂದ್ರ ಸಚಿವಾಲಯ ಹಾಗೂ ಸಂಬಂಧಪಟ್ಟ ಸಂಸ್ಥೆಗೆ ಮಾಹಿತಿ ತಲುಪದಿರುವುದಕ್ಕೆ ಕಾರಣವೇನು ಎಂಬುದನ್ನೂ ಸ್ಪಷ್ಟಪಡಿಸಬೇಕು ಎಂದು ಆಗ್ರಹಿಸಲಾಗಿದೆ.

ಆದರೆ, ಈ ಕುರಿತು ರಾಜ್ಯ ಸರ್ಕಾರ ಅಥವಾ ಮಂಡ್ಯ ಜಿಲ್ಲಾಡಳಿತದ ಅಧಿಕೃತ ಪ್ರತಿಕ್ರಿಯೆ ಲಭ್ಯವಾಗಿರುವುದಾಗಿ ನೀಡಿರುವ ಮಾಹಿತಿಯಲ್ಲಿ ಉಲ್ಲೇಖವಿಲ್ಲ. ಹೀಗಾಗಿ ಭೂಮಿ ಮಂಜೂರಾತಿಯ ವಾಸ್ತವ ಸ್ಥಿತಿ ಮತ್ತು ಎಆರ್‌ಎಐ ಪರೀಕ್ಷಾ ಕೇಂದ್ರ ಸ್ಥಾಪನೆಯ ಮುಂದಿನ ಪ್ರಕ್ರಿಯೆ ಕುರಿತು ಸರ್ಕಾರದ ಸ್ಪಷ್ಟನೆ ಮಹತ್ವ ಪಡೆದುಕೊಂಡಿದೆ.

ಬಿಐಟಿಎಂ ಕಾಲೇಜಿನಲ್ಲಿ ವಿಕಸಿತ ಭಾರತ ಯುವ ಸಂಸತ್ತು ಕಾರ್ಯಕ್ರಮ

ಒಂದು ರಾಷ್ಟ್ರ ಒಂದು ಚುನಾವಣೆ ಕುರಿತು ಯುವಜನರ ಚರ್ಚೆ



ಬಳ್ಳಾರಿ, ನ.02: ಕೇಂದ್ರ ಯುವ ವ್ಯವಹಾರ ಮತ್ತು ಕ್ರೀಡಾ ಸಚಿವಾಲಯದ ಮೇರಾ ಯುವ ಭಾರತ (ಮೈ ಭಾರತ) ಬಳ್ಳಾರಿ ಕೇಂದ್ರದ ಆಶ್ರಯದಲ್ಲಿ, ನಗರದ ಬಳ್ಳಾರಿ ಇನ್ಸಿ ಟ್ಯೂಟ್ ಆಫ್ ಟೆಕ್ನಾಲಜಿ ಮತ್ತು ಮ್ಯಾನೇಜ್ಮೆಂಟ್ ಕಾಲೇಜಿನಲ್ಲಿ ವಿಕಸಿತ ಭಾರತ ಯುವ ನಾಯಕರು ಸಂವಾದ-2047 ಅಂಗವಾಗಿ ಆಯೋಜಿಸಲಾಗಿದ್ದ ವಿಕಸಿತ ಭಾರತ ಯುವ ಸಂಸತ್ತು' ಕಾರ್ಯಕ್ರಮವು ಸೋಮವಾರ ನಡೆಯಿತು. ವಿವಿಧ ಕಾಲೇಜುಗಳ ವಿದ್ಯಾರ್ಥಿಗಳು ಭಾಗವಹಿಸಿದ್ದ ಈ ಸಮಾವೇಶದಲ್ಲಿ ಪ್ರಸ್ತುತ ರಾಷ್ಟ್ರೀಯ ಮಹತ್ವದ ವಿಷಯವಾದ ಒಂದು ರಾಷ್ಟ್ರ ಒಂದು ಚುನಾವಣೆ ಕುರಿತು ಯುವ ಸಂಸತ್ತು ಚರ್ಚಾ ಸ್ಪರ್ಧೆ ನಡೆಯಿತು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಬಿಐಟಿಎಂ ಇಸಿಇ ವಿಭಾಗದ ಮುಖ್ಯಸ್ಥ ಡಾ. ಸದ್ಯೋಜಾತ ಕೆ. ಎಂ. ಅವರು, ಭಾರತೀಯ ಪ್ರಜಾಪ್ರಭುತ್ವವನ್ನು ಸುದೃಢಗೊಳಿಸುವಲ್ಲಿ ಚುನಾವಣೆಗಳ ಪಾತ್ರ ಅಪಾರ. ಯುವಜನರು ಜವಾಬ್ದಾರಿಯುತ ಮತದಾನ ಹಾಗೂ ಚುನಾವಣಾ ಪ್ರಕ್ರಿಯೆಗಳ ಬಗ್ಗೆ ಸ್ಪಷ್ಟ ಅರಿವು ಬೆಳೆಸಿಕೊಳ್ಳಬೇಕು ಎಂದು ಕರೆ ನೀಡಿ, ಏಕಕಾಲದಲ್ಲಿ ಚುನಾವಣೆ ನಡೆಸುವ ಪರಿಕಲ್ಪನೆಯ ಕುರಿತು ವಿದ್ಯಾರ್ಥಿಗಳಿಗೆ ಮಾಹಿತಿ ನೀಡಿದರು.

ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕ ಡಾ. ಯು. ಶ್ರೀನಿವಾಸ ಮೂರ್ತಿ ಅವರು ಮಾತನಾಡಿ, ಒಂದು ರಾಷ್ಟ್ರ, ಒಂದು ಚುನಾವಣೆ ಪರಿಕಲ್ಪನೆಯಿಂದ ದೇಶದಲ್ಲಿ ಚುನಾವಣಾ ವೆಚ್ಚ ಗಣನೀಯವಾಗಿ ತಗ್ಗಲಿದ್ದು, ಆಡಳಿತದಲ್ಲಿ ನಿರಂತರತೆ ಹಾಗೂ ಸ್ಥಿರತೆ ಸಾಧಿಸಲು ಸಾಧ್ಯವಾಗುತ್ತದೆ ಎಂದು ವಿವರಿಸಿದರು. ಇದೇ ಸಂದರ್ಭದಲ್ಲಿ ದೀಪಕ್ ಪಿ. ಅವರು ವಿದ್ಯಾರ್ಥಿಗಳಿಗೆ ಪ್ರತಿಜ್ಞಾವಿಧಿ ಬೋಧಿಸಿದರು.

ರಾಜ್ಯ ಮಟ್ಟಕ್ಕೆ ಮೂವರು ವಿದ್ಯಾರ್ಥಿಗಳ ಆಯ್ಕೆ:

ಸ್ಪರ್ಧೆಯಲ್ಲಿ ವಿದ್ಯಾರ್ಥಿಗಳು ವಿಷಯ ಪ್ರಸ್ತುತಿ, ಆಳವಾದ ಚಿಂತನೆ ಹಾಗೂ ಸ್ಪಷ್ಟ ಸಂವಹನದ ಮೂಲಕ ತಮ್ಮ ದೃಷ್ಟಿಕೋನಗಳನ್ನು ಮಂಡಿಸಿದರು. ತೀರ್ಪುಗಾರರ ಮೌಲ್ಯಮಾಪನದ ನಂತರ ವಿಜೇತರನ್ನು ಘೋಷಿಸಲಾಯಿತು.

ಪ್ರಥಮ ಬಹುಮಾನ: ಪಿ. ದೀಪಕ್ (ಕಿಷ್ಕಿಂದ ವಿಶ್ವವಿದ್ಯಾಲಯ)

ದ್ವಿತೀಯ ಬಹುಮಾನ: ಈರಣ್ಣ ಗೌಡ (ಬಿಬಿಸಿ, ಬಳ್ಳಾರಿ)

ತೃತೀಯ ಬಹುಮಾನ: ಹೆಚ್. ಧರಣಿ ಕುಮಾರ ಗೌಡ (ವೀರಶೈವ ಕಾಲೇಜು, ಬಳ್ಳಾರಿ)ಮೊದಲ ಮೂರು ಸ್ಥಾನ ಪಡೆದ ಈ ವಿದ್ಯಾರ್ಥಿಗಳು ಮುಂದಿನ ರಾಜ್ಯಮಟ್ಟದ ಯುವ ಸಂಸತ್ತು ಸ್ಪರ್ಧೆಯಲ್ಲಿ ಬಳ್ಳಾರಿ ಜಿಲ್ಲೆಯನ್ನು ಪ್ರತಿನಿಧಿಸಲಿದ್ದಾರೆ.

ಕಾರ್ಯಕ್ರಮದಲ್ಲಿ ಬಿಐಟಿಎಂ ಉಪಪ್ರಾಂಶುಪಾಲ ಡಾ. ಬಿ. ಎಸ್. ಖೇಣೇದ್, ಪ್ರೊ. ಡಿ. ಆರಾಧನಾ, ಬಸವರಾಜ ಬಿಸಲಹಳ್ಳಿ ಉಪಸ್ಥಿತರಿದ್ದು ತೀರ್ಪುಗಾರರಾಗಿ ಕಾರ್ಯನಿರ್ವಹಿಸಿದರು. ಡಾ. ನಾಗರಾಜ ಬಣಕಾರ ಸಮಗ್ರ ಕಾರ್ಯಕ್ರಮ ನಿರ್ವಹಿಸಿದರು.

ಸೌಜನ್ಯ ಅತ್ಯಾಚಾರ-ಕೊಲೆ ಪ್ರಕರಣ ಎಸ್‌ಐಟಿಯಿಂದ ಮರುತನಿಖೆ ಆರಂಭ

ಮಂಗಳೂರು, ನ.2: ಸೌಜನ್ಯ ಅತ್ಯಾಚಾರ ಮತ್ತು ಕೊಲೆ ಪ್ರಕರಣದ ಮರುತನಿಖೆಗೆ ರಾಜ್ಯ ಸರ್ಕಾರ ನೇಮಿಸಿರುವ ವಿಶೇಷ ತನಿಖಾ ತಂಡದ ನೂತನ ಮುಖ್ಯಸ್ಥರಾಗಿರುವ ಸಿಐಡಿ ಐಜಿಪಿ ಚೇತನ್ ಸಿಂಗ್ ರಾಥೋಡ್ ಅವರು ಮಂಗಳೂರಿನ ಎಸ್‌ಐಟಿ ಕಚೇರಿಗೆ ಸೋಮವಾರ ಆಗಮಿಸಿ ತನಿಖಾ ಪ್ರಕ್ರಿಯೆ ಕೈಗೆತ್ತಿಕೊಂಡಿದ್ದಾರೆ.

ಸುಪ್ರೀಂ ಕೋರ್ಟ್ ನಿರ್ದೇಶನದಂತೆ ಪ್ರಕರಣದ ಮರುತನಿಖೆಗೆ ರಾಜ್ಯ ಸರ್ಕಾರ ಈ ಹಿಂದೆ ಹಿರಿಯ ಪೊಲೀಸ್ ಅಧಿಕಾರಿ ಶಶಿಕುಮಾರ್ ಎನ್ ಅವರನ್ನು ಎಸ್‌ಐಟಿ ಮುಖ್ಯಸ್ಥರನ್ನಾಗಿ ನೇಮಿಸಿತ್ತು.

ವೈಯಕ್ತಿಕ ಕಾರಣಗಳಿಂದಾಗಿ ಅವರು ತಮ್ಮನ್ನು ತಂಡದಿಂದ ಮುಕ್ತಗೊಳಿಸುವಂತೆ ಸರ್ಕಾರಕ್ಕೆ ಮನವಿ ಮಾಡಿದ್ದರು. ಈ ಮನವಿಯನ್ನು ಸರ್ಕಾರ ಪುರಸ್ಕರಿಸಿ, ಬೆಂಗಳೂರು ಸಿಐಡಿ ವಿಭಾಗದ ಐಜಿಪಿ ಚೇತನ್ ಸಿಂಗ್ ರಾಥೋಡ್ ಅವರಿಗೆ ಎಸ್‌ಐಟಿ ನೇತೃತ್ವ ವಹಿಸಿದೆ.

ಎಸ್‌ಐಟಿ ಮುಖ್ಯಸ್ಥರಾಗಿ ಅಧಿಕಾರ ವಹಿಸಿಕೊಂಡಿರುವ ಚೇತನ್ ಸಿಂಗ್ ರಾಥೋಡ್ ಮಂಗಳೂರಿನ ಎಸ್‌ಐಟಿ ಕಚೇರಿಗೆ ಆಗಮಿಸಿದ್ದು, ತಂಡದ ಪ್ರಮುಖ ಸದಸ್ಯರಾದ ಹಿರಿಯ ಐಪಿಎಸ್ ಅಧಿಕಾರಿ ಸುಧೀರ್ ಕುಮಾರ್ ರೆಡ್ಡಿ ಹಾಗೂ ನಿಶಾ ಜೇಮ್ಸ್ ಅವರೊಂದಿಗೆ ಕಚೇರಿಯಲ್ಲಿ ತನಿಖೆಯ ಮುಂದಿನ ಹಂತಗಳು ಹಾಗೂ ಕಾರ್ಯತಂತ್ರಗಳ ಕುರಿತು ಮಹತ್ವದ ಸಮಾಲೋಚನೆ ನಡೆಸಿದ್ದಾರೆ.ಪ್ರಕರಣದ ಮರುತನಿಖೆ ಪ್ರಕ್ರಿಯೆಯನ್ನು ಎಸ್‌ಐಟಿ ಚುರುಕುಗೊಳಿಸಿದ ನಂತರ ಇಂದು ಮಧ್ಯಾಹ್ನ ಬಾಲಕಿಯ ತಾಯಿ ಹಾಗೂ ಕುಟುಂಬಸ್ಥರು ವಿಚಾರಣೆಗೆ ಎಸ್‌ಐಟಿ ಕಚೇರಿಗೆ ಆಗಮಿಸಿದರು. 12.30ರ ಸುಮಾರಿಗೆ ತಾಯಿ, ಕುಟುಂಬದ ನಿಕಟ ಸಂಬಂಧಿಗಳು ಎಸ್‌ಐಟಿ ಕಚೇರಿ ತಲುಪಿದರು.

ಬಳ್ಳಾರಿಯಲ್ಲಿ ಭಾರೀ ಲಾರಿಗಳ ಅಟ್ಟಹಾಸಕ್ಕೆ ಮೂರು ದಿನಗಳಲ್ಲಿ ಇಬ್ಬರು ಯುವಕರ ಬಲಿ!

ರೇಡಿಯೋ ಪಾರ್ಕ್ ಬಳಿ ಮೊದಲ ಸಾವು, ಈಗ ಎಪಿಎಂಸಿ ಮತ್ತೊಬ್ಬ ಯುವಕ ಸಾವು

ನಗರದಲ್ಲಿ ಭಾರೀ ವಾಹನಗಳ ಸಂಚಾರ ನಿಯಂತ್ರಿಸುವಲ್ಲಿ ಪೊಲೀಸ್ , ಅಧಿಕಾರಿಗಳ ವೈಫಲ್ಯ ಎದ್ದು ಕಾಣುತ್ತಿದೆ ? ಸಾರ್ವಜನಿಕರ ತೀವ್ರ ಆಕ್ರೋಶ





ಬಳ್ಳಾರಿ ನ 02. ನಗರದಲ್ಲಿ ಭಾರೀ ವಾಹನಗಳ ಅಟ್ಟಹಾಸಕ್ಕೆ ಅಮಾಯಕ ಯುವಕರ ಜೀವ ಬಲಿಯಾಗುತ್ತಿದ್ದು, ಕಳೆದ ಮೂರು ದಿನಗಳಲ್ಲಿ ಇಬ್ಬರು ಯುವಕರು ಭಾರೀ ಲಾರಿಗಳಿಂದ ಸಂಭವಿಸಿದ ಅಪಘಾತಗಳಲ್ಲಿ ಮೃತಪಟ್ಟಿರುವುದು ಸಾರ್ವಜನಿಕರಲ್ಲಿ ತೀವ್ರ ಆತಂಕ ಹಾಗೂ ಆಕ್ರೋಶಕ್ಕೆ ಕಾರಣವಾಗಿದೆ.

ಮೂರು ದಿನಗಳ ಹಿಂದೆ ಬಳ್ಳಾರಿಯ ರೇಡಿಯೋ ಪಾರ್ಕ್ ಬಳಿ ಭಾರೀ ಲಾರಿಯೊಂದು ಡಿಕ್ಕಿ ಹೊಡೆದ ಪರಿಣಾಮ ಯುವಕನೊಬ್ಬ ಮೃತಪಟ್ಟಿದ್ದ, ಇದೀಗ ಅದೇ ರೀತಿಯ ಮತ್ತೊಂದು ಭೀಕರ ಅಪಘಾತದಲ್ಲಿ ಮತ್ತೊಬ್ಬ ಯುವಕ ಎಪಿಎಂಸಿ ಗೇಟ್ ಬಳಿ ಪ್ರಾಣ ಕಳೆದುಕೊಂಡಿದ್ದಾನೆ.

ನಗರ ರಸ್ತೆಗಳಲ್ಲೇ ಭಾರೀ ವಾಹನಗಳ ಸಂಚಾರಕ್ಕೆ ನಿಯಂತ್ರಣವಿಲ್ಲದಂತಾಗಿದ್ದು, ಸಾರ್ವಜನಿಕರ ಜೀವಕ್ಕೆ ರಕ್ಷಣೆ ಇಲ್ಲದ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು, ನಗರದಲ್ಲಿ ಯಾವ ರಸ್ತೆಯಲ್ಲಿ ನೋಡಿದರೂ ಬರೀ ಗುಂಡಿಗಳು ಇದ್ದೂ ಅಪಘಾತಗಳಿಗೆ ಕಾರಣವಾಗುತ್ತಿವೆ ಎಂದು ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಮೂರು ದಿನಗಳಲ್ಲಿ ಇಬ್ಬರು ಯುವಕರು ಭಾರೀ ವಾಹನಗಳಿಗೆ ಬಲಿಯಾಗಿರುವ ಘಟನೆಗಳು ಬಳ್ಳಾರಿ ನಗರದಲ್ಲಿ ಸಂಚಾರ ವ್ಯವಸ್ಥೆಯ ಸ್ಥಿತಿಗತಿಯನ್ನು ಪ್ರಶ್ನಿಸುವಂತೆ ಮಾಡಿವೆ.

ಭಾರೀ ವಾಹನಗಳ ಸಂಚಾರವನ್ನು ನಿಯಂತ್ರಿಸುವ ಜವಾಬ್ದಾರಿ ಹೊಂದಿರುವ ಪೊಲೀಸ್ ಇಲಾಖೆ ಏನು ಮಾಡುತ್ತಿದೆ? ದೊಡ್ಡ ದೊಡ್ಡ ಅಧಿಕಾರಿಗಳು ಏನು ಮಾಡುತ್ತಿದ್ದಾರೆ, ನಗರದೊಳಗೆ 30ರಿಂದ 40 ಟನ್ ಭಾರ ಹೊತ್ತ ಲಾರಿಗಳು ರಾಜಾರೋಷವಾಗಿ ಪ್ರವೇಶಿಸಲು ಅವಕಾಶ ನೀಡುತ್ತಿರುವವರು ಯಾರು? ಗಡಿಭಾಗದ ಚೆಕ್ಪೋಸ್ಟ್‌ಗಳಲ್ಲಿ ತಪಾಸಣೆ ನಡೆಯುತ್ತಿದೆಯೇ ಅಥವಾ ಕೇವಲ ಹೆಸರಿಗಷ್ಟೇ ಚೆಕ್ಪೋಸ್ಟ್‌ಗಳಿವೆಯೇ ಎಂಬ ಪ್ರಶ್ನೆಗಳನ್ನು ಸಾರ್ವಜನಿಕರು ಎತ್ತಿದ್ದಾರೆ. ಈ ಘಟನೆಗಳು ಸಂಚಾರ ನಿಯಂತ್ರಣದಲ್ಲಿನ ಪೊಲೀಸ್ ಇಲಾಖೆಯ ವೈಫಲ್ಯದ ಬಗ್ಗೆ ಗಂಭೀರ ಪ್ರಶ್ನೆಗಳನ್ನು ಹುಟ್ಟುಹಾಕಿವೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಕೇವಲ ದ್ವಿಚಕ್ರ ವಾಹನ ಸವಾರರನ್ನು ತಡೆದು ಹೆಲ್ಮೆಟ್ ಹಾಕಿಲ್ಲ ಎಂದು ದಂಡ ವಿಧಿಸುವುದೇ ಪೊಲೀಸ್ ಇಲಾಖೆಯ ಕರ್ತವ್ಯವೇ? ಹೆಲ್ಮೆಟ್ ಧರಿಸದ ವಾಹನ ಸವಾರರ ಮೇಲೆ ದಂಡ ಹಾಕಲು ತೋರುವ ಆಸಕ್ತಿ, ಸಾರ್ವಜನಿಕರ ಜೀವಕ್ಕೆ ಅಪಾಯಕಾರಿಯಾಗಿ ಪರಿಣಮಿಸುತ್ತಿರುವ ಭಾರೀ ಲಾರಿಗಳ ವಿರುದ್ಧ ಕ್ರಮ ಕೈಗೊಳ್ಳುವಲ್ಲಿ ಏಕೆ ಕಾಣಿಸುತ್ತಿಲ್ಲ? 500ರಿಂದ 1,000 ರೂಪಾಯಿ ಬೆಲೆಯ ಹೆಲ್ಮೆಟ್ ಧರಿಸುವುದರಿಂದ 30ರಿಂದ 40 ಟನ್ ತೂಕದ ಲಾರಿಗಳಿಂದ ಸಂಭವಿಸುವ ಅಪಘಾತಗಳಲ್ಲಿ ಜೀವ ಉಳಿಯುತ್ತದೆ ಎಂಬ ಗ್ಯಾರಂಟಿ ಇದೆಯೇ? ಮೊದಲು ಭಾರೀ ವಾಹನಗಳ ಅಕ್ರಮ ಹಾಗೂ ನಿಯಮಬಾಹಿರ ಸಂಚಾರವನ್ನು ತಡೆಯಲಿ ಎಂದು ಸಾರ್ವಜನಿಕರು ಕಿಡಿಕಾರಿದ್ದಾರೆ.

ನಗರದೊಳಗೆ ಪ್ರವೇಶಿಸಬಾರದ ಭಾರೀ ವಾಹನಗಳನ್ನು ಯಾರು ಒಳಗೆ ಬಿಡುತ್ತಿದ್ದಾರೆ? 100ರಿಂದ 200 ರೂಪಾಯಿ ಪಡೆದು ಲಾರಿಗಳಿಗೆ ನಗರ ಪ್ರವೇಶಿಸಲು ಅವಕಾಶ ನೀಡಲಾಗುತ್ತಿದೆ ಎಂಬ ಸಾರ್ವಜನಿಕರ ಆರೋಪಗಳ ಬಗ್ಗೆಯೂ ಪೊಲೀಸ್ ಇಲಾಖೆ ಸಮಗ್ರ ತನಿಖೆ ನಡೆಸಬೇಕು. ಗಡಿಭಾಗದ ಚೆಕ್ಪೋಸ್ಟ್‌ಗಳಲ್ಲಿ ಕಟ್ಟುನಿಟ್ಟಿನ ತಪಾಸಣೆ ನಡೆಸಿ, ನಿಯಮ ಉಲ್ಲಂಘಿಸುವ ವಾಹನಗಳನ್ನು ತಡೆದು, ಸಂಬಂಧಪಟ್ಟವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು. ಸಾರ್ವಜನಿಕರ ಮೇಲೆ ದಂಡ ವಿಧಿಸುವ ಮೊದಲು ಪೊಲೀಸ್ ಇಲಾಖೆ ತನ್ನ ಜವಾಬ್ದಾರಿಯನ್ನು ಸಮರ್ಪಕವಾಗಿ ನಿರ್ವಹಿಸಬೇಕು ಎಂಬುದು ಜನರ ಆಗ್ರಹವಾಗಿದೆ.

ಬಳ್ಳಾರಿ ನಗರದಲ್ಲಿ ಎಲ್ಲಿಯೂ ಕೂಡ ಸೈಂಟಿಫಿಕ್ ಆಗಿ ಸ್ಪೀಡ್ ಬ್ರೇಕರ್ಸ್ ಅಳವಳಿಸಿಲ್ಲ ಎಂದು ಸಾರ್ವಜನಿಕರು ಆಗ್ರಹವನ್ನು ವ್ಯಕ್ತಪಡಿಸಿದ್ದಾರೆ.

ಇನ್ನೆಷ್ಟು ಯುವಕರ ಜೀವ ಬಲಿಯಾದರೆ ಪೊಲೀಸ್ ಇಲಾಖೆ, ಉನ್ನತ ದರ್ಜೆಯ ಅಧಿಕಾರಿಗಳು ಎಚ್ಚೆತ್ತುಕೊಳ್ಳುತ್ತಾರೆ? ಮೂರು ದಿನಗಳಲ್ಲಿ ಇಬ್ಬರು ಯುವಕರು ಭಾರೀ ಲಾರಿಗಳಿಂದ ಮೃತಪಟ್ಟಿರುವುದು ಸಾಮಾನ್ಯ ಸಂಗತಿಯಲ್ಲ.

ಕೇವಲ ದ್ವಿಚಕ್ರ ವಾಹನ ಸವಾರರ ಮೇಲೆ ದಂಡ ವಿಧಿಸುವುದನ್ನು ಬಿಟ್ಟು, ಇಂತಹ ಅಪಾಯಕಾರಿ ಭಾರೀ ವಾಹನಗಳನ್ನು ನಗರದೊಳಗೆ ಪ್ರವೇಶಿಸಲು ಅವಕಾಶ ನೀಡುತ್ತಿರುವವರು ಯಾರು ಎಂಬುದನ್ನು ಪತ್ತೆಹಚ್ಚಿ ಅವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು.

ಭಾರೀ ವಾಹನಗಳ ಸಂಚಾರಕ್ಕೆ ಕಟ್ಟುನಿಟ್ಟಿನ ನಿಯಂತ್ರಣ ಹೇರಬೇಕು. ಇಲ್ಲವಾದರೆ ಮುಂದಿನ ದಿನಗಳಲ್ಲಿ ಇನ್ನಷ್ಟು ಅಮಾಯಕರು ಬಲಿಯಾಗುವ ಅಪಾಯವಿದೆ. ಇಬ್ಬರು ಯುವಕರ ಸಾವಿನ ಘಟನೆಗಳು ಪೊಲೀಸ್ ಇಲಾಖೆಯ ಸಂಚಾರ ನಿಯಂತ್ರಣ ವ್ಯವಸ್ಥೆಯ ವೈಫಲ್ಯದ ಬಗ್ಗೆ ಸಾರ್ವಜನಿಕರಲ್ಲಿ ತೀವ್ರ ಅಸಮಾಧಾನ ಮೂಡಿಸಿದ್ದು, ಬಳ್ಳಾರಿ ಪೊಲೀಸ್ ಇಲಾಖೆಯು ತಕ್ಷಣ ಎಚ್ಚೆತ್ತುಕೊಳ್ಳಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ. ಪಡಿತರ ಲಾರಿಗಳು, ಗೂಡು ಶೆಡ್ ಲಾರಿ ಗಳ, ಕಾರಟಗಿ, ರಾಂಪುರ, ಮೂಲ ಗಳ ದಿಂದ ಬರುವ, ಮರಳು ಲಾರಿ ಗಳು, ಓವರ್ ಲೋಡ್ ಹಾಕುತ್ತಾರೆ. ಅಧಿಕಾರಿಗಳು ಯಾಕೆ ಬೇಕು, ಜಿಲ್ಲೆಗೆ ಸರ್ಕಾರದ ಹಣ ಪೋಲು ಮಾಡಲು,ಐಶಾರಾಮಿ, ಜೀವನ ಮಾಡಲು ಅಷ್ಟಕ್ಕೇ ಸೀಮಿತವೇ ಸಾರ್ವಜನಿಕರು ಆಗ್ರಹವನ್ನು ವ್ಯಕ್ತಪಡಿಸುತ್ತಿದ್ದಾರೆ.

ಮತದಾನದ ಹಕ್ಕಿನ ರಕ್ಷಣೆ ಎಲ್ಲರ ಜವಾಬ್ದಾರಿ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್



ದಾವಣಗೆರೆ/ನವದೆಹಲಿ, ನ.2: ಪ್ರಜಾಪ್ರಭುತ್ವದ ಮೌಲ್ಯಗಳನ್ನು ಎತ್ತಿಹಿಡಿಯಲು ಹಾಗೂ ಪ್ರತಿಯೊಬ್ಬ ಅರ್ಹ ನಾಗರಿಕನ ಮತದಾನದ ಹಕ್ಕನ್ನು ರಕ್ಷಿಸಲು ಸ್ವತಂತ್ರ, ನ್ಯಾಯಸಮ್ಮತ ಮತ್ತು ಪಾರದರ್ಶಕ ಚುನಾವಣಾ ವ್ಯವಸ್ಥೆ ಅತ್ಯಂತ ಅಗತ್ಯವಾಗಿದೆ ಎಂದು ದಾವಣಗೆರೆ ಲೋಕಸಭಾ ಕ್ಷೇತ್ರದ ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ ಅಭಿಪ್ರಾಯಪಟ್ಟರು.

ನವದೆಹಲಿಯ ಐತಿಹಾಸಿಕ ರಾಮಲೀಲಾ ಮೈದಾನದಲ್ಲಿ ಇಂಡಿಯಾ ಒಕ್ಕೂಟದ ವತಿಯಿಂದ ಆಯೋಜಿಸಿದ್ದ 'ಚಲೋ ದಿಲ್ಲಿ ವೋಟ್ ಬಚಾವೋ, ದೇಶ್ ಬಚಾವೋ' ಬೃಹತ್ ಸಮಾವೇಶದಲ್ಲಿ ಭಾಗವಹಿಸಿದ ನಂತರ ಮಾಧ್ಯಮಗಳೊಂದಿಗೆ ಅವರು ಮಾತನಾಡಿದರು.

ಮತದಾರರ ಪಟ್ಟಿಯ ಪರಿಷ್ಕರಣೆ, ಮತದಾನದ ಹಕ್ಕಿನ ರಕ್ಷಣೆ ಹಾಗೂ ಚುನಾವಣಾ ಪ್ರಕ್ರಿಯೆಯ ಪಾರದರ್ಶಕತೆ ಕುರಿತು ಸಮಾವೇಶದಲ್ಲಿ ಚರ್ಚಿಸಲಾಯಿತು. ಚುನಾವಣಾ ವ್ಯವಸ್ಥೆಯಲ್ಲಿನ ಲೋಪಗಳ ಕುರಿತು ವಿರೋಧ ಪಕ್ಷಗಳು ವ್ಯಕ್ತಪಡಿಸಿರುವ ಆತಂಕಗಳನ್ನು ನಿವಾರಿಸಿ, ಜನರ ವಿಶ್ವಾಸವನ್ನು ಕಾಪಾಡುವುದು ಅಗತ್ಯವಾಗಿದೆ ಎಂದು ಡಾ. ಪ್ರಭಾ ಮಲ್ಲಿಕಾರ್ಜುನ ತಿಳಿಸಿದರು.

ಕಳೆದ ಎರಡು ವರ್ಷಗಳಿಂದ ಮತದಾರರ ಹಕ್ಕುಗಳು ಹಾಗೂ ಚುನಾವಣಾ ವ್ಯವಸ್ಥೆಗೆ ಸಂಬಂಧಿಸಿದ ಹಲವು ವಿಚಾರಗಳು ಸಾರ್ವಜನಿಕ ಚರ್ಚೆಗೆ ಬಂದಿವೆ. ಪ್ರತಿಯೊಬ್ಬ ಅರ್ಹ ಮತದಾರನ ಹೆಸರನ್ನು ಮತದಾರರ ಪಟ್ಟಿಯಲ್ಲಿ ಸಮರ್ಪಕವಾಗಿ ದಾಖಲಿಸುವುದು ಹಾಗೂ ಮತದಾನದ ಹಕ್ಕನ್ನು ಖಚಿತಪಡಿಸುವುದು ಚುನಾವಣಾ ವ್ಯವಸ್ಥೆಯ ಪ್ರಮುಖ ಜವಾಬ್ದಾರಿಯಾಗಿದೆ ಎಂದು ಹೇಳಿದರು. ಚುನಾವಣೆಗಳು ಪ್ರಜಾಪ್ರಭುತ್ವದ ಮೂಲಾಧಾರವಾಗಿದ್ದು, ಮತದಾರರ ಪಟ್ಟಿಯಲ್ಲಿ ಲೋಪಗಳು ಉಂಟಾದರೆ ಜನರ ನೈಜ ಆಶಯಗಳನ್ನು ಪ್ರತಿಬಿಂಬಿಸುವ ಸರ್ಕಾರವನ್ನು ಆಯ್ಕೆ ಮಾಡುವ ಪ್ರಕ್ರಿಯೆಗೆ ಧಕ್ಕೆಯಾಗುವ ಆತಂಕವಿದೆ ಎಂದು ಅಭಿಪ್ರಾಯಪಟ್ಟರು. ಮತದಾನದ ಹಕ್ಕು ಪ್ರತಿಯೊಬ್ಬ ಅರ್ಹ ನಾಗರಿಕನ ಸಂವಿಧಾನಬದ್ಧ ಹಕ್ಕಾಗಿದೆ. ಆ ಹಕ್ಕಿನ ರಕ್ಷಣೆಯೊಂದಿಗೆ ಸ್ವತಂತ್ರ, ನ್ಯಾಯಸಮ್ಮತ ಹಾಗೂ ಪಾರದರ್ಶಕ ಚುನಾವಣಾ ವ್ಯವಸ್ಥೆಯನ್ನು ಕಾಪಾಡುವುದು ನಮ್ಮೆಲ್ಲರ ಸಾಮೂಹಿಕ ಜವಾಬ್ದಾರಿ ಎಂದು ಪ್ರಭಾ ಮಲ್ಲಿಕಾರ್ಜುನ ಹೇಳಿದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ರಾಷ್ಟ್ರೀಯ ನಾಯಕರು, ಕರ್ನಾಟಕದ ಕಾಂಗ್ರೆಸ್ ಸಂಸದರು, ಇಂಡಿಯಾ ಒಕ್ಕೂಟದ ವಿವಿಧ ಪಕ್ಷಗಳ ಮುಖಂಡರು, ಜನಪ್ರತಿನಿಧಿಗಳು ಹಾಗೂ ವಿವಿಧ ರಾಜ್ಯಗಳಿಂದ ಆಗಮಿಸಿದ್ದರು

ನ.11ರವರೆಗೆ ಮಾತ್ರ ಹಾಸನಾಂಬೆ ದರ್ಶನ



ಹಾಸನ, ನ.2: ವರ್ಷಕ್ಕೊಮ್ಮೆ ದರ್ಶನ ಕರುಣಿಸುವ ಹಾಸನದ ಹಾಸನಾಂಬ ದೇವಾಲಯದ ಬಾಗಿಲು ತೆರೆದಿದ್ದು, ಕಳೆದ ನಾಲ್ಕು ದಿನಗಳಿಂದ ಭಕ್ತರು ಸಾಗರೋಪಾದಿಯಲ್ಲಿ ಬಂದು ತಾಯಿ ದರ್ಶನ ಪಡೆದುಕೊಳ್ಳುತ್ತಿದ್ದಾರೆ. ನವೆಂಬರ್ 11ರವರೆಗೆ ಮಾತ್ರ ದರ್ಶನಕ್ಕೆ ಅವಕಾಶ ಇರುವುದರಿಂದ ಕರ್ನಾಟಕದ ಮೂಲೆಮೂಲೆಗಳಿಂದ ಭಕ್ತರು ಹಾಸನಾಂಬೆ ದರ್ಶನಕ್ಕೆ ಆಗಮಿಸುತ್ತಿದ್ದಾರೆ. ನಾಲ್ಕು ದಿನದಲ್ಲಿ ಎಂಟು ಲಕ್ಷಕ್ಕೂ ಹೆಚ್ಚು ಭಕ್ತರು ಹಾಸನಾಂಬೆ ದರ್ಶನ ಪಡೆದುಕೊಂಡಿದ್ದಾರೆ. ಇನ್ನು ದರ್ಶನ ಹಾಗೂ ಲಾಡು ಮಾರಾಟದಿಂದ 6.5 ಕೋಟಿ ಆದಾಯ ಸಂಗ್ರಹವಾಗಿದೆ. ಇದರೊಂದಿಗೆ ದರ್ಶನ ಹಾಗೂ ಆದಾಯದಲ್ಲೂ ದಾಖಲೆ.

ಇನ್ನು ಈ ಬಗ್ಗೆ ಹಾಸನ ಜಿಲ್ಲಾ ಉಸ್ತುವಾರಿ ಸಚಿವ ಶಿವಲಿಂಗೇಗೌಡ ಮಾತನಾಡಿದ್ದು, ನಾಲ್ಕನೇ ದಿನದ ದರ್ಶನ ದರ್ಶನದ ನಡುವೆ ಎಂಟು ಲಕ್ಷಕ್ಕೂ ಅಧಿಕ ಭಕ್ತರಿಂದ ಹಾಸನಾಂಬೆ ದರ್ಶನ ಮಾಡಿದ್ದಾರೆ. ಭಕ್ತರ ದರ್ಶನ, ಆದಾಯಗಳಿಕೆಯಲ್ಲೂ ದಾಖಲೆ ಎಂದರು.ನವೆಂಬರ್ 6ಕ್ಕೆ ಮಾಜಿ ಸಿಎಂ ಸಿದ್ದರಾಮಯ್ಯ, ನವೆಂಬರ್ 8ಕ್ಕೆ ಸಿಎಂ ಡಿ.ಕೆ.ಶಿವಕುಮಾರ್ ಹಾಸನಾಂಬೆ ದರ್ಶನಕ್ಕೆ ಆಗಮಿಸುತ್ತಿದ್ದಾರೆ. ಯಾರೇ ಗಣ್ಯರು ಬಂದರೂ ಅವರಿಗೆ ಮೀಸಲಾದ ಸಮಯದಲ್ಲೇ ಬರುತ್ತಾರೆ. ನೈವೇದ್ಯ ಸಮಯವನ್ನು ಕಡಿಮೆ ಮಾಡಿ ಭಕ್ತರ ದರ್ಶನಕ್ಕೆ ಆದ್ಯತೆ ನೀಡಲಾಗಿದೆ ಎಂದು ತಿಳಿಸಿದರು.

ಬಳ್ಳಾರಿಯಲ್ಲಿ ವಿಶಿಷ್ಟ ಗಾಂಧಾರಿ ವಿದ್ಯೆ ಸ್ಪರ್ಧೆ ಯಶಸ್ವಿ



ಬಳ್ಳಾರಿ, ನ.02. ಮಕ್ಕಳಲ್ಲಿರುವ ವಿಶೇಷ ಪ್ರತಿಭೆ, ಏಕಾಗ್ರತೆ, ಸ್ಮರಣಶಕ್ತಿ, ಆತ್ಮವಿಶ್ವಾಸ ಹಾಗೂ ಸೂಕ್ಷ್ಮ ಗ್ರಹಣಶಕ್ತಿಯನ್ನು ಗುರುತಿಸಿ ಪ್ರೋತ್ಸಾಹಿಸುವ ಉದ್ದೇಶದಿಂದ ಶ್ರೀ ಮಹಾದೇವ ಶಿಕ್ಷಣ, ಕಲೆ ಹಾಗೂ ಸಾಂಸ್ಕೃತಿಕ ಸಂಸ್ಥೆ (ರಿ.), ಬಳ್ಳಾರಿ ವತಿಯಿಂದ ಬಳ್ಳಾರಿಯ ಕನ್ನಡ ಭವನದಲ್ಲಿ ಆಯೋಜಿಸಲಾಗಿದ್ದ ಗಾಂಧಾರಿ ವಿದ್ಯೆ ಸ್ಪರ್ಧೆ-2026 ಕಾರ್ಯಕ್ರಮ ಯಶಸ್ವಿಯಾಗಿ ನೆರವೇರಿತು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಆರ್. ಪ್ರಭುಶೇಖರ ಗೌಡ, ಸಂಸ್ಥಾಪಕ ರಾಜ್ಯಾಧ್ಯಕ್ಷರು, ಅಖಿಲ ಕರ್ನಾಟಕ ವೀರಶೈವ ಲಿಂಗಾಯತ ಜಾಗತಿಕ ವೇದಿಕೆ, ಬೆಂಗಳೂರು, ಮಕ್ಕಳು ನಮ್ಮ ದೇಶದ ಭವಿಷ್ಯ. ಅವರಲ್ಲಿ ಅಡಗಿರುವ ಸಾಮರ್ಥ್ಯವನ್ನು ಗುರುತಿಸಿ, ಅದನ್ನು ಬೆಳೆಸಲು ಸೂಕ್ತ ಅವಕಾಶಗಳನ್ನು ಕಲ್ಪಿಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದು ತಿಳಿಸಿದರು. ಇಂದಿನ ಸ್ಪರ್ಧಾತ್ಮಕ ಜಗತ್ತಿನಲ್ಲಿ ಮಕ್ಕಳಿಗೆ ಪಠ್ಯಪುಸ್ತಕದ ಜ್ಞಾನದ ಜೊತೆಗೆ ಏಕಾಗ್ರತೆ, ಆತ್ಮವಿಶ್ವಾಸ, ಶಿಸ್ತು, ತಾಳ್ಮೆ ಹಾಗೂ ನಿರಂತರ ಪ್ರಯತ್ನದ ಮನೋಭಾವವೂ ಅಗತ್ಯವಾಗಿದೆ. ಇಂತಹ ಗುಣಗಳನ್ನು ಬೆಳೆಸುವ ಪ್ರಯತ್ನಗಳು ಮಕ್ಕಳ ಸರ್ವತೋಮುಖ ಬೆಳವಣಿಗೆಗೆ ಸಹಕಾರಿಯಾಗುತ್ತವೆ ಎಂದು ಹೇಳಿದರು.

ಯೋಗ ಹಾಗೂ ಗಾಂಧಾರಿ ವಿದ್ಯೆ ತರಬೇತುದಾರರಾದ ಶ್ರೀ ರಾಘವೇಂದ್ರ, ಎಸ್.ಆರ್.ಕೆ. ಯೋಗ ಕೇಂದ್ರ, ಕುರೇಕುಪ್ಪ ಮಾತನಾಡಿ, ಮಕ್ಕಳಲ್ಲಿ ಆತ್ಮವಿಶ್ವಾಸ ಮತ್ತು ಕಲಿಕೆಯ ಆಸಕ್ತಿಯನ್ನು ಬೆಳೆಸುವುದು ಅತ್ಯಂತ ಮುಖ್ಯವಾಗಿದೆ ಎಂದು ತಿಳಿಸಿದರು. ಮಕ್ಕಳಲ್ಲಿ ಅಡಗಿರುವ ಪ್ರತಿಭೆಯನ್ನು ಗುರುತಿಸಿ ಅದಕ್ಕೆ ಸೂಕ್ತ ಅವಕಾಶಗಳನ್ನು ಕಲ್ಪಿಸಿದಾಗ ಮಾತ್ರ ಅವರ ಸಾಮರ್ಥ್ಯ ಸಂಪೂರ್ಣವಾಗಿ ಅರಳಲು ಸಾಧ್ಯ ಎಂದರು. ಶಿಕ್ಷಣವೆಂದರೆ ಕೇವಲ ಅಂಕಗಳನ್ನು ಗಳಿಸುವುದಲ್ಲ; ಮಕ್ಕಳಲ್ಲಿ ಶಿಸ್ತು, ಏಕಾಗ್ರತೆ, ಆತ್ಮವಿಶ್ವಾಸ, ತಾಳ್ಮೆ ಹಾಗೂ ಉತ್ತಮ ಮೌಲ್ಯಗಳನ್ನು ಬೆಳೆಸುವ ಪ್ರಕ್ರಿಯೆಯಾಗಿದೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸಂಸ್ಥೆಯ ಗೌರವಾಧ್ಯಕ್ಷರಾದ ಶ್ರೀ ಬಸವರಾಜ್ ಬಿಸಲಹಳ್ಳಿ ಮಾತನಾಡಿ, ಗಾಂಧಾರಿ ವಿದ್ಯೆಯಂತಹ ತರಬೇತಿ ಹಾಗೂ ಸ್ಪರ್ಧೆಗಳು ಮಕ್ಕಳಿಗೆ ತಮ್ಮ ಸಾಮರ್ಥ್ಯವನ್ನು ಪರೀಕ್ಷಿಸಿಕೊಳ್ಳಲು ಮತ್ತು ಪ್ರದರ್ಶಿಸಲು ಉತ್ತಮ ಅವಕಾಶವನ್ನು ನೀಡುತ್ತವೆ ಎಂದು ತಿಳಿಸಿದರು. ಇಂತಹ ಕಾರ್ಯಕ್ರಮಗಳಲ್ಲಿ ಭಾಗವಹಿಸುವುದರಿಂದ ಮಕ್ಕಳು ಹೊಸ ಅನುಭವಗಳನ್ನು ಪಡೆಯುತ್ತಾರೆ, ತಮ್ಮ ಮೇಲಿನ ನಂಬಿಕೆಯನ್ನು ಬೆಳೆಸಿಕೊಳ್ಳುತ್ತಾರೆ ಹಾಗೂ ಸವಾಲುಗಳನ್ನು ಎದುರಿಸುವ ಮನೋಭಾವವನ್ನು ರೂಪಿಸಿಕೊಳ್ಳುತ್ತಾರೆ ಎಂದು ಹೇಳಿದರು.

ಸ್ಪರ್ಧೆಯಲ್ಲಿ ಭಾಗವಹಿಸಿದ ಮಕ್ಕಳ ಸಾಮರ್ಥ್ಯವನ್ನು ಗಮನಿಸಿ ಮೌಲ್ಯಮಾಪನ ನಡೆಸಲು ಶ್ರೀಮತಿ ಉಮಾ ಗಡಿಗಿ, ಗಾಂಧಾರಿ ವಿದ್ಯೆ ತರಬೇತುದಾರರು, ಸಂಡೂರು/ಬಳ್ಳಾರಿ ಹಾಗೂ ಕೆ. ಚಿದಂಬರ ರಾವ್, ಯೋಗ ಮತ್ತು ಗಾಂಧಾರಿ ವಿದ್ಯೆ ತರಬೇತುದಾರರು, ಶಂಕರಾಚಾರ್ಯ ಚೈತನ್ಯ ವೇದಿಕೆ, ಬಳ್ಳಾರಿ ಅವರು ಸ್ಪರ್ಧೆಯ ತೀರ್ಪುಗಾರರಾಗಿ ಕಾರ್ಯನಿರ್ವಹಿಸಿದರು.

ಸ್ಪರ್ಧೆಯಲ್ಲಿ 68 ಮಕ್ಕಳು ಹೆಚ್ಚಿನ ಉತ್ಸಾಹ ಮತ್ತು ಆತ್ಮವಿಶ್ವಾಸದಿಂದ ಭಾಗವಹಿಸಿದರು. ಮಕ್ಕಳ ಪ್ರತಿಭೆ ಮತ್ತು ಪ್ರಯತ್ನವನ್ನು ಗಮನಿಸಿ ವಿಜೇತರನ್ನು ಆಯ್ಕೆ ಮಾಡಲಾಯಿತು. ಫಲಿತಾಂಶ ಪ್ರಕಟಿಸಿದ ನಂತರ ವಿಜೇತರಿಗೆ ಬಹುಮಾನ, ಪ್ರಶಂಸಾ ಪತ್ರ ಹಾಗೂ ಪ್ರಮಾಣಪತ್ರಗಳನ್ನು ನೀಡಿ ಗೌರವಿಸಲಾಯಿತು. ಸ್ಪರ್ಧೆಯಲ್ಲಿ ಭಾಗವಹಿಸಿದ ಇತರ ಮಕ್ಕಳಿಗೂ ಪ್ರಮಾಣಪತ್ರಗಳನ್ನು ನೀಡಿ ಪ್ರೋತ್ಸಾಹಿಸಲಾಯಿತು.

ಹಿರಿಯರ ವಿಭಾಗದ ವಿಜೇತರು: ಪ್ರಥಮ: ತನುಷ್‌ರೆಡ್ಡಿ ಕೆ., **ದ್ವಿತೀಯ:** ಹಿಮಬಿಂದು, **ತೃತೀಯ:** ವೈಭವ ಎನ್.ಎಸ್.ಎಂ., ಸಮಾಧಾನಕರ ಬಹುಮಾನ: ಜೆ. ನಿಖಿಲ್, ಪ್ರತಿಭಾ ಕೆ. ಹಾಗೂ ಸಾಗರ್.

ಕಿರಿಯರ ವಿಭಾಗದ ವಿಜೇತರು: ಪ್ರಥಮ: ಆದ್ಯ, ದ್ವಿತೀಯ: ನಕ್ಷತ್ರ ಉದ್ಧರ, ತೃತೀಯ: ಸಿರಿನಂದನ, ಸಮಾಧಾನಕರ ಬಹುಮಾನ: ತೇಜಸ್, ನಿತೇಶ್ ಹಾಗೂ ಸೌಖ್ಯ.

ವಿಜೇತರಾದ ಎಲ್ಲಾ ಮಕ್ಕಳನ್ನು ಗಣ್ಯರು ಅಭಿನಂದಿಸಿ, ಅವರ ಮುಂದಿನ ಶೈಕ್ಷಣಿಕ ಹಾಗೂ ವೈಯಕ್ತಿಕ ಸಾಧನೆಗಳಿಗೆ ಶುಭ ಹಾರೈಸಿದರು. ಸ್ಪರ್ಧೆಯಲ್ಲಿ ಭಾಗವಹಿಸಿದ ಪ್ರತಿಯೊಬ್ಬ ಮಗುವಿನ ಪ್ರಯತ್ನವನ್ನು ಮೆಚ್ಚಿ ಪ್ರೋತ್ಸಾಹಿಸಲಾಯಿತು.

ಕಾರ್ಯಕ್ರಮದಲ್ಲಿ ಮಂಗಳಾ ಬಸವರಾಜ್, ಅಧ್ಯಕ್ಷರು, ಕೆ.ತಿಪ್ಪೇರುದ್ರಪ್ಪ, ಪ್ರಧಾನ ಕಾರ್ಯದರ್ಶಿ, ಸುಧೀಂದ್ರ ನಾಡಿಗಾರ್, ಕಾರ್ಯದರ್ಶಿ, ಕೋದಂಡರಾಮ, ಸಹ ಕಾರ್ಯದರ್ಶಿ ಹಾಗೂ ಸುಮಾ ನಾಡಿಗರ್, ಸಾಂಸ್ಕೃತಿಕ ಕಾರ್ಯದರ್ಶಿ ಉಪಸ್ಥಿತರಿದ್ದರು.

ಸಿ.ಕೆ. ಪ್ರಕಾಶ್, ಐಶ್ವರ್ಯ ಉದ್ದಾರ, ಡಾ. ಶಿವಶಾಂತಲ, ಸೌಮ್ಯ, ಹಾಗೂ ಗೀತಾಂಜಲಿ ಅವರು ಕಾರ್ಯಕ್ರಮವನ್ನು ನಿರ್ವಹಿಸಿದರು.

ಮಕ್ಕಳಲ್ಲಿರುವ ಪ್ರತಿಭೆಯನ್ನು ಗುರುತಿಸಿ, ಅವರ ಏಕಾಗ್ರತೆ, ಸ್ಮರಣಶಕ್ತಿ ಮತ್ತು ಆತ್ಮವಿಶ್ವಾಸವನ್ನು ಬೆಳೆಸುವ ಉದ್ದೇಶದಿಂದ ಆಯೋಜಿಸಲಾಗಿದ್ದ ಗಾಂಧಾರಿ ವಿದ್ಯೆ ಸ್ಪರ್ಧೆ-2026 ವಿಶಿಷ್ಟ ಕಾರ್ಯಕ್ರಮವು ಪೋಷಕರು, ಮಕ್ಕಳು ಹಾಗೂ ಸಾರ್ವಜನಿಕರಿಂದ ಉತ್ತಮ ಸ್ಪಂದನೆ ಪಡೆದು ಯಶಸ್ವಿಯಾಗಿ ನೆರವೇರಿತು.

ಬರಿದಾಗುತ್ತಿರುವ ಬೆಣ್ಣೆತೊರಾ ಜಲಾಶಯ: ಕಲಬುರಗಿಗೆ ಗಂಡೋರಿ ನಾಲಾ ನೀರು ಸರಬರಾಜು- ಡಿಸಿ ಇಕ್ರಮ್ ಶರೀಫ್

ಕಲಬುರಗಿ, ನ.2: ಈ ವರ್ಷದ ಮುಂಗಾರುಹಂಗಾಮಿನ ಮಳೆ ಬಾರದೇ ನಗರ ನೀರು ಪೂರೈಕೆಯ ಬೆಣ್ಣೆತೊರೆ ಜಲಾಶಯದಲ್ಲಿ ನೀರಿನ ಮಟ್ಟ ಗಣನೀಯವಾಗಿ ಕಡಿಮೆಯಾಗಿದ್ದು, ಗಂಡೋರಿ ನಾಲಾ ಜಲಾಶಯದಿಂದ ನೀರು ಹರಿಸಿ ಕಲಬುರಗಿ ನಗರಕ್ಕೆ ನೀರು ಒದಗಿಸಲಾಗುವುದು ಎಂದು ಜಿಲ್ಲಾಧಿಕಾರಿ ಇಕ್ರಮ್ ಶರೀಫ್ ಹೇಳಿದರು.

ಈ ಹಿನ್ನೆಲೆಯಲ್ಲಿ ಕಮಲಾಪುರ ತಾಲ್ಲೂಕಿನ ವಿವಿಧ ಕಾಮಗಾರಿ ಪರಿಶೀಲಿಸಿದ ಅವರು ನಂತರ ಗಂಡೋರಿ ನಾಲಾ ಜಲಾಶಯಕ್ಕೆ ಭೇಟಿ ನೀಡಿದ ಜಿಲ್ಲಾಧಿಕಾರಿಗಳು ಗಂಡೋರಿ ಜಲಾಶಯದಲ್ಲಿ ಸಾಕಷ್ಟು ನೀರಿನ ಸಂಗ್ರಹ ಇರುವುದರಿಂದ, ಅದನ್ನೇ ಬೆಣ್ಣೆತೊರಾಕ್ಕೆ ಹರಿಸಲು ಕ್ರಮ ಕೈಕೊಳ್ಳುವುದಾಗಿ ತಿಳಿಸಿದರು. ಬೆಣ್ಣೆತೊರೆ ಜಲಾಶಯದಿಂದ ಕಲಬುರಗಿಗೆ ನೀರು ಸರಬರಾಜಿನ ಕುರಿಕೋಟ ಬಳಿಯ ಜಾಕ್‌ವೆಲ್ ಬಳಿ ನೀರಿನ ಪ್ರಮಾಣ ಕುಸಿದಿದೆ. ಈ ಜಾಕ್‌ವೆಲ್‌ಗೆ ನೀರು ಸಿಗಬೇಕಾದರೆ. ಗಂಡೋರಿ ಜಲಾಶಯದಿಂದ ಬಲದಂಡೆ ಕಾಲುವೆಗೆ 0.25 ಟಿಎಂಸಿ ಅಡಿ ನೀರು ಹರಿಸಬೇಕು. ಕೆಲದಿನಗಳ ನಂತರ ನೀರು ಹರಿಸುವಂತೆ ಜಲಾಶಯದ ಸಹಾಯಕ ಎಂಜಿನಿಯರ್‌ಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ಕಮಲಾಪುರ ತಾಲ್ಲೂಕು ಆಸ್ಪತ್ರೆ ಕಟ್ಟಡ ಕಾಮಗಾರಿ ಪರಿಶೀಲಿಸಿದರು. ಆಸ್ಪತ್ರೆ ಕಟ್ಟಡ ಕಾಮಗಾರಿ ಕಳಪೆಯಾಗುತ್ತಿದೆ. ಸಹಾಯಕ ಎಂಜಿನಿಯರ್, ಕಾರ್ಯಪಾಲಕ ಎಂಜಿನಿಯರ್ ಅವರಿಗೆ ಅನೇಕ ಬಾರಿ ದೂರು ನೀಡಿದರೂ ಪರಿಶೀಲನೆ ಮಾಡಿಲ್ಲ ಎಂದು ಸಾರ್ವಜನಿಕರು ದೂರಿದರು. 'ದೂರುಗಳು ಬಹಳಷ್ಟು ಬರುತ್ತಿವೆ ಕಾಮಗಾರಿ ಗುಣಮಟ್ಟ ಕಾಯ್ದುಕೊಳ್ಳಿ, ಶೀಘ್ರ ಪೂರ್ಣಗೊಳಿಸುವಂತೆ' ಜಿಲ್ಲಾಧಿಕಾರಿ ಸೂಚಿಸಿದರು. ಜೀವಣಗಿ ಸೇತುವೆ ಕಾಮಗಾರಿ ವಿಳಂಬವಾಗಿದ್ದಕ್ಕೆ ಗುತ್ತಿಗೆದಾರರಿಗೆ ಜಿಲ್ಲಾಧಿಕಾರಿ ತರಾಟೆಗೆ ತೆಗೆದುಕೊಂಡರು. ಪ್ರಜಾಸೌಧ, ಲೋಕೋಪಯೋಗಿ ಕಚೇರಿ ಕಟ್ಟಡ, ಡಯಟ್ ಕಟ್ಟಡ, ಹಿಂದುಳಿದ ವರ್ಗ ವಸತಿ ನಿಲಯ, ಮಹಾಗಾಂವ ನಾಡಕಚೇರಿ, ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತಿತರ ಕಟ್ಟಡ ಕಾಮಗಾರಿ ಪರಿಶೀಲಿಸಿದರು.

ಕೆಂಪು ಬಾಳೆಹಣ್ಣಿನ ತೋಟಕ್ಕೆ ಭೇಟಿ: ಪಟ್ಟಣದ ರೈತ ಮಲ್ಲಿಕಾರ್ಜುನ ಗುರುಪಾದಪ್ಪ ಅವರ ತೋಟಕ್ಕೆ ಭೇಟಿ ನೀಡಿ ಕೆಂಬಾಳೆ ಬೆಳೆ ಪರಿಶೀಲಿಸಿದರು. ಕೆಂಬಾಳೆ ಕೃಷಿ ಪದ್ಧತಿ, ಬೇಕಾಗುವ ಪೋಷಕಾಂಶ, ನಿರ್ವಹಣೆಗೆ ತಗಲುವ ವೆಚ್ಚ, ಹಣ್ಣಿನಲ್ಲಿರುವ ಪೋಷಕಾಂಶಗಳ ಮಾಹಿತಿ ಪಡೆದರು.

ಯುದ್ಧವನ್ನು ಕೊನೆಗೊಳಿಸುವ ಒಪ್ಪಂದದ ವಿಷಯದಲ್ಲಿ ಚೆಂಡು ಈಗ ಅಮೆರಿಕದ ಅಂಗಳದಲ್ಲಿದೆ: ಇರಾನ್ ಸ್ಪಷ್ಟೋಕ್ತಿ

ತನ್ನ ವಿರುದ್ಧ ಅಮೆರಿಕ ಮತ್ತು ಇಸ್ರೇಲ್ ನಡೆಸುತ್ತಿರುವ ಆಕ್ರಮಣವನ್ನು ಶಾಶ್ವತವಾಗಿ ಕೊನೆಗೊಳಿಸಲು ಸಮಗ್ರ ಪ್ರಸ್ತಾವನೆಯೊಂದನ್ನು ಸಲ್ಲಿಸಿರುವುದಾಗಿ ಇರಾನ್ ಹೇಳಿದೆ. ಒಪ್ಪಂದ ಬೇಕೇ ಅಥವಾ ಸಂಘರ್ಷ ಬೇಕೇ ಎಂಬುದನ್ನು ನಿರ್ಧರಿಸುವ ಜವಾಬ್ದಾರಿ ಈಗ ಅಮೆರಿಕದ ಮೇಲಿದೆ ಎಂದು ಅದು ಪ್ರತಿಪಾದಿಸಿದೆ.



ಟೆಹ್ರಾನ್: ಕಾನೂನು ಮತ್ತು ಅಂತರರಾಷ್ಟ್ರೀಯ ವ್ಯವಹಾರಗಳ ಉಪ ವಿದೇಶಾಂಗ ಸಚಿವ ಕಾಜೆಮ್ ಗರೀಬಾಬಾದಿ ಅವರು, ದೇಶದ ವಿರುದ್ಧ ನಡೆಯುವ ಯಾವುದೇ ಹೊಸ ದಾಳಿಯನ್ನು ಬಲವಾಗಿ ಮತ್ತು ದೃಢವಾಗಿ ಎದುರಿಸಲು ಇರಾನ್ ಸಂಪೂರ್ಣವಾಗಿ ಸಿದ್ಧವಾಗಿದೆ; ಆದಾಗ್ಯೂ ಪ್ರಸ್ತುತ ಇರುವ ಸಮಸ್ಯೆಗಳನ್ನು ಪರಿಹರಿಸಲು ಹಿತಾಸಕ್ತಿ ಆಧಾರಿತ ರಾಜತಾಂತ್ರಿಕತೆಯನ್ನೂ ನಾವು ನಂಬುತ್ತೇವೆ ಎಂದು ಹೇಳಿದ್ದಾರೆ. ಯುಎಸ್ ಮತ್ತು ಇಸ್ರೇಲ್ ದಾಳಿಯಿಂದ ಆರಂಭವಾದ ಎಂಟು ತಿಂಗಳ ಯುದ್ಧವನ್ನು ಕೊನೆಗೊಳಿಸಲು ಯುಎಸ್ ಮತ್ತು ಇರಾನ್ ನಡುವೆ ಒಪ್ಪಂದ ಮಾಡಿಸಲು ಮಧ್ಯಸ್ಥಿಕೆದಾರರು ತಮ್ಮ ಪ್ರಯತ್ನವನ್ನು ಮುಂದುವರಿಸಿದ್ದಾರೆ. ಕತಾರ್ ನೇತೃತ್ವದಲ್ಲಿ ನಡೆದ ಮೂರು ಸತತ ದಿನಗಳ ಪರೋಕ್ಷ, ಮುಚ್ಚಿದ ಬಾಗಿಲಿನ ಮಾತುಕತೆಗಳು ಯಾವುದೇ ಸ್ಪಷ್ಟ ಯಶಸ್ಸನ್ನು ನೀಡಿಲ್ಲ. ಈ ನಡುವೆ ಸೋಮವಾರ ಇರಾನ್, "ಈಗ ಚೆಂಡು ಯುಎಸ್ ಅಂಗಳದಲ್ಲಿದೆ" ಎಂದು ಹೇಳಿದೆ.

ಅಧ್ಯಕ್ಷ ಟ್ರಂಪ್ ಇರಾನ್ ಮೇಲಿನ ತಮ್ಮ ಉದ್ದೇಶಗಳನ್ನು ಸ್ಪಷ್ಟಪಡಿಸದೆ ಅಸ್ಪಷ್ಟವಾಗಿರಿಸಿದ್ದಾರೆ. ಶನಿವಾರದಂದು ಯುಎಸ್ ಇನ್ನೂ "ಗಮನ ಹರಿಸಬೇಕಾದ" ಗುರಿಗಳನ್ನು ಹೊಂದಿದೆ ಎಂದು ಹೇಳಿದ್ದ ಅವರು, ಭಾನುವಾರ ರೇಡಿಯೋ ಜಾಲವೊಂದಕ್ಕೆ ನೀಡಿದ ಸಂದರ್ಶನದಲ್ಲಿ ಯುದ್ಧವು ಶೀಘ್ರದಲ್ಲೇ "ಒಂದು ರೀತಿಯಲ್ಲಿ ಅಥವಾ ಇನ್ನೊಂದು ರೀತಿಯಲ್ಲಿ ಅಂತ್ಯಗೊಳ್ಳುತ್ತದೆ. ಅವರು ಒಪ್ಪಂದಕ್ಕೆ ಬರಬೇಕು, ಇಲ್ಲದಿದ್ದರೆ ನಾವೇ ಅದನ್ನು ಮುಗಿಸುತ್ತೇವೆ" ಎಂದು ಹೇಳಿದ್ದಾರೆ.

ಇಸ್ರೇಲ್ ಪ್ರಧಾನಿ ಬೆಂಜಮಿನ್ ನೇತನ್ಯಾಹು ಅವರೊಂದಿಗೆ ಭಾನುವಾರ "ಬಹಳ ಉತ್ತಮ ಮಾತುಕತೆ" ನಡೆಸಿದ್ದಾಗಿ ಮತ್ತು ಇರಾನ್ ಯುದ್ಧದ ಬಗ್ಗೆ ಚರ್ಚಿಸಿದ್ದಾಗಿ ಟ್ರಂಪ್ ಪತ್ರಕರ್ತರಿಗೆ ತಿಳಿಸಿದರು. ಮಾತುಕತೆಗಳು ಮುಂದುವರಿಯಲು ಅಧ್ಯಕ್ಷರು ಅವಕಾಶ ನೀಡಲು ಬಯಸಿದ್ದಾರೆ, ಆದರೆ ನೇತನ್ಯಾಹು ಇರಾನ್ ಮೇಲಿನ ದಾಳಿಯನ್ನು ಮತ್ತೆ ಆರಂಭಿಸಲು ಒತ್ತಾಯಿಸುತ್ತಿದ್ದಾರೆ ಎಂದು ಆಕ್ಸಿಯೋಸ್ (ಂಥುಂ) ವರದಿ ಮಾಡಿದ ಮೂಲಗಳು ತಿಳಿಸಿವೆ.

ಭಾರತ–ವಿಯೆಟ್ನಾಂ ರಕ್ಷಣಾ ಬಾಂಧವ್ಯಕ್ಕೆ ಮತ್ತಷ್ಟು ಬಲ

ಹನೋಯಿಯಲ್ಲಿ ಉನ್ನತ ನಾಯಕರೊಂದಿಗೆ ಅಜಿತ್ ದೋವಲ್ ಮಾತುಕತೆ; ಬ್ರಹ್ಮೋಸ್ ಕ್ಷಿಪಣಿ ಖರೀದಿಗೆ ಮುಂದಾಗಿರುವ ವಿಯೆಟ್ನಾಂ



ಹನೋಯಿ: ಭಾರತ ಮತ್ತು ವಿಯೆಟ್ನಾಂ ನಡುವಿನ ಕಾರ್ಯತಂತ್ರದ ಪಾಲುದಾರಿಕೆ, ರಕ್ಷಣಾ ಸಹಕಾರ ಹಾಗೂ ವ್ಯಾಪಾರ ಸಂಬಂಧಗಳನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಭಾರತದ ರಾಷ್ಟ್ರೀಯ ಭದ್ರತಾ ಸಲಹೆಗಾರ (ಎನ್‌ಎಸ್‌ಎ) ಅಜಿತ್ ದೋವಲ್ ಸೋಮವಾರ ವಿಯೆಟ್ನಾಂನ ಉನ್ನತ ನಾಯಕರೊಂದಿಗೆ ಮಾತುಕತೆ ನಡೆಸಿದರು. ವಿಯೆಟ್ನಾಂ ಉಪಪ್ರಧಾನಿ ಹಾಗೂ ರಕ್ಷಣಾ ಸಚಿವ ಜನರಲ್ ಫಾನ್ ವ್ಯಾನ್ ಜಿಯಾಂಗ್ ಅವರೊಂದಿಗೆ ದ್ವಿಪಕ್ಷೀಯ ರಕ್ಷಣಾ ಸಹಕಾರದ ಕುರಿತು ಚರ್ಚಿಸಿದ ದೋವಲ್, ಈ ಕ್ಷೇತ್ರದಲ್ಲಿ ಪರಸ್ಪರ ಸಹಕಾರವನ್ನು ಇನ್ನಷ್ಟು ವಿಸ್ತರಿಸಲು ಒಪ್ಪಿಗೆ ಸೂಚಿಸಿದರು ಎಂದು ಭಾರತೀಯ ರಾಯಭಾರ ಕಚೇರಿ ತಿಳಿಸಿದೆ.

ರಕ್ಷಣಾ ಸಹಕಾರಕ್ಕೆಆದ್ಯತೆ:

ಭಾರತ ಮತ್ತು ವಿಯೆಟ್ನಾಂ ನಡುವಿನ ವರ್ಧಿತ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯಲ್ಲಿ ರಕ್ಷಣಾ ಸಹಕಾರ ಪ್ರಮುಖ ಆಧಾರಸ್ತಂಭವಾಗಿದ್ದು, ಅದಕ್ಕೆ ಅನುಗುಣವಾಗಿ ಸಹಕಾರ ಮುಂದುವರಿಸಬೇಕು ಎಂದು ಫಾನ್ ವ್ಯಾನ್ ಜಿಯಾಂಗ್ ಅಭಿಪ್ರಾಯಪಟ್ಟರು. ವೇಗವಾಗಿ ಬದಲಾಗುತ್ತಿರುವ ಜಾಗತಿಕ ಪರಿಸ್ಥಿತಿಯಲ್ಲಿ ವಿಶ್ವಾಸಾರ್ಹ ಪಾಲುದಾರರೊಂದಿಗೆ ಸಹಕಾರವು ರಾಷ್ಟ್ರೀಯ ಅಭಿವೃದ್ಧಿ ಮತ್ತು ಸ್ವಾಯತ್ತತೆಗೆ ಅತ್ಯಂತ ಮಹತ್ವದ್ದಾಗಿದೆ ಎಂದು ದೋವಲ್ ಹೇಳಿದರು. ಭಾರತ?ವಿಯೆಟ್ನಾಂ ಸಂಬಂಧಗಳ ಪ್ರಗತಿ ಹಾಗೂ ರಕ್ಷಣಾ ಸಹಕಾರ ಪ್ರಮುಖ ಸ್ಥಾನ ಪಡೆದಿರುವುದಕ್ಕೆ ಅವರು ಸಂತಸ ವ್ಯಕ್ತಪಡಿಸಿದರು. ದೋವಲ್ ಭೇಟಿಯು ಮಹತ್ವದ್ದಾಗಿದ್ದು, ಉಭಯ ದೇಶಗಳ ನಡುವಿನ ಸಂಬಂಧಗಳು 'ಹಂಚಿಕೊಂಡ ದೃಷ್ಟಿಕೋನ, ಕಾರ್ಯತಂತ್ರದ ಸಾಮರಸ್ಯ ಮತ್ತು ವಾಸ್ತವಿಕ ಸಹಕಾರ'ದ ಆಧಾರದಲ್ಲಿ ಹೊಸ ಎತ್ತರಕ್ಕೆ ತಲುಪಿವೆ ಎಂದು ಫಾನ್ ತಿಳಿಸಿದರು.

ರಕ್ಷಣಾ ಪ್ರದರ್ಶನಕ್ಕೆ ಭಾರತದ ಆಹ್ವಾನ:

ಡಿಸೆಂಬರ್‌ನಲ್ಲಿ ಹನೋಯಿಯಲ್ಲಿ ನಡೆಯಲಿರುವ ವಿಯೆಟ್ನಾಂ ಅಂತಾರಾಷ್ಟ್ರೀಯ ರಕ್ಷಣಾ ಪ್ರದರ್ಶನದಲ್ಲಿ ಭಾರತದ ರಕ್ಷಣಾ ಸಚಿವಾಲಯ ಹಾಗೂ ರಕ್ಷಣಾ ತಯಾರಿಕಾ ಕಂಪನಿಗಳು ತಮ್ಮ ಉತ್ಪನ್ನಗಳನ್ನು ಪ್ರದರ್ಶಿಸುವಂತೆ ಫಾನ್ ಆಹ್ವಾನಿಸಿದರು. ಚೀನಾದ ಹೆಚ್ಚುತ್ತಿರುವ ಆಕ್ರಮಣಕಾರಿ ಧೋರಣೆ, ಅದರಲ್ಲೂ ದಕ್ಷಿಣ ಚೀನಾ ಸಮುದ್ರದಲ್ಲಿನ ಚಟುವಟಿಕೆಗಳು ಭಾರತ ಮತ್ತು ವಿಯೆಟ್ನಾಂ ನಡುವಿನ ರಕ್ಷಣಾ ಸಹಕಾರಕ್ಕೆ ಮತ್ತಷ್ಟು ಪ್ರಾಮುಖ್ಯ ನೀಡಿವೆ. ಈ ಪ್ರದೇಶದಲ್ಲಿ ಭಾರತೀಯ ಮತ್ತು ವಿಯೆಟ್ನಾಂ ಕಂಪನಿಗಳು ತೈಲ ಅನ್ವೇಷಣೆಯಲ್ಲಿಯೂ ತೊಡಗಿವೆ. ಭಾರತದಿಂದ ಬ್ರಹ್ಮೋಸ್ ಕ್ರೂಸ್ ಕ್ಷಿಪಣಿ ವ್ಯವಸ್ಥೆಯನ್ನು ಖರೀದಿಸಲು ಮುಂದಾಗಿರುವ ಆಗ್ನೇಯ ಏಷ್ಯಾದ ಮೂರನೇ ದೇಶ ವಿಯೆಟ್ನಾಂ ಆಗಿದೆ. ಈಗಾಗಲೇ ಫಿಲಿಪ್ಪೀನ್ಸ್ ಮತ್ತು ಇಂಡೋನೇಷ್ಯಾ ಕೂಡ ಈ ಕ್ಷಿಪಣಿ ವ್ಯವಸ್ಥೆಯನ್ನು ಖರೀದಿಸಲು ಕ್ರಮ ಕೈಗೊಂಡಿವೆ.

2030ರ ವೇಳೆಗೆ 25 ಶತಕೋಟಿ ಡಾಲರ್ ವ್ಯಾಪಾರ ಗುರಿ:

ವಿಯೆಟ್ನಾಂ ಅಧ್ಯಕ್ಷ ತೋ ಲಾಮ್ ಅವರು ಮೇ ತಿಂಗಳಲ್ಲಿ ಭಾರತಕ್ಕೆ ಭೇಟಿ ನೀಡಿದ್ದ ಸಂದರ್ಭದಲ್ಲಿ ಉಭಯ ದೇಶಗಳ ಸಂಬಂಧವನ್ನು ವರ್ಧಿತ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಗೆ ಉನ್ನತೀಕರಿಸಲಾಗಿತ್ತು. ಪ್ರಸ್ತುತ 16 ಶತಕೋಟಿ ಡಾಲರ್ ಇರುವ ದ್ವಿಪಕ್ಷೀಯ ವ್ಯಾಪಾರವನ್ನು 2030ರ ವೇಳೆಗೆ 25 ಶತಕೋಟಿ ಡಾಲರ್‌ಗೆ ಹೆಚ್ಚಿಸುವ ಗುರಿಯನ್ನು ಭಾರತ ಮತ್ತು ವಿಯೆಟ್ನಾಂ ಹೊಂದಿವೆ.

ಭದ್ರತೆ, ಪ್ರಾದೇಶಿಕ ಬೆಳವಣಿಗೆಗಳ ಕುರಿತು ಚರ್ಚೆ:

ವಿಯೆಟ್ನಾಂ ಸಾರ್ವಜನಿಕ ಭದ್ರತಾ ಸಚಿವ ಜನರಲ್ ಲುವಾಂಗ್ ತಾಮ್ ಕ್ವಾಂಗ್ ಅವರೊಂದಿಗೆ ದೋವಲ್ ನಿಯೋಗ ಮಟ್ಟದ ಮಾತುಕತೆ ನಡೆಸಿದರು. ಭದ್ರತಾ ಕ್ಷೇತ್ರದ ಸಹಕಾರ ವಿಸ್ತರಣೆ ಹಾಗೂ ಬಹುಮುಖ ಸಂಬಂಧಗಳನ್ನು ಮತ್ತಷ್ಟು ಬಲಪಡಿಸುವ ಕುರಿತು ಉಭಯ ನಾಯಕರು ಚರ್ಚಿಸಿದರು. ಪ್ರಾದೇಶಿಕ ಮತ್ತು ಜಾಗತಿಕ ಬೆಳವಣಿಗೆಗಳ ಬಗ್ಗೆಯೂ ಅಭಿಪ್ರಾಯ ವಿನಿಮಯ ನಡೆಯಿತು ಎಂದು ಭಾರತೀಯ ರಾಯಭಾರ ಕಚೇರಿ ತಿಳಿಸಿದೆ. ವಿಯೆಟ್ನಾಂ ವಿದೇಶಾಂಗ ಸಚಿವ ಲೆ ಹೋಯ್ ಟ್ರುಂಗ್ ಅವರನ್ನೂ ಭೇಟಿಯಾದ ದೋವಲ್, 2027ರಲ್ಲಿ ಆಚರಿಸಲಿರುವ ಭಾರತ–ವಿಯೆಟ್ನಾಂ ರಾಜತಾಂತ್ರಿಕ ಸಂಬಂಧಗಳ 55ನೇ ವಾರ್ಷಿಕೋತ್ಸವದ ಕಾರ್ಯಕ್ರಮಗಳ ಕುರಿತು ಚರ್ಚಿಸಿದರು.

ಫ್ರಾನ್ಸ್, ಜರ್ಮನಿಯಲ್ಲಿ ಹಿಂಸಾಚಾರದ ಕಿಚ್ಚು: ಲೂಟಿ, ಪೆಟ್ರೋಲ್ ಬಾಂಬ್ ದಾಳಿ, ಪೊಲೀಸರ ಮೇಲೆ ಪಟಾಕಿ ಅಸ್ತ್ರ

ಸತತ ಮೂರನೇ ವಾರವೂ ಬೀದಿಗಿಳಿದ ಪ್ರತಿಭಟನಕಾರರು, ಫ್ರಾನ್ಸ್‌ನಲ್ಲಿ 560ಕ್ಕೂ ಹೆಚ್ಚು ಮಂದಿ ಬಂಧನ



ಯುರೋಪ್‌ನಲ್ಲಿ ಪ್ರತಿಭಟನೆಗಳ ಕಾವು ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದ್ದು, ಫ್ರಾನ್ಸ್ ಮತ್ತು ಜರ್ಮನಿಯಲ್ಲಿ ಜನರ ಆಕ್ರೋಶ ಹಿಂಸಾಚಾರಕ್ಕೆ ತಿರುಗಿದೆ. ಫ್ರಾನ್ಸ್‌ನಲ್ಲಿ ಸತತ ಮೂರನೇ ವಾರಾಂತ್ಯವೂ ಸಾವಿರಾರು ಜನರು ಬೀದಿಗಿಳಿದು ಪ್ರತಿಭಟನೆ ನಡೆಸಿದರೆ, ಜರ್ಮನಿಯಲ್ಲಿ ಉದ್ರಿಕ್ತರು ಅಂಗಡಿ–ಮುಂಗಟ್ಟುಗಳನ್ನು ಲೂಟಿ ಮಾಡಿ, ಪೊಲೀಸರ ಮೇಲೆ ಪೆಟ್ರೋಲ್ ಬಾಂಬ್‌ಗಳನ್ನು ಎಸೆದಿದ್ದಾರೆ. ಪಟಾಕಿ ಸಿಡಿಸಿ ಆತಂಕ ಸೃಷ್ಟಿಸಿದ್ದಾರೆ.

ಫ್ರಾನ್ಸ್‌ನಲ್ಲಿ ಉದ್ವಿಗ್ನ ಪರಿಸ್ಥಿತಿ: 560ಕ್ಕೂ ಹೆಚ್ಚು ಮಂದಿ ಸೆರೆ

ಫ್ರಾನ್ಸ್‌ನಲ್ಲಿ ಕಳೆದ ತಿಂಗಳು ಶಾಲಾ ವಿದ್ಯಾರ್ಥಿಗಳು ಆರಂಭಿಸಿದ ಪ್ರತಿಭಟನೆ ಇದೀಗ ಬೃಹತ್ ಜನಾಂದೋಲನವಾಗಿ ರೂಪುಗೊಂಡಿದೆ. ಶಾಲೆಗಳಲ್ಲಿ ಶಿಕ್ಷಕರ ಕೊರತೆ, ಶಿಥಿಲಗೊಂಡ ಕಟ್ಟಡಗಳು ಹಾಗೂ ವಿಶ್ವವಿದ್ಯಾಲಯಗಳ ಪ್ರವೇಶ ವ್ಯವಸ್ಥೆಯಲ್ಲಿನ ಲೋಪಗಳನ್ನು ಖಂಡಿಸಿ ವಿದ್ಯಾರ್ಥಿಗಳು ಪ್ರತಿಭಟನೆ ಆರಂಭಿಸಿದ್ದರು. ಬಳಿಕ ಕಾರ್ಮಿಕ ಸಂಘಟನೆಗಳು ಸೇರಿದಂತೆ ವಿವಿಧ ಸಂಘಟನೆಗಳು ಪ್ರತಿಭಟನೆಗೆ ಕೈಜೋಡಿಸಿದವು. ಜೀವನ ವೆಚ್ಚದ ಏರಿಕೆ ಸೇರಿದಂತೆ ಹಲವು ಸಮಸ್ಯೆಗಳನ್ನು ಮುಂದಿಟ್ಟುಕೊಂಡು ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದವು. ಭಾನುವಾರವೂ ದೇಶಾದ್ಯಂತ ಪ್ರತಿಭಟನೆ ಮುಂದುವರಿದಿದ್ದು, ರಾಜಧಾನಿ ಪ್ಯಾರಿಸ್ ಸೇರಿದಂತೆ ಹಲವು ನಗರಗಳಲ್ಲಿ ಜನರು ಬೀದಿಗಿಳಿದರು. ಅಸೋಸಿಯೇಟೆಡ್ ಪ್ರೆಸ್ (ಎಪಿ) ವರದಿ ಪ್ರಕಾರ, ಶನಿವಾರ ದೇಶಾದ್ಯಂತ 3.20 ಲಕ್ಷ ಮಂದಿ ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು. ಅ. 17ರಂದು 5.50 ಲಕ್ಷ ಹಾಗೂ ಅ.24ರಂದು 4.10 ಲಕ್ಷ ಮಂದಿ ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು ಎಂದು ಫ್ರಾನ್ಸ್ ಸರ್ಕಾರ ಅಂದಾಜಿಸಿದೆ. ಆದರೆ, ಪ್ರತಿಭಟನೆಯ ಆಯೋಜಕರು ಇದಕ್ಕಿಂತ ಹೆಚ್ಚಿನ ಸಂಖ್ಯೆಯಲ್ಲಿ ಜನರು ಪಾಲ್ಗೊಂಡಿದ್ದಾರೆ ಎಂದು ಹೇಳಿಕೊಂಡಿದ್ದಾರೆ.

ಪ್ಯಾರಿಸ್‌ನಲ್ಲಿ ಕಲ್ಲು, ಬಾಟಲಿ, ಪಟಾಕಿಗಳ ದಾಳಿ:

ಪ್ಯಾರಿಸ್‌ನ ಹೊರವಲಯದ ಬೌಲೆವಾರ್ಡ್ಸ್ ಡೆಸ್ ಮಾರೇಚಾಕ್ಸ್ ಪ್ರದೇಶದಲ್ಲಿ ಆರಂಭದಲ್ಲಿ ಪ್ರತಿಭಟನೆ ಶಾಂತಿಯುತವಾಗಿತ್ತು. ಟೆಕ್ನೋ ಸಂಗೀತದ ನಡುವೆ ಮೆರವಣಿಗೆ ನಡೆಸಿದ ಪ್ರತಿಭಟನಾಕಾರರು ಹ್ಯಾಲೋವೀನ್ ಆಚರಣೆಯ ಭಾಗವಾಗಿ ಟ್ರಿಕ್ ಆರ್ ಟ್ರೀಟ್ ಕಾರ್ಯಕ್ರಮದಲ್ಲೂ ಭಾಗವಹಿಸಿದ್ದರು. ಆದರೆ, ಪೋರ್ಟೆ ಡಿ ಷರೆಂಟನ್ ಪ್ರದೇಶದ ಬಳಿ ಪರಿಸ್ಥಿತಿ ಏಕಾಏಕಿ ವಿಕೋಪಕ್ಕೆ ತಿರುಗಿತು. ಪ್ರತಿಭಟನಾಕಾರರು ಪೊಲೀಸರತ್ತ ಗಾಜಿನ ಬಾಟಲಿಗಳು ಹಾಗೂ ಪಟಾಕಿಗಳನ್ನು ಎಸೆದರು. ಇದಕ್ಕೆ ಪ್ರತಿಯಾಗಿ ಪೊಲೀಸರು ಸ್ಟನ್ ಗ್ರೆನೇಡ್ ಹಾಗೂ ಅಶ್ರುವಾಯು ಪ್ರಯೋಗಿಸಿ ಗುಂಪನ್ನು ಚದುರಿಸಲು ಮುಂದಾದರು. ದೇಶಾದ್ಯಂತ 560ಕ್ಕೂ ಹೆಚ್ಚು ಮಂದಿಯನ್ನು ಪೊಲೀಸರು ಬಂಧಿಸಿದ್ದಾರೆ ಎಂದು ಫ್ರಾನ್ಸ್ ಅಧಿಕಾರಿಗಳು ತಿಳಿಸಿದ್ದಾರೆ.

ಪ್ರತಿಭಟನೆಯ ಹಿಂದೆ ಹಲವು ಬೇಡಿಕೆ:

ಪ್ಯಾರಿಸ್‌ನ ಪ್ರತಿಭಟನೆಯಲ್ಲಿ ವಿವಿಧ ಸಂಘಟನೆಗಳು ತಮ್ಮದೇ ಬ್ಯಾನರ್‌ಗಳನ್ನು ಹಿಡಿದು ಸರ್ಕಾರದ ವಿರುದ್ಧ ಆಕ್ರೋಶ ಹೊರಹಾಕಿದವು. ವಿದ್ಯಾರ್ಥಿಗಳು: ಶಿಕ್ಷಕರ ಕೊರತೆ, ಶಾಲೆಗಳ ದುಸ್ಥಿತಿ ಹಾಗೂ ಶಿಕ್ಷಣ ವ್ಯವಸ್ಥೆಯಲ್ಲಿನ ಸಮಸ್ಯೆಗಳ ವಿರುದ್ಧ ಪ್ರತಿಭಟನೆ. ಪರಿಸರ ಕಾರ್ಯಕರ್ತರು: ಹವಾಮಾನ ಬದಲಾವಣೆ ಮತ್ತು ಪರಿಸರ ಸಂರಕ್ಷಣೆಗೆ ಸಂಬಂಧಿಸಿದ ಬೇಡಿಕೆಗಳು. ಸಾಮಾನ್ಯ ನಾಗರಿಕರು: ಹೆಚ್ಚುತ್ತಿರುವ ಜೀವನ ವೆಚ್ಚ ಹಾಗೂ ಆರ್ಥಿಕ ಸಂಕಷ್ಟದ ವಿರುದ್ಧ ಆಕ್ರೋಶ.

ದೇಶಾದ್ಯಂತ ಶಾಲೆಗಳ ತಡೆಬಂಧದೊಂದಿಗೆ ವಿದ್ಯಾರ್ಥಿ ಪ್ರತಿಭಟನೆಗಳು ಪುನರಾರಂಭ


'ಆಲ್ ಸೈಂಟ್ಸ್' ರಜಾದಿನದ ನಂತರ ತರಗತಿಗಳು ಪುನರಾರಂಭಗೊಂಡಿದ್ದರಿಂದ, ನವೆಂಬರ್ 2, ಸೋಮವಾರದಂದು ಪ್ಯಾರಿಸ್, ಮಾರ್ಸೆಯ್ ಮತ್ತು ಟೌಲೌಸ್ ಸೇರಿದಂತೆ ಫ್ರಾನ್ಸ್‌ನ ಹಲವು ನಗರಗಳಲ್ಲಿ ಪ್ರೌಢಶಾಲಾ ವಿದ್ಯಾರ್ಥಿಗಳು ಶಾಲೆಗಳನ್ನು ತಡೆಹಿಡಿಯುವ (ಛಟಂಠಿಇಚಿಜಜ) ಪ್ರತಿಭಟನೆಯನ್ನು ಮತ್ತೆ ಆರಂಭಿಸಿದರು. ಸರ್ಕಾರವು ಇತ್ತೀಚೆಗೆ ಕೆಲವು ರಿಯಾಯಿತಿಗಳನ್ನು ನೀಡಿದ್ದರೂ, ಉತ್ತಮ ಶೈಕ್ಷಣಿಕ ಪರಿಸ್ಥಿತಿಗಳು ಮತ್ತು ಹೆಚ್ಚಿನ ಆರ್ಥಿಕ ಅನುದಾನವನ್ನು ಒತ್ತಾಯಿಸಿ ಆರು ವಾರಗಳ ಹಿಂದೆ ಪ್ರಾರಂಭವಾದ ರಾಷ್ಟ್ರವ್ಯಾಪಿ ವಿದ್ಯಾರ್ಥಿ ಪ್ರತಿಭಟನಾ ಚಳವಳಿಯ ಭಾಗವಾಗಿ ಈ ಪ್ರದರ್ಶನಗಳು ನಡೆದವು.

ವಿದ್ಯಾರ್ಥಿ ನಿಲಯದಲ್ಲಿ ಇಲಿ– ಜಿರಳೆಗಳ ಕಾಟ':

ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದ 21 ವರ್ಷದ ವಿದ್ಯಾರ್ಥಿ ಕೊರಂಟಿನ್ ಕ್ಯಾಬ್ರ್ಯೂಕ್ಸ್ ತಮ್ಮ ಸಂಕಷ್ಟವನ್ನು ಎಳೆಎಳೆಯಾಗಿ ಬಿಚ್ಚಿಟ್ಟಿದ್ದಾರೆ. ಸರ್ಕಾರಿ ವಿದ್ಯಾರ್ಥಿ ನಿಲಯದಲ್ಲಿ ವಾಸಿಸುತ್ತಿರುವ ತಮ್ಮ ಕೊಠಡಿಯ ಗೋಡೆಗಳ ಕೆಳಭಾಗದಲ್ಲಿ ತೇವದ ಕಲೆಗಳು ತುಂಬಿಕೊಂಡಿವೆ. ಗೋಡೆಯ ಪ್ಲಾಸ್ಟರ್ ಕಿತ್ತುಬರುತ್ತಿದೆ. ಎಲ್ಲೆಡೆ ಜಿರಳೆ ಹಾಗೂ ಇಲಿಗಳ ಕಾಟವಿದೆ ಎಂದು ಅವರು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಶಿಕ್ಷಣ ವ್ಯವಸ್ಥೆಯ ನಿರ್ಲಕ್ಷ್ಯ, ವಿದ್ಯಾರ್ಥಿ ನಿಲಯಗಳ ದುಸ್ಥಿತಿ ಹಾಗೂ ಹೆಚ್ಚುತ್ತಿರುವ ಜೀವನ ವೆಚ್ಚದ ವಿರುದ್ಧ ವಿದ್ಯಾರ್ಥಿಗಳು ಬೀದಿಗಿಳಿದಿರುವುದಕ್ಕೆ ಅವರ ಹೇಳಿಕೆ ಸಾಕ್ಷಿಯಾಗಿದೆ.



ಪುಟಿನ್ ಜೊತೆ ಇರಾನ್ ಅಧ್ಯಕ್ಷ ಪೆಜೆಷ್ಕಿಯಾನ್ ಮಾತುಕತೆ: ರಷ್ಯಾ ಸಹಕಾರಕ್ಕೆ ದೂರವಾಣಿ ಕರೆ ಮೂಲಕ ಧನ್ಯವಾದ ಸಲ್ಲಿಕೆ




ಟೆಹ್ರಾನ್: ಕಾರ್ಯತಂತ್ರದ ಸಹಕಾರವನ್ನು ಬಲಪಡಿಸುವುದು ಮತ್ತು ಪ್ರಾದೇಶಿಕ ಬೆಳವಣಿಗೆಗಳ ಕುರಿತು ಚರ್ಚಿಸಲು ರಷ್ಯಾದ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಸೋಮವಾರ ಇರಾನ್ ಅಧ್ಯಕ್ಷ ಮಸೌದ್ ಪೆಜೆಷ್ಕಿಯಾನ್ ಅವರೊಂದಿಗೆ ದೂರವಾಣಿ ಮೂಲಕ ಮಾತನಾಡಿದರು. ಇರಾನ್‌ನ ಸುಪ್ರೀಂ ರಾಷ್ಟ್ರೀಯ ಭದ್ರತಾ ಮಂಡಳಿಯ ಕಾರ್ಯದರ್ಶಿ ಮೊಹ್ಸೆನ್ ರೆಜಾಯಿ ಅವರು ಸೋಮವಾರ ರಷ್ಯಾದ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರೊಂದಿಗೆ ದೂರವಾಣಿ ಕರೆ ಮಾಡಿದ್ದಾರೆ ಎಂದು ಇರಾನ್ ರಾಜ್ಯ ಮಾಧ್ಯಮ ವರದಿ ಮಾಡಿದೆ, ಮಧ್ಯಪ್ರಾಚ್ಯದ ಪರಿಸ್ಥಿತಿಯ ಕುರಿತು ಉಭಯ ದೇಶಗಳ ನಡುವಿನ ಇತ್ತೀಚಿನ ಮಾತುಕತೆಗಳ ಮುಂದುವರಿಕೆಯಲ್ಲಿ. ತಮ್ಮ ಕರೆಯ ಸಮಯದಲ್ಲಿ, ರೆಜಾಯಿ ಮತ್ತು ಪುಟಿನ್ ಪಶ್ಚಿಮ ಏಷ್ಯಾ ಮತ್ತು ಇರಾನ್ ಮತ್ತು ರಷ್ಯಾ ನಡುವಿನ ನಡೆಯುತ್ತಿರುವ "ಕಾರ್ಯತಂತ್ರದ ಸಹಕಾರ"ದ ಮೇಲೆ ಕೇಂದ್ರೀಕರಿಸುವ ಪ್ರಾದೇಶಿಕ ಮತ್ತು ಜಾಗತಿಕ ವ್ಯವಹಾರಗಳ ಬಗ್ಗೆ ಚರ್ಚಿಸಿದ್ದಾರೆ ಎಂದು ಇರಾನ್‌ನ ಅರೆ–ಅಧಿಕೃತ ತಸ್ನಿಮ್ ಸುದ್ದಿ ಸಂಸ್ಥೆ ತಿಳಿಸಿದೆ. ಇರಾನ್ ಮತ್ತು ರಷ್ಯಾ ಬಹಳ ಹಿಂದಿನಿಂದಲೂ ಮಿತ್ರರಾಷ್ಟ್ರಗಳಾಗಿವೆ ಮತ್ತು ಉಕ್ರೇನ್ ಮೇಲೆ ನಡೆಯುತ್ತಿರುವ ರಷ್ಯಾದ ದಾಳಿ ಮತ್ತು ಇರಾನ್‌ನೊಂದಿಗಿನ ಯುಎಸ್ ಯುದ್ಧದ ಸಮಯದಲ್ಲಿ ಅವರ ಸಂಬಂಧವು ಗಟ್ಟಿಗೊಂಡಿದೆ. ಅಕ್ಟೋಬರ್‌ನಲ್ಲಿ ಇರಾನ್ ವಿದೇಶಾಂಗ ಸಚಿವ ಅಬ್ಬಾಸ್ ಅರಗ್ಚಿ, ರಷ್ಯಾದೊಂದಿಗಿನ ಟೆಹ್ರಾನ್‌ನ ಸಂಬಂಧಗಳು ಎಂದಿಗಿಂತಲೂ ಹೆಚ್ಚು ಹತ್ತಿರವಾಗಿವೆ ಎಂದು ಹೇಳಿದ್ದರು, ಇದು ಯುದ್ಧದ ಮಧ್ಯೆ ಮಾಸ್ಕೋ ಟೆಹ್ರಾನ್‌ಗೆ "ಸಹಾಯ ಮಾಡಲು ಬಹಳ ಕಡಿಮೆ, ಏನಾದರೂ ಮಾಡುತ್ತಿದೆ" ಎಂಬ ಶ್ರೀ ಟ್ರಂಪ್ ಅವರ ಆ ಸಮಯದಲ್ಲಿ ಹೇಳಿಕೆಗೆ ವಿರುದ್ಧವಾಗಿತ್ತು. ತಸ್ನಿಮ್ ಪ್ರಕಾರ, ರಷ್ಯಾದ ಬೆಂಬಲಕ್ಕಾಗಿ ರೆಜೈ ಸೋಮವಾರ ಪುಟಿನ್‌ಗೆ ಧನ್ಯವಾದ ಅರ್ಪಿಸಿದರು.







ಜಲಸಂಧಿಯಲ್ಲಿ ಸ್ಫೋಟ: ನೌಕಾ ಮೈನ್‌ಗಳಿಗೆ ಡಿಕ್ಕಿ ಹೊಡೆದು ಹೊತ್ತಿ ಉರಿದ ತೈಲ ಟ್ಯಾಂಕರ್‌ಗಳು



ಟೆಹ್ರಾನ್: ವಿಶ್ವದ ಅತ್ಯಂತ ಪ್ರಮುಖ ಇಂಧನ ಸಾಗಣೆ ಮಾರ್ಗವಾಗಿರುವ ಹೊರ್ಮುಜ್ ಜಲಸಂಧಿಯಲ್ಲಿ ಭೀಕರ ದುರಂತ ಸಂಭವಿಸಿದೆ. ಕಡಲ ಮೈನ್‌ಗಳಿಗೆ ಡಿಕ್ಕಿ ಹೊಡೆದ ಹಿನ್ನೆಲೆಯಲ್ಲಿ ಎರಡು ವಾಣಿಜ್ಯ ತೈಲ ಟ್ಯಾಂಕರ್‌ಗಳು ಭೀಕರವಾಗಿ ಸ್ಫೋಟಗೊಂಡಿವೆ ಎಂದು ಇರಾನ್‌ನ ಇಸ್ಲಾಮಿಕ್ ರೆವಲ್ಯೂಷನರಿ ಗಾರ್ಡ್ ಕಾರ್ಪ್ಸ್ ನೌಕಾಪಡೆ ಪ್ರಕಟಿಸಿದೆ.

ಇರಾನ್ ಮಾಧ್ಯಮಗಳ ಪ್ರಕಾರ, ಈ ಹಡಗುಗಳು ತಮ್ಮ ಗುರುತಿನ ವ್ಯವಸ್ಥೆ ಹಾಗೂ ಟ್ರಾನ್ಸ್‌ಪಾಂಡರ್‌ಗಳನ್ನು ಆಫ್ ಮಾಡಿ, ಅನಧಿಕೃತ ಮಾರ್ಗದಲ್ಲಿ ಸಂಚರಿಸುತ್ತಿದ್ದವು. ಅಮೆರಿಕ (ಯುಎಸ್) ಮಿಲಿಟರಿಯ ರಹಸ್ಯ ಬೆಂಬಲದೊಂದಿಗೆ ಕಡಲ ನಿರ್ಬಂಧಗಳನ್ನು ದಾಟಲು ಈ ಹಡಗುಗಳು ಪ್ರಯತ್ನಿಸುತ್ತಿದ್ದವು ಎಂದು ಟೆಹ್ರಾನ್ ಗಂಭೀರ ಆರೋಪ ಮಾಡಿದೆ.

ಇರಾನ್‌ನ ಪ್ರೆಸ್ ಟಿವಿ ವರದಿಯ ಪ್ರಕಾರ, ಐಆರ್‌ಜಿಸಿ ನೌಕಾಪಡೆಯ ಸಾರ್ವಜನಿಕ ಸಂಪರ್ಕ ವಿಭಾಗ ಬಿಡುಗಡೆ ಮಾಡಿದ ಹೇಳಿಕೆಯಲ್ಲಿ ಈ ಮಾಹಿತಿ ನೀಡಲಾಗಿದೆ. ಎರಡು ಹಡಗುಗಳಲ್ಲಿ ಒಂದು ಭಾರೀ ಸ್ಫೋಟದ ಬಳಿಕ ಬೆಂಕಿಯ ಕೆನ್ನಾಲಿಗೆಗೆ ಸಿಲುಕಿದೆ. ಎರಡೂ ಹಡಗುಗಳು ತಮ್ಮ ನೌಕಾಯಾನ ಮತ್ತು ಗುರುತಿನ ವ್ಯವಸ್ಥೆಗಳನ್ನು ಸ್ಥಗಿತಗೊಳಿಸಿದ್ದವು. ನಿರ್ಬಂಧಿತ ಮಾರ್ಗಗಳಲ್ಲಿ ಸಂಚರಿಸದಂತೆ ಪದೇಪದೆ ಎಚ್ಚರಿಕೆ ನೀಡಿದರೂ ಅದನ್ನು ನಿರ್ಲಕ್ಷಿಸಿವೆ ಎಂದು ಇರಾನ್ ನೌಕಾಪಡೆ ಆರೋಪಿಸಿದೆ.

ಇದೇ ವೇಳೆ, ಆಯಕಟ್ಟಿನ ಹಾರ್ಮುಜ್ ಜಲಸಂಧಿಯಲ್ಲಿ ವಾಣಿಜ್ಯ ಹಡಗಿನ ಮೇಲೆ ದಾಳಿ ನಡೆದಿರುವ ಬಗ್ಗೆ ಯುನೈಟೆಡ್ ಕಿಂಗ್‌ಡಮ್ ಮ್ಯಾರಿಟೈಮ್ ಟ್ರೇಡ್ ಆಪರೇಷನ್ಸ್ (ಯುಕೆಎಂಟಿಒ) ವರದಿ ಮಾಡಿದೆ.

ನವೆಂಬರ್ 1ರಂದು ಹೊರಡಿಸಿದ ಎಚ್ಚರಿಕೆಯಲ್ಲಿ, ಭಾರತೀಯ ಕಾಲಮಾನದ ಪ್ರಕಾರವಲ್ಲದ ಯುಟಿಸಿ ಸಮಯ ಮಧ್ಯಾಹ್ನ 3.09ರ ಸುಮಾರಿಗೆ ಹಾರ್ಮುಜ್ ಜಲಸಂಧಿಯಲ್ಲಿ ಘಟನೆ ನಡೆದಿರುವ ಬಗ್ಗೆ ಮಾಹಿತಿ ಲಭಿಸಿದೆ ಎಂದು ತಿಳಿಸಿದೆ.

ವಾಣಿಜ್ಯ ಹಡಗಿನ ಕ್ಯಾಪ್ಟನ್, ವಿಎಚ್‌ಎಫ್ ಚಾನೆಲ್ 16 ಮೂಲಕ ಮೇಡೇ ತುರ್ತು ಕರೆ ಸ್ವೀಕರಿಸಿದ್ದಾರೆ. ಮತ್ತೊಂದು ಹಡಗಿನ ಮೇಲೆ ಅಪರಿಚಿತ ಉತ್ಕ್ಷೇಪಕ ಅಪ್ಪಳಿಸಿದೆ ಎಂದು ಆ ಕರೆಯಲ್ಲಿ ತಿಳಿಸಲಾಗಿದೆ" ಎಂದು ಯುಕೆಎಂಟಿಒ ಹೇಳಿದೆ.

ಈ ಪ್ರದೇಶದ ಮೂಲಕ ಸಂಚರಿಸುವ ಹಡಗುಗಳು ಎಚ್ಚರಿಕೆಯಿಂದ ಇರಬೇಕು ಹಾಗೂ ಅನುಮಾನಾಸ್ಪದ ಚಟುವಟಿಕೆಗಳ ಬಗ್ಗೆ ಮಾಹಿತಿ ನೀಡಬೇಕು ಎಂದು ಕಡಲ ಭದ್ರತಾ ಸಂಸ್ಥೆ ಸೂಚಿಸಿದೆ. ಘಟನೆಯ ಬಗ್ಗೆ ತನಿಖೆ ನಡೆಯುತ್ತಿದೆ.